ಸಂಪುಟ: 05 ಸಂಚಿಕೆ: 166 ಪುಟಗಳು: 08 ಶನಿವಾರ 30 ಆಗಸ್ಟ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಾಧ್ಯವಾದರೆ ಸಹಾಯ ಮಾಡಿ, ಇಲ್ಲದಿದ್ದರೆ ಕೈ ಕಟ್ಟಿಕೊಂಡು ಸುಮ್ಮನೆ ನಡೆಯುವುದನ್ನು ನೋಡುತ್ತಿರಿ, ನಿಮಗೆ ಸಹಾಯ ಮಾಡಲಾಗದಿದ್ದರೆ ನೋಯಿಸಲು ಪ್ರಯತ್ನಿಸದಿರಿ..

## ತೆಂಗು: ಉತ್ಕೃಷ್ಟತಾ ಕೇಂದ್ರ ಆರಂಭಕ್ಕೆ ಪರಿಶೀಲನೆ; ವಿ.ಸೋಮಣ್ಣ



• ಉದಯವಾಹಿನಿ, ಬೆಂಗಳೂರು

ತೆಂಗು ಸಂಶೋಧನೆ, ಕೀಟ ನಿವಾರಣೆ ಮತ್ತು ಮೌಲ್ಯವರ್ಧನೆಗಾಗಿ ತುಮಕೂರಿನಲ್ಲಿ ಉತ್ಕೃಷ್ಟತಾ ಕೇಂದ್ರ ಆರಂಭಿಸುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತದೆ ಎಂದು ಕೇಂದ್ರ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು. ತೆಂಗು ಬೆಳೆಯಲ್ಲಿ ಕೀಟ ಮತ್ತು ರೋಗ ಸಮಸ್ಯೆಗಳ ಕುರಿತು ತೆಂಗು ಅಭಿವೃದ್ಧಿ ಮಂಡಳಿ, ತೋಟಗಾರಿಕಾ ಇಲಾಖೆ, ಕೃಷಿ ವಿಜ್ಞಾನ ಕೇಂದ್ರ, ತೋಟಗಾರಿಕಾ ವಿಶ್ವವಿದ್ಯಾಲಯಗಳ ಅಧಿಕಾರಿಗಳ ಜತೆ ಅವರು ಶುಕ್ರವಾರ ಸಭೆ ನಡೆಸಿದರು.

ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್.ಮಂಜುನಾಥ್, ಹಾಸನ ಸಂಸದ ಶ್ರೇಯಸ್ ಪಟೇಲ್ ಮತ್ತು ತಿಪಟೂರು ಶಾಸಕ ಷಡಕ್ಷರಿ ಅವರು ಸಭೆಯಲ್ಲಿ ಭಾಗಿಯಾಗಿದ್ದರು. ಕೀಟ ಮತ್ತು ರೋಗ ಸಮಸ್ಯೆಗಳನ್ನು ತಡೆಗಟ್ಟುವ ಬಗ್ಗೆ, ಈ ಸಂಬಂಧ ಗ್ರಾಮ ಮಟ್ಟದಲ್ಲಿ ಸಭೆ ನಡೆಸುವ ಬಗ್ಗೆ ಚರ್ಚಿಸಲಾಯಿತು. ಈ ವೇಳೆ ತುಮಕೂರಿನಲ್ಲಿ ಉತ್ಕೃಷ್ಟತಾ ಕೇಂದ್ರ ಆರಂಭಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಈ ಬಗ್ಗೆ ಅಧಿಕಾರಿಗಳ ಜತೆ ಚರ್ಚಿಸಿದ ಅವರು, ಪರಿಶೀಲನೆ ನಡೆಸುತ್ತೇನೆ' ಎಂದು ತಿಳಿಸಿದರು.

## ವರ್ಗಾವಣೆಗೆ ಶಾಸಕರ ಶಿಫಾರಸು ತಪ್ಪಲ್ಲ: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಸ್ಥಳೀಯ ಶಾಸಕರ ಸಲಹೆ ಅಥವಾ ಅವರ ಶಿಫಾರಸಿನ ಮೇರೆಗೆ ಸರ್ಕಾರಿ ಅಧಿಕಾರಗಳ ವರ್ಗಾವಣೆ ಮಾಡುವುದರಿಂದ ಅಂತಹ ವರ್ಗಾವಣೆಗೆ ಯಾವುದೇ ಕಾನೂನಾತ್ಮಕ ಅಡ್ಡಿ ಉಂಟಾಗುವುದಿಲ್ಲ' ಎಂದು ಹೈಕೋರ್ಟ್ ಪ್ರಕರಣವೊಂದರಲ್ಲಿ ಸ್ಪಷ್ಟಪಡಿಸಿದೆ. ಈ ಸಂಬಂಧ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ಗ್ರೇಡ್-1 ತಹಶೀಲ್ದಾರ್ ಎಸ್.ವೆಂಕಟೇಶಪ್ಪ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿರುವ ನ್ಯಾಯಮೂರ್ತಿ ಎಸ್.ಜಿ.ಪಂಡಿತ್ ನೇತೃತ್ವದ ವಿಭಾಗೀಯ ನ್ಯಾಯಪೀಠ, ಈ ಕುರಿತಂತೆ ಸುಪ್ರೀಂ ಕೋರ್ಟ್ ತೀರ್ಪನ್ನು ಉಲ್ಲೇಖಿಸಿದೆ. ಎಸ್.ವೆಂಕಟೇಶಪ್ಪ ಅವರನ್ನು ಬಂಗಾರಪೇಟೆಯ ತಹಶೀಲ್ದಾರ್ ಆಗಿ 2024ರ ಜುಲೈ 31ರಂದು ವರ್ಗಾವಣೆ ಮಾಡಲಾಗಿತ್ತು. ಅದೇ ವರ್ಷದ ಡಿಸೆಂಬರ್ 31ರಂದು, ಅವರನ್ನು ಕೋಲಾರ ಜಿಲ್ಲಾಧಿಕಾರಿ ಕಚೇರಿಗೆ ವರ್ಗಾವಣೆ ಮಾಡಲಾಗಿತ್ತು. ಈ ವರ್ಗಾವಣೆಯನ್ನು ಪ್ರಶ್ನಿಸಿ ವೆಂಕಟೇಶಪ್ಪ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ (ಕೆಎಸ್ಎಟಿ) ಮೊರೆ ಹೋಗಿದ್ದರು. 'ನನ್ನ ವರ್ಗಾವಣೆ ಅಕಾಲಿಕ ಮತ್ತು ವರ್ಗಾವಣೆ ಮಾರ್ಗಸೂಚಿಗಳಿಗೆ ವಿರುದ್ಧವಾಗಿದೆ' ಎಂದು ಪ್ರತಿಪಾದಿಸಿದ್ದರು.

## ಸೆ.11ರಿಂದ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ: ಯು.ಟಿ.ಖಾದರ್

• ಉದಯವಾಹಿನಿ, ಬೆಂಗಳೂರು

ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಿಭಾಗದ 11 ನೇ ಸಮ್ಮೇಳನ ಸೆ.11 ರಿಂದ ಮೂರು ದಿನಗಳ ಕಾಲ ಬೆಂಗಳೂರಿನಲ್ಲಿ ನಡೆಯಲಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಸೆ.11 ರ ಸಂಜೆ 5.30 ಕ್ಕೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ ಎಂದು ಹೇಳಿದರು. ಸೆ.12 ಮತ್ತು 13ರಂದು ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲಿ ಸಮ್ಮೇಳನ ನಡೆಯಲಿದೆ. ವಿವಿಧ ರಾಜ್ಯಗಳ ವಿಧಾನಸಭಾಧ್ಯಕ್ಷರು, ಉಪಸಭಾಧ್ಯಕ್ಷರು, ಸಭಾಪತಿಗಳು ಮತ್ತು ಉಪಸಭಾಪತಿಗಳು, ಲೋಕಸಭೆ ಮತ್ತು ರಾಜ್ಯಸಭೆಯ ಮಹಾಕಾರ್ಯದರ್ಶಿಗಳು, ವಿವಿಧ ರಾಜ್ಯಗಳ ವಿಧಾನಸಭೆ, ಪರಿಷತ್‌ಗಳ ಕಾರ್ಯದರ್ಶಿ, ಕಾರ್ಯದರ್ಶಿಗಳು ಮತ್ತು ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸೆ.14 ರಂದು ಗಣ್ಯರಿಗೆ ಮೈಸೂರು ಮತ್ತು ಸುತ್ತಮುತ್ತಲಿನ ಸ್ಥಳಗಳಿಗೆ ಪ್ರವಾಸ ಆಯೋಜಿಸಲಾಗಿದೆ ಎಂದು ಹೇಳಿದರು.

## ಅಭಿಮಾನ್ ಸ್ಟುಡಿಯೋ ಕಾನೂನು ಪ್ರಕಾರ ಕ್ರಮ: ಸಚಿವ ಈಶ್ವರ ಖಂಡ್ರೆ

• ಉದಯವಾಹಿನಿ, ಬೆಂಗಳೂರು

'ಅಭಿಮಾನ್ ಸ್ಟುಡಿಯೋ ಮಂಜೂರು ಮಾಡುವಾಗ ಸ್ಟುಡಿಯೋ ಹೊರತಾಗಿ ಅನ್ಯ ಉದ್ದೇಶಕ್ಕೆ ಜಮೀನು ಬಳಕೆ ಮಾಡದಂತೆ ಷರತ್ತು ವಿಧಿಸಲಾಗಿತ್ತು. ಅಲ್ಲಿ 10 ಎಕರೆ ಅರಣ್ಯ ಭೂಮಿಯಿದ್ದು, ಅದನ್ನು ಮರಳಿ ಪಡೆಯಲು ಇಲಾಖೆ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ' ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ಭೂ ಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಮರಳಿ ಸರ್ಕಾರಕ್ಕೆ ಪಡೆಯುವ ತಮ್ಮ ನಿಲುವಿನಲ್ಲಿ ಬದಲಾವಣೆ ಇಲ್ಲ. ಎಚ್‌ಎಂಟಿ ವಶದಲ್ಲಿರುವುದು ಅರಣ್ಯ ಭೂಮಿ ಎಂದು ತಮಗೆ ತಿಳಿದ ಕೂಡಲೇ ಕಾನೂನು ಹೋರಾಟಕ್ಕೆ ಮುಂದಾಗಿದ್ದೇನೆ. ಅದೇ ರೀತಿ ಯಾವುದು ಅರಣ್ಯ ಭೂಮಿಯೋ ಅದು ಅರಣ್ಯವಾಗಿ ಉಳಿಯತ್ತೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮೇರುನಟ ದಿವಂಗತ ವಿಷ್ಣುವರ್ಧನ್ ಅವರ ಬಗ್ಗೆ ಅಪಾರ ಗೌರವ ಇದೆ. ವಿಷ್ಣುವರ್ಧನ್ ಸ್ಮಾರಕಕ್ಕೆ ಭೂಮಿ ನೀಡುವ ಬಗ್ಗೆ ಮುಖ್ಯಮಂತ್ರಿಯವರು ನಿರ್ಧಾರ ಮಾಡುತ್ತಾರೆ ಎಂದು ಹೇಳಿದ್ದಾರೆ.

## ಬಾನು ಮುಷ್ತಾಕ್ ದಸರಾ ಉದ್ಘಾಟನೆಯು ಮುಸ್ಲಿಂ ಮುಖಂಡರಿಗೂ ಇಷ್ಟವಿಲ್ಲ ಎಂದ ಬಿಜೆಪಿ ಮುಖಂಡ ಆರ್ ಅಶೋಕ್

### ಮುಸ್ಲಿಂ ಸಮುದಾಯದವರನ್ನು ಉದ್ಘಾಟಕರನ್ನಾಗಿ ನೇಮಿಸಿದ್ದು ತಪ್ಪು

# ಗೋಮಾಂಸ ತಿಂತಾರೆ ನಂದಿ ಪೂಜೆ ಹೇಗೆ ಮಾಡ್ತಾರೆ?




• ಉದಯವಾಹಿನಿ, ಬೆಂಗಳೂರು

ಬಾನು ಮುಷ್ತಾಕ್ ಗೋಮಾಂಸ ತಿಂತಾರೆ . ದಸರಾದಲ್ಲಿ ಗೋ ಪೂಜೆ ನಂದಿ ಪೂಜೆ ಹೇಗೆ ಮಾಡ್ತಾರೆ? ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಆರ್ ಅಶೋಕ್, ದಸರಾ ಉದ್ಘಾಟನೆ ಮಾಡುವ ಮುಂಚೆ ಗೋವುಗಳ ಪೂಜೆ ಆಗುತ್ತದೆ. ನಂದಿ ಧ್ವಜಪೂಜೆ ಆಗುತ್ತದೆ. ಬಾನು ಮುಷ್ತಾಕ್ ಹಸುವಿನ ಮಾಂಸ ತಿಂತಾರೆ. ಅವರೇ ಗೋವಿನ ಪೂಜೆ ಮಾಡುತ್ತಾರೆ ಎಂದಾದರೆ ಅದು ಹೇಗೆ ಸಾಧ್ಯ? ಕಡೆದು ತಿನ್ನುವವರು ಅದನ್ನು ಪೂಜೆ ಮಾಡಲು ಹೇಗೆ ಸಾಧ್ಯ? ಇದು ಅಪಚಾರ ಅಲ್ಲವೇ? ಎಂದು ಹಿಂದೂ ಸಮುದಾಯದ ಮುಖಂಡರು ಕೇಳುತ್ತಿದ್ದಾರೆ ಎಂದು ಹೇಳಿದರು.





**ಮುಸ್ಲಿಮರಿಗೆ ಇದು ತಪ್ಪು ಅನ್ನಿಸ್ತಿದೆ:** ಮುಸ್ಲಿಂ ಸಮುದಾಯದ ಹಲವು ಮುಖಂಡರು ಸರ್ಕಾರದ ನಡೆಯನ್ನು ವಿರೋಧಿಸುತ್ತಿದ್ದಾರೆ. ದಸರಾ ಉದ್ಘಾಟನೆಗೆ ಕರೆಯಿರಿ ಅನ್ನಲ್ಲ, ನಮ್ಮ ಸಂಸ್ಕೃತಿಯಲ್ಲಿ ವಿಗ್ರಹ ಪೂಜೆ ಮಾಡುವುದಿಲ್ಲ. ನಮ್ಮ ಮೇಲೆ ಹಿಂದೂಗಳನ್ನು ಎತ್ತಿ ಕಟ್ಟುತ್ತಿದ್ದಾರೆ. ಇದು ತಪ್ಪು ಅನ್ನಿಸ್ತಿದೆ ಎಂದಿದ್ದಾರೆ. ಇದು ದಸರಾ ಹಬ್ಬ ಅಲ್ಲ ವೋಟಿನ ಹಬ್ಬವಾಗಿದೆ. ಮುಸ್ಲಿಮರಿಗೆ ಇದು ತಪ್ಪು ಅನ್ನಿಸ್ತಿದೆ. ರಾಜ್ಯ ಸರ್ಕಾರಕ್ಕೆ ಮಾತ್ರ ಅರ್ಥವಾಗುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

**ಮೂರ್ತಿ ಪೂಜೆ ಮಾಡಲು ಅಭ್ಯಂತರ ಇಲ್ಲ ಎನ್ನಬೇಕು:** ಮೊದಲಿಗೆ ಚಾಮುಂಡೇಶ್ವರಿ ಪೂಜೆ, ನಂದಿ ಪೂಜೆ ಆ ನಂತರ ಮೆರವಣಿಗೆ ಇರುತ್ತದೆ. ಅರಿಶಿಣ ಕುಂಕುಮ, ಮಂಗಳಾರತಿ, ಪುಷ್ಪಾರ್ಚನೆ ನಡೆಯುತ್ತದೆ. ಮೂರ್ತಿ ಪೂಜೆ ಮಾಡಲು ಅಭ್ಯಂತರ ಇಲ್ಲ ಎಂದು ಬಾನು ಮುಷ್ತಾಕ್ ಹೇಳಬೇಕು. ಸರ್ಕಾರ ಈ ಎಲ್ಲಾ ಅಂಶ ಗಮನಿಸದೇ ಮುಸ್ಲಿಂ ಸಮುದಾಯದವರನ್ನು ಉದ್ಘಾಟಕರನ್ನಾಗಿ ನೇಮಿಸಿದ್ದು ತಪ್ಪು. ಈ ಬಗ್ಗೆ ಸಚಿವ ಜಮೀರ್ ಅಹ್ಮದ್ ಉತ್ತರ ನೀಡಿಲ್ಲ ಎಂದರು.

**ಬಿಜೆಪಿಯಿಂದ ಚಾಮುಂಡೇಶ್ವರಿ ಉಳಿಸಿ ಅಭಿಯಾನ:** ಧರ್ಮಸ್ಥಳ ವಿಚಾರವಾಗಿ ಬಿಜೆಪಿ ಪ್ರತಿಭಟನೆ, ರ್‍ಯಾಲಿ ಮಾಡಿದಂತೆ ಈ ವಿಚಾರವಾಗಿಯೂ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು. ಈ ಬಗ್ಗೆ ನಮ್ಮ ಮುಖಂಡರ ಬಳಿ ಚರ್ಚೆ ನಡೆಯುತ್ತಿದೆ. ಚಾಮುಂಡೇಶ್ವರಿ ಉಳಿಸಿ ಎಂಬ ಅಭಿಯಾನ ನಡೆಸಲಾಗುತ್ತದೆ ಎಂದು ತಿಳಿಸಿದರು.

**ಕಾಂಗ್ರೆಸ್ ಮುಗಿದ ಅಧ್ಯಾಯ:** ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಮುಂದಿನ 50 ವರ್ಷ ಅಧಿಕಾರಕ್ಕೆ ಬರುವುದಿಲ್ಲ. ಕಾನೂನು ವ್ಯವಸ್ಥೆ ಹದಗೆಟ್ಟು ಹೋಗಿದೆ. ದಸರಾ ಸಾಂಸ್ಕೃತಿಕ ಉತ್ಸವ ಅಲ್ಲ, ನಾಡಹಬ್ಬ, ಆಯುಧ ಪೂಜೆ ಎಂದಿದೆ. ಆದರೆ, ನಗರ ನಕ್ಸಲರ ಮಾತು ಕೇಳಿಕೊಂಡು ಸಿಎಂ ಸಿದ್ದರಾಮಯ್ಯ ತಪ್ಪು ನಿರ್ಧಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

### ಕಾಂಗ್ರೆಸ್ ಸರ್ಕಾರಕ್ಕೆ 5 ಪ್ರಶ್ನೆಗಳು

**ಪ್ರಶ್ನೆ 1 - ಬಾನು ಮುಷ್ತಾಕ್ ಕೈಯಲ್ಲಿ ದಸರಾ ಉದ್ಘಾಟನೆ ಮಾಡಿಸಬೇಕು ಎಂಬ ಐಡಿಯಾ ಯಾರದ್ದು?**

ಇಷ್ಟಕ್ಕೂ ಬಾನು ಮುಷ್ತಾಕ್ ಅವರ ಕೈಯಲ್ಲಿ ನಾಡಹಬ್ಬ ದಸರಾ ಉದ್ಘಾಟನೆ ಮಾಡಿಸಬೇಕು ಎನ್ನುವ ಐಡಿಯಾ ಯಾರದು? ಇದು ಮುಖ್ಯಮಂತ್ರಿಗಳ ಐಡಿಯಾನೊ, ಅಥವಾ ಅವರ ಸಂಪುಟ ಸಹೋದ್ಯೋಗಿಗಳ ಐಡಿಯಾನೊ? ಅಥವಾ ಇದು ಕೂಡ ಧರ್ಮಸ್ಥಳದ ಹೆಸರಿಗೆ ಮಸಿ ಬಳಿಯಲು ಕುಮ್ಮಕ್ಕು ಕೊಟ್ಟಿದ್ದ ಬುದ್ಧಿಜೀವಿ ಎಡಪಂಥೀಯ ನಗರ ನಕ್ಸಲರ ಐಡಿಯಾನೊ?

**ಪ್ರಶ್ನೆ 2 - ಚಾಮುಂಡೇಶ್ವರಿ ಬಗ್ಗೆ ಕ್ಯಾತೆ ತೆಗೆಯಲ್ಲ ಎಂಬುವುದಕ್ಕೆ ಏನು ಗ್ಯಾರಂಟಿ?**

ನಮ್ಮ ತಾಯಿಯ ನೆಲಕ್ಕೆ, ನಮ್ಮ ಜೀವನಾಡಿಯಾಗಿರುವ ನದಿಗಳಿಗೆ ಹೆಣ್ಣಿನ ಹೆಸರಿಟ್ಟು ತಾಯಿ ಸ್ಥಾನದಲ್ಲಿ ಕೂರಿಸುವುದು ನಮ್ಮ ಭಾರತೀಯ ಸಂಸ್ಕೃತಿ. ಅದಕ್ಕಾಗಿಯೇ ರಾಷ್ಟಕವಿ ಕುವೆಂಪು ಅವರು ಜಯ ಭಾರತ ಜನನಿಯ ತನುಜಾತೆ ಜಯಹೇ ಕರ್ನಾಟಕ ಮಾತೆ ಎಂದು ನಮ್ಮ ನಾಡಗೀತೆಯಲ್ಲಿ ಹೇಳಿರುವುದು. ಅದಕ್ಕಾಗಿಯೇ ನಾವು ಕನ್ನಡ ನಾಡಿನ ಜೀವ ನದಿ ಈ ಕಾವೇರಿ ಎಂದು ಹಾಡುವುದು. ಆದರೆ, ಕನ್ನಡಾಂಬೆಯನ್ನು ಭುವನೇಶ್ವರಿಯ ಸ್ಥಾನದಲ್ಲಿ ಕೂರಿಸಿ ಕನ್ನಡಮ್ಮನನ್ನು ದೌರ್ಜನ್ಯ ಮಾಡುತ್ತಿದ್ದೀರಿ ಎನ್ನುವ ಅಭಿಪ್ರಾಯ, ಮನಸ್ಥಿತಿ ಇರುವ ವ್ಯಕ್ತಿಯೊಬ್ಬರಿಂದ ದಸರಾ ಉದ್ಘಾಟನೆ ಮಾಡಿಸಿದರೆ, ಅವರು ನಾಳೆ ತಾಯಿ ಚಾಮುಂಡೇಶ್ವರಿಯನ್ನು ಆನೆಯ ಅಂಬಾರಿ ಮೇಲೆ ಕೂರಿಸುವುದಕ್ಕೂ ಆಕ್ಷೇಪ ವ್ಯಕ್ತಪಡಿಸಿ ಕ್ಯಾತೆ ತೆಗೆಯುವುದಿಲ್ಲ ಎನ್ನುವದಕ್ಕೆ ಏನು ಗ್ಯಾರೆಂಟಿ?

**ಪ್ರಶ್ನೆ 3 - ಬಾನು ಮುಷ್ತಾಕ್ ಅವರಿಗೂ ದಸರಾ, ನವರಾತ್ರಿಗೂ ಏನು ಸಂಬಂಧ?**

ಬಾನು ಮುಷ್ತಾಕ್ ಅವರನ್ನು ಮುಂದಿನ ವರ್ಷದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಿದ್ದರೆ ಅದಕ್ಕೊಂದು ಅರ್ಥ ಇರುತ್ತಿತ್ತು. ಅದು ಅವರಿಗೂ ಗೌರವ ತರುತ್ತಿತ್ತು. ಆದರೆ ಬಾನು ಮುಷ್ತಾಕ್ ಅವರಿಗೂ ಹಿಂದೂಗಳ ಆರಾಧ್ಯ ದೇವತೆ ತಾಯಿ ದುರ್ಗೆಯ ನವರೂಪಗಳನ್ನು ಪೂಜಿಸಿ ಆರಾಧಿಸುವ ದಸರಾ, ನವರಾತ್ರಿಗೂ ಏನು ಸಂಬಂಧ?

**ಪ್ರಶ್ನೆ 4 - ನೆಲ, ಜಲ, ಸಂಸ್ಕೃತಿಯ ಬಗ್ಗೆ ಗೌರವ ಇಲ್ಲದ ಒಬ್ಬ ವ್ಯಕ್ತಿಯಿಂದ ನಾಡಹಬ್ಬ ಉದ್ಘಾಟನೆ ಸರಿಯೇ?**

ನಮ್ಮ ನೆಲ, ಜಲ, ಸಂಸ್ಕೃತಿಯ ಬಗ್ಗೆ ಗೌರವ, ಸಂವೇದನೆಯೇ ಇಲ್ಲದ ಒಬ್ಬ ವ್ಯಕ್ತಿಯಿಂದ ನಾಡಹಬ್ಬ ಉದ್ಘಾಟನೆ ಮಾಡಿಸುವುದು ಎಷ್ಟು ಸರಿ? ಇದು ತಾಯಿ ಚಾಮುಂಡೇಶ್ವರಿಯ ಅಸಂಖ್ಯಾತ ಆಸ್ತಿಕ ಭಕ್ತರಿಗೆ, ಚಾಮುಂಡಿ ಬೆಟ್ಟವನ್ನು ಪವಿತ್ರ ಶಕ್ತಿಪೀಠ ಎಂದು ನಂಬಿರುವ ಹಿಂದುಗಳಿಗೆ ಮಾಡುವ ಅಪಮಾನ ಅಲ್ಲವೇ?

**ಪ್ರಶ್ನೆ 5 - ಸರ್ಕಾರ ಹಿಂದೂಗಳಿಗೆ ಏನು ಸಂದೇಶ ಕೊಡಲು ಹೊರಟಿದೆ?**

ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಯ್ಕೆ ಮಾಡಿದರೆ ಅದು ಸಹಜವಾಗಿ ವಿವಾದವಾಗುತ್ತದೆ, ಅದಕ್ಕೆ ವಿರೋಧ ವ್ಯಕ್ತವಾಗುತ್ತದೆ ಎಂಬ ವಿಷಯ ಸರ್ಕಾರಕ್ಕೆ ತಿಳಿಯದೆ ಏನೂ ಇಲ್ಲ. ಆದರೂ ಹಠಕ್ಕೆ ಬಿದ್ದವರಂತೆ, ಉದ್ದೇಶಪೂರ್ವಕವಾಗಿ ವಿವಾದಕ್ಕೆ ಎಡೆಮಾಡಿಕೊಡುವ ವ್ಯಕ್ತಿಯನ್ನೇ ಆಯ್ಕೆ ಮಾಡಿದ್ದು ಯಾಕೆ? ಇದರಿಂದ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷ ನಾಡಿನ ಜನತೆಗೆ, ಅದರಲ್ಲೂ ವಿಶೇಷವಾಗಿ ಹಿಂದೂಗಳಿಗೆ ಏನು ಸಂದೇಶ ಕೊಡಲು ಹೊರಟಿದೆ? ಎಂದು ಕೇಳಿದ್ದಾರೆ.


## ಜಿಎಸ್‌ಟಿ ಸರಳೀಕರಣದಿಂದಾಗಿ ರಾಜ್ಯಗಳ ಆದಾಯ 2.5 ಲಕ್ಷ ಕೋಟಿ ನಷ್ಟ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

**ಜಿಎಸ್‌ಟಿ ಪಾಲು ಶೇ.50 ರಷ್ಟು**

ಕೇಂದ್ರ ಸರ್ಕಾರ ಪ್ರಸ್ತಾಪಿಸಿರುವ ಜಿಎಸ್‌ಟಿ ಸರಳೀಕರಣ ವ್ಯವಸ್ಥೆಯಿಂದ ರಾಜ್ಯಗಳ ಆದಾಯ 85,000 ಕೋಟಿಯಿಂದ 2.5 ಲಕ್ಷ ಕೋಟಿ ವರೆಗೆ ನಷ್ಟ ಉಂಟಾಗಲಿದ್ದು, ಜಿಎಸ್‌ಟಿ ಸ್ಥಿರಗೊಳ್ಳುವವರೆಗೆ ಜಿಎಸ್‌ಟಿ ಕೌನ್ಸಿಲ್ ನಷ್ಟ ಪರಿಹಾರ ನೀಡಲಿ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಒತ್ತಾಯಿಸಿದರು.

ಜಿಎಸ್‌ಟಿ ಸರಳೀಕರಣ ಹಾಗೂ ರಾಜ್ಯಗಳ ಸ್ವಾಯತ್ತತೆಗೆ ಸಂಬಂಧಿಸಿ ಶುಕ್ರವಾರ ದೆಹಲಿಯ ಕರ್ನಾಟಕ ಭವನದಲ್ಲಿ ಸಮಾನ ಮನಸ್ಕ ಎಂಟು ರಾಜ್ಯಗಳ ಸಚಿವರು ಹಾಗೂ ಅಧಿಕಾರಿಗಳ ಸಭೆ ನಡೆಸಲಾಯಿತು. ಈ ಸಭೆಯಲ್ಲಿ ತೆಲಂಗಾಣ ರಾಜ್ಯದ ಹಣಕಾಸು ಸಚಿವರಾದ ತಂಗಮ್ ತೆನ್ನರಸು, ಹಿಮಾಚಲ ಪ್ರದೇಶದ ಹಣಕಾಸು ಸಚಿವರಾದ ರಾಜೇಶ್ ಧರ್ಮನಿ, ಜಾರ್ಖಂಡ್ ರಾಜ್ಯದ ಹಣಕಾಸು ಸಚಿವರಾದ ರಾಧಾ ಕೃಷ್ಣ ಕಿಶೋರ್, ಪಂಜಾಬ್ ರಾಜ್ಯದ ಹಣಕಾಸು ಸಚಿವರಾದ ಹರ್ಪಾಲ್ ಸಿಂಗ್ ಚೀಮಾ, ಕೇರಳ ರಾಜ್ಯದ ಹಣಕಾಸು ಸಚಿವರಾದ ಬಾಲಗೋಪಾಲ್, ತೆಲಂಗಾಣ ರಾಜ್ಯದ ಹಣಕಾಸು ಸಚಿವರಾದ ಮಲ್ಲು ಭಟ್ಟಿ ವಿಕ್ರಮಾರ್ಕ, ಪಶ್ಚಿಮ ಬಂಗಾಳ ಸರ್ಕಾರದ ಪರವಾಗಿ ವಲಯ ಅಧಿಕಾರಿ ಉಜ್ಜೈನಿ ದತ್ತ ಪಾಲ್ಗೊಂಡಿದ್ದರು.




ಸಭೆಯ ನಂತರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ ಅವರು, ''ಜಿಎಸ್‌ಟಿ ಕೌನ್ಸಿಲ್ ನಮ್ಮ ಮುಂದಿಟ್ಟಿರುವ ಜಿಎಸ್‌ಟಿ ತೆರಿಗೆ ಸರಳೀಕರಣ ವ್ಯವಸ್ಥೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ, ಈ ವ್ಯವಸ್ಥೆ ರಾಜ್ಯಗಳ ತೆರಿಗೆ ಆದಾಯವನ್ನು ರಕ್ಷಿಸುವಂತಿರಬೇಕು ಹಾಗೂ ಇದರ ಸಂಪೂರ್ಣ ಲಾಭ ದೇಶದ ಜನಸಾಮಾನ್ಯರಿಗೆ ಸಿಗುವಂತಿರಬೇಕೆ ಹೊರತು ಕೆಲವು ಕಂಪೆನಿಗಳಿಗೆ ಮಾತ್ರ ಲಾಭ ಆಗುವಂತಿರಬಾರದು ಎಂದು ಅಭಿಪ್ರಾಯಪಟ್ಟರು. ಪ್ರಸ್ತಾವಿತ ಜಿಎಸ್‌ಟಿ ಸರಳೀಕರಣದಿಂದ ರಾಜ್ಯ ಸರ್ಕಾರಗಳಿಗೆ ಯಾವ ಪ್ರಮಾಣದಲ್ಲಿ ಆದಾಯ ಖೋತಾ ಆಗಬಹುದು ಎಂಬ ಅಂದಾಜಿನ ಕುರಿತು ಕೇಂದ್ರ ಸರ್ಕಾರ ಈವರೆಗೆ ಯಾವುದೇ ಮಾಹಿತಿ ನೀಡಿಲ್ಲ. ಕೆಲವು ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು ರಾಜ್ಯಗಳಿಗೆ ಭಾಗಶಃ 85ಸಾವಿರ ಕೋಟಿಯಿಂದ 2.5 ಲಕ್ಷ ಕೋಟಿ ವರೆಗೆ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಿವೆ. ರಾಜ್ಯ ಸರ್ಕಾರಗಳಿಗೆ ಆದಾಯ ನಷ್ಟ ಉಂಟಾದರೆ ಕೇಂದ್ರ ಸರ್ಕಾರಕ್ಕೂ ನಷ್ಟವಾಗಲಿದೆ. ಹೀಗಾಗಿ ಜಿಎಸ್‌ಟಿ ಸ್ಥಿರಗೊಳ್ಳುವವರೆಗೆ ಕೇಂದ್ರ ಸರ್ಕಾರ ತಮ್ಮ ಖಜಾನೆಯಿಂದ ಒಂದು ರೂಪಾಯಿಯನ್ನೂ ನೀಡುವ ಅಗತ್ಯವಿಲ್ಲ. ಬದಲಿಗೆ ಜಿಎಸ್‌ಟಿ ಕೌನ್ಸಿಲ್ ಪರಿಧಿಯಲ್ಲೇ ಪ್ರತಿಯೊಂದು ರಾಜ್ಯಗಳಿಗೂ ಪರಿಹಾರ ನೀಡಲಿ ಎಂದು ಒತ್ತಾಯಿಸಿದರು. ಕೇಂದ್ರದ ಆದಾಯದಲ್ಲಿ ಜಿಎಸ್‌ಟಿ ಪಾಲು ಕೇವಲ ಶೇ. 28ರಷ್ಟು ಮಾತ್ರ. ಉಳಿದ ಶೇ.72ರಷ್ಟು ಆದಾಯವನ್ನು ಕೇಂದ್ರ ವಿವಿಧ ಮೂಲಗಳಿಂದ ಗಳಿಸುತ್ತದೆ. ನೇರ ತೆರಿಗೆ , ಆದಾಯ ತೆರಿಗೆ, ಕಸ್ಟಮ್ಸ್, ಡೆವಿಡೆಂಟ್ ಹಾಗೂ ವಿವಿಧ ಸೆಸ್ ಗಳು ಕೇಂದ್ರದ ಆದಾಯದ ಮೂಲ. ಸೆಸ್ ಮೂಲಕವೇ ಕೇಂದ್ರ ಸರ್ಕಾರ ಶೇ.17 ರಿಂದ ಶೇ.20 ರಷ್ಟು ಆದಾಯ ಗಳಿಸುತ್ತದೆ. ಸೆಸ್ ಆದಾಯದಲ್ಲಿ ಒಂದು ರೂಪಾಯಿಯನ್ನೂ ಸಹ ಕೇಂದ್ರ ಸರ್ಕಾರ ರಾಜ್ಯಗಳ ಜೊತೆ ಹಂಚಿಕೊಳ್ಳುವುದಿಲ್ಲ. ಆದರೆ, ರಾಜ್ಯಗಳ ಆದಾಯದಲ್ಲಿ ಜಿಎಸ್‌ಟಿ ಪಾಲು ಶೇ.50 ರಷ್ಟು. ಹೀಗಾಗಿ ಅಭಿವೃದ್ಧಿಗಾಗಿ ಹಾಗೂ ಆದಾಯ ಸಂಗ್ರಹಣೆಗೆ ರಾಜ್ಯಗಳು ಜಿಎಸ್‌ಟಿಯನ್ನೇ ನೆಚ್ಚಿಕೊಂಡಿವೆ. ಇಂತಹ ಸಂದರ್ಭದಲ್ಲಿ ರಾಜ್ಯಗಳ ಆದಾಯದ ಶೇ.20ರಷ್ಟು ಆದಾಯ ನಷ್ಟವಾದರೆ ರಾಜ್ಯಗಳ ಆರ್ಥಿಕ ಸ್ವಾಯತ್ತತೆ ಪ್ರಶ್ನಾರ್ಥಕವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

# 1991ರಲ್ಲಿ ಮೋಸದಿಂದ ಸೋತಿದ್ದೆ ಎನ್ನುವ ಮೂಲಕ ಕಾಂಗ್ರೆಸ್ಸಿಗೆ ಮುಜುಗರ

### ■ ಸಿದ್ದರಾಮಯ್ಯ ಹೇಳಿಕೆಯು ಬಿಜೆಪಿಗೆ ದೊಡ್ಡ ಅಸ್ತ್ರವಾಗಿದೆ ಏನೋ ಹೇಳಲು ಹೋಗಿ ಪೇಚಿಗೆ ಸಿಲುಕಿದ ಮುಖ್ಯಮಂತ್ರಿ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಹೇಳಿರುವ ಅದೊಂದು ಹೇಳಿಕೆ, ಕರ್ನಾಟಕದ ರಾಜಕೀಯ ವಲಯದಲ್ಲಿ ಮಾತ್ರವಲ್ಲ, ರಾಷ್ಟ್ರಮಟ್ಟದಲ್ಲೂ ದೊಡ್ಡ ಸದ್ದು ಮಾಡುತ್ತಿದ್ದು, ಸಿಇಸಿ - ಕೇಂದ್ರ ಸರ್ಕಾರದ ನಡುವೆ ಅಪವಿತ್ರ ಮೈತ್ರಿ ಇದೆ ಎಂದು ಆರೋಪಿಸಿದ್ದ ಕಾಂಗ್ರೆಸ್ಸಿಗೆ ತೀವ್ರ ಮುಜುಗರ ತಂದಿದೆ.



**ಮೂವತ್ತನಾಲ್ಕು ವರ್ಷಗಳ ಹಿಂದಿನ ವಿಚಾರ ಈಗ ಹೇಳಿದ್ಯಾಕೆ?:** ಸಿದ್ದರಾಮಯ್ಯನವರು ನೀಡಿರುವ ಹೇಳಿಕೆಯೇನು, ಯಾವ ಸಂದರ್ಭದಲ್ಲಿ ಅದನ್ನು ಹೇಳಿದರು? ಇಲ್ಲಿದೆ ಉತ್ತರ. ಅದು, ಬೆಂಗಳೂರಿನ ವಿಧಾನಸೌಧದಲ್ಲಿ ಹಿರಿಯ ವಕೀಲರು, ಕರ್ನಾಟಕದ ಮಾಜಿ ಅಡ್ವೋಕೇಟ್ ಜನರಲ್ ಪ್ರೊ. ರವಿವರ್ಮ ಕುಮಾರ್ ಅವರ ಸನ್ಮಾನ ಕಾರ್ಯಕ್ರಮ ಇತ್ತೀಚೆಗೆ ನಡೆದಿತ್ತು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಡೆದಿತ್ತು. ಆ ಸಂದರ್ಭದಲ್ಲಿ ಮಾತನಾಡಿದ ಸಿದ್ದರಾಮಯ್ಯ, 1991ರ ಲೋಕಸಭಾ ಚುನಾವಣೆಯಲ್ಲಿ ನಾನು ಕೊಪ್ಪಳ ಕ್ಷೇತ್ರದಿಂದ ಸ್ಪರ್ಧಿಸಿದ್ದೆ. ಆಗ, ಮೋಸದಿಂದ ನನ್ನನ್ನು ಸೋಲಿಸಿದ್ದರು. ಚುನಾವಣಾ ಫಲಿತಾಂಶವನ್ನು ನಾನು ನ್ಯಾಯಾಲಯದಲ್ಲಿ ಪ್ರಶ್ನೆ ಮಾಡಿದ್ದೆ. ಆ ಸಂದರ್ಭದಲ್ಲಿ ಪ್ರೊ. ರವಿಕುಮಾರ್ ವರ್ಮಾ ಅವರು ನನಗೆ ತುಂಬಾ ಸಲಹೆಗಳನ್ನು ನೀಡಿದ್ದರು ಎಂದು ಹೇಳಿದ್ದಾರೆ. ಇದು ಈಗ ಬಿಜೆಪಿಯವರಿಗೆ ಅಸ್ತ್ರವಾಗಿದೆ.

**ಸಿದ್ದರಾಮಯ್ಯ ಹೇಳಿದ ಚುನಾವಣೆ ಯಾವುದು?** ಅದು 34 ವರ್ಷಗಳ ಹಿಂದಿನ ವಿಚಾರ. 1991ರಲ್ಲಿ ನಡೆದಿದ್ದ ಲೋಕಸಭಾ ಚುನಾವಣೆಯಲ್ಲಿ ಸಿದ್ದರಾಮಯ್ಯನವರು ಕೊಪ್ಪಳ ಲೋಕಸಭಾ ಕ್ಷೇತ್ರದಿಂದ ಜನತಾದಳದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಆಗ, ಅಲ್ಲಿನ ಹಾಲಿ ಸಂಸದರಾಗಿದ್ದಿದ್ದು ಬಸವರಾಜ ಪಾಟೀಲ್ ಅನ್ವರಿ.

**ಯಾರು ಏನೇನು ಹೇಳಿದರು?**

**ಸಿದ್ದರಾಮಯ್ಯ ಹೇಳಿಕೆಯನ್ನೇ ಮುಂದಿಟ್ಟುಕೊಂಡು ವಿಧಾನಸಭೆಯ ವಿಪಕ್ಷಗಳ ನಾಯಕ ಆರ್. ಅಶೋಕ್ ಮುಂತಾದ ಬಿಜೆಪಿ ನಾಯಕರು ಕಾಂಗ್ರೆಸ್ ಪಕ್ಷವನ್ನು ಟೀಕಿಸಿದ್ದಾರೆ. ನಮ್ಮ ದೇಶದಲ್ಲಿ ಚುನಾವಣಾ ಅಕ್ರಮಗಳ ಪಿತಾಮಹವೇ ಕಾಂಗ್ರೆಸ್. ಅಂಥ ಕಾಂಗ್ರೆಸ್ ಪಕ್ಷ ಇಂದು ಬಿಜೆಪಿ ವಿರುದ್ಧ ಮತಗಳ್ಳತನದ ಟೀಕೆ ಮಾಡುತ್ತಿರುವುದು ಹಾಸ್ಯಾಸ್ಪದ ಎಂದಿದ್ದಾರೆ. ದೆಹಲಿಯಲ್ಲಿರುವ ಬಿಜೆಪಿ ನಾಯಕ ಅಮಿತ್ ಮಾಳವಿಯ ಅವರು ಟ್ವೀಟ್ ಮಾಡಿ, ''ವರ್ಷಗಳಿಂದಲೂ ಬಿಜೆಪಿಯು ಮತಗಳ್ಳತನ ಮಾಡುತ್ತಾ ಚುನಾವಣೆಗಳಲ್ಲಿ ಸತತವಾಗಿ ಗೆಲ್ಲುತ್ತಾ ಬಂದಿತ್ತೆಂಬುದನ್ನು ಖುದ್ದು ಸಿದ್ದರಾಮಯ್ಯನವರೇ ಹೇಳಿಕೆಯ ಮೂಲಕ ವಿವರಿಸಿದ್ದಾರೆ. ಈಗ ರಾಹುಲ್ ಗಾಂಧಿಯವರು ಮಾಡುತ್ತಿರುವ ಮತದಾನ ಮತದಾರರ ಹಕ್ಕು ಎಂಬರ್ಥದ ಆಂದೋಲನವು ಮತದಾರರನ್ನು ಮರಳು ಮಾಡುವ ಬೂಟಾಟಿಕೆಯೆನಿಸುತ್ತದೆ ಎಂದು ಹೇಳಿದ್ದಾರೆ.**

1991ರ ಚುನಾವಣೆಗೂ ಮುನ್ನ ನಡೆದಿದ್ದ 1989ರ ಲೋಕಸಭಾ ಚುನಾವಣೆಯಲ್ಲಿ ಅದೇ ಕ್ಷೇತ್ರದಿಂದ ಜನತದಾಳದಿಂದ ಸ್ಪರ್ಧಿಸಿದ್ದ ಅನ್ವರಿಯವರು ಗೆದ್ದು ಸಂಸದರಾಗಿದ್ದರು. 1991ರ ಚುನಾವಣೆ ಬರುವ ಹೊತ್ತಿಗೆ ಅವರು ಕಾಂಗ್ರೆಸ್ ಸೇರಿ, ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದರು.

ಅವರಿಗೆ ಟಕ್ಕರ್ ಕೊಡುವ ಉದ್ದೇಶದಿಂದಲೇ ಜನತಾದಳ ಆಗ ಸಿದ್ದರಾಮಯ್ಯನವರವನ್ನು ಕಣಕ್ಕಿಳಿಸಿತ್ತು. ಆದರೆ, ಚುನಾವಣೆಯಲ್ಲಿ ಅನ್ವರಿಯವರು ಜಯ ಗಳಿಸಿದರು. ಅವರ ಸಮೀಪದ ಸ್ಪರ್ಧಿ ಸಿದ್ದರಾಮಯ್ಯ ಹಾಗೂ ಅನ್ವರಿ ನಡುವಿನ ಗೆಲುವಿನ ವ್ಯತ್ಯಾಸ ಕೇವಲ 11,200 ಮತಗಳಷ್ಟೆ. ಇದು ಸಿದ್ದರಾಮಯ್ಯನವರ ಅನುಮಾನಗಳಿಗೆ ಕಾರಣವಾಯಿತು. ಅವರು ಕರ್ನಾಟಕ ಹೈಕೋರ್ಟ್ ನಲ್ಲಿ ಕೇಸ್ ಹಾಕಿದರು. ಮತಎಣಿಕೆಯ ವೇಳೆ, ಅಧಿಕಾರಿಗಳು 22,243 ಮತಗಳನ್ನು ಎಣಿಸದೇ ತಿರಸ್ಕರಿಸಿದ್ದಾರೆ. ಅವುಗಳನ್ನು ಎಣಿಕೆ ಮಾಡಿದ್ದರೆ ನಾನು ಪ್ರಾಯಶಃ ಸೋಲುತ್ತಿರಲಿಲ್ಲ ಎಂಬುದು ಈ ಕೇಸ್ ನಲ್ಲಿ ಸಿದ್ದರಾಮಯ್ಯನವರ ವಾದವಾಗಿತ್ತು. ಅಷ್ಟೇ ಅಲ್ಲದೆ, 1991ರಲ್ಲಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಕ್ಕಾಗಿ ಅದೇ ವಿಚಾರವನ್ನು ಪ್ರೊ. ರವಿಕುಮಾರ್ ವರ್ಮಾ ಅವರನ್ನು ಸನ್ಮಾನಿಸುವಾಗ ಹೇಳಿದ್ದು. ''ತಮ್ಮ ಹಾಗೂ ಅವರ ಒಡನಾಟವನ್ನು ಸ್ಮರಿಸಿಕೊಳ್ಳುವಾಗ,, ನನಗೆ ನನ್ನ ರಾಜಕೀಯ ಜೀವನದಲ್ಲಿ ಯಾವುದೇ ಸಮಸ್ಯೆಗಳು ಎದುರಾದಾಗ ಅದರ ಬಗ್ಗೆ ಪ್ರೊ. ರವಿಕುಮಾರ್ ವರ್ಮಾ ಅವರ ಬಳಿ ಸಲಹೆ ಕೇಳುತ್ತಿದ್ದೆ'' ಎಂದರಲ್ಲದೆ, ''1991ರ ಲೋಕಸಭಾ ಚುನಾವಣೆ, ಅದರಲ್ಲಿ ತಮ್ಮ ಸೋಲು ಮೋಸದಿಂದ ಆಗಿತ್ತು'' ಎಂದು ಹೇಳಿದ್ದಾರೆ. ಇದೇ ಈಗ ಬಿಜೆಪಿಗೆ ಆಹಾರವಾಗಿದೆ.

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,331/Gram24ct ₹9,470/Gram22ct | ಬೆಳ್ಳಿ: ₹119.00/Gram

## ಕರ್ನಾಟಕ ಶಾಸ್ತ್ರೀಯ ಸಂಗೀತ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಲ್ಲೇಶ್ವರಂ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಆಗಸ್ಟ್ 30, ಶನಿವಾರ ಸಂಜೆ 6-15ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ. ಗಾಯನ ವಿದುಷಿ ಮಧುಮಿತಾ ಮತ್ತು ಸುಷ್ಮಿತಾ (ಸ್ಮಿತಾ ಸಹೋದರಿಯರು). ಪಿಟೀಲು ವಿದ್ವಾನ್ ಅರುಣಾಚಲ ಕಾರ್ತೀಕ್, ಮೃದಂಗ: ವಿದ್ವಾನ್ ಅಶ್ವತ್ಥ ನಾರಾಯಣರಾವ್, ಘಟ: ವಿದ್ವಾನ್ ಎಸ್. ಉತ್ತಮ್ . ಸ್ಥಳ ಶ್ರೀರಾಮ ಮಂದಿರ, ಈಸ್ಟ್ ಪಾರ್ಕ್ ರಸ್ತೆ, ಅಂಚೆ ಕಚೇರಿ ಹತ್ತಿರ, ಮಲ್ಲೇಶ್ವರಂ, ಬೆಂಗಳೂರು-560003

## ತುಂಗಾಭದ್ರ ಜಲಾಶಯದಿಂದ ನೀರು ಬಿಡುವ ಸಾಧ್ಯತೆ, ಜನರಿಗೆ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ತುಂಗಾಭದ್ರ ಜಲಾಶಯದಿಂದ ನದಿಗೆ 40 ಸಾವಿರ ಕ್ಯೂಸೆಕ್‌ನಿಂದ 70 ಸಾವಿರ ಕ್ಯೂಸೆಕ್‌ವರೆಗೂ ನೀರು ಬಿಡುವ ಸಾಧ್ಯತೆ ಇದ್ದು, ತುಂಗಾಭದ್ರ ಅಣೆಕಟ್ಟೆಯ ಕೆಳಭಾಗದಲ್ಲಿನ ನದಿಪಾತ್ರದ ಜನವಸತಿಗಳಲ್ಲಿ ಜಾಗ್ರತೆ ವಹಿಸಲು ಕೋರಲಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಈ ಮನವಿ ಮಾಡಿದೆ. ತುಂಗಾಭದ್ರ ಜಲಾಶಯಕ್ಕೆ ಈಗ ಬರುತ್ತಿರುವ ಒಳಹರಿವು 36 ಸಾವಿರ ಕ್ಯೂಸೆಕ್ ಆಗಿದ್ದು, ಇದು 53 ಸಾವಿರ ಕ್ಯೂಸೆಕ್‌ಗೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಶುಕ್ರವಾರ ಮಧ್ಯಾಹ್ನ 12 ಗಂಟೆಯಿಂದ ನದಿಗೆ ನೀರು ಬಿಡುವ ಪ್ರಮಾಣವನ್ನು ಹೆಚ್ಚಿಸಲಾಗುತ್ತದೆ. ಒಳಹರಿವು 40 ಸಾವಿರ ಕ್ಯೂಸೆಕ್‌ಗಿಂತ 70 ಸಾವಿರ ಕ್ಯೂಸೆಕ್‌ವರೆಗೂ ಹೆಚ್ಚಾಗಬಹುದು. ಇದಕ್ಕೆ ಕಾರಣ ತುಂಗಾಜಲಾಶಯದಿಂದ 32 ಸಾವಿರ ಕ್ಯೂಸೆಕ್, ಭದ್ರ ಅಣೆಕಟ್ಟೆಯಿಂದ 11 ಸಾವಿರ ಕ್ಯೂಸೆಕ್ ಹಾಗೂ ವರದಾನದಿಯಿಂದ 9700 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಅಲ್ಲದೆ ತುಂಗಾಭದ್ರ ನದಿ ಜಲಾನಯನ ಭಾಗದಲ್ಲಿ ಮಳೆಯಾಗುತ್ತಿದ್ದು, ತುಂಗಾಭದ್ರ ಜಲಾಶಯದ ಒಳಹರಿವು 53 ಸಾವಿರ ಕ್ಯೂಸೆಕ್‌ಗೂ ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ.

## ಕೃಷಿ ವಿಜ್ಞಾನಿಗಳೊಂದಿಗೆ ಚರ್ಚೆ



• ಉದಯವಾಹಿನಿ, ಬೆಂಗಳೂರು

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವರಾದ ವಿ.ಸೋಮಣ್ಣ ನವರು ಬೆಂಗಳೂರಿನ ಕುಮಾರ ಕೃಪಾ ಅತಿಥಿ ಗೃಹದಲ್ಲಿಂದು ತೆಂಗು ಬೆಳೆಯ ರೋಗ ನಿಯಂತ್ರಣದ ಕುರಿತು ಕೆ.ವಿ.ಕೆ ಅಧಿಕಾರಿಗಳು, ಐಸಿಎಆರ್‌ನ ಕೃಷಿ ಮತ್ತು ತೋಟಗಾರಿಕಾ ವಿಜ್ಞಾನಿಗಳೊಂದಿಗೆ ಸಭೆ ನಡೆಸಿ, ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದರು. ಈ ಸಂದರ್ಭದಲ್ಲಿ, ಬೆಂಗಳೂರು ಗ್ರಾಮಾಂತರದ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್ ಮಂಜುನಾಥ್ ಅವರು, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ. ಪಟೇಲ್, ತಿಪಟೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಷಡಕ್ಷರಿಯವರು ಉಪಸ್ಥಿತರಿದ್ದರು.

## ಎರಡು ಗುಂಪಿನ ನಡುವೆ ಗಲಾಟೆ; ಬ್ಯಾಟ್‌ನಿಂದ ಹಲ್ಲೆ: ನಾಲ್ವರಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ಮದುವೆ ಕಾರ್ಯಕ್ರಮಕ್ಕೆ ಹೋಗಿದ್ದ ವೇಳೆ ರೌಡಿಶೀಟರ್ ಒಬ್ಬನ ಸ್ನೇಹಿತನ ತಾಯಿಗೆ ಬೈಕ್ ತಾಗಿದ್ದಕ್ಕೆ ಎರಡು ಗುಂಪುಗಳ ನಡುವೆ ಮಾರಾಮಾರಿ ನಡೆದಿದೆ. ಸಿದ್ದಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಕಾವೇರಮ್ಮ ಕೊಳೆಗೇರಿ ಬಳಿಯ ಬೈರಸಂದ್ರದಲ್ಲಿ ರಾತ್ರಿ ನಡೆಯುತ್ತಿದ್ದ ವಿವಾಹ ಕಾರ್ಯಕ್ರಮಕ್ಕೆ ರೌಡಿಶೀಟರ್ ವಿಜಯ್ ಸೇರಿದಂತೆ ಆತನ ಸ್ನೇಹಿತರು ಹೋಗಿದ್ದರು. ಬೈಕ್ ತಾಗಿರುವುದನ್ನು ಪ್ರಶ್ನಿಸಿದಕ್ಕೆ ಎರಡು ಗುಂಪಿನ ನಡುವೆ ಮಾತಿನ ಚಕಮಕಿ ನಡೆದು, ಗಲಾಟೆ ನಡೆದಿದೆ. ಗಲಾಟೆ ವಿಕೋಪಕ್ಕೆ ತಿರುಗಿ ಪರಸ್ಪರ ಹೊಡೆದಾಡಿದ್ದಾರೆ. ಕ್ರಿಕೆಟ್ ಬ್ಯಾಟ್‌ನಿಂದ ಬಡಿದಾಡಿಕೊಂಡ ಪರಿಣಾಮ ಪ್ರಭು, ಪ್ರವೀಣ್, ಸಂದೀಪ್, ರೋಹಿತ್ ಎಂಬುವವರು ಗಾಯಗೊಂಡಿದ್ದಾರೆ. ಸ್ಥಳಕ್ಕೆ ಸಿದ್ದಾಪುರ ಠಾಣೆ ಪೊಲೀಸರು ಭೇಟಿ ನೀಡಿ ಆರು ಮಂದಿಯನ್ನು ವಶಕ್ಕೆ ಪಡೆದಿದ್ದಾರೆ. ಎರಡು ಗುಂಪಿನವರು ನೀಡಿದ ದೂರಿನ ಅನ್ವಯ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಕೈಗೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

## ಕನಿಷ್ಠ 7,500 ಪಿಂಚಣಿ ನೀಡಲು ನಿವೃತ್ತ ನೌಕರರ ಆಗ್ರಹ



• ಉದಯವಾಹಿನಿ, ಬೆಂಗಳೂರು

ಕನಿಷ್ಠ 7,500 ಪಿಂಚಣಿ ಹಾಗೂ ಭತ್ಯೆ, ವೈದ್ಯಕೀಯ ಸೌಲಭ್ಯ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇಪಿಎಸ್-95 ಬಿಎಂಟಿಸಿ, ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರ ಸಂಘದ ಸದಸ್ಯರು ಭವಿಷ್ಯ ನಿಧಿ ಪ್ರಾದೇಶಿಕ ಆಯುಕ್ತರ ಕಚೇರಿ ಎದುರು ಪ್ರತಿಭಟನೆ ನಡೆಸಿದರು. 2014ರಿಂದ ಇಪಿಎಸ್ ನಿವೃತ್ತರಿಗೆ 1000 ನೀಡಲಾಗುತ್ತಿದೆ. ಇನ್ನೂ ಕೆಲವರು ಒಂದು ಸಾವಿರ ರೂಪಾಯಿಗಿಂತ ಕಡಿಮೆ ಪಿಂಚಣಿ ಪಡೆಯುತ್ತಿದ್ದಾರೆ ಎಂದು ಪ್ರತಿಭಟನಕಾರರು ಬೇಸರ ವ್ಯಕ್ತಪಡಿಸಿದರು. ಹಲವು ಬಾರಿ ಕೇಂದ್ರಕ್ಕೆ ಮನವಿ ಸಲ್ಲಿಸಿದರೂ ಬೇಡಿಕೆ ಈಡೇರಿಲ್ಲ. ಇಪಿಎಸ್ ವ್ಯಾಪ್ತಿಗೆ ಬಾರದ ನಿವೃತ್ತ ನೌಕರರಿಗೆ 5 ಸಾವಿರ ನೀಡಬೇಕು. ಹತ್ತು ವರ್ಷಗಳಲ್ಲಿ ಲಕ್ಷಾಂತರ ಇಪಿಎಸ್ ನೌಕರರು ವಯೋಸಹಜ ಹಾಗೂ ಅನಾರೋಗ್ಯದಿಂದ ಮೃತಪಟ್ಟಿದ್ದಾರೆ.

ಸೆಪ್ಟೆಂಬರ್ 15ರೊಳಗೆ ಬೇಡಿಕೆ ಈಡೇರಿಸದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಸಂಘದ ಅಧ್ಯಕ್ಷ ನಂಜುಂಡೇಗೌಡ ಎಚ್ಚರಿಸಿದರು. ನಿವೃತ್ತಿ ಹೊಂದಿದ ನೌಕರರಿಗೆ ಆರು ತಿಂಗಳೊಳಗೆ ಪಿಂಚಣಿ ಹೆಚ್ಚಿಸುವಂತೆ 2022ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ಆದೇಶವನ್ನು ಇಪಿಎಫ್‌ಒ ಅಧಿಕಾರಿಗಳು ಜಾರಿಗೊಳಿಸಿಲ್ಲ. ಈ ಬಗ್ಗೆ ಕೇಂದ್ರದ ಮೇಲೆ ಒತ್ತಡ ಹೇರುವಂತೆ ಕೇಂದ್ರ, ಕಾರ್ಮಿಕ ಹಾಗೂ ಉದ್ಯೋಗ ಸಚಿವ ಮನ್ಸುಖ್ ಮಾಂಡವೀಯ ಹಾಗೂ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಭವಿಷ್ಯ ನಿಧಿ ಪ್ರಾದೇಶಿಕ ಆಯುಕ್ತರ ಕಚೇರಿ ಮೂಲಕ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಸಂಘದ ಕಾರ್ಯಾಧ್ಯಕ್ಷ ಶಂಕರ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಸುಬ್ಬಣ್ಣ ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

# 2ನೇ ವಿಮಾನ ನಿಲ್ದಾಣ 2033ಕ್ಕೆ ಆರಂಭ ನಿಶ್ಚಿತ

### ಸ್ಥಳ ಅಂತಿಮಗೊಳಿಸಿ ವರದಿ ಸಿಕ್ಕರೇ ಸಾಧ್ಯಾಸಾಧ್ಯತಾ ವರದಿ ತಯಾರಿಸಲಾಗುವುದು ಎಂದ ಸಚಿವ

• ಉದಯವಾಹಿನಿ, ಬೆಂಗಳೂರು

ಯಾರೇ ಎಷ್ಟೇ ಅಡ್ಡಿಯಾದರೂ ಬೆಂಗಳೂರು 2 ನೇ ವಿಮಾನ ನಿಲ್ದಾಣ ನಿರ್ಮಾಣ ಯೋಜನೆಯಿಂದ ಹಿಂದೆ ಸರಿಯುವ ಮಾತೇ ಇಲ್ಲ. 2ನೇ ವಿಮಾನ ನಿಲ್ದಾಣ 2033ಕ್ಕೆ ಆರಂಭ ನಿಶ್ಚಿತ. ಶೀಘ್ರದಲ್ಲಿಯೇ ಸ್ಥಳ ಅಂತಿಮಗೊಳ್ಳಲಿದೆ ಎಂದು ಕರ್ನಾಟಕ ಕೈಗಾರಿಕೆ ಹಾಗೂ ಮೂಲಸೌಕರ್ಯಗಳ ಸಚಿವ ಎಂಬಿ ಪಾಟೀಲ್ ತಿಳಿಸಿದ್ದಾರೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪರ್ಯಾಯವಾಗಿ ಬೆಂಗಳೂರಿನ 2ನೇ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ಮುಂದಾಗಿದೆ. ಈ ಯೋಜನೆಗೆ ಸವಾಲು ಎಂಬಂತೆ ಕರ್ನಾಟಕ ಗಡಿಯಿಂದ 20 ಕಿ.ಮೀ ಅಂತರದಲ್ಲಿಯೇ ತಮಿಳುನಾಡು ಸರ್ಕಾರವು ಹೊಸೂರು ಬಳಿ ವಿಮಾನ ನಿಲ್ದಾಣ ನಿರ್ಮಿಸಲು ಸ್ಥಳ ಅಂತಿಮಗೊಳಿಸಿ ವರದಿ ಪಡೆದುಕೊಂಡು ಬಂದಿದೆ. ಆದರೆ, ಬೆಂಗಳೂರು 2 ನೇ ವಿಮಾನ ನಿಲ್ದಾಣದ ಸ್ಥಳ ಅಂತಿಮ ವರದಿ ಸಿಕ್ಕಿಲ್ಲ. ಹೀಗಾಗಿ, ಸರ್ಕಾರ ಯೋಜನೆಯಿಂದ ಹಿಂದೆ ಸರಿಯಿತೇ? ಎಂಬ ಮಾತುಗಳು ಕೇಳಿ ಬಂದಿದ್ದವು. ಸದ್ಯ ಸಚಿವ ಎಂಬಿ ಪಾಟೀಲ್ ಟೈಮ್ಸ್ ಆಫ್ ಇಂಡಿಯಾಗೆ ಉತ್ತರ ನೀಡಿದ್ದಾರೆ.

**2030ಕ್ಕೆ ಸಿದ್ಧಪಡಿಸಬಹುದು:** ಈಗಿನಿಂದಲೇ ಸಿದ್ಧತೆ ಆರಂಭಿಸಿದರೆ, ಎರಡನೇ ವಿಮಾನ ನಿಲ್ದಾಣವು 2030 ರ ವೇಳೆಗೆ ಸಿದ್ಧವಾಗಬಹುದು. ಆದರೆ,





ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಜತೆ ಒಪ್ಪಂದ, ನಿರ್ಬಂಧ ನಿಯಮ ಇರುವುದರಿಂದ ಈ ಹೊಸ ವಿಮಾನ ನಿಲ್ದಾಣವು 2033ರ ವೇಳೆಗೆ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ. ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ತಂಡವು ಇತ್ತೀಚೆಗೆ ಮೂರು ಸ್ಥಳಗಳನ್ನು ಪರಿಶೀಲಿಸಿದೆ. ಕನಕಪುರ ರಸ್ತೆಯಲ್ಲಿ ಹಾರೋಹಳ್ಳಿ ಬಳಿ 4,800 ಎಕರೆ ಮತ್ತು 5,000 ಎಕರೆ ಜಾಗವನ್ನು ಪರಿಶೀಲನೆ ನಡೆಸಿದೆ. ನೆಲಮಂಗಲದ ಕುಣಿಗಲ್ ರಸ್ತೆಯಲ್ಲಿ 5,200 ಎಕರೆ ಜಾಗವನ್ನೂ ನೋಡಿದೆ.

ಯೋಜನೆಯ ಪ್ರಕಾರ, ಸುಮಾರು 4,500 ಎಕರೆ ಜಾಗ ಬೇಕಾಗುತ್ತದೆ. ಪ್ರಯಾಣಿಕರ ಸಂಖ್ಯೆ, ಸರಕು ಸಾಗಣೆ ಸಾಮರ್ಥ್ಯದ ಆಧಾರದ ಮೇಲೆ ಸ್ಥಳವನ್ನು ಆಯ್ಕೆ ಮಾಡಲಾಗುತ್ತದೆ. ಕೇಂದ್ರ ಸರ್ಕಾರವು ಮುಂದಿನ ಕೆಲವೇ ವಾರಗಳಲ್ಲಿ ಅನುಮತಿ ನೀಡುವ ನಿರೀಕ್ಷೆಯಿದೆ ಎಂದು ಸಚಿವ ಎಂಬಿ ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸ್ಥಳ ಅಂತಿಮಗೊಳಿಸಿ ವರದಿ ಸಿಕ್ಕ ನಂತರ, ಒಂದು ಸಾಧ್ಯಾಸಾಧ್ಯತಾ ವರದಿ ತಯಾರಿಸಲಾಗುವುದು. ವಿಮಾನ ನಿಲ್ದಾಣದ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಪರಿಣತಿ ಹೊಂದಿರುವ ತಜ್ಞರ ಸಹಾಯದಿಂದ ವಿವರವಾದ ಅಧ್ಯಯನವನ್ನು ಮಾಡಲಾಗುವುದು.

**ಹಣಕಾಸಿನ ಚಿಂತೆ ಇಲ್ಲ:** ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ತುಂಬಿ ತುಳುಕುತ್ತಿದೆ. ಹೀಗಾಗಿ, 2033ರೊಳಗೆ ಹೊಸ ವಿಮಾನ ನಿಲ್ದಾಣ ಆಗಬೇಕು. ಹಣಕಾಸಿನ ಬಗ್ಗೆ ಚಿಂತೆ ಇಲ್ಲ ಎಂದರು.

**ಹೊಸೂರು ವಿಮಾನ ನಿಲ್ದಾಣ ಸ್ಥಳ ಎಲ್ಲಿ ಅಂತಿಮ?:** ಕಳೆದ ವಾರ, ತಮಿಳುನಾಡು ಸರ್ಕಾರವು ಹೊಸೂರು ವಿಮಾನ ನಿಲ್ದಾಣಕ್ಕಾಗಿ ಶೂಲಗಿರಿ ತಾಲ್ಲೂಕಿನ ಬೇರಿಗೈ ಮತ್ತು ಬಾಗಲೂರು ನಡುವಿನ ಸ್ಥಳವನ್ನು ಅಂತಿಮಗೊಳಿಸಿದೆ. ಇದು ಕರ್ನಾಟಕದ ಗಡಿಯಿಂದ ಕೇವಲ 20 ಕಿ.ಮೀ ದೂರದಲ್ಲಿದೆ. ಇದು ಬೆಂಗಳೂರಿನ ದಕ್ಷಿಣ ಭಾಗದ ಪ್ರಯಾಣಿಕರನ್ನು ಇದು ಸೆಳೆಯಬಹುದು ಎನ್ನಲಾಗಿದೆ.

> **ಬೆಂಗಳೂರಿನ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಯೋಜನೆಯು ಸರಿಯಾದ ಹಾದಿಯಲ್ಲಿದೆ. 2033 ರ ವೇಳೆಗೆ ಕಾರ್ಯನಿರ್ವಹಿಸಲಿದೆ. ತಮಿಳುನಾಡಿನ ನಿರ್ಧಾರವು ಕರ್ನಾಟಕದ ಯೋಜನೆಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಮುಂದಿನ ದಿನಗಳಲ್ಲಿಯೂ ಎಷ್ಟೇ ಅಡ್ಡಿಯಾದರೂ ನಮ್ಮ ಯೋಜನೆಯನ್ನು ಬದಲಾಯಿಸುವ ಉದ್ದೇಶವಿಲ್ಲ. ನಾವು ಮುಂದೆ ಸಾಗುತ್ತೇವೆ ಎಂದು ಸಚಿವರು ತಿಳಿಸಿದರು. ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಆಗುವುದು ಖಚಿತ. ತಮಿಳುನಾಡು ವಿಮಾನ ನಿಲ್ದಾಣ ಮಾಡಿದರೂ, ನಮ್ಮ ಯೋಜನೆ ನಿಲ್ಲುವುದಿಲ್ಲ**
>
> -ಎಂ.ಬಿ. ಪಾಟೀಲ್, ಸಚಿವ

### ಯಾವುದೇ ಬದಲಾವಣೆ ಇರುವುದಿಲ್ಲ

**ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಸ್ಥಾಪನೆಯಾಗುವುದು ಖಚಿತವಾಗಿದ್ದು, 2033ರ ವೇಳೆಗೆ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ. ತಮಿಳುನಾಡು ವಿಮಾನ ನಿಲ್ದಾಣ ನಿರ್ಮಿಸಿದರೂ, ಕರ್ನಾಟಕದ ಯೋಜನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಸಚಿವ ಎಂ.ಬಿ. ಪಾಟೀಲ್ ಸ್ಪಷ್ಟಪಡಿಸಿದ್ದಾರೆ. ಕನಕಪುರ ರಸ್ತೆ ಮತ್ತು ನೆಲಮಂಗಲದ ಕುಣಿಗಲ್ ರಸ್ತೆಯಲ್ಲಿ ಸ್ಥಳ ಪರಿಶೀಲನೆ ನಡೆಸಲಾಗಿದ್ದು, ಕೇಂದ್ರ ಸರ್ಕಾರದಿಂದ ಅನುಮತಿಗಾಗಿ ಕಾಯಲಾಗುತ್ತಿದೆ.**

## ರಾಹುಲ್ ಗಾಂಧಿ ಮತದಾನ ಅಧಿಕಾರ ಯಾತ್ರೆಯಲ್ಲಿ ಸಿದ್ದು ಭಾಗಿ

• ಉದಯವಾಹಿನಿ, ಬೆಂಗಳೂರು

ಬಿಹಾರದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ನಡೆಸುತ್ತಿರುವ ಮತದಾನ ಅಧಿಕಾರ ಯಾತ್ರೆ ಬೆಂಬಲಿಸಿ ಸಿಎಂ ಸಿದ್ದರಾಮಯ್ಯ ಶುಕ್ರವಾರ ಯಾತ್ರೆಯಲ್ಲಿ ಭಾಗವಹಿಸಿದ್ದಾರೆ. ಬೆಂಗಳೂರಿನಿಂದ ಸಚಿವರಾದ ಕೆ.ಜೆ. ಜಾರ್ಜ್, ಪರಮೇಶ್ವರ್, ಸತೀಶ್ ಜಾರಕಿಹೊಳಿ, ಡಾ. ಎಂ.ಸಿ. ಸುಧಾಕರ್, ಜಮೀರ್ ಅಹಮದ್‌ಖಾನ್, ಹಿರಿಯ ಕಾಂಗ್ರೆಸ್ಸಿಗರಾದ ಬಿ.ಕೆ. ಹರಿಪ್ರಸಾದ್, ವಿಧಾನಪರಿಷತ್ ಸದಸ್ಯರಾದ ಸಲೀಮ್ ಅಹಮದ್, ಯತೀಂದ್ರ ಸಿದ್ದರಾಮಯ್ಯ, ಶಾಸಕ ಎ.ಎಸ್.ಪೊನ್ನಣ್ಣ ಸೇರಿದಂತೆ 20 ಮಂದಿ ಶಾಸಕರು, ಸಚಿವರ ನಿಯೋಗದೊಂದಿಗೆ ಉತ್ತರ ಪ್ರದೇಶದ ಗೋರಖ್‌ಪುರ್ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಅಲ್ಲಿಂದ ಬಿಹಾರದ ಗೋಪಾಲ್‌ಗಂಜ್‌ಗೆ ರಸ್ತೆ ಮೂಲಕ ಪ್ರಯಾಣ ಬೆಳೆಸಿದರು.

ಬಿಹಾರದಲ್ಲಿ ರಾಹುಲ್‌ಗಾಂಧಿ ಅವರ ಜೊತೆ ಯಾತ್ರೆ ಹಾಗೂ ಸಾರ್ವಜನಿಕ ಸಮಾವೇಶದಲ್ಲಿ ಸಿದ್ದರಾಮಯ್ಯ ನೇತೃತ್ವ ಭಾಗವಹಿಸಿದೆ. ಬಿಹಾರಕ್ಕೆ


ಉದಯವಾಹಿನಿ ಚಿತ್ರ

ತೆರಳಿದ ಸಿದ್ದರಾಮಯ್ಯ ಅವರಿಗೆ ಅಲ್ಲಿನ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಭರ್ಜರಿ ಸ್ವಾಗತ ಕೋರಿದರು. ಹಿಂದುಳಿದ ವರ್ಗಗಳ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು, ವಿಧಾನಸಭೆ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲೇಬೇಕೆಂದು ಹಠಕ್ಕೆ ಬಿದ್ದಿರುವ ಕಾಂಗ್ರೆಸ್ ಬೇರೆ ಬೇರೆ ರಾಜ್ಯಗಳಿಂದ ಮುಖಂಡರನ್ನು ಆಹ್ವಾನಿಸಿ, ರಾಹುಲ್ ಗಾಂಧಿ ಅವರ ಯಾತ್ರೆಗೆ ಬಲ ತುಂಬುವ ಪ್ರಯತ್ನ ಮಾಡುತ್ತಿದೆ. ರಾಹುಲ್‌ಗಾಂಧಿ ಅವರ ಯಾತ್ರೆಗೆ ಭಾರಿ ಪ್ರಮಾಣದಲ್ಲಿ ಸೇರುತ್ತಿದ್ದು, ಇದು ಕಾಂಗ್ರೆಸ್ ಪಕ್ಷಕ್ಕೆ ಅಚ್ಚರಿ ಉಂಟುಮಾಡುತ್ತಿದೆ. ಮತಗಳ್ಳತನದ ವಿರುದ್ಧ ರಾಹುಲ್‌ಗಾಂಧಿ ಹೋರಾಟ ಆರಂಭಿಸಿದ್ದಾರೆ. ಈ ಮೊದಲು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಯಾತ್ರೆಯಲ್ಲಿ ಭಾಗವಹಿಸಿದ್ದರು. ಅವರ ನಂತರ ಸಿದ್ದರಾಮಯ್ಯ ಯಾತ್ರೆಯಲ್ಲಿ ಪಾಲ್ಗೊಂಡಿದ್ದಾರೆ.

> **ಬಿಹಾರದ ಚಂಪಾರಣ್, ಮಂಗಳಪುರ, ಗೋಪಾಲ್‌ಗಂಜ್, ಶಿವಾನ್ ಸೇರಿದಂತೆ ಹಲವು ಭಾಗಗಳಲ್ಲಿ ರಾಹುಲ್‌ಗಾಂಧಿ ಅವರ ಯಾತ್ರೆ ಸಾಗಿದೆ. ಒಂದು ಕಾಲದಲ್ಲಿ ಸಿದ್ದರಾಮಯ್ಯ ಮತ್ತು ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಜನತಾ ಪರಿವಾರದಲ್ಲಿದ್ದವರು, ಪರಸ್ಪರ ಉತ್ತಮ ಸ್ನೇಹಿತರಾಗಿದ್ದರು. ಬದಲಾದ ರಾಜಕೀಯ ಪರಿಸ್ಥಿಯಲ್ಲಿ ನಿತೀಶ್ ಕುಮಾರ್ ಬಿಜೆಪಿ ಮೈತ್ರಿಯಲ್ಲಿದ್ದು, ಸಿದ್ದರಾಮಯ್ಯ ತಮ್ಮ ಹಳೆಯ ಸ್ನೇಹಿತನ ವಿರುದ್ಧವೇ ಬಿಹಾರದಲ್ಲಿ ಪ್ರಚಾರದ ಅಖಾಡಕ್ಕೆ ಇಳಿಯುವಂತಾಗಿದೆ.**

## ಟೆಕ್ಕಿ ಆತ್ಮಹತ್ಯೆ: ವರದಕ್ಷಿಣೆ ಕಿರುಕುಳ ಆರೋಪ; ಪತಿ ಬಂಧನ

• ಉದಯವಾಹಿನಿ, ಬೆಂಗಳೂರು



ಕೌಟುಂಬಿಕ ವಿಚಾರಕ್ಕೆ ಮಹಿಳಾ ಟೆಕ್ಕಿಯೊಬ್ಬರು ನೇಣು ಹಾಕಿಕೊಂಡು ಆತಹತ್ಯೆ ಮಾಡಿಕೊಂಡ ಘಟನೆಗೆ ಸಂಬಂಧಿಸಿದಂತೆ ಆಕೆಯ ಪತಿಯನ್ನು ಸುದ್ದಗುಂಟೆ ಠಾಣೆ ಪೊಲೀಸರು ಬಂಧಿಸಿದ್ದಾರೆ. ಕೊಪ್ಪಳ ಜಿಲ್ಲೆ ಗಂಗಾವತಿಯವರಾಗಿದ್ದ ಶಿಲ್ಪಾ (27) ಆತ್ಮಹತ್ಯೆ ಮಾಡಿಕೊಂಡ ಗೃಹಿಣಿ. ಆಕೆಯ ಪತಿ ಪ್ರವೀಣ್‌ನನ್ನು ಬಂಧಿಸಿ, ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಪ್ರವೀಣ್ ಮತ್ತು ಶಿಲ್ಪಾ ಮೂರು ವರ್ಷಗಳ ಹಿಂದೆ ಮದುವೆಯಾಗಿದ್ದು, ದಂಪತಿಗೆ ಒಂದೂವರೆ ವರ್ಷದ ಗಂಡು ಮಗುವಿದೆ. ನಗರದ ಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ದಂಪತಿ, ಗಂಗೋತ್ರಿ ಸರ್ಕಲ್‌ನಲ್ಲಿರುವ ಮನೆಯಲ್ಲಿ ವಾಸವಾಗಿದ್ದರು. ಆರಂಭದಲ್ಲಿ ದಂಪತಿ ಚೆನ್ನಾಗಿಯೇ ಇದ್ದರು. ಮಗು ಹುಟ್ಟಿದ ಬಳಿಕ ಶಿಲ್ಪಾ ಕೆಲಸ ತೊರೆದು ಮನೆಯಲ್ಲೇ ಇದ್ದರು ಎಂದು ಪೊಲೀಸರು ಮಾಹಿತಿ ನೀಡಿದರು. ಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಪ್ರವೀಣ್, ಮದುವೆಯಾದ ಒಂದು ವರ್ಷದ ಬಳಿಕ ಕೆಲಸ ತೊರೆದು, ಪಾನಿಪುರಿ ವ್ಯಾಪಾರ ಮಾಡಿಕೊಂಡಿದ್ದ. ತನ್ನ ವ್ಯವಹಾರಕ್ಕೆ ಹಣದ ಅಗತ್ಯವಿದ್ದ ಕಾರಣ, ತವರು ಮನೆಯಿಂದ ಹಣ ತರುವಂತೆ ಪತ್ನಿಗೆ ಹಿಂಸೆ ನೀಡುತ್ತಿದ್ದ ಎಂದು ಮೃತಳ ಕುಟುಂಬದವರು ದೂರು ನೀಡಿದ್ದಾರೆ. ಈ ಮಧ್ಯೆ ಕೌಟುಂಬಿಕ ವಿಚಾರಕ್ಕೆ ದಂಪತಿ ನಡುವೆ ಕೆಲ ತಿಂಗಳಿಂದ ಜಗಳ ನಡೆಯುತ್ತಿತ್ತು. ಕೂಡ ಇಬ್ಬರ ನಡುವೆ ಜಗಳ ನಡೆದಿದ್ದು, ಅದರಿಂದ ಬೇಸರಗೊಂಡಿರುವ ಶಿಲ್ಪಾ ಕೋಣೆಯಲ್ಲಿ ಫ್ಯಾನ್‌ಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಬೆಳಿಗ್ಗೆ ಪ್ರವೀಣ್ ಕೋಣೆಯ ಬಾಗಿಲು ತೆರೆದು ನೋಡಿದಾಗ ಆತ್ಮಹತ್ಯೆ ವಿಚಾರ ಗೊತ್ತಾಗಿದೆ ಎಂದು ಪೊಲೀಸರು ಹೇಳಿದರು. ವರದಕ್ಷಿಣೆ ಕಿರುಕುರುಳ ನೀಡುತ್ತಿದ್ದರಿಂದ ಪುತ್ರಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಆರೋಪಿಸಿ ಮೃತಳ ತಾಯಿ ಶಾರದ ಅವರು ಅಳಿಯ ಪ್ರವೀಣ್ ಮತ್ತು ಆತನ ತಾಯಿಯ ವಿರುದ್ಧ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಬಾನು ಮುಷ್ತಾಕ್‌ರಿಂದ ದಸರಾ ಉದ್ಘಾಟನೆ ತೀವ್ರಗೊಂಡ ಅಸಮಾಧಾನ

• ಉದಯವಾಹಿನಿ, ಬೆಂಗಳೂರು

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಿದ್ದತೆಗಳು ಒಂದೆಡೆ ಭರದಿಂದ ಸಾಗಿದ್ದರೆ ಮತ್ತೊಂದೆಡೆ ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಆಹ್ವಾನ ನೀಡಲಾಗಿದೆ. ಇದು ಬಹುಸಂಖ್ಯಾತರ ಅಸಮಾಧಾನಕ್ಕೆ ಎಡೆಮಾಡಿ ಕೊಟ್ಟಿರುವುದಲ್ಲದೆ ಕೆಲವರ ವಿರೋಧಕ್ಕೂ ಆಸ್ಪದ ನೀಡಿದೆ.

ಮುಖ್ಯಮಂತ್ರಿಯವರು ದಸರಾ ಉದ್ಘಾಟನಾಕಾರರ ಹೆಸರು ಪ್ರಕಟಿಸಿದ ಬೆನ್ನಲ್ಲೇ ಅಸಮಾಧಾನದ ಹೊಗೆಯಾಡತೊಡಗಿದ್ದು, ಇನ್ನೂ ನಿಂತಿಲ್ಲ. ಹಿಂದೂ ಧರ್ಮದ ಪಂಚಾಂಗದ ಪ್ರಕಾರ ದಸರಾ ಉದ್ಘಾಟನೆಗೆ ಮುಹೂರ್ತ, ಸಮಯ, ಘಳಿಗೆ ನಿಗದಿ ಮಾಡಲಾಗುತ್ತದೆ.

**ಹಿಂದೂ ಪಂಚಾಂಗದಂತೆ ಮುಹೂರ್ತ:** ಈ ಬಾರಿ ಸೆ.22ರಿಂದ ದಸರಾ ಉತ್ಸವ ವಿದ್ಯುಕ್ತವಾಗಿ ಆರಂಭಗೊಳ್ಳಲಿದೆ. ಅಂದು ಮೈಸೂರಿನ ಚಾಮುಂಡಿ ಬೆಟ್ಟದ ಮೇಲಿರುವ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಲಾಗುತ್ತದೆ. ದಸರಾ ಆಚರಣೆಗಾಗಿ ತರುವ ಚಾಮುಂಡೇಶ್ವರಿ ದೇವಿಯ ಉತ್ಸವ ಮೂರ್ತಿಗೆ ಉದ್ಘಾಟನಾಕಾರರು ಪುಷ್ಪಾರ್ಚನೆ ಮಾಡುವುದು ಇದುವರೆಗೂ ನಡೆದು ಬಂದಿರುವ ಸಾಂಪ್ರದಾಯಿಕ ರೂಢಿ. ರಾಜಮನೆತನದಿಂದ ನಡೆಯುತ್ತಿದ್ದ ದಸರಾ ಉತ್ಸವವು ರಾಜ್ಯ ಸರ್ಕಾರದ ವತಿಯಿಂದ ನಡೆಯಲು ಆರಂಭವಾದ ಮೇಲೆ ಜನತಾ ದಸರಾವಾಗಿ ಮಾರ್ಪಟ್ಟಿತು. ವರ್ಷದಿಂದ ವರ್ಷಕ್ಕೆ ದಸರಾ ವೈಭೋಗವೂ ಹೆಚ್ಚುತ್ತಾ ಬಂದಿದೆ. ಧಾರ್ಮಿಕ ಆಚರಣೆಗಳ ಜೊತೆ ಜೊತೆಯಲ್ಲೇ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು, ಕ್ರೀಡೆಗಳು, ವಸ್ತುಪ್ರದರ್ಶನಗಳು ನಡೆದು ದಸರಾದ ಉತ್ಸವವನ್ನು ಇಮ್ಮಡಿಗೊಳಿಸುತ್ತವೆ. ಈ ಬಾರಿ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟಿಸಬೇಕಿದೆ. ಅವರು ತಮ ಸ್ವಧರ್ಮದ ನಂಬಿಕೆಗೆ ವಿರುದ್ಧವಾಗಿ ದಸರಾ ಉದ್ಘಾಟನೆಗೂ ಮುನ್ನ ಚಾಮುಂಡೇಶ್ವರಿ ಮೂರ್ತಿಗೆ ಪೂಜೆ ಸಲ್ಲಿಸಲಿದ್ದಾರೆಯೇ ಎಂಬುದು ಬಹು ಚರ್ಚೆಗೆ ಗ್ರಾಸವಾಗಿರುವ ವಿಚಾರವಾಗಿದೆ. ಏಕೆಂದರೆ, ಅವರು ಕನ್ನಡಾಂಬೆ ಭುವನೇಶ್ವರಿ ಪ್ರತಿಮೆ ವಿಚಾರದಲ್ಲಿ ಈ ಹಿಂದೆ ಮಾತನಾಡಿರುವ ವಿಚಾರಕ್ಕೆ ಹಲವರ ವಿರೋಧ ವ್ಯಕ್ತವಾಗಿದೆ.

**ಸಾಹಿತಿಗಳ ಬಗ್ಗೆ ಗೌರವ:** ಸಾಹಿತಿಯಾದವರನ್ನು ಈ ನಾಡು ಬಹಳ ಗೌರವದಿಂದ ಸನ್ಮಾನಿಸಿ, ಸತ್ಕರಿಸುತ್ತಾ ಬಂದಿದೆ. ಅವರನ್ನು ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಸ್ಥಾನದಂತಹ ಗೌರವಕ್ಕೆ ಆಯ್ಕೆ ಮಾಡಿದ್ದರೆ ಯಾರೂ ತಕರಾರು ತೆಗೆಯುತ್ತಿರಲಿಲ್ಲ. ಆದರೆ ಧಾರ್ಮಿಕ ಶ್ರದ್ಧೆಯ ವಿಚಾರವಾಗಿರುವ ದಸರಾ ಮಹೋತ್ಸವ ಉದ್ಘಾಟನೆಗೆ ಇವರನ್ನು ಆಹ್ವಾನಿಸುತ್ತಿರುವುದು ಬಹುಸಂಖ್ಯಾತರ ಅಸಹನೆಗೆ ಕಾರಣವಾಗಿದೆ. ಹೀಗಾಗಿ ಒಂದೆಡೆ ತೀವ್ರ ವಿರೋಧವು ವ್ಯಕ್ತವಾಗುತ್ತಿದೆ. ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿ ದಸರಾ ಮಹೋತ್ಸವಕ್ಕೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡುವ ಸಂಪ್ರದಾಯವಿದೆ. ನಿರಂತರವಾಗಿ ನಡೆದುಕೊಂಡು ಬಂದಿರುವ ಸಂಪ್ರದಾಯ, ಪರಂಪರೆ, ನಂಬಿಕೆಗಳಿಗೆ ವಿರುದ್ಧವಾಗಿ ಅವರನ್ನು ದಸರಾ ಉದ್ಘಾಟನಕಾರರನ್ನಾಗಿ ಮಾಡಿರುವುದು ಬಹಳಷ್ಟು ಜನರ ಅಸಮಾಧಾನಕ್ಕೆ ಅವಕಾಶ ಕಲ್ಪಿಸಿದೆ. ವಿಜಯನಗರದ ಅರಸರು ಆರಂಭಿಸಿದ ದಸರಾ ಮಹೋತ್ಸವವನ್ನು ಅನಂತರ ಮೈಸೂರಿನ ಅರಸರು ಮುಂದುವರೆಸುತ್ತಾ ಬಂದಿದ್ದಾರೆ.



ಉದಯವಾಹಿನಿ ಚಿತ್ರ

## ಮತ ಆಧರಿತ ರಾಜಕೀಯ ಬೇಡ: ಬಿಕೆಸಿ

• ಉದಯವಾಹಿನಿ, ಬೆಂಗಳೂರು

ಮೈಸೂರು ದಸರಾ ಉದ್ಘಾಟಿಸಲಿರುವ ಸಾಹಿತಿ ಬಾನು ಮುಷ್ತಾಕ್ ಅವರಿಗೆ ವಿರೋಧ ವ್ಯಕ್ತಪಡಿಸುವ ನೆಪದಲ್ಲಿ ವಿರೋಧ ಪಕ್ಷಗಳು ಮತ ಆಧರಿತ ರಾಜಕೀಯಕ್ಕೆ ಒತ್ತು ನೀಡಿವೆ' ಎಂದು ಮಾಜಿ ಸಚಿವ ಬಿ.ಕೆ.ಚಂದ್ರಶೇಖರ್ ಟೀಕಿಸಿದ್ದಾರೆ. ಬಿಜೆಪಿಯ ನಾಯಕರು, ಕೇಂದ್ರ ಸಚಿವರು ಕೂಡ ವಿಭಿನ್ನವಾಗಿ ಹೇಳಿಕೆ ನೀಡಿದ್ದಾರೆ. ಚಾಮುಂಡಿಬೆಟ್ಟ ಹಿಂದೂಗಳಿಗೆ ಸೀಮಿತವಾದದು ಎನ್ನುವ ರೀತಿಯಲ್ಲಿ ಮಾತನಾಡಿದ್ದಾರೆ. ಹಿಂದೂ ಧರ್ಮ, ಹಿಂದೂ, ಮುಸ್ಲಿಂ ಮತಗಳ ಕುರಿತು ಮಾತನಾಡಿರುವುದರ ಹಿಂದೆ ರಾಜಕೀಯ ಇದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿಯವರು ಹೆಚ್ಚು ಗೌರವಿಸುವ ಸ್ವಾಮಿ ವಿವೇಕಾನಂದರು, ಎಲ್ಲಾ ಧರ್ಮಗಳನ್ನು ನಾನು ಸ್ವೀಕರಿಸುತ್ತೇನೆ. ನಮ್ಮ ಮಾತೃಭೂಮಿಯಲ್ಲಿ ಹಿಂದೂ, ಮುಸ್ಲಿಂ ಧರ್ಮಗಳೆರಡೂ ಮಿಲನವಾಗಬೇಕು ಎನ್ನುವ ಮಾತುಗಳನ್ನಾಡಿದ್ದರು. ಈ ವಿಚಾರದಲ್ಲಿ ವಿವೇಕಾನಂದರ ಹೇಳಿಕೆಗಳನ್ನು ಆ ಪಕ್ಷದ ನಾಯಕರು ಗಮನಿಸಿಲ್ಲವೇ ಎಂದು ಪ್ರಶ್ನಿಸಿದ್ದಾರೆ. ಮತಮೌಢ್ಯದಿಂದ ದೂರವಿದ್ದು ನಾವೆಲ್ಲ ಸಮಾನತೆಯ ಭಾವ ಉಳಿಸಿಕೊಳ್ಳುವ ಕುರಿತು ಕುವೆಂಪು ಅವರು ಬಹಳ ಹಿಂದೆಯೇ ಸ್ಪಷ್ಟವಾಗಿ ಹೇಳಿದ್ದಾರೆ. ಅನಗತ್ಯ ವಿವಾದಗಳಿಂದ ದೂರವಿದ್ದು, ರಾಜ್ಯದ ಬಹುಪಾಲು ಜನರು ಬಯಸುವ ಶಾಂತಿ, ಸಹಬಾಳ್ವೆಗೆ ತೊಂದರೆಯಾಗದಂತೆ ರಾಜಕೀಯ ನಾಯಕರು ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

## ರೈತರ ಅಹೋರಾತ್ರಿ ಹೋರಾಟಕ್ಕೆ 51 ದಿನ

• ಉದಯವಾಹಿನಿ, ಆನೇಕಲ್

ಭೂಸ್ವಾಧೀನ ವಿರೋಧಿಸಿ 51 ದಿನಗಳಿಂದ ರೈತರು ನಡೆಸುತ್ತಿರುವ ಅಹೋರಾತ್ರಿ ಪ್ರತಿಭಟನಾ ಸ್ಥಳಕ್ಕೆ ಬೊಮ್ಮನಹಳ್ಳಿ ಶಾಸಕ ಸತೀಶ್ ರೆಡ್ಡಿ ಭೇಟಿ ನೀಡಿ ರೈತರ ಸಮಸ್ಯೆ ಆಲಿಸಿದರು. ಆನೇಕಲ್ ತಾಲ್ಲೂಕಿನ ಕೃಷಿ ಭೂಮಿಯ ಸ್ವಾಧೀನ ಹೆಚ್ಚಾಗಿದೆ. ಗೃಹ ಮಂಡಳಿ, ರಾಷ್ಟ್ರೀಯ ಹೆದ್ದಾರಿ, ರಿಂಗ್ ರಸ್ತೆ ಸೇರಿದಂತೆ ವಿವಿಧ ಕಾಮಗಾರಿಗೆ ಭೂಸ್ವಾಧೀನ ಮಾಡಲಾಗಿದೆ.

ಕೃಷಿ ಭೂಮಿಯನ್ನು ಕೆಐಎಡಿಬಿಗೆ ನೀಡಿದರೆ ರೈತರಿಗೆ ತೊಂದರೆಯಾಗುತ್ತದೆ. ಸರ್ಕಾರ ಈ ಬಗ್ಗೆ ಮರು ಪರಿಶೀಲನೆ ನಡೆಸಬೇಕು ಎಂದು ಸತೀಶ್ ರೆಡ್ಡಿ ಅಭಿಪ್ರಾಯಪಟ್ಟರು. ರೈತರ ಭೂಮಿಯನ್ನು ಯಾವುದೇ ಸರ್ಕಾರ ಸ್ವಾಧೀನ ಪಡಿಸಿಕೊಂಡರೂ ಅದು ತಪ್ಪೇ. ಭೂಸ್ವಾಧೀನಕ್ಕೆ ತೀವ್ರ ವಿರೋಧ ವ್ಯಕ್ತವಾಗುತ್ತಿದೆ. ಕಾನೂನು ಹೋರಾಟ ಸೇರಿದಂತೆ ಎಲ್ಲಾ ರೀತಿಯ ಹೋರಾಟ ಮುಂದುವರೆಯಬೇಕು. ವಿಧಾನಸೌಧದಲ್ಲಿ ರೈತರ ಪರವಾಗಿ ಧ್ವನಿ ಎತ್ತುತ್ತೇವೆ. ಹೋರಾಟದಲ್ಲಿ ಯಾವುದೇ ರೀತಿಯ ರಾಜಿ ಆಗಬಾರದು. ರೈತರು ತಮ್ಮ ಭೂಮಿಯನ್ನು ಯಾವುದೇ ಕಾರಣಕ್ಕೂ ಕೈಗಾರಿಕೆಗಳಿಗೆ ನೀಡಬಾರದು ಎಂದರು.

ಸಚಿವ ಎಂ.ಬಿ.ಪಾಟೀಲ ಅವರನ್ನು ಭೇಟಿ ಮಾಡಿ ಭೂಸ್ವಾಧೀನ ಕೈಬಿಡುವಂತೆ ಮನವಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯಪಾಲರನ್ನು ಭೇಟಿ ಮಾಡಿ ರೈತರ ಸಮಸ್ಯೆ ಬಗ್ಗೆ ತಿಳಿಸಲಾಗುವುದು ಎಂದರು. ಇಲ್ಲಿ ಐ.ಟಿ ಕೈಗಾರಿಕೆ ಸ್ಥಾಪಿಸಲು ಹೊರಟಿದ್ದಾರೆ. ಐ.ಟಿ ಪಾರ್ಕ್ ಸ್ಥಾಪಿಸಲು ನಂದಿಬೆಟ್ಟದ ಸಮೀಪ ಸಾಕಷ್ಟು ಜಾಗವಿದೆ. ರೈತರ ಆಕ್ರೋಶ ಹೆಚ್ಚಾಗುವ ಮುನ್ನ ಸರ್ಕಾರ ದಿಟ್ಟ ನಿರ್ಧಾರ ಕೈಗೊಳ್ಳಬೇಕು. ಅಭಿವೃದ್ಧಿಯ ಹೆಸರಿನಲ್ಲಿ ರೈತರ ಭೂಮಿ ಮತ್ತು ರೈತರ ಅಸ್ಮಿತೆಯನ್ನು ಹಾಳು ಮಾಡುವುದು ಒಳ್ಳೆಯ ಬೆಳವಣಿಗೆಯಲ್ಲ ಎಂದರು.


ಉದಯವಾಹಿನಿ ಚಿತ್ರ

> **ಆನೇಕಲ್ ತಾಲ್ಲೂಕಿನಲ್ಲಿರುವ ಕೈಗಾರಿಕ ಪ್ರದೇಶಗಳನ್ನು ಸರ್ಕಾರ ಅಭಿವೃದ್ಧಿ ಪಡಿಸಬೇಕು. ಈಗಾಗಲೇ ಐದು ಕೈಗಾರಿಕ ಪ್ರದೇಶಗಳಿವೆ. ಮತ್ತೊಂದು ಕೈಗಾರಿಕೆ ಮಾಡಿ ಈ ಭಾಗದ ರೈತರಿಗೆ, ಪರಿಸರಕ್ಕೆ ತೊಂದರೆ ಮಾಡಬಾರದು.**
>
> -ಎಸ್.ಆರ್.ಟಿ.ಅಶೋಕ್

### ಅಕ್ರಮವಾಗಿ 'ಎ-ಖಾತಾ' ನೀಡಿರುವ ಪ್ರಕರಣಗಳನ್ನು ಪತ್ತೆ ಮಾಡಿ 2 ವರ್ಷ ಕಳೆದರೂ ಈವರೆಗೆ ಯಾರ ವಿರುದ್ಧವೂ ಕ್ರಮ ಜರುಗಿಸಿಲ್ಲ

# ಬರೋಬ್ಬರಿ 9736 ಸ್ವತ್ತುಗಳಿಗೆ ಅಕ್ರಮ ಎ-ಖಾತಾ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಅಕ್ರಮವಾಗಿ 'ಎ-ಖಾತಾ' ನೀಡಿ, ಸರಕಾರಕ್ಕೆ ಕೋಟ್ಯಂತರ ರೂ. ನಷ್ಟ ಉಂಟು ಮಾಡಿದ್ದ ಕಂದಾಯ ವಿಭಾಗದ ಅಧಿಕಾರಿ, ಸಿಬ್ಬಂದಿ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ಭ್ರಷ್ಟರ ವಿರುದ್ಧ ಕ್ರಮಕ್ಕೆ ಹಿಂದೇಟು ಹಾಕುತ್ತಿರುವುದು ಅನುಮಾನಕ್ಕೆ ಎಡೆಮಾಡಿ ಕೊಟ್ಟಿದೆ. ನಗರದಲ್ಲಿ 9 ಸಾವಿರಕ್ಕೂ ಅಧಿಕ ಆಸ್ತಿಗಳಿಗೆ ಅಕ್ರಮವಾಗಿ 'ಎ-ಖಾತಾ' ನೀಡಿರುವ ಪ್ರಕರಣಗಳನ್ನು ಪತ್ತೆ ಮಾಡಿ ಎರಡು ವರ್ಷ ಕಳೆದರೂ ಈವರೆಗೆ ಯಾರ ವಿರುದ್ಧವೂ ಕ್ರಮ ಜರುಗಿಸಿಲ್ಲ. 'ಬಿ-ಖಾತಾ'ಗೆ ಅರ್ಹವಾಗಿದ್ದ ಸ್ವತ್ತುಗಳ ಮಾಲೀಕರಿಂದ ಅಕ್ರಮವಾಗಿ ಅಭಿವೃದ್ಧಿ ಶುಲ್ಕ ಕಟ್ಟಿಸಿಕೊಂಡು 'ಎ-ಖಾತಾ' ನೀಡಿರುವುದು ಈ ಹಿಂದೆ ನಡೆದ ತನಿಖೆಯಲ್ಲಿ ಬೆಳಕಿಗೆ ಬಂದಿತ್ತು. ಈ ಪ್ರಕರಣದ ಕುರಿತು ತನಿಖೆ ನಡೆಸಿದ್ದ ಆಗಿನ ಹಣಕಾಸು ವಿಭಾಗದ ವಿಶೇಷ ಆಯುಕ್ತ ಜಯರಾಂ ರಾಯಪುರ, '2015ರಿಂದ 2023 ರವರೆಗೆ 45,133 'ಎ-ಖಾತಾ' ವಿತರಿಸಿ, 898.70 ಕೋಟಿ ರೂ. ಶುಲ್ಕ ಪಾವತಿಸಿಕೊಳ್ಳಲಾಗಿದೆ. ಇದರಲ್ಲಿ ಬಹುತೇಕ ಆಸ್ತಿಗಳಿಗೆ ಅಕ್ರಮವಾಗಿ 'ಎ-ಖಾತಾ' ನೀಡಲಾಗಿದೆ ಎಂದು 2023ರ ಜುಲೈನಲ್ಲಿ ವರದಿ ಸಲ್ಲಿಸಿದ್ದರು. ಆ ಬಳಿಕ ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ನೇತೃತ್ವದಲ್ಲಿ ಸಮಿತಿ ರಚಿಸಿ, ಈ ಪ್ರಕರಣಗಳ ಕುರಿತು ಕ್ರಮ ಕೈಗೊಳ್ಳಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಆದೇಶಿಸಿದ್ದರು. ಆದರೆ, ಪ್ರಕರಣವು ತಾರ್ಕಿಕ ಅಂತ್ಯ ಕಂಡಿಲ್ಲ.

### ಭ್ರಷ್ಟರ ವಿರುದ್ಧ ಕ್ರಮಕ್ಕೆ ಹಿಂದೇಟು


ಉದಯವಾಹಿನಿ ಚಿತ್ರ

**ತನಿಖೆ ಬಗ್ಗೆಯೇ ಗೊಂದಲ:** ನಕಲಿ 'ಎ-ಖಾತಾ' ಸೃಷ್ಟಿಸಿರುವ ಕುರಿತು ಪರಿಶೀಲಿಸಿ ವರದಿ ನೀಡಲು ಪರಿಶೀಲನಾ ಸಮಿತಿ ರಚಿಸಲಾಗಿತ್ತು. ಒಟ್ಟು 9736 ಸ್ವತ್ತುಗಳ ವಿವರಗಳನ್ನು ಅನಧಿಕೃತವಾಗಿ 'ಎ' ವಹಿಯಲ್ಲಿ ದಾಖಲಿಸಿ ಅಕ್ರಮವೆಸಗಲಾಗಿದೆ. ಈ ಪ್ರಕರಣವು ಇನ್ನೂ ತನಿಖಾ ಹಂತದಲ್ಲಿಯೇ ಇದೆ. ಸಮಿತಿಯು ತನಿಖಾ ವರದಿ ಸಲ್ಲಿಸಿದ ಬಳಿಕ ಸಂಬಂಧಪಟ್ಟ ಅಧಿಕಾರಿ, ನೌಕರರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇತ್ತೀಚೆಗೆ ನಡೆದ ವಿಧಾನ ಮಂಡಲ ಅಧಿವೇಶನದಲ್ಲಿ ಉತ್ತರಿಸಿದ್ದರು. ಆದರೆ, ಪಾಲಿಕೆ ಅಧಿಕಾರಿಗಳು ಹೇಳುವುದೇ ಬೇರೆ. 'ಈಗಾಗಲೇ ತನಿಖೆ ಮುಗಿದಿದ್ದು, ಅಕ್ರಮ 'ಎ-ಖಾತಾ' ರದ್ದುಪಡಿಸಲು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ವಲಯ ಆಯುಕ್ತರಿಗೆ ಸೂಚಿಸಲಾಗಿದೆ' ಎನ್ನುತ್ತಾರೆ ಕಂದಾಯ ವಿಭಾಗದ ವಿಶೇಷ ಆಯುಕ್ತರು. ಸರಕಾರ ಮತ್ತು ಅಧಿಕಾರಿಗಳ ಹೇಳಿಕೆಯು ತನಿಖೆ ಬಗ್ಗೆಯೇ ಗೊಂದಲ ಮೂಡಿಸಿದೆ.

**9736 'ಎ-ಖಾತಾ' ಅಕ್ರಮ:** ಭೂ ಪರಿವರ್ತನೆಯಾಗದ ಮತ್ತು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯದೆ ನಿರ್ಮಾಣಗೊಂಡಿರುವ ಬಡಾವಣೆಗಳಲ್ಲಿನ ನಿವೇಶನಗಳಿಗೆ ಅಭಿವೃದ್ಧಿ ಶುಲ್ಕ ಪಾವತಿಸಿಕೊಂಡು 'ಎ-ಖಾತಾ' ನೀಡಲು ಅವಕಾಶವಿಲ್ಲ. ಆ ಆಸ್ತಿಗಳನ್ನು 'ಬಿ-ಖಾತಾ'ವಹಿಯಲ್ಲಿ ದಾಖಲಿಸಬೇಕು. ಆದರೆ, 'ಎ-ಖಾತಾ' ನೀಡಿ ಅಕ್ರಮವೆಸಗಲಾಗಿದೆ. ಸರಕಾರದ ಆದೇಶದಂತೆ ಕೊಳೆಗೇರಿ ಸೇರಿದಂತೆ ಕೆಲ ಪ್ರದೇಶಗಳ ಆಸ್ತಿಗಳಿಗೆ ಅಭಿವೃದ್ಧಿ ಶುಲ್ಕ ಕಟ್ಟಿಸಿಕೊಂಡು 'ಎ-ಖಾತಾ' ನೀಡಲು ಆರ್ ಕೋಡ್-130' ಬಳಸಲಾಗುತ್ತದೆ. ಈ ಕೋಡ್ ದುರ್ಬಳಕೆ ಮಾಡಿಕೊಂಡಿರುವ ಎಆರ್‌ಒಗಳು, 'ಬಿ-ಖಾತಾ' ಹೊಂದಬೇಕಿರುವ ಆಸ್ತಿಗಳಿಗೆ 'ಎ-ಖಾತಾ' ನೀಡಿ ಅಕ್ರಮವೆಸಗಿದ್ದಾರೆ. ಇದಲ್ಲದೆ, ಪುಸ್ತಕದಲ್ಲಿ 'ಎ-ಖಾತೆ' ಎಂದು ಅಕ್ರಮವಾಗಿ ಬದಲಾಯಿಸಿ, ಹಣ ಪಡೆದಿರುವ ಪ್ರಕರಣಗಳೂ ಹೆಚ್ಚಿವೆ.

### ಈ ಆಸ್ತಿಗಳಿಗೂ ಎ-ಖಾತಾ


**ರಾಜ್ಯ ಸರಕಾರ ಸಾರ್ವಜನಿಕ ರಸ್ತೆಗಳಿಗೆ ಹೊಂದಿಕೊಂಡಿರುವ ಬಿ-ಖಾತಾ ನಿವೇಶನಗಳಿಗೆ ಎ-ಖಾತಾ ನೀಡಲು ತೀರ್ಮಾನಿಸಿದೆ. ಇದು ಅಕ್ರಮವಾಗಿ ಎ-ಖಾತಾ ಪಡೆದಿರುವ ಸ್ವತ್ತುಗಳಿಗೂ ಅನ್ವಯವಾಗಲಿದೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಅಕ್ರಮವಾಗಿ ಎ-ಖಾತಾ ನೀಡಿರುವ ಕುರಿತು ತನಿಖೆ ನಡೆಸಲು ನನ್ನ ಅಧ್ಯಕ್ಷತೆಯಲ್ಲೇ ಸಮಿತಿ ರಚಿಸಲಾಗಿತ್ತು. ತನಿಖೆ ಪೂರ್ಣಗೊಳಿಸಿ, ಅಕ್ರಮದಲ್ಲಿ ಭಾಗಿಯಾಗಿದ್ದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ವಲಯ ಆಯುಕ್ತರಿಗೆ ಸೂಚಿಸಲಾಗಿದೆ. ಅಲ್ಲದೆ, ಅಕ್ರಮ ಎ-ಖಾತಾಗಳನ್ನು ರದ್ದುಗೊಳಿಸಲು ಆದೇಶಿಸಲಾಗಿದೆ.**

-ಮುನೀಶ್ ಮೌದ್ಗಿಲ್, ವಿಶೇಷ ಆಯುಕ್ತ, ಕಂದಾಯ ವಿಭಾಗ, ಬಿಬಿಎಂಪಿ

# ಪರಮಪೂಜ್ಯ ಡಾ. ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ನೇತೃತ್ವದಲ್ಲಿ ಗುರು ಕೋರಣ್ಯ

• ಉದಯವಾಹಿನಿ, ಕನಕಪುರ

ಪರಮಪೂಜ್ಯ ಶ್ರೀ ಡಾ. ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ನೇತೃತ್ವದಲ್ಲಿ ಕನಕಪುರ ನಗರದಲ್ಲಿ ಎರಡು ದಿನಗಳ ಕಾಲ ದೇಗುಲ ಮಠದಿಂದ ಗುರು ಕೋರಣ್ಯದಲ್ಲಿ ಶ್ರೀ ದೇಗುಲ ಮಠದ ಕಿರಿಯ ಪರಮಪೂಜ್ಯ ಶ್ರೀ ಚನ್ನಬಸವ ಮಹಾಸ್ವಾಮಿಗಳು, ತೋಟಹಳ್ಳಿ ಮಠದ ಪೂಜ್ಯ ಶ್ರೀ ಬಸವಪ್ರಭು ಮಹಾಸ್ವಾಮಿಗಳು, ಮರಳವಾಡಿ ಮಠದ ಕಿರಿಯ ಪೂಜ್ಯ ಶ್ರೀ ಪ್ರಭುಕಿರೀಟ ಮಹಾಸ್ವಾಮಿಗಳು, ಅತ್ತಹಳ್ಳಿ ಮಠದ ಕಿರಿಯ ಪೂಜ್ಯ ಶ್ರೀನಿರಂಜನ ಮಹಾಸ್ವಾಮಿಗಳು ಮತ್ತು ಬಿಲ್ವಪತ್ರೆ ಮಠದ ಇಮ್ಮಡಿ ಸದಾಶಿವ ಮಹಾಸ್ವಾಮಿಗಳು ಕನಕಪುರ ನಗರದಲ್ಲಿ ಗುರು ಕೋರಣ್ಯವನ್ನು ನಡೆಸಿದರು. ಶ್ರೀ ದೇಗುಲಮಠದಿಂದ ಭಾದ್ರಪದ ಮಾಸದ ವಾರ್ಷಿಕ ಗುರುಕೋರಣ್ಯ ಕಾಯಕ ಬಹಳ ಹಿಂದಿನ ಸಂಪ್ರದಾಯ.



ಉದಯವಾಹಿನಿ ಚಿತ್ರ

ಯಾವುದೇ ಮಠವು ತನ್ನದೇ ಆದ ಆಸ್ತಿಯನ್ನು ಹೊಂದಿದ್ದರೂ ಅಲ್ಲಿ ನಡೆಯುವ ಅನ್ನದಾಸೋಹ, ವಿದ್ಯಾ ದಾಸೋಹ, ಜ್ಞಾನ ದಾಸೋಹಗಳನ್ನು ನಿರ್ವಹಿಸಲು ಗುರುಕೋರಣ್ಯ ಪದ್ಧತಿ ನಡೆದುಕೊಂಡು ಬಂದಿದ್ದು, ಈ ಪದ್ಧತಿಯನ್ನು ಬಹಳ ಹಿಂದಿನಿಂದಲೂ ಶ್ರೀ ದೇಗುಲಮಠದ ಗುರು ಪರಂಪರೆ ಅನೂಚಾನವಾಗಿ ನಡೆಸಿಕೊಂಡು ಬರುತ್ತಿದೆ.

**ಕಾರ್ಯಕ್ರಮಕ್ಕೆ ಮೆರಗು**

**ಐವರು ಪೂಜ್ಯರನ್ನೂ ಭಕ್ತ ವೃಂದವು ಅನನ್ಯ ಭಕ್ತಿಭಾವದಿಂದ ಬರಮಾಡಿಕೊಡು, ಅವರವರ ಶಕ್ತಿಯ ಅನುಸಾರ ಕಾಣಿಕೆ ದವಸ ಧಾನ್ಯಗಳು, ಎಣ್ಣೆ, ತರಕಾರಿ ಇತ್ಯಾದಿ ದಾಸೋಹ ಪರಿಕರಗಳನ್ನು, ಯಥಾಶಕ್ತಿ ಕಾಣಿಕೆಗಳನ್ನೂ ಸಮರ್ಪಿಸಿ ಶ್ರೀಗಳವರನ್ನು ಸತ್ಕರಿಸಿದರು. ಜೊತೆಗೆ ಭಜನೆ, ತಂಡಗಳು ಮುಚೂಣಿಯಲ್ಲಿದ್ದು ಕಾರ್ಯಕ್ರಮಕ್ಕೆ ಮೆರಗು ನೀಡಿದವು.**

ವಿಶೇಷವಾಗಿ ಈ ಬಾರಿ ಐದು ಸ್ವಾಮೀಜಿಗಳು ಶ್ರೀ ದೇಗುಲ ಮಠಾಧ್ಯಕ್ಷರಾದ ಡಾ. ಶ್ರೀಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ದಿವ್ಯ ನೇತೃತ್ವದಲ್ಲಿ ನಡೆದ ಈ ಸಾಂಪ್ರದಾಯಿಕ ಕಾರ್ಯದಲ್ಲಿ ಶ್ರೀ ದೇಗುಲ ಮಠದ ಕಿರಿಯ ಪರಮಪೂಜ್ಯ ಶ್ರೀ ಚನ್ನಬಸವ ಮಹಾಸ್ವಾಮಿಗಳವರು, ತೋಟಹಳ್ಳಿ ಮಠದ ಶ್ರೀ ಬಸವ ಪ್ರಭು ಮಹಾಸ್ವಾಮಿಗಳು, ಅತ್ತಹಳ್ಳಿ ಮಠದ ಕಿರಿಯ ಶ್ರೀನಿರಂಜನ ಮಹಾಸ್ವಾಮಿಗಳು, ಮರಳವಾಡಿ ಮಠದ ಕಿರಿಯ ಶ್ರೀ ಪ್ರಭುಕೀರಿಟ ಮಹಾಸ್ವಾಮಿಗಳವರು, ಬಿಲ್ವಪತ್ರೆಮಠ ಶ್ರೀಇಮ್ಮಡಿ ಸದಾಶಿವ ಮಹಾಸ್ವಾಮಿಗಳು ಗುರುಕೋರಣ್ಯ ಕಾಯಕವನ್ನು ಕೈಗೊಂಡು ಕನಕಪುರ ನಗರದ ವಿವಿಧ ಬಡಾವಣೆಗಳಾದ ಕೋಟೆ, ಕೆಂಕೆರಮ್ಮ ರಸ್ತೆ, ಹೌಸಿಂಗ್ ಬೋರ್ಡ್, ಪೈಪ್ ಲೈನ್ ರಸ್ತೆ ಮಹದೇಶ್ವರ ಬಡಾವಣೆ ಎಂ ಜಿ ರಸ್ತೆ ಮುನಿಸಿಪಲ್ ಹೈಸ್ಕೂಲ್ ರಸ್ತೆ, ಹೀಗೆ ಅನೇಕ ಬಡಾವಣೆಗಳಲ್ಲಿ ಸಂಚರಿಸಿ ಕೋರಣ್ಯ ಮಾಡಿದರು. ಈ ಕಾರ್ಯದಲ್ಲಿ ಕನಕಪುರದ ನಗರದ ಭಕ್ತರು ಹಳೆ ವಿದ್ಯಾರ್ಥಿಗಳು ಎಲ್ಲಾ ಹಿರಿಯರು, ತರುಣರು, ಶಿಕ್ಷಕರು ಭಕ್ತವೃಂದ, ನೌಕರವರ್ಗದವರು ಉಪಸ್ಥಿತರಿದ್ದರು.

## ಧರ್ಮಸ್ಥಳದ ಆಸ್ತಿ ಹೊಡೆಯುವುದು ಬಿಜೆಪಿ ಯೋಜನೆ: ಅಶೋಕ ಆರೋಪಕ್ಕೆ ಡಿಕೆಶಿ ತಿರುಗೇಟು

• ಉದಯವಾಹಿನಿ, ಮಾಗಡಿ



ಧರ್ಮಸ್ಥಳದ ಆಸ್ತಿ ಹೊಡೆಯುವುದು ಬಿಜೆಪಿಯ ಆಂತರಿಕ ಯೋಜನೆಯಾಗಿದೆ. ಅದಕ್ಕಾಗಿಯೇ ಧರ್ಮಸ್ಥಳದ ವಿಷಯದಲ್ಲಿ ಅವರು ರಾಜಕಾರಣ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರವೇ ಧರ್ಮಸ್ಥಳದ ಆಸ್ತಿ ಕಬಳಿಸಲು ಹುನ್ನಾರ ನಡೆಸಿದೆ ಎನ್ನುವ ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರಿಗೆ ಬುದ್ದಿಭ್ರಮಣೆಯಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು. ಪಟ್ಟಣದಲ್ಲಿ ಶುಕ್ರವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಅಶೋಕ ಅವರಿಗೆ ತಾವೇನು ಮಾತನಾಡುತ್ತಾರೆ ಎಂಬುದರ ಅರಿವಿರುವುದಿಲ್ಲ. ಬಿಜೆಪಿಯವರು ಜಾತಿ ಮತ್ತು ಭಾವನೆ ಆಧಾರದ ಮೇಲೆಯೇ ರಾಜಕೀಯ ಮಾಡಿಕೊಂಡು ಬಂದಿದ್ದಾರೆ ಎಂದು ಕಿಡಿಕಾರಿದರು. ಆರ್‌ಎಸ್‌ಎಸ್ ಗೀತೆ ಹಾಡಿದ್ದಕ್ಕೆ ಡಿಕೆಶಿ ಕ್ಷಮೆ ಕೇಳಿ ನಾಟಕ ಮಾಡುತ್ತಿದ್ದಾರೆ ಎಂಬ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಅವರ ಹೇಳಿಕೆಗೆ, ಹೌದು, ದಿನಾ ನಾಟಕ ಮಾಡುತ್ತಿದ್ದೇನೆ' ಎಂದು ವ್ಯಂಗ್ಯವಾಡಿದರು.

**ಎಚ್‌ಡಿಕೆ ವಿರುದ್ಧ ವಾಗ್ದಾಳಿ:** ನಾವು ಬೆಂಗಳೂರು ದಕ್ಷಿಣ ಜಿಲ್ಲೆಯ ಜನ. ರಾಮನಗರ ನಮ್ಮ ಜಿಲ್ಲಾ ಕೇಂದ್ರ. ನಮ್ಮ ಹೆಸರಿನ ಜೊತೆಗೆ ನಮ್ಮೂರಿನ ಇನಿಷಿಯಲ್ ಇದೆ. ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರ ಹೆಸರಿನ ಮುಂದಿರುವ ಇನಿಷಿಯಲ್ ತೆಗೆಯಲು ಹೇಗೆ ಸಾಧ್ಯವಿಲ್ಲವೊ, ಅದೇ ರೀತಿ ನಮ್ಮ ಹೆಸರಿನ ಜೊತೆಗೆ ಮೂಲ ಜಿಲ್ಲೆ ಬೆಂಗಳೂರಿನ ಹೆಸರು ತೆಗೆಯಲು ಸಾಧ್ಯವಿಲ್ಲ. ಅದಕ್ಕಾಗಿ, ಜಿಲ್ಲೆಯನ್ನು ಬೆಂಗಳೂರು ದಕ್ಷಿಣ ಎಂದು ಮರುನಾಮಕರಣ ಮಾಡಿದೆ ಎಂದು ಶಿವಕುಮಾರ್ ತಮ್ಮ ಭಾಷಣದಲ್ಲಿ ಹೇಳಿದರು. ಮರು ನಾಮಕರಣ ತಡೆಯಲು ಕುಮಾರಸ್ವಾಮಿ ದೆಹಲಿಯಲ್ಲಿ ಪ್ರಯತ್ನಿಸಿದರು. ಪ್ರತಿಭಟಿಸಲು ಕುಮ್ಮಕ್ಕು ಕೊಟ್ಟರು. ಆದರೆ, ನನಗೂ ಎಲ್ಲಾ ವಿದ್ಯೆ ಗೊತ್ತಿದ್ದರಿಂದ ಕಡೆಗೂ ಹೆಸರು ಬದಲಾಯಿಸಿದೆ. ದೇವೇಗೌಡರು ಮತ್ತು ಕುಮಾರಸ್ವಾಮಿ ಅವರು ರಾಮನಗರಕ್ಕೆ ಬಂದು ರಾಜಕಾರಣ ಮಾಡಿದಾಗ ನಾವು ವಿರೋಧಿಸಿದ್ದೇವಾ? ಅದೇ ರೀತಿ, ಯಾರೇ ವಿರೋಧಿಸಿದರೂ ನಮ್ಮತನವನ್ನು ನಾವು ಬಿಟ್ಟು ಕೊಡುವುದಿಲ್ಲ ಎಂದರು.

**ಡಿಕೆಶಿಗಿಂತ ಅಪ್ಪಟ ಹಿಂದೂ ಬೇರೊಬ್ಬರಿಲ್ಲ:** ಧರ್ಮಸ್ಥಳ ಪ್ರಕರಣದ ವಿಷಯದಲ್ಲಿ ವಿರೋಧ ಪಕ್ಷದವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಪ್ರಚೋದಿಸುತ್ತಿದ್ದಾರೆ. ಅವರಂತಹ ಅಪ್ಪಟ ಹಿಂದೂ ಯಾರೂ ಸಿಗುವುದಿಲ್ಲ. ಅವರು ನಮ್ಮ ರಾಷ್ಟ್ರನಾಯಕ. ಯಾವುದೇ ರಾಜ್ಯಕ್ಕೆ ಹೋದರೂ ಅವರಿಗೆ ಅಭಿಮಾನಿಗಳಿದ್ದಾರೆ. ನಮ್ಮ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಸಹಿಸದ ವಿರೋಧ ಪಕ್ಷದವರು, ಸಿ.ಎಂ ಮತ್ತು ಡಿಸಿಎಂ ವಿರುದ್ಧ ಅಸಹನೆ ವ್ಯಕ್ತಪಡಿಸುತ್ತಿದ್ದಾರೆ. ಅವರ ಕುತಂತ್ರಗಳಿಗೆ ನಾವು ತಕ್ಕ ಉತ್ತರ ಕೊಡುತ್ತೇವೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

# ಕನ್ನಡಾಂಬೆ ಕುರಿತ ಹೇಳಿಕೆಗೆ ಸ್ಪಷ್ಟನೆ ಕೊಡಲಿ

## ಇಲ್ಲದಿದ್ರೆ ದಸರಾ ಉದ್ಘಾಟನೆಗೆ ನನ್ನ ವಿರೋಧವಿದೆ: ಯದುವೀರ್ ಯು ಟರ್ನ್

• ಉದಯವಾಹಿನಿ, ಮೈಸೂರು

- **ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿಯಲ್ಲ ಡಿಕೆಶಿ ಹೇಳಿಕೆ**
- **ಇದೊಂದು ಆಘಾತಕಾರಿ ಹಾಗೂ ಹಾಸ್ಯಾಸ್ಪದ ಹೇಳಿಕೆ ಎಂದ ಯದುವೀರ್**
- **ಭುವನೇಶ್ವರಿ ಬಗ್ಗೆ ಬಾನು ಮುಷ್ತಾಕ್ ಸ್ಪಷ್ಟನೆ ಕೇಳಿದ ಯದುವೀರ್**

ಬಾನು ಮುಷ್ತಾಕ್ ಭುವನೇಶ್ವರಿ ಕುರಿತ ಹೇಳಿಕೆ ಮತ್ತು ಅವರು ದಸರಾ ಉದ್ಘಾಟಿಸುವ ಬಗ್ಗೆ ಬಿಜೆಪಿ ನಾಯಕರಿಗಿರುವ ವಿರೋಧ ಭಾವ ಇನ್ನು ತಣ್ಣಗಾಗಿಲ್ಲ. ಶುಕ್ರವಾರ ಮೈಸೂರಿನಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಕನ್ನಡಾಂಬೆ ಕುರಿತ ಹೇಳಿಕೆಗೆ ಮೊದಲು ಸ್ಪಷ್ಟನೆಯನ್ನು ಕೊಡಲಿ, ಕೊಡದಿದ್ದರೆ ದಸರಾ ಉದ್ಘಾಟನೆಗೆ ನನ್ನ ವಿರೋದ ಇದೆ ಎಂದು ಹೇಳುವ ಮೂಲಕ ಯುಟರ್ನ್ ಹೊಡೆದಿದ್ದಾರೆ.

ಈ ಹಿಂದೆ ಬಾನು ಮುಷ್ತಾಕ್ ಬಗ್ಗೆ ಪ್ರತಾಪ್‌ಸಿಂಹ, ಯತ್ನಾಳ್ ವಿರೋದ ವ್ಯಕ್ತಪಡಿಸಿದ್ದಾಗ ಮಾತನಾಡಿದ ಅವರು ಬೂಕರ್ ವಿಜೇತೆ ಬಾನು ಮುಷ್ತಾಕ್ ದಸರಾ ಉದ್ಘಾಟಿಸುವುದಕ್ಕೆ ನಮ್ಮ ತಕರಾರಿಲ್ಲ. ನಾಡ ಹಬ್ಬ, ಚಾಮುಂಡೇಶ್ವರಿಗಾಗಲಿ ಯಾವುದೇ ಅಪಪ್ರಚಾರ ಬಾರದಂತೆ ನೋಡಿಕೊಳ್ಳುವುದು ಸರ್ಕಾರದ ಕರ್ತವ್ಯ ಎಂದಿದ್ದರು. ಈಗ ಕನ್ನಡಾಂಬೆ ಕುರಿತು ಸಮರ್ಥನೆ ಕೊಟ್ಟರೆ ಮಾತ್ರ ದಸರಾ ಉದ್ಘಾಟಿಸಲಿ ಎಂದು ಯೂಟರ್ನ್ ಹೊಡೆದಿದ್ದಾರೆಯೇ ಎಂಬ ಪ್ರಶ್ನೆಗಳು ಮೂಡುತ್ತಿವೆ.

**ಹಳೆಯ ಭಾಷಣಕ್ಕೆ ಸ್ಪಷ್ಟನೆ ಕೊಡ್ಲಿ:** ಬಾನು ಮುಷ್ತಾಕ್ ಕನ್ನಡಾಂಬೆ ಕುರಿತ ಹೇಳಿಕೆಗೆ ಮೊದಲು ಸ್ಪಷ್ಟನೆಯನ್ನು ಕೊಡಲಿ. ಸ್ಪಷ್ಟೀಕರಣ ಕೊಡದಿದ್ದರೆ ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ ನನ್ನ ವಿರೋಧ ಇದೆ. ಸರ್ಕಾರ ಅವರನ್ನು ಆಯ್ಕೆ ಮಾಡಿದಾಗ ನಾನು ಸ್ವಾಗತಿಸಿದ್ದೆ. ಅವರ ಹಳೆಯ ಭಾಷಣವನ್ನು ನಂತರ ನೋಡಿದ್ದೇನೆ. ಆ ಭಾಷಣಕ್ಕೆ ಸ್ಪಷ್ಟೀಕರಣ ಬೇಕು. ಸ್ಪಷ್ಟೀಕರಣ ಕೊಡಲಿ ಅಥವಾ ಹೇಳಿಕೆಯನ್ನು ವಾಪಸ್ ಪಡೆಯಲಿ.ಎರಡೂ ಮಾಡದಿದ್ದರೆ ನನ್ನ ವಿರೋಧ ಇದೆ. ಪಾರ್ಟಿಯ ನಿರ್ಧಾರವೇ ನಮ್ಮ ನಿರ್ಧಾರ. ಪಾರ್ಟಿಗೆ ವಿರುದ್ಧವಾದ ನಿಲುವು ನನ್ನದಲ್ಲ ಎಂದು ಮೈಸೂರಿನಲ್ಲಿ ಸಂಸದ ಯದುವೀರ್ ಹೇಳಿದರು.

ಭುವನೇಶ್ವರಿ ಕುರಿತ ಬಾನು ಮುಷ್ತಾಕ್ ಹೇಳಿಕೆಯಿಂದ ನಮ್ಮ ಭಾವನೆಗಳಿಗೆ ಧಕ್ಕೆಯಾಗಿದೆ. ಅದನ್ನು ಬಾನು ಮುಷ್ತಾಕ್ ಅರ್ಥ ಮಾಡಿಕೊಳ್ಳಬೇಕು. ಅವರ ಧರ್ಮದ ಆಚರಣೆಯ ಬಗ್ಗೆ ನಾನು ಮಾತನಾಡುವುದಿಲ್ಲ. ನಮ್ಮ ಧರ್ಮದಲ್ಲಂತೂ ಮೂರ್ತಿ ಪೂಜೆ ಶ್ರೇಷ್ಠವಾದುದು. ಅವರು ಚಾಮುಂಡಿ ಮಾತೆಯನ್ನು ಗೌರವಿಸಿ ಬರಬೇಕು. ಭಕ್ತಯಿಂದ ದೇವರನ್ನು ಪೂಜಿಸಬೇಕು. ಇದಕ್ಕು ಮೊದಲು ತಮ್ಮ ಹಳೆಯ ಹೇಳಿಕೆಗೆ ಸ್ಪಷ್ಟೀಕರಣ ಕೊಡಬೇಕು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮೈಸೂರಿನಲ್ಲಿ ಹೇಳಿದರು.

**ಚಾಮುಂಡಿ ಬೆಟ್ಟ ಹಿಂದೂಗಳದ್ದೇ:** ಚಾಮುಂಡಿಬೆಟ್ಟ ಹಿಂದೂಗಳ ಸ್ವತ್ತಲ್ಲ ಎಂದು ಡಿ ಕೆ ಶಿವಕುಮಾರ್ ಹೇಳಿಕೆ ಕೊಟ್ಟಿದ್ದರು ಈ ಬಗ್ಗೆ ಮಾತನಾಡಿದ ಅವರು, ಡಿಸಿಎಂ ಡಿಕೆಶಿ ಕೊಟ್ಟಿರುವ ಹೇಳಿಕೆ ಹಾಸ್ಯಾಸ್ಪದ. ಇದು ಸದಾ ಕಾಲದಿಂದಲೂ ಹಿಂದೂಗಳ ದೇವಸ್ಥಾನ.



ಇದು ಹೇಗೆ ಬೇರೆಯವರ ಶ್ರದ್ಧಾ ಕೇಂದ್ರ ಆಗಲು ಸಾಧ್ಯ ಎಂದು ಸಂಸದ ಯದುವೀರ್ ಕಿಡಿ ಕಾರಿದರು. ಮೈಸೂರಿನಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿಕೆ.

**ಬಾನು ಮುಷ್ತಾಕ್ ಅವರ ಭುವನೇಶ್ವರಿ ಬಗ್ಗೆ 2023ರಂದು ಮಾತನಾಡಿರುವುದು ಸದ್ಯ ರಾಜ್ಯರಾಜಕೀಯದಲ್ಲಿ ಸಂಚಲನ ಮೂಡಿಸಿದೆ. ಈ ಕುರಿತು ಅವರು ಸ್ಪಷ್ಟನೆ ಕೊಡಲಿ ಇಲ್ಲದಿದ್ದರೆ ದಸರಾ ಉದ್ಘಾಟನೆಗೆ ವಿರೋಧ ಇದೆ ಎಂದು ಹೇಳಿದ್ದಾರೆ. ಈ ಹಿಂದೆ ತಮ್ಮ ಪಕ್ಷದ ನಾಯಕರೇ ವಿರೋಧಿಸಿದ ಮಧ್ಯೆಯೂ, ಬಾನು ಮುಷ್ತಾಕ್ ರಿಗೆ ಬೆಂಬಲಿಸಿದ್ದರೂ, ಆದರೆ ಈಗ ಉಲ್ಟಾ ಹೊಡೆದಿದ್ದಾರೆ ಎನ್ನಲಾಗುತ್ತದೆ. ಹಳೆಯ ಭಾಷಣಕ್ಕೆ ಸ್ಪಷ್ಟನೆ ಕೇಳಿದ್ದಾರೆ. ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಚಾಮುಂಡಿ ಬೆಟ್ಟದ ಕುರಿತ ಹೇಳಿಕೆಗೆ ಕಿಡಿಕಾರಿದ್ದು, ಇದು ಹಿಂದೂಗಳ ಸ್ವತ್ತು ಎಂದಿದ್ದಾರೆ.**

ಗೌರಿ ವಿನಾಯಕನ ಪೂಜೆಯ ಸಂದರ್ಭದಲ್ಲಿ ಈ ರೀತಿ ಹೇಳಿಕೆ ಖಂಡನೀಯ. ಮಾರ್ಕಂಡೇಯರು ತಪಸ್ಸು ಮಾಡಿರುವ ಇತಿಹಾಸವಿರುವ ಸ್ಥಳವಿದು. ಚಾಮುಂಡಿಬೆಟ್ಟಕ್ಕೆ ಸಾವಿರಾರು ವರ್ಷದ ಇತಿಹಾಸವಿದೆ. ಆ ಸಂದರ್ಭದಲ್ಲಿ ಬೇರೆ ಧರ್ಮಗಳೇ ಇರಲಿಲ್ಲ. ಬೌದ್ಧ ಧರ್ಮ ಒಂದೇ ಆಗ ಇದ್ದಿದ್ದು. ನಮ್ಮ ಧರ್ಮದ ದುರ್ಬಳಕೆ ಮಾಡಿಕೊಳ್ಳಬಾರದು. ನಮ್ಮ ಧಾರ್ಮಿಕ ಕ್ಷೇತ್ರಗಳಿಗೆ ಎಲ್ಲರಿಗೂ ಪ್ರವೇಶ ಇದೆ.

ಆದರೆ ಪ್ರವೇಶ ಇದೆ ಅನ್ನೋ ಕಾರಣಕ್ಕೆ ಅವರದ್ದು ಅನ್ನುವುದು ಸರಿಯಲ್ಲ. ಜಾತ್ಯಾತೀತ ಧರ್ಮದ ದೃಷ್ಟಿಯಿಂದ ನೋಡಬಹುದು ಅಷ್ಟೇ. ಇದು ಧಾರ್ಮಿಕ ಕೇಂದ್ರ ಕೋಟ್ಯಾಂತರ ಜನರ ಭಾವನೆಗೆ ಇದರಿಂದ ಧಕ್ಕೆಯಾಗುತ್ತದೆ. ಈ ರೀತಿ ಬೇಜವಾಬ್ದಾರಿತನದ ಹೇಳಿಕೆ ನೀಡಬಾರದು. ಸರ್ಕಾರ ಬೆಟ್ಟವನ್ನು ನಿಯಂತ್ರಣಕ್ಕೆ ತೆಗದುಕೊಳ್ಳಲು ಮುಂದಾಗಿದೆ. ಬರೀ ಹಿಂದೂ ದೇವಾಲಯಗಳನ್ನು ಗುರಿಯಾಗಿಟ್ಟುಕೊಂಡು ಈ ರೀತಿ ಮಾಡುತ್ತಿದೆ. ಹಿಂದೂಗಳ ಸ್ಥಳಗಳಲ್ಲಿ ಈ ರೀತಿ ಆಗುತ್ತಿದೆ ಎಂದು ಯದುವೀರ್ ಹೇಳಿದ್ದರು.

## ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಣೆ

• ಉದಯವಾಹಿನಿ, ತುಮಕೂರು


ಉದಯವಾಹಿನಿ ಚಿತ್ರ

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಭಯೋತ್ಪಾದಕರು 26 ಪ್ರವಾಸಿಗರನ್ನು ಹತ್ಯೆ ಮಾಡಿ, ಭಾರತದ ಭದ್ರತೆಗೆ ಸವಾಲು ಹಾಕಿದ ಕೃತ್ಯಕ್ಕೆ ಪ್ರತೀಕಾರವಾಗಿ ನಡೆದ ಕಾರ್ಯಾಚರಣೆಯ ಯಶಸ್ಸಿನ ಆಪರೇಷನ್ ಸಿಂಧೂರ ವಿಜಯೋತ್ಸವವನ್ನು ಆ. 30ರಂದು ನಗರದಲ್ಲಿ ಆಚರಿಸಲಾಗುತ್ತದೆ ಎಂದು ಆಚರಣೆ ಸಮಿತಿ ಅಧ್ಯಕ್ಷರೂ ಆದ ಮಾಜಿ ಸಚಿವ ಸೊಗಡು ಶಿವಣ್ಣ ಹೇಳಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲ ಬಾರಿಗೆ ತುಮಕೂರಿನಲ್ಲಿ ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಿಸಲಾಗುತ್ತಿದೆ. ಇದು ರಾಷ್ಟ್ರದ ಗೌರವ, ಶೌರ್ಯ, ಅಚಲ ಬದ್ಧತೆಯ ಸಂಕೇತವಾಗಿದೆ ಎಂದರು.

ವಿದ್ಯಾರ್ಥಿ, ಯುವಜನರಿಗೆ ದೇಶದ ರಕ್ಷಣಾ ಸಂಸ್ಥೆಯ ಕಾರ್ಯತಂತ್ರ ತಿಳಿಸಿ ಅವರಲ್ಲಿ ದೇಶದ ಭದ್ರತೆ, ದೇಶ ಪ್ರೇಮದ ಬಗ್ಗೆ ಜಾಗೃತಗೊಳಿಸುವ ಉದ್ದೇಶವಾಗಿದೆ. ಜಿಲ್ಲೆಯ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಸಾರ್ವಜನಿಕರೂ ಸೇರಿದಂತೆ ಹತ್ತು ಸಾವಿರಕ್ಕೂ ಹೆಚ್ಚು ಜನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಆ. 30 ರಂದು ಬೆಳಿಗ್ಗೆ 10.30ಕ್ಕೆಆರಂಭವಾಗುವ ಕಾರ್ಯಕ್ರಮದಲ್ಲಿಸಿದ್ಧಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ಧಲಿಂಗ ಸ್ವಾಮೀಜಿ, ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆದಿಚುಂಚನಗಿರಿ ಸಂಸ್ಥಾನದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆ ದಿವ್ಯ ಸಾನಿಧ್ಯ ವಹಿಸುವರು.

ಮೇಘಾಲಯ ರಾಜ್ಯಪಾಲರಾದ ಸಿ.ಹೆಚ್. ವಿಜಯಶಂಕರ್ ಕಾರ್ಯಕ್ರಮ ಉದ್ಘಾಟಿಸುವರು.

**ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ಮಾಡಿದ ಭಯೋತ್ಪಾದಕರು ಧರ್ಮ ಕೇಳಿ, ಕಲ್ಮಾ ಪಠಿಸಲು ಹೇಳಿ ಹಿಂದೂಗಳನ್ನೇ ಗುರಿಯಾಗಿಸಿಕೊಂಡು ಅವರ ಕುಟುಂಬದವರ ಎದುರೇ ಗುಂಡಿಕ್ಕಿ ಹತ್ಯೆ ಮಾಡಿದ ಕೃತ್ಯವನ್ನು ಯಾವ ಭಾರತೀಯನಿಗೂ ಸಹಿಸಿಕೊಳ್ಳಲಾಗುವುದಿಲ್ಲ. ಮೃತರ ಆತ್ಮಕ್ಕೆ ಶಾಂತಿಕೋರಿ, ಅವರ ಕುಟುಂಬದವರಿಗೆ ಸಾಂತ್ವನ ಹೇಳುವ ಕಾರ್ಯಕ್ರಮವೂ ಇದಾಗಿದೆ. ಇಂತಹ ದುರ್ಘಟನೆಗಳು ಮರುಕಳಿಸಬಾರದು. ಅದಕ್ಕಾಗಿ ಎಷ್ಟೇ ಮುಂಜಾಗೃತೆ ವಹಿಸಿದರೂ ಸಾಲದು. ಭಾರತೀಯರು ದೇಶದ ಭದ್ರತೆಯ ವಿಚಾರದಲ್ಲಿ ಒಟ್ಟಾಗಿರಬೇಕು. ನಮ್ಮ ಸಶಸ್ತ್ರ ಪಡೆಗಳ ಬೆಂಬಲಕ್ಕೆ ನಿಲ್ಲಬೇಕು ಎಂದರು.**

ಸಚಿವರುಗಳಾದ ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಶೋಭಾಕರಂದ್ಲಾಜೆ, ಡಾ.ಜಿ. ಪರಮೇಶ್ವರ್, ಸಂಸದರಾದ ಗೋವಿಂದ ಕಾರಜೋಳ, ಡಾ.ಸಿ.ಎನ್.ಮಂಜುನಾಥ್, ಶಾಸಕರಾದ ಕೆ.ಎನ್.ರಾಜಣ್ಣ, ಸುರೇಶ್‌ಗೌಡ, ಎಂ.ಟಿ.ಕೃಷ್ಣಪ್ಪ, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ ಅಲ್ಲದೆ ಜಿಲ್ಲೆಯ ಶಾಸಕರು, ಅಧಿಕಾರಿಗಳು ಅತಿಥಿಗಳಾಗಿ ಭಾಗವಹಿಸುವರು. ಹಿರಿಯ ಪತ್ರಕರ್ತರಾದ ವಿಶ್ವೇಶ್ವರ ಭಟ್, ಅಜಿತ್ ಹನುಮಕ್ಕನವರ್, ರಂಗನಾಥ ಭಾರದ್ವಜ್ ಭಾಷಣಕಾರರಾಗಿ ಆಗಮಿಸುವರು. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯದ ಮಾಜಿ ನಿರ್ದೇಶಕ ಡಾ.ಪ್ರಹ್ಲಾದ್‌ರಾಮ್‌ರಾವ್, ಇಸ್ರೋ ಮಾಜಿ ಅಧ್ಯಕ್ಷರಾದ ಡಾ.ಎ.ಎಸ್. ಕಿರಣ್‌ಕುಮಾರ್, ಡಾ. ಎಸ್. ಸೋಮನಾಥ್ ಸೇರಿದಂತೆ ರಕ್ಷಣಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಗಣ್ಯ ಸಾಧಕರನ್ನು ಈ ವೇಳೆ ಸನ್ಮಾನಿಸಲಾಗುವುದು ಎಂದು ಸೊಗಡು ಶಿವಣ್ಣ ವಿವರಿಸಿದರು.

ತುಮಕೂರು ಗ್ರಾಮಾಂತರ ಕ್ಷೇತ್ರ ಶಾಸಕ ಬಿ.ಸುರೇಶ್‌ಗೌಡ ಮಾತನಾಡಿ, ಆಪರೇಷನ್ ಸಿಂಧೂರ ಕಾರ್ಯಾಚರಣೆಯು ಒಂದು ಸೇನಾ ಕಾರ್ಯಾಚರಣೆ ಮಾತ್ರವಲ್ಲದೆ, ನಮ್ಮದೇಶ ಎಷ್ಟು ಬಲಿಷ್ಠವಾಗಿದೆ ಮತ್ತು ಕೆಲವೇ ಗಂಟೆಗಳಲ್ಲಿ ವೈರಿ ರಾಷ್ಟ್ರದ ಮಗ್ಗುಲು ಮುರಿದು ಶರಣಾಗತಿ ಆಗುವಂತೆ ಮಾಡಬಲ್ಲ ಸಾಮರ್ಥ್ಯ ನಮ್ಮ ದೇಶಕ್ಕಿದೆ ಎಂಬುದನ್ನು ತೋರಿಸಿಕೊಟ್ಟ ಕಾರ್ಯಾಚರಣೆಯಾಗಿದೆ.

ದೇಶದ ಗಡಿ ಕಾಯುವ ಸೈನಿಕರಿಗೆ ಗೌರವ ಸಲ್ಲಿಸಲು ಹಾಗೂ ದೇಶವನ್ನು ಬಲಿಷ್ಠ ರಾಷ್ಟ್ರವನ್ನಾಗಿ ರೂಪಿಸಲು ಶ್ರಮಿಸುತ್ತಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಕೈ ಬಲಪಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

## ಅಲೆಮಾರಿ ಸಮುದಾಯಗಳಿಗೆ ಒಳಮೀಸಲಾತಿಗಾಗಿ ಒತ್ತಾಯ

• ಉದಯವಾಹಿನಿ, ಕೆ.ಆರ್.ಪೇಟೆ


ಉದಯವಾಹಿನಿ ಚಿತ್ರ


ಅಸ್ಪೃಶ್ಯರಾಗಿರುವ ಅಲೆಮಾರಿ ಸಮುದಾಯಗಳಿಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ಶೇ.1 ರಷ್ಟು ಒಳ ಮೀಸಲಾತಿಯನ್ನು ನೀಡಬೇಕು. ಅಸ್ಪೃಶ್ಯ ಸಮುದಾಯಗಳಾದ ಬೋವಿ, ಲಂಬಾಣಿ, ಕುಳುವ ಸಮುದಾಯಗಳೊಂದಿಗೆ ಅಲೆಮಾರಿ ಸಮುದಾಯಗಳನ್ನು ಸೇರ್ಪಡೆ ಮಾಡಿದೆ.

ಇದು ನಮ್ಮ ಅಲೆಮಾರಿ ಸಮುದಾಯಗಳಿಗೆ ಮರಣ ಶಾಸನವಾಗಲಿದೆ ಹಾಗಾಗಿಕೂಡಲೇ ಅಸ್ಪೃಷ್ಯ ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕ ಒಳಮೀಸಲಾತಿ ನೀಡಿ ನ್ಯಾಯ ಒದಗಿಸಿಕೊಡಬೇಕು ಎಂದು ತಾಲ್ಲೂಕು ಅಲೆಮಾರಿ ಸಮುದಾಯಗಳ ಸಂಘಗಳ ಒಕ್ಕೂಟದ ವತಿಯಿಂದ ಪಟ್ಟಣದ ಬೃಹತ್ ಪ್ರತಿಭಟನೆ ನಡೆಸಲಾಯಿತು. ತಾಲ್ಲೂಕು ಕಚೇರಿಗೆ ಮುತ್ತಿಗೆ ಹಾಕಿ ಸರ್ಕಾರವು ನಮಗೆ ಪ್ರತ್ಯೇಕ ಶೇ.1 ರಷ್ಟು ಮೀಸಲಾತಿ ನೀಡಬೇಕು.

ಅಸ್ಪೃಷ್ಯ ಜಾತಿಗೆ ಸೇರಿದ ನಮ್ಮನ್ನು ಸ್ಪೃಷ್ಯ ಜಾತಿಗಳೊಂದಿಗೆ ಸೇರಿಸಿರುವುದು ಸರಿಯಲ್ಲ. ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಂತೆ ಅಲೆಮಾರಿ ಸಮುದಾಯಗಳಿಗೆ ಶೇ.1 ರಷ್ಟು ಒಳಮೀಸಲಾತಿ ನೀಡಬೇಕು. ಜೊತೆಗೆ ಒಂದೆಡೆ ನೆಲೆ ನಿಂತು ಕೂಲಿ ಮಾಡಿ, ಜೊತೆಗೆ ಕುಲಕಸುಬುಗಳನ್ನು ಮಾಡುತ್ತಾ ಜೀವನ ನಡೆಸುತ್ತಿದ್ದೇವೆ. ಆದರೆ ನಮಗೆ ವಾಸಿಸಲು ಸ್ವಂತ ಮನೆ ಇರುವುದಿಲ್ಲ. ಇದ್ದರೂ ಚಿಕ್ಕ ಚಿಕ್ಕ ಮನೆಗಳಲ್ಲಿ ಹಲವಾರು ಕುಟುಂಬಗಳು ವಾಸಿಸುತ್ತಿದ್ದೇವೆ. ಬೇಸಾಯಕ್ಕೆ ಭೂಮಿ ಮಂಜೂರು ಮಾಡಿಕೊಡಬೇಕು ಹಾಗಾಗಿ ನಮ್ಮ ಕುಟುಂಬಗಳಿಗೆ ಪ್ರತ್ಯೇಕ ಮೀಸಲಾತಿಯನ್ನು ನೀಡಬೇಕು. ಸ್ಪೃಷ್ಯ ಜಾತಿಗಳಾದ ಬೋವಿ, ಲಂಬಾಣಿ, ಕುಳುವ ಸಮುದಾಯಗಳೊಂದಿಗೆ ಸೇರಿಸಬಾರದು. ಕೂಡಲೇ ನಮ್ಮ ಅಲೆಮಾರಿ ಸಮುದಾಯಗಳನ್ನು ಪ್ರತ್ಯೇಕ ಗುಂಪು ಮಾಡಿ ನ್ಯಾಯಮೂರ್ತಿಗಳ ಶಿಫಾರಸ್ಸಿನಂತೆ ಶೇ.1 ರಷ್ಟು ಮೀಸಲಾತಿ ನೀಡಬೇಕು ಎಂದು ಒತ್ತಾಯ ಮಾಡಿದರು.

## ಬಿಜೆಪಿಯವರಿಂದ ದ್ವೇಷಿಸುವ ಕೆಟ್ಟ ನೀತಿ ಮುಂದುವರಿಕೆ

• ಉದಯವಾಹಿನಿ, ಮೈಸೂರು



ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ವಿಜೇತೆ ಮತ್ತು ಹಲವು ಜನಪರ ಚಳವಳಿಗಳಲ್ಲಿ ಸಕ್ರಿಯವಾಗಿ ಭಾಗಿಯಾಗಿದ್ದ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವುದರ ಬಗ್ಗೆ ಬಿಜೆಪಿಯವರು ಆಕ್ಷೇಪ ವ್ಯಕ್ತಪಡಿಸಿರುವುದು ಅತ್ಯಂತ ಬೇಸರದ ಸಂಗತಿ ಎಂದು ಸಮಾಜ ಕಲ್ಯಾಣ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಹೇಳಿದ್ದಾರೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ಬೂಕರ್ ಪ್ರಶಸ್ತಿಯ ಮೂಲಕ ಕನ್ನಡ ನಾಡಿನ ಕಂಪನ್ನು ವಿಶ್ವದೆಲ್ಲೆಡೆ ಹಬ್ಬುವ ಕೆಲಸ ಮಾಡಿರುವ ಬಾನು ಮುಸ್ತಾಕ್ ಅವರನ್ನು ಈ ನಾಡಿನ ಪ್ರಜೆಗಳಾಗಿ ಬಿಜೆಪಿಯವರು ಮುಕ್ತ ಮನಸ್ಸಿನಿಂದ ಒಪ್ಪಿಕೊಂಡು ಗೌರವಿಸಬೇಕಿತ್ತು. ಆದರೆ, ತಲೆಯಲ್ಲಿ ಮನುವಾದಿಗಳ ವಿಷ ತುಂಬಿಕೊಂಡಿರುವ ಅವರು ಮುಸ್ಲಿಮರ ಹೆಸರು ಕೇಳಿದರೆ ಕಾರಣವಿಲ್ಲದೆಯೇ ದ್ವೇಷಿಸುವ ಕೆಟ್ಟ ನೀತಿ ಮುಂದುವರಿಸಿದ್ದಾರೆ ಎಂದು ಆರೋಪಿಸಿದ್ದಾರೆ. ದಸರಾ ಎಂಬುದು ನಾಡಹಬ್ಬ ಎಂಬ ಸಂಗತಿಯನ್ನು ಮರೆತು, ಸ್ಥಿಮಿತ ಕಳೆದುಕೊಂಡಂತೆ ವರ್ತಿಸುತ್ತಿರುವ ಬಿಜೆಪಿಯವರು, ನಾಡು ನುಡಿಗೆ ಕೊಡುಗೆ ನೀಡಿದವರನ್ನು ಅವಮಾನಿಸುವ ಕೆಲಸವನ್ನು ಮೊದಲು ನಿಲ್ಲಿಸಲಿ. ಧರ್ಮವನ್ನು ರಾಜಕೀಯದಲ್ಲಿ ಬೆರೆಸಬಾರದೆಂಬ ಸಣ್ಣ ಅರಿವನ್ನು ಬಿಜೆಪಿಯೊಳಗೆ ಅಳಿದುಳಿದಿರುವ ಕೆಲ ವಿಚಾರವಂತರು ಪಕ್ಷದ ಮುಖಂಡರಿಗೆ ತಿಳಿಸಲಿ ಎಂದು ಹೇಳಿದ್ದಾರೆ. ದೇಶದ ಜನರಾದ ನಾವು ಐಕ್ಯತೆಯಿಂದ ಇರಬೇಕೆಂಬ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿ ವರ್ತಿಸುತ್ತಿರುವ ಬಿಜೆಪಿಯವರು, ಮುಸ್ಲಿಂ ದ್ವೇಷದ ಮನಸ್ಥಿತಿಯನ್ನು ಬದಿಗಿಟ್ಟು ಸಂವಿಧಾನದ ಆಶಯವನ್ನು ಅರ್ಥ ಮಾಡಿಕೊಳ್ಳಲಿ ಎಂದು ತಿಳಿಸಿದ್ದಾರೆ.

## ಮುಂಗಾರು ಕೃಷಿ ಚಟುವಟಿಕೆಗಳಿಗೆ ಅವಶ್ಯಕತೆ ಇರುವ ರಸಗೊಬ್ಬರ ಆಂಧ್ರಕ್ಕೆ ಮಾರಾಟ: ಕ್ರಮಕ್ಕೆ ಆಗ್ರಹ

# ರಸಗೊಬ್ಬರ ಕಳ್ಳತನವಾಗಿ ಆಂಧ್ರಕ್ಕೆ ಮಾರಾಟ ದಂಧೆ ಹೆಚ್ಚಳ

• ಉದಯವಾಹಿನಿ, ಮುಳಬಾಗಲು



**ಅಗತ್ಯ ಕ್ರಮಕ್ಕೆ ರೈತರಿಂದ ಹೆಚ್ಚಿದ ಬೇಡಿಕೆ**

ಮುಂಗಾರು ಕೃಷಿ ಚಟುವಟಿಕೆಗಳಿಗೆ ಅವಶ್ಯಕತೆ ಇರುವ ಯೂರಿಯಾ, ಡಿಎಪಿಯನ್ನು ಕಾಳ ಸಂತೆಯಲ್ಲಿ ಆಂಧ್ರಕ್ಕೆ ಮಾರಾಟ ಮಾಡುವ ದಂಧೆಕೋರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕಂದು ರೈತಸಂಘದಿಂದ ತಾಲ್ಲೂಕು ಟಿಎಪಿಸಿಎಂಎಸ್ ಕಾರ್ಯದರ್ಶಿ ಶಿವಶಂಕರವರಿಗೆ ಮನವಿ ನೀಡಿ ಒತ್ತಾಯಿಸಲಾಯಿತು. ದೇವರು ಕೊಟ್ಟರೂ ಪೂಜಾರಿ ಕೊಡಲಿಲ್ಲ ಎಂಬ ಗಾದೆಯಂತೆ ಉತ್ತಮ ಮುಂಗಾರು ಮಳೆಯಿಂದ ಕೃಷಿ ಚಟುವಟಿಕೆಗೆ ರೈತರು ಮುಂದಾಗಿದ್ದಾರೆ. ಸರಕಾರ ನೀಡುವ ಬಿತ್ತನೆ ಬೀಜ, ರಸಗೊಬ್ಬರದ ಅಭಾವ ಸೃಷ್ಟಿಯಾಗದಂತೆ ಜಾಗೃತಿ ವಹಿಸಬೇಕಾದ ಕೃಷಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ರಸಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ.

ಇದರಿಂದ ರೈತರು ಪರದಾಡುವಂತಾಗಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುವಲ್ಲಿಕೃಷಿ ಮಂತ್ರಿಗಳು ಹಾಗೂ ಕೃಷಿ ಅಧಿಕಾರಿಗಳು ವಿಫಲವಾಗಿದ್ದಾರೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ಸರಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

**ಕಾಳಸಂತೆಯಲ್ಲಿ ಗೊಬ್ಬರ ಮಾರಾಟ:** ತಾಲ್ಲೂಕು ಪ್ರಧಾನ ಕಾರ್ಯದರ್ಶಿ ರಾಜೇಶ್ ಹಾಗೂ ರಾಜ್ಯ ಮುಖಂಡ ಫಾರೂಕ್ ಪಾಷ ಮಾತಾನಾಡಿ, ಪ್ರತಿ ವರ್ಷ ಕೃಷಿ ಸಚಿವರು ಮುಂಗಾರು ಕೃಷಿ ಬಿತ್ತನೆಗೆ ಅವಶ್ಯಕತೆ ಇರುವ ರಸಗೊಬ್ಬರ ಅಭಾವ ಇಲ್ಲ, ಬೇಡಿಕೆಗೆ ತಕ್ಕಂತೆ ಆಯಾ ಜಿಲ್ಲೆಯ ಕೃಷಿ ಇಲಾಖೆಗಳು ಗೋದಾಮುಗಳಲ್ಲಿದಾಸ್ತನು ಇದೆ ಎಂದು ಹೇಳುತ್ತಾರೆ. ಆದರೆ ರಾಜ್ಯದಲ್ಲಿ ರಸಗೊಬ್ಬರಗಳ ಅಭಾವಕ್ಕೆ ಹೊಣೆ ಯಾರು? ಕೃಷಿ ಅಧಿಕಾರಿಗಳೇ? ರೈತರಿಗೆ ವಿತರಣೆ ಮಾಡುವ ರಸಗೊಬ್ಬರಗಳನ್ನು ಖಾಸಗಿ ಅಂಗಡಿಯವರಿಗೆ ಮಾರಾಟ ಮಾಡಿ ಅನ್ನದಾತರನ್ನು ಶೋಷಣೆ ಮಾಡುತ್ತಿದ್ದಾರೆಂದು ಅನುಮಾನ ವ್ಯಕ್ತಪಡಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಕಾರ್ಯದರ್ಶಿ ಶಿವಶಂಕರ ಅವರು ನಮ್ಮ ಇಲಾಖೆಯಿಂದ ರೈತರಿಗೆ ಅವಶ್ಯಕತೆ ಇರುವ ಯೂರಿಯವನ್ನು ಆಧಾರ ಕಾರ್ಡ್ ಪಡೆದು ವಿತರಣೆ ಮಾಡುತ್ತಿದೇವೆ. ಕಾಳಸಂತೆಯಲ್ಲಿಆಂಧ್ರ ರಾಜ್ಯಕ್ಕೆ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಕೃಷಿ ಅಧಿಕಾರಿಗಳ ಗಮನಕ್ಕೆ ತರುವ ಭರವಸೆಯನ್ನು ನೀಡಿದರು. ರಸಗೊಬ್ಬರ ಮಾರಾಟಗಾರರು ರೈತರಿಗೆ ಸರಕಾರಿ ನಿಗದಿಪಡಿಸಿದ ಗರಿಷ್ಠ ಮಾರಾಟ ದರದಲ್ಲಿ ಬೀಜ ಮತ್ತು ರಸಗೊಬ್ಬರ ಮಾರಾಟ ಮಾಡಬೇಕು. ರೈತರಿಗೆ ಕಡ್ಡಾಯವಾಗಿ ಅಧಿಕೃತ ಬಿಲ್ ನೀಡಬೇಕು. ಒಂದು ವೇಳೆ ಹೆಚ್ಚಿನ ದರ ಪಡೆದು ಅಧಿಕೃತ ಬಿಲ್ಲುನೀಡದೆ ಬೀಜ ರಸಗೊಬ್ಬರ ಮಾರಾಟ ಮಾಡಿದರೆ ಅಂಥವರ ಪರವಾನಿಗೆ ರದ್ದುಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ತಾಲ್ಲೂಕಿನ ಎಲ್ಲಾ ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ರಸಗೊಬ್ಬರಗಳ ಗರಿಷ್ಠ ಮಾರಾಟ ಬೆಲೆ, ದಾಸ್ತಾನನ್ನು ರೈತರಿಗೆ ಎದ್ದು ಕಾಣಿಸುವಂತೆ ಪ್ರದರ್ಶಿಸುವುದು.

**ದುಬಾರಿ ದರಕ್ಕೆ ಬಿತ್ತನೆ ಬೀಜ ಮಾರಾಟಕ್ಕೆ ಬ್ರೇಕ್**

**ಚಿಂಚೋಳಿ ಮಾರಾಟಗಾರರು ರಸಗೊಬ್ಬರ ಮತ್ತು ಬಿತ್ತನೆ ಬೀಜಗಳನ್ನು ರೈತರಿಗೆ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವುದು ಕಂಡು ಬಂದಲ್ಲಿ ಅವರ ಪರವಾನಿಗೆ ರದ್ದು ಮಾಡಲಾಗುತ್ತದೆ ಎಂದು ಕೃಷಿ ಸಹಾಯಕ ನಿರ್ದೇಶಕ ವೀರಶೆಟ್ಟಿ ರಾಠೋಡ್ ಎಚ್ಚರಿಕೆ ನೀಡಿದರು. ಪಟ್ಟಣದ ತಹಶೀಲ್ ಕಚೇರಿಯ ಸಭಾಂಗಣದಲ್ಲಿ2025-26ನೇ ಸಾಲಿನ ಮುಂಗಾರು ಹಂಗಾಮಿ ಕೃಷಿ ಪರಿಕರ ಮಾರಾಟಗಾರರ ಕರೆದ ಸಭೆಯಲ್ಲಿ ಮಾತನಾಡಿದರು. ಪ್ರಸ್ತುತ ಮುಂಗಾರು ಹಂಗಾಮಿ ಆಶಾದಾಯಕವಾಗಿದೆ, ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ, ಬೀಜ ಸರಬರಾಜು ಮಾಡುವುದು ಪ್ರಮುಖ ಕಾರ್ಯವಾಗಿದೆ.**

**ಕ್ರಮ ಕೈಗೊಳ್ಳುವುದಾಗಿ ಕಾರ್ಯದರ್ಶಿ ಭರವಸೆ**

**ಮುಳಬಾಗಲಿನಲ್ಲಿ ಮುಂಗಾರು ಕೃಷಿಗೆ ಬೇಕಾದ ಯೂರಿಯಾ ಮತ್ತು ಡಿಎಪಿ ಗೊಬ್ಬರವನ್ನು ಕಳ್ಳಸಾಗಾಣಿಕೆ ಮಾಡಲಾಗುತ್ತಿದೆ ಎಂದು ಆರೋಪಿಸಲಾಗಿದೆ. ಕಾಳಸಂತೆಯಲ್ಲಿ ಗೊಬ್ಬರ ಮಾರಾಟ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ರೈತ ಸಂಘವು ಟಿಎಪಿಸಿಎಂಎಸ್ ಕಾರ್ಯದರ್ಶಿಗೆ ಮನವಿ ಮಾಡಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು. ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಕಾರ್ಯದರ್ಶಿ ಭರವಸೆ ನೀಡಿದರು.**

ಯಾವುದೇ ಕಾರಣಕ್ಕೂ ಕೃತಕ ಅಭಾವ ಸೃಷ್ಟಿಸಿ ರೈತರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಬಾರದು ಎನ್ನಲಾಗಿದೆ. ರಾಜ್ಯ ಮುಖಂಡ ಬಂಗಾರಿ ಮಂಜು, ತಾಲ್ಲೂಕು ಅಧ್ಯಕ್ಷ ಯಲುವಳ್ಳಿ ಪ್ರಭಾಕರ್, ಹೆಬ್ಬಣಿ ಆನಂದರೆಡ್ಡಿ, ಭಾಸ್ಕರ್, ಸುನೀಲ್ ಕುಮಾರ್, ಜುಬೇರ್ ಪಾಷ, ಗಿರೀಶ್, ರಾಜು, ಮುಂತಾದವರು ಇದ್ದರು.

## ಮಿನಿ ನ್ಯೂಸ್

### ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದು ಇಬ್ಬರು ಬೈಕ್ ಸವಾರರ ದುರ್ಮರಣ

• ಉದಯವಾಹಿನಿ, ಕೆ.ಆರ್.ಪೇಟೆ

ಅತೀ ವೇಗ, ಅಜಾಗರೂಕತೆಯಿಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ಸೊಂದು ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸವಾರರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಕಿಕ್ಕೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಉಮೇಶ್(24), ದಿನೇಶ್(24) ಮೃತಪಟ್ಟ ಬೈಕ್ ಸವಾರರು. ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲ್ಲೂಕಿನ ಅಂಚೆಬೀರನಹಳ್ಳಿ ಬಳಿ ಇವರಿಬ್ಬರೂ ಬೈಕ್‌ನಲ್ಲಿ ಹೋಗುತ್ತಿದ್ದಾಗ ಅದೇ ಮಾರ್ಗವಾಗಿ ಬರುತ್ತಿದ್ದ ಕೆಎಸ್ ಆರ್‌ಟಿಸಿ ಬಸ್ ಇವರ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟಿದ್ದಾರೆ.

ಸುದ್ದಿ ತಿಳಿದು ಕಿಕ್ಕೇರಿ ಠಾಣಾ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಇಬ್ಬರ ಮೃತದೇಹಗಳನ್ನು ಸರ್ಕಾರಿ ಆಸ್ಪತ್ರೆಗೆ ರವಾನಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಬಸ್ ಚಾಲಕನ ಅಜಾಗರೂಕತೆಯೇ ಅಪಘಾತಕ್ಕೆ ಕಾರಣ ಎಂದು ಪ್ರತ್ಯಕ್ಷದರ್ಶಿಗಳು ಹೇಳುತ್ತಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

### ಸಿಮೆಂಟ್-ಕಬ್ಬಿಣ ಕೊಡಿಸುವುದಾಗಿ ನಂಬಿಸಿ ಹಣದೊಂದಿಗೆ ದಂಪತಿ ಎಸ್ಕೇಪ್

• ಉದಯವಾಹಿನಿ, ಮೈಸೂರು

ಕಡಿಮೆ ದರದಲ್ಲಿ ಸಿಮೆಂಟ್, ಕಬ್ಬಿಣ ಕೊಡಿಸುವುದಾಗಿ 16 ಮಂದಿಯನ್ನು ನಂಬಿಸಿದ ದಂಪತಿ 2,30,85,000 ವಂಚಿಸಿ ಪರಾರಿಯಾದ ಘಟನೆ ಮೈಸೂರಿನ ಶ್ರೀರಾಂಪುರ ಬಡಾವಣೆಯಲ್ಲಿ ನಡೆದಿದೆ. ಈ ಸಂಬಂಧ ವಂಚನೆಗೆ ಒಳಗಾದ 16 ಮಂದಿ ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ದಂಪತಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ರಾತ್ರೋ ರಾತ್ರಿ ದಂಪತಿ ಮನೆ ಹಾಗೂ ಮಳಿಗೆ ಬೀಗ ಹಾಕಿ ಎಸ್ಕೇಪ್ ಆಗಿದ್ದಾರೆ. ಶ್ರೀರಾಂಪುರದಲ್ಲಿರುವ ಶುಭಂ ಸ್ಟೀಲ್ಸ್ ಅಂಡ್ ಸಿಮೆಂಟ್ಸ್ ಮತ್ತು ಬಿಲ್ಡರ್ಸ್ ಸಂಸ್ಥೆಯ ಮಾಲೀಕ ಮೇನಕ ಪ್ರಿಯಾ ಹಾಗೂ ಪತಿ ಷಣ್ಮುಖ ಮುತ್ತುಸ್ವಾಮಿ ವಿರುದ್ಧ ವಂಚನೆ ಪ್ರಕರಣ ದಾಖಲಾಗಿದೆ. ಸದ್ಯ ದಂಪತಿ ತಲೆ ಮರೆಸಿಕೊಂಡಿದ್ದಾರೆ.

ಕೆ.ಆರ್.ಮೊಹಲ್ಲ ಬಸವೇಶ್ವರ ರಸ್ತೆಯ ನಿವಾಸಿ ಬಿಲ್ಡರ್ ಶರತ್ ಸೇರಿದಂತೆ 16 ಮಂದಿ ವಂಚನೆಗೆ ಒಳಗಾಗಿದ್ದಾರೆ. ಷಣ್ಮುಖ ಮುತ್ತುಸ್ವಾಮಿ ಆಕಸ್ಮಿಕವಾಗಿ ಶರತ್‌ಗೆ ಪರಿಚಯ ಆಗಿದ್ದಾರೆ. ಶುಭಂ ಸ್ಟೀಲ್ಸ್, ಸಿಮೆಂಟ್ ನನ್ನ ಪತ್ನಿ ಮೇನಕಾ ಪ್ರಿಯಾ ಮಾಲೀಕಳು ಎಂದು ತಿಳಿಸಿದ್ದಾರೆ. ಕಬ್ಬಿಣ, ಸಿಮೆಂಟ್ ಗಳನ್ನ ಕಡಿಮೆ ಬೆಲೆಗೆ ತಮಿಳುನಾಡಿನಿಂದ ತರಿಸಿಕೊಡುವುದಾಗಿ ಶರತ್‌ಗೆ ನಂಬಿಸಿದ್ದಾನೆ. ಷಣ್ಮುಖಸ್ವಾಮಿ ಮಾತನ್ನು ನಂಬಿದ ಶರತ್ ಹಂತ ಹಂತವಾಗಿ ಲಕ್ಷಾಂತರ ಹಣ ಕೊಟ್ಟಿದ್ದಾರೆ. ನಂತರ ಇವರ 15 ಸ್ನೇಹಿತರಿಂದಲೂ ಹಂತಹಂತವಾಗಿ 2,30,85,000 ರೂಗಳನ್ನ ಕೊಡಿಸಿದ್ದಾರೆ. ಹಣ ಕೊಟ್ಟು ತಿಂಗಳುಗಳು ಉರುಳಿದರೂ ಕಬ್ಬಿಣ, ಸಿಮೆಂಟ್ ಬಂದಿಲ್ಲ, ತಮಿಳುನಾಡಿನ ಕಂಪನಿಯಲ್ಲಿ ಬುಕ್ ಮಾಡಿರುವುದಾಗಿ ಸುಳ್ಳು ಹೇಳಿಕೊಂಡೇ ಷಣ್ಮುಖಮುತ್ತುಸ್ವಾಮಿ ನಂಬಿಸಿದ್ದಾರೆ. ಮೂರು ದಿನಗಳ ಹಿಂದೆ ಷಣ್ಮುಖ ಮುತ್ತುಸ್ವಾಮಿ ಮನೆಗೆ ಶರತ್ ಹೋದಾಗ ರಾತ್ರೋ ರಾತ್ರಿ ಮನೆ ಖಾಲಿ ಮಾಡಿರುವುದು ಗೊತ್ತಾಗಿದೆ. ಅಂಗಡಿಗೂ ಬೀಗ ಬಿದ್ದಿದೆ. ತಾವು ವಂಚನೆಗೆ ಒಳಗಾಗಿರುವುದು ಖಚಿತವಾದ ನಂತರ ಶರತ್ ಹಾಗೂ 15 ಸ್ನೇಹಿತರು ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

### ಹಂದಿಜ್ವರ; 57 ಹಂದಿ ಹತ್ಯೆ

• ಉದಯವಾಹಿನಿ, ಚಿಕ್ಕಬಳ್ಳಾಪುರ


ತಾಲ್ಲೂಕಿನ ಹೆಬ್ರಿ ಗ್ರಾಮದ ವೆಂಕಟರೆಡ್ಡಿ ಅವರ ಹಂದಿ ಫಾರ್ಮ್‌ನಲ್ಲಿ ಹಂದಿ ಜ್ವರ ಪತ್ತೆಯಾಗಿದೆ. ಹೀಗಾಗಿ, ಫಾರ್ಮ್‌ನಲ್ಲಿರುವ 57 ಹಂದಿಗಳನ್ನು ಹತ್ಯೆ ಮಾಡಲು ಪಶುಸಂಗೋಪನಾ ಇಲಾಖೆ ಮುಂದಾಗಿದೆ. ವೆಂಕಟರೆಡ್ಡಿ ಅವರ ತೋಟದಲ್ಲಿ 100ಕ್ಕೂ ಹೆಚ್ಚು ಹಂದಿಗಳು ಇದ್ದವು. ಕೆಲ ದಿನಗಳಿಂದ ಹಂತ ಹಂತವಾಗಿ 50ಕ್ಕೂ ಹೆಚ್ಚು ಹಂದಿಗಳು ಮೃತಪಟ್ಟಿವೆ. ಜಿಲ್ಲಾ ಪಶುಸಂಗೋಪನೆ ಇಲಾಖೆಯು ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಿತ್ತು. ಬೆಂಗಳೂರು ಮತ್ತು ಭೋಪಾಲ್‌ನಲ್ಲಿ ಪರೀಕ್ಷೆ ನಡೆದಿದ್ದವು. ವರದಿ ಬಂದಿದ್ದು ಹಂದಿಗಳು ಜ್ವರದಿಂದ ಮೃತಪಟ್ಟಿರುವುದು ದೃಢವಾಗಿದೆ. ಎಲೆಕ್ಟ್ರಿಕ್ ಶಾಕ್ ನೀಡಿ ಹಂದಿಗಳನ್ನು ಹತ್ಯೆ ಮಾಡಲಾಗುವುದು. ನಂತರ ಗುಂಡಿಯಲ್ಲಿ ಮುಚ್ಚಲಾಗುವುದು. ಇಲ್ಲಿ ಒಂದು ಕಡೆ ಮಾತ್ರ ಸೋಂಕು ಪತ್ತೆಯಾಗಿದೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಪಶು ಸಂಗೋಪನೆ ಇಲಾಖೆ ಉಪನಿರ್ದೇಶಕ ರಂಗಪ್ಪ ತಿಳಿಸಿದರು.

### ವಿದ್ಯಾರ್ಥಿನಿಗೆ ಸೀಟು ನಿರಾಕರಣೆ: ಸಿದ್ದಾರ್ಥ ವೈದ್ಯಕೀಯ ಕಾಲೇಜಿಗೆ 15 ಲಕ್ಷ ದಂಡ

• ಉದಯವಾಹಿನಿ, ಬೆಂಗಳೂರು

ಎಂಬಿಬಿಎಸ್ ಕೋರ್ಸ್‌ಗೆ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಅರ್ಹ ವಿದ್ಯಾರ್ಥಿನಿಯೊಬ್ಬರಿಗೆ ಪ್ರವೇಶ ನಿರಾಕರಿಸಿದ್ದ ತುಮಕೂರಿನ ಸಿದ್ದಾರ್ಥ ಸಮೂಹ ಸಂಸ್ಥೆಗಳ ಸಿದ್ದಾರ್ಥ ವೈದ್ಯಕೀಯ ಕಾಲೇಜಿಗೆ ಹೈಕೋರ್ಟ್ 15 ಲಕ್ಷ ದಂಡ ವಿಧಿಸಿದೆ. ಈ ಕುರಿತಂತೆ ಸಂತ್ರಸ್ತ ವಿದ್ಯಾರ್ಥಿನಿ ಸಂಜನಾ ವಿ.ತುಮಕೂರು ಅವರು ಸಲ್ಲಿಸಿದ್ದ ರಿಟ್ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ನೇತೃತ್ವದ ವಿಭಾಗೀಯ ನ್ಯಾಯಪೀಠ, ದಂಡದ ಮೊತ್ತವನ್ನು ಸಂತ್ರಸ್ತ ಅರ್ಜಿದಾರರಿಗೆ ಪರಿಹಾರ ರೂಪದಲ್ಲಿ ಪಾವತಿಸಿ ಎಂದು ಆದೇಶ ನೀಡಿದೆ.

### ವಕೀಲನ ಮೇಲೆ ಹಲ್ಲೆ ಖಂಡಿಸಿ ಪ್ರತಿಭಟನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಪಾವಗಡ

ವಕೀಲ ಸುಧಾಕರ್ ಮೇಲೆ ಹಲ್ಲೆ ಮಾಡಿದ ಎಲ್ಲಾ ಆರೋಪಿಗಳನ್ನು ಬಂಧಿಸಿಲ್ಲ. ಹಲ್ಲೆ ಮಾಡಿಸಿಕೊಂಡಿರುವ ವಕೀಲರ ವಿರುದ್ಧವೇ ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿ ವಕೀಲರ ಸಂಘದ ನೇತೃತ್ವದಲ್ಲಿ ಪಟ್ಟಣದ ತಹಶೀಲ್ದಾರ್ ಕಚೇರಿ ಮುಂಭಾಗ ಪ್ರತಿಭಟನೆ ನಡೆಯಿತು. ನ್ಯಾಯಾಲಯದ ಕಲಾಪಗಳಿಂದ ಹೊರಗುಳಿದು ಶನೈಶ್ಚರ ವೃತ್ತದವರೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ನಂತರ ತಹಶೀಲ್ದಾರ್ ಕಚೇರಿ ಮುಂಭಾಗ ಕೆಲಕಾಲ ರಸ್ತೆ ತಡೆ ನಡೆಸಿ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ವರದರಾಜು ಅವರಿಗೆ ಮನವಿ ಸಲ್ಲಿಸಲಾಯಿತು. ಹಲ್ಲೆಗೆ ಒಳಗಾದ ವಕೀಲ ತೀವ್ರ ಅಸ್ವಸ್ಥರಾಗಿದ್ದು, ತುಮಕೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ವಕೀಲನ ವಿರುದ್ಧ ದಾಖಲಾಗಿರುವ ಸುಳ್ಳು ಪ್ರಕರಣ ರದ್ದುಪಡಿಸಬೇಕು ಎಂದು ಒತ್ತಾಯಿಸಲಾಯಿತು.

ಅಂತರಾಳದಿಂದ..
EDITORIAL

# ಬಾಲ ಗರ್ಭಿಣಿ ಪ್ರಕರಣಗಳ ಹೆಚ್ಚಳ
## ಮಕ್ಕಳ ಸುರಕ್ಷತೆಗೆ ಆದ್ಯತೆ ಸಿಗಲಿ



ಹೆಣ್ಣುಮಕ್ಕಳ ಸಬಲೀಕರಣಕ್ಕೆ ಒತ್ತು ನೀಡುವ ಹತ್ತಾರು ಸರ್ಕಾರಿ ಕಾರ್ಯಕ್ರಮಗಳ ನಡುವೆಯೂ ಹದಿನೆಂಟು ವರ್ಷಕ್ಕಿಂತಲೂ ಕಡಿಮೆ ವಯಸ್ಸಿನ ಬಾಲಕಿಯರು ಗರ್ಭ ಧರಿಸುತ್ತಿರುವ ಪ್ರಕರಣಗಳು ನಿರಂತರವಾಗಿ ಹೆಚ್ಚುತ್ತಿರುವುದು ಕಳವಳಕಾರಿ.

ಸಂತಾನೋತ್ಪತ್ತಿ, ಮಕ್ಕಳ ಆರೋಗ್ಯ (ಆರ್‌ಸಿಎಚ್) ಪೋರ್ಟಲ್ ಮಾಹಿತಿಯ ಪ್ರಕಾರ, 2023ರಿಂದ 2025ರ ಜುಲೈವರೆಗಿನ ಎರಡು ವರ್ಷ ಏಳು ತಿಂಗಳ ಅವಧಿಯಲ್ಲಿ 14ರಿಂದ 18 ವರ್ಷದೊಳಗಿನ ವಯಸ್ಸಿನ 80,813 ಬಾಲಕಿಯರು ಗರ್ಭಿಣಿಯರಾಗಿದ್ದಾರೆ. ಅಪ್ರಾಪ್ತ ವಯಸ್ಸಿನ ಬಾಲಕಿಯರು ಗರ್ಭಿಣಿಯರಾಗಿರುವ ಜಿಲ್ಲೆಗಳಲ್ಲಿ ಬೆಂಗಳೂರು (8,891), ಬೆಳಗಾವಿ (8,169) ಹಾಗೂ ವಿಜಯಪುರ (6,229) ಮುಂಚೂಣಿಯಲ್ಲಿದ್ದರೆ, ಉಡುಪಿಯಲ್ಲಿ ಅತಿ ಕಡಿಮೆ (182) ಬಾಲಗರ್ಭಿಣಿಯರಿದ್ದಾರೆ. ಶಹಾಪುರದಲ್ಲಿನ ಪ್ರಕರಣ, ಬಾಲಕಿಯರ ಸುರಕ್ಷತೆಯ ಬಗ್ಗೆ ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ ನಿದರ್ಶನದಂತಿದೆ. ಬಾಲಕಿಯರ ಸುರಕ್ಷತೆಗೆ ಸಂಬಂಧಿಸಿದಂತೆ ಶಾಲೆ, ಮನೆಗಳಲ್ಲಿಯೂ ನಿರ್ಲಕ್ಷ್ಯ ವ್ಯಕ್ತವಾಗುವುದಿದೆ. ಶಾಲಾ ಪರಿಸರದಲ್ಲಿ ಬಾಲಕಿಯರ ಸುರಕ್ಷತೆಯ ಕಾಳಜಿ ಶಿಕ್ಷಣ ಸಂಸ್ಥೆಯದ್ದಾದರೆ, ಮನೆಯಲ್ಲಿ ಆ ಜವಾಬ್ದಾರಿಯನ್ನು ಪೋಷಕರೇ ನಿರ್ವಹಿಸಬೇಕಾಗಿದೆ. ಅಪ್ರಾಪ್ತರ ಗರ್ಭಧಾರಣೆಗೆ ಬಾಲ್ಯ ವಿವಾಹ ಸೇರಿದಂತೆ ಹಲವು ಕಾರಣಗಳಿವೆ. ಪ್ರೀತಿಯ ನೆಪದಲ್ಲಿ ಅಮಾಯಕ ಹುಡುಗಿಯರನ್ನು ವಂಚಿಸುವುದು ಹಾಗೂ ಮದುವೆಯಾಗುವುದಾಗಿ ನಂಬಿಸಿ ಲೈಂಗಿಕವಾಗಿ ಬಳಸಿ ಕೊಳ್ಳುವುದು ಹೆಚ್ಚಿನ ಪ್ರಕರಣಗಳಲ್ಲಿ ಕಂಡುಬಂದಿದೆ. ಬಾಲಕಿಯರು ಶಾಲೆ ಬಿಡುವುದು, ಸಾಮಾಜಿಕ ಮಾಧ್ಯಮಗಳ ಬಳಕೆ, ಮೊಬೈಲ್ ಆಮಿಷ ಸೇರಿದಂತೆ ಹಲವು ಕಾರಣಗಳಿಂದಾಗಿ ಎಳೆಯ ವಯಸ್ಸಿನಲ್ಲಿ ತಾಯ್ತನದ ಹೊರೆಯನ್ನು ಹೊರುವಂತಾಗಿದೆ. ಕಾರಣ ಯಾವುದೇ ಆದರೂ, ಬಾಲಗರ್ಭಿಣಿಯರ ಪ್ರಕರಣಗಳು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯವೂ ಆಗಿದೆ. ಆದರೆ, ಬಹುತೇಕ ಪ್ರಕರಣಗಳಲ್ಲಿ 'ಪೋಟ್ಸೋ'ದಡಿ ದೂರು ದಾಖಲಾಗದಿರುವುದು ಕಾನೂನು ಅನುಷ್ಠಾನದ ಗಂಭೀರ ಲೋಪವಾಗಿದೆ. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯವನ್ನು ತಡೆಗಟ್ಟಲು ಹಲವು ಕಾರ್ಯಕ್ರಮಗಳು ಈಗಾಗಲೇ ಜಾರಿಯಲ್ಲಿವೆ. ಶಿಕ್ಷಕರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು, ಗ್ರಾಮ ಲೆಕ್ಕಾಧಿಕಾರಿ, ಪೊಲೀಸ್ ಇನ್‌ಸ್ಪೆಕ್ಟರ್ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಒಳಗೊಂಡ ಕಾವಲು ಸಮಿತಿಗಳನ್ನು ಗ್ರಾಮ ಪಂಚಾಯಿತಿ ಹಂತದಲ್ಲಿ ರಚಿಸಲಾಗಿದೆ. ಈ ಕಾವಲು ಸಮಿತಿಗಳು ಮಕ್ಕಳು ಹಾಗೂ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಯದಂತೆ ಎಚ್ಚರ ವಹಿಸುತ್ತವೆ. ಆದರೆ, ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿರುವುದು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟುವ ಕಾರ್ಯಕ್ರಮಗಳ ವೈಫಲ್ಯವನ್ನು ಸೂಚಿಸುವಂತಿದೆ.

> **ಬಾಲಗರ್ಭಿಣಿಯರ ಪ್ರಕರಣಗಳು ಹೆಚ್ಚುತ್ತಿರುವ ವರದಿ ಪ್ರಕಟಗೊಂಡಿರುವ ಸಂದರ್ಭದಲ್ಲೇ, ಯಾದಗಿರಿ ಜಿಲ್ಲೆಯ ಶಹಾಪುರದ ವಸತಿ ಶಾಲೆಯೊಂದರ ಶೌಚಾಲಯದಲ್ಲಿ ಒಂಬತ್ತನೇ ತರಗತಿಯ ವಿದ್ಯಾರ್ಥಿನಿ ಮಗುವಿಗೆ ಜನ್ಮ ನೀಡಿದ್ದಾಳೆ. ಈ ಪ್ರಕರಣವನ್ನು ವಸತಿಶಾಲೆಯ ಅಧಿಕಾರಿಗಳು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಗಮನಕ್ಕೂ ತಂದಿಲ್ಲ. ಬೇರೆ ಮೂಲಗಳಿಂದ ವಿಷಯ ತಿಳಿದುಕೊಂಡ ಆಯೋಗ, ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡಿದೆ.**

ವಲಸೆ ಕಾರ್ಮಿಕರ ಬಹಳಷ್ಟು ಮಕ್ಕಳಿಗೆ ಊರಿನಲ್ಲಿ ಸಿಗುವ ಸುರಕ್ಷತೆ, ವಲಸೆ ಬಂದ ನಗರಪ್ರದೇಶಗಳಲ್ಲಿ ದೊರೆಯುವುದಿಲ್ಲ. ಶಾಲಾಕಾಲೇಜುಗಳಲ್ಲಿ ಲೈಂಗಿಕತೆಯ ಕುರಿತು ಅರಿವು ಮೂಡಿಸುವ, ಲೈಂಗಿಕ ದೌರ್ಜನ್ಯದ ಬಗ್ಗೆ ಎಚ್ಚರ ಮೂಡಿಸುವ ಕಾರ್ಯಕ್ರಮಗಳು ಹೆಚ್ಚಿನ ಸಂಖ್ಯೆಯಲ್ಲಿ ನಡೆಯಬೇಕಾಗಿದೆ. ಅಗತ್ಯವಿರುವ ಮಕ್ಕಳಿಗೆ ಆಪ್ತಸಮಾಲೋಚನೆ ಒದಗಿಸುವ ಸೌಕರ್ಯವೂ ಶಾಲಾಕಾಲೇಜುಗಳಲ್ಲಿ ಕಡ್ಡಾಯವಾಗಿ ಇರಬೇಕು. ಹದಿನೆಂಟು ವರ್ಷದೊಳಗೆ ಗರ್ಭ ಧರಿಸುವುದು ಹೆಣ್ಣುಮಕ್ಕಳ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಒಳ್ಳೆಯದಲ್ಲ ಹದಿನೆಂಟು ಎನ್ನುವುದು ವಿವಾಹ ಹಾಗೂ ಗರ್ಭಧಾರಣೆಗೆ ಗೊತ್ತುಪಡಿಸಿರುವ ಕನಿಷ್ಠ ವಯಸ್ಸೇ ಹೊರತು, ಅದು ಸಮರ್ಪಕವಾದ ವಯಸ್ಸಲ್ಲ ಎನ್ನುವುದನ್ನು ಮಕ್ಕಳಿಗೆ ಮನದಟ್ಟು ಮಾಡಿಸಬೇಕು. ಹದಿಹರೆಯದಲ್ಲಿ ಮಕ್ಕಳ ಮನಸ್ಸು ಬಹು ಸೂಕ್ಷ್ಮವಾಗಿದ್ದು, ಅವರು ಕುತೂಹಲದಿಂದ ಸಲ್ಲದ ಸಾಹಸಗಳಿಗೆ ಕೈಹಾಕುವುದೂ ಇದೆ. ಹೊಣೆಗೇಡಿ ಸಮೂಹಮಾಧ್ಯಮಗಳು ಕೂಡ ಮಕ್ಕಳ ಮನಸ್ಸು ಚಂಚಲವಾಗಲು ಪೂರಕವಾಗಿವೆ. ಮಕ್ಕಳ ಮನಸ್ಸು ಸ್ವಸ್ಥವಾಗಿ ಇರುವಂತೆ ನೋಡಿಕೊಳ್ಳುವ ಸಾಮೂಹಿಕ ಹೊಣೆಗಾರಿಕೆಯನ್ನು ಸಮಾಜ ನಿರ್ವಹಿಸಬೇಕಾಗಿದೆ.

# ರಾಮಾಯಣ



## ಸುತೀಕ್ಷ್ಣಮುನಿಯ ಆಶ್ರಮಕ್ಕೆ ಶ್ರೀರಾಮನ ಆಗಮನ

• ಹಿಂದಿನ ಸಂಚಿಕೆಯಿಂದ 119ನೆಯ ಅಧ್ಯಾಯ

ಈ ವನದ ಸುತ್ತಲಿರುವ ದುಷ್ಟಮೃಗಗಳು ಶಂಕಾತಂಕವಿಲ್ಲದೆ ನಮ್ಮ ಆಶ್ರಮಗಳಿಗೆ ಬಂದು ತಪಸ್ಸಿಗೆ ಭಂಗವನ್ನುಂಟುಮಾಡುತ್ತವೆ ಇದೊಂದು ದೋಷವಲ್ಲದೆ ಇಲ್ಲಿ ಮತ್ತೊಂದು ದೋಷವಿಲ್ಲ ಎಂದು ನುಡಿದನು. ಆ ಮಾತನ್ನು ಕೇಳಿ ಧೈರ್ಯಗುಣಸಂಪನ್ನನಾದ ಶ್ರೀರಾಮನು ಮುನೀಶ್ವರರೆ ಈ ಆಶ್ರಮಕ್ಕೆ ಬರುವ ದುಷ್ಟ ಪ್ರಾಣಿಗಳೆಲ್ಲವನ್ನೂ ಒಂದೇ ಬಾಣದಿಂದ ಕೊಲ್ಲುತ್ತೇನೆ. ನಿಮಗೆ ಆ ಮೃಗಗಳಿಂದ ಭಯವು ಬೇಡ. ಆದರೆ ಅದರಿಂದ ನಿಮ್ಮ ಮನಸ್ಸಿಗೆ ಖೇದವಾಗುವುದು. ಆದ್ದರಿಂದ ನಾನು ಇಲ್ಲಿ ವಾಸಮಾಡಲಾರೆ ಎಂದು ನುಡಿದನು. ಸಂಧ್ಯಾವಂದನ ಜಪ ಹೋಮಾದಿಗಳನ್ನು ತೀರಿಸಿಕೊಂಡು ಸೀತಾಲಕ್ಷ್ಮಣಸಮೇತನಾಗಿ ಶ್ರೀರಾಮನು ಸುತೀಕ್ಷ ಮುನೀಶ್ವರನ ಸತ್ಕಾರಗಳನ್ನು ಕೈಗೊಂಡು ಆ ರಾತ್ರಿ ಆ ಮುನೀಶ್ವರನ ಆಶ್ರಮದಲ್ಲಿದ್ದನು.

### ಸುತೀಕ್ಷ್ಣಮುನಿಯ ಆಶ್ರಮದಿಂದ ಶ್ರೀರಾಮನ ಪ್ರಯಾಣ

ಈ ಪ್ರಕಾರದಲ್ಲಿ ಶ್ರೀರಾಮನು ಆ ಆಶ್ರಮದಲ್ಲಿ ರಾತ್ರಿಯನ್ನು ಸುಖವಾಗಿ ಕಳೆದು ಮಾರನೆಯ ದಿನ ಪ್ರಾತಃಕಾಲದಲ್ಲಿದ್ದು ಸ್ನಾನಸಂಧ್ಯಾವಂದನಾದಿಗಳನ್ನು ತೀರಿಸಿಕೊಂಡು ಆ ಮುನೀಶ್ವರನ ಸಮೀಪಕ್ಕೆ ಹೋಗಿ ವಂದಿಸಿದನು. ಆಮೇಲೆ ಮುನೀಶ್ವರರೆ, ಲೋಕಪೂಜ್ಯರಾದ ನಿಮ್ಮಿಂದ ಸತ್ಕಾರವನ್ನು ಪಡೆದು ಒಂದು ರಾತ್ರಿಯನ್ನು ಸುಖವಾಗಿ ಕಳೆದೆನು. ನನ್ನ ಸಂಗಡ ಬಂದ ಋಷಿಗಳು ಮುಂದೆ ತೆರಳಬೇಕೆಂದು ನನ್ನನ್ನು ತ್ವರೆಗೊಳಿಸುತ್ತಿದ್ದಾರೆ. ನನಗೂ ದಂಡಕಾರಣ್ಯವನ್ನು ಹೊಕ್ಕು ಅಲ್ಲಿ ವಾಸಮಾಡುತ್ತಿರುವ ಋಷಿಗಳನ್ನು ನೋಡಬೇಕೆಂಬ ಉತ್ಸಾಹ ಬಹಳವಾಗಿದೆ. ಆದ್ದರಿಂದ ಮುಂದೆ ತೆರಳಿಹೋಗುವುದಕ್ಕೆ ನಮಗೆ ಅಪ್ಪಣೆಯನ್ನು ಕೊಡಬೇಕು. ಉರಿಯಿಲ್ಲದ ಯಜ್ಞಪುರುಷನ ರೀತಿಯಲ್ಲಿ ತೇಜಸ್ವಿಗಳಾಗಿ ಸ್ವಧರ್ಮನಿಷ್ಠರಾದ ಈ ಋಷಿಗಳನ್ನು ಕೂಡಿಕೊಂಡು ತೆರಳುತ್ತೇನೆ. ದುರ್ನಿತಿಯಿಂದ ಸಂಪಾದಿಸಿದ ಐಶ್ವರ್ಯವನ್ನು ಹೊಂದಿ ಸತ್ಕುಲಪ್ರಸೂತನಲ್ಲದವನು ದಿನೇ ದಿನೇ ಮದೋನ್ಮತ್ತನಾಗುವಂತೆ, ಸೂರ್ಯನು ತೀಕ್ಷ್ಣವಾದ ಬಿಸಿಲನ್ನು ಹರಡಿ ಸಂತಾಪವನ್ನು ಹೆಚ್ಚು ಮಾಡುವುದಕ್ಕಿಂತ ಮೊದಲೇ ನಾವು ಹೊರಡಬೇಕು ಎಂದು ನುಡಿದು ಸೀತಾಲಕ್ಷ್ಮಣಸಮೇತನಾಗಿ ಆ ಮುನೀಶ್ವರನ ಪಾದಗಳಿಗೆರಗಿದನು. ಸುತೀಕ್ಷ್ಣಮುನೀಶ್ವರನು ರಾಮಲಕ್ಷ್ಮಣರನ್ನು ಕೈ ಹಿಡಿದೆಬ್ಬಿಸಿ ಕುಳ್ಳಿರಿಸಿಕೊಂಡು ಹರ್ಷದಿಂದ ಆಲಿಂಗಿಸಿಕೊಂಡು ಹೀಗೆ ನುಡಿದನು ಪ್ರಿಯಬಂಧು ಶ್ರೀರಾಮ, ನಿನ್ನ ಶರೀರದ ನೆಳಲಂತೆ ನಿನಗೆ ಅನುಕೂಲಳಾದ ಸೀತಾದೇವಿಯನ್ನೂ ನಿನ್ನ ಭ್ರಾತೃವಾದ ಲಕ್ಷ್ಮಣನನ್ನೂ ಕೂಡಿಕೊಂಡು ಸುಖವಾಗಿ ಹೋಗಿ ಬಾ. ನೀನು ಹೋಗುವ ಮಾರ್ಗವೆಲ್ಲವೂ ಸುಖಕರವಾಗಲಿ, ದಾರಿಯಲ್ಲಿ ದಂಡಕಾರಣ್ಯವಾಸಿಗಳಾಗಿ ಬ್ರಹ್ಮಜ್ಞಾನಸಂಪನ್ನರಾದ ಋಷಿಗಳ ಆಶ್ರಮಗಳು ಕಾಣಿಸುವುವು. ಆ ಆಶ್ರಮಗಳಲ್ಲಿ ಮನೋಹರವಾದ ಫಲಪುಷ್ಪಾದಿಗಳಿಂದ ನಿಬಿಡವಾದ ವನಗಳೆರುವುವು. ಅನೇಕ ಮೃಗಸಮೂಹಗಳೂ ಪಕ್ಷಿಸಮೂಹಗಳೂ ಮನೋಹರವಾಗಿ ಪುಷ್ಪಿತವಾದ ತಾವರೆಗಳಿಂದ ತುಂಬಿದ ನಿರ್ಮಲೋದಕಗಳುಳ್ಳ ಕೊಳಗಳೂ ಕೊಳರ್ವಕ್ಕಿಗಳಿಂದ ಮನೋಹರವಾದ ಕೆರೆಗಳೂ ಕಂಗೊಳಿಪ ನದಿಗಳೂ ರಮಣೀಯವಾದ ವನಗಳಲ್ಲಿ ಕಿವಿಗಿಂಪಾಗಿ ಸ್ವರಗೈಯುವ ನವಿಲು ಹಂಸ ಪಾರಾವತ ಗಿಣಿ ಕೋಗಿಲೆಗಳೂ ಇರುವುವು. ನೀನು ಸೀತಾಲಕ್ಷ್ಮಣಸಮೇತನಾಗಿ ಹೋಗಿ ಅಲ್ಲಲ್ಲಿರುವ ಋಷಿಗಳನ್ನು ನೋಡಿ ಶೀಘ್ರದಲ್ಲಿ ತಿರುಗಿ ಬಂದು ನಮಗೆ ದರ್ಶನವನ್ನು ಕೊಡು ಎಂದು ಹೇಳಿದನು, ಶ್ರೀರಾಮನು ಮಹಾಪ್ರಸಾದವೆಂದು ಸುತೀಕ್ಷ್ಣಮುನಿಯ ವಾಕ್ಯವನ್ನಂಗೀಕರಿಸಿ ಸೀತಾಲಕ್ಷ್ಮಣ ಸಮೇತನಾಗಿ ಆ ಮುನೀಶ್ವರನಿಗೆ ಪ್ರದಕ್ಷಿಣ ನಮಸ್ಕಾರಾದಿಗಳನ್ನು ಮಾಡಿ ಹೊರಡಲನುವಾದನು. ಆಗ ಸೀತಾದೇವಿಯು ಬಿಲ್ಲುಬಾಣಖಡ್ಗಗಳನ್ನು ಎತ್ತಿಕೊಡಲು ಅವುಗಳನ್ನು ತೆಗೆದುಕೊಂಡು ಶ್ರೀರಾಮನು ಸುತೀಕ್ಷ ಮುನಿಯ ಆಶ್ರಮದಿಂದ ಮುಂದೆ ತೆರಳಿದನು.

**ಮುಂದುವರಿಯುವುದು...**

# ಬೆರಗು ಮೂಡಿಸಿದ ಸಾಮೂಹಿಕ ಗೆಜ್ಜೆಪೂಜೆ



**ಕಲಾ ಸಾಹಿತ್ಯ**

**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

ನೃತ್ಯರಂಗದಲ್ಲಿ ಸದ್ದಿಲ್ಲದೆ ಸಾಧನಾ ಪಥದಲ್ಲಿ ಸಾಗುತ್ತಿರುವ ನೃತ್ಯಗುರು ಶ್ರೀಮತಿ ಸುನೀತಾ ಅರವಿಂದ್ ನೇತೃತ್ವದ 'ಕಲಾಂತರಿಕ್ಷಂ ನೃತ್ಯ ಕ್ಷೇತ್ರ' ನೃತ್ಯಸಂಸ್ಥೆಯ ಪುಟಾಣಿ ನರ್ತಕಿಯರು ಇತ್ತೀಚೆಗೆ ಜೆ.ಎಸ್.ಎಸ್. ಆಡಿಟೋರಿಯಂನಲ್ಲಿ ಅತ್ಯಾಕರ್ಷಕ ವೇಷಭೂಷಣಗಳಿಂದ ವೇದಿಕೆಯ ಮೇಲೆ ಬಹು ಸೊಗಸಾಗಿ ನರ್ತಿಸಿದ ದೃಶ್ಯ ಅನನ್ಯವಾಗಿತ್ತು. ಸುಂದರ ವಿನ್ಯಾಸದ ನೃತ್ಯ ಸಂಯೋಜನೆ ಮತ್ತು ಕೃತಿಗಳ ಸಮರ್ಥ ಪ್ರಸ್ತುತಿಯಲ್ಲಿ ನೃತ್ಯಗುರು ಸುನೀತಾ ಅರವಿಂದ್ ಅವರ ಬಹು ಪರಿಶ್ರಮದ ಬದ್ಧತೆಯ ತರಬೇತಿ ಎದ್ದು ಕಾಣುತ್ತಿತ್ತು. ಸುಮಾರು ಮೂರು ಗಂಟೆಗಳ ಕಾಲ 75 ಉದಯೋನ್ಮುಖ ನರ್ತಕಿಯರು ರಂಗದ ಮೇಲೆ ಬಹು ಸಾಮರಸ್ಯದಿಂದ ಹೆಜ್ಜೆಗಳನ್ನು ಹಾಕಿ, ತಮ್ಮ ಅಂಗಶುದ್ಧ ನರ್ತನ ವೈಖರಿಯಿಂದ, ಆಂಗಿಕಾಭಿನಯದ ಸೊಗಸಿನಿಂದ, ಮುದನೀಡುವ ಅಭಿನಯದಿಂದ ಕಲಾರಸಿಕರನ್ನು ಆಕರ್ಷಿಸಿದರು.

ವರ್ಣರಂಜಿತ ವಸ್ತ್ರವಿನ್ಯಾಸ, ಬಹು ಆಸ್ಥೆಯಿಂದ ಮಾಡಿದ್ದ ಪ್ರಸಾಧನದ ಕಲಾತ್ಮಕತೆ, ಆಭರಣಗಳ ಆಯ್ಕೆ ಬಹು ವಿಶಿಷ್ಟವೆನಿಸಿತು. ಹಿರಿಯ ಕಲಾವಿದರಷ್ಟೇ ಎಲ್ಲಾ ಅಂಶಗಳಲ್ಲೂ ಪುಟ್ಟಮಕ್ಕಳಿಗೆ ನೀಡಿದ್ದ ಆದ್ಯತೆ ಗಮನಾರ್ಹವಾಗಿತ್ತು. ಶುಭಾರಂಭಕ್ಕೆ ಅರಳು ಪ್ರತಿಭೆಗಳು ಬಹು ಶ್ರದ್ಧೆಯಿಂದ ಸಾಕಾರಗೊಳಿಸಿದ 'ಪುಷ್ಪಾಂಜಲಿ' ಮತ್ತು ವಿಘ್ನ ವಿನಾಯಕನ ಸ್ತುತಿಯ ನರ್ತನಾ ವಿಲಾಸ ಮುದನೀಡಿತು. ಅವರ ಸಂಭ್ರಮ –ಖುಷಿ ಅಲರಿಪು, ಜತಿಸ್ವರಗಳಲ್ಲಿ ಹೊನಲಾಗಿ ಹರಿಯಿತು. ಕಲಾವಿದೆಯರ ಹಸ್ತ–ಮುದ್ರೆಗಳ ಶುದ್ಧತೆಯೊಂದಿಗೆ ರೋಚಕ ಜತಿವಿನ್ಯಾಸ ಅಂಗ ಶುದ್ಧವಾಗಿದ್ದವು, ಅಷ್ಟೇ ನಗುಮುಖಗಳಿಂದ ಮನಮೋಹಕ ಆಂಗಿಕಾಭಿನಯದಲ್ಲಿ ಅಭಿವ್ಯಕ್ತವಾದವು. ಅವರು ಪ್ರದರ್ಶಿಸಿದ ಅರೆಮಂಡಿ, ಆಕಾಶಚಾರಿಗಳ ರಮ್ಯತೆ, ಆತ್ಮವಿಶ್ವಾಸದ ರಂಗಾಕ್ರಮಣ, ಸೊಬಗಿನ ನಡೆ ಉಲ್ಲಾಸ ನೀಡಿದವು. ಮುಂದೆ ಮೀನಾಕ್ಷಿ ಸ್ತುತಿಯಲ್ಲಿನ ದೈವೀಕ ಭಾವ ಆನಂದಾನುಭವ ನೀಡಿತು. ಪುಟಾಣಿ ಕಣ್ಮಣಿಗಳಲ್ಲಿದ್ದ ತಾಳ ಮತ್ತು ಲಯಜ್ಞಾನಗಳು ಅಚ್ಚರಿ ಹುಟ್ಟಿಸಿತು. ನಂತರ ಷಣ್ಮುಖ ಕೌತ್ವಂ, ನಟೇಶ ಕೌತ್ವಂಗಳಲ್ಲಿ ಕಣ್ಮನ ಸೆಳೆದ ವಿಶಿಷ್ಟ ಭಂಗಿಗಳು– ಉತ್ತಮ ವಿನ್ಯಾಸಗಳು ಮನಸೆಳೆದವು. ನರ್ತಕಿಯರು ಮಿಂಚಿನ ವೇಗದ ಜತಿಗಳನ್ನು ಲೀಲಾಜಾಲವಾಗಿ ನಿರ್ವಹಿಸಿದರು.

> **ಪುಟಾಣಿಗಳ ಅದ್ಭುತ ಕಲಾ ನೈಪುಣ್ಯ**

ಮುಂದಿನ 'ಮುರುಗ ಶಬ್ದಂ' ಅತ್ಯಾಕರ್ಷಕವಾಗಿ ಮೂಡಿಬಂತು. ನಂತರ ಪುರಂದರ ದಾಸರ ರಚನೆಯ 'ಜಗನ್ಮೋಹನಾನೇ ಕೃಷ್ಣ' ಕೃತಿಯನ್ನು ಕಲಾವಿದೆಯರು, ವಿವಿಧ ಸಂಚಾರಿಗಳಲ್ಲಿ ಬಹು ಪರಿಣಾಮಕಾರಿಯಾಗಿ ನರ್ತಿಸಿ ಕಲಾರಸಿಕರನ್ನು ಬೆರಗುಗೊಳಿಸಿದರು. ನವೀನ ಮತ್ತು ಕಲಾತ್ಮಕವಾಗಿದ್ದ ನೃತ್ಯ ಸಂಯೋಜನೆಯ ಯಶಸ್ಸು ಗುರು ಸುನೀತಾ ಅವರಿಗೆ ಸಲ್ಲಬೇಕು. 'ಕೃಷ್ಣಂ ವಂದೇ ಜಗದ್ಗುರುಂ'ನಲ್ಲಿ ಅನಾವರಣಗೊಂಡ ಮನೋಜ್ಞ ದಶಾವತಾರಗಳು ಮಕ್ಕಳ ವಯಸ್ಸಿಗೇ ಮೀರಿದ ಅವರ ನೃತ್ಯ ಪ್ರತಿಭೆಗೆ ಸಾಕ್ಷಿಯಾಗಿದ್ದವು. ಕಾರ್ಯಕ್ರಮದ ಪ್ರಾರಂಭದಿಂದ ಕೊನೆಯವರೆಗೂ ಸತತ ರಸಾನುಭವ ಒದಗಿಸಿದ ಪ್ರತಿಭಾನ್ವಿತ ಪುಟಾಣಿಗಳು ಸಾಕಾರಗೊಳಿಸಿದ 'ಸ್ವಾಗತಂ ಕೃಷ್ಣ' ಮನನೀಯವಾಗಿತ್ತು. ಹೃನ್ಮನ ತುಂಬಿದ ಬಾಲಪ್ರತಿಭೆಗಳ ನೃತ್ಯಮಂಜರಿ ಒಂದಕ್ಕಿಂತ ಒಂದು ಸೊಗವೆನಿಸಿದವು. ತೋಡಯ ಮಂಗಳಂ– ಜಯ ಜಾನಕಿ ರಮಣ, ಜಯ ವಿಭೀಷಣ ಶರಣ ಎಂಬ ಮಂಗಳದೊಂದಿಗೆ ತಮ್ಮ ಪ್ರಸ್ತುತಿಯನ್ನು ಸಂಪನ್ನಗೊಳಿಸಿದ ಸಾಮೂಹಿಕ ಗೆಜ್ಜೆಪೂಜೆಯ ಸುಂದರ ಕ್ಷಣಗಳು ಸ್ಮರಣೀಯವಾಗಿದ್ದವು ಎಂದರೆ ಅತಿಶಯೋಕ್ತಿಯಲ್ಲ. ಪುಟಾಣಿಗಳಿಗೆ ಮನದಟ್ಟಾಗುವಂತೆ ನೃತ್ಯಶಿಕ್ಷಣ ನೀಡಿ ಅವರಿಂದ ಇಂಥ ಒಂದು ಶಿಸ್ತುಬದ್ಧ– ಅಚ್ಚುಕಟ್ಟಾದ ಕಾರ್ಯಕ್ರಮವನ್ನು ಅರ್ಪಿಸುವುದು ಬಹು ಶ್ರಮದಾಯಕವೇ ಸರಿ. ಇಂಥ ಒಂದು ಯಶಸ್ವೀ ಕಾರ್ಯಕ್ರಮಕ್ಕೆ, ಅನ್ವರ್ಥಕ 'ಗೆಜ್ಜೆಪೂಜೆ'ಯ ರಂಗಪ್ರವೇಶದ ಸಾರ್ಥಕ ಮುನ್ನಡೆಗೆ ಗುರುಗಳು ಮತ್ತು ಶಿಷ್ಯೆಯರು ಖಂಡಿತಾ ಅಭಿನಂದನೀಯರು. ಕಲಾಂತರಿಕ್ಷಂ ನೃತ್ಯಕ್ಷೇತ್ರ'ದ ಉದಯೋನ್ಮುಖ ವಿದ್ಯಾರ್ಥಿನಿಯರು ಸಾಮೂಹಿಕವಾಗಿ ತಮ್ಮ ಕಾಲ್ಗಳಿಗೆ ನೂಪುರ ತೊಟ್ಟು ರಂಗಪ್ರವೇಶಿಸಿದ ಈ ವಿಶಿಷ್ಟ ಕಾರ್ಯಕ್ರಮದಲ್ಲಿ ಹಿರಿಯ ನೃತ್ಯಗುರು ಡಾ. ಚಿತ್ರಾ ಮತ್ತು ಲೇಖಕಿ ವೈ.ಕೆ.ಸಂಧ್ಯಾ ಶರ್ಮ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.




# ವಿಶ್ವಾಸ್.ಡಿ.ಗೌಡರ ಆರನೇ ಕೃತಿ ಭಾವನೆಗಳ ಪ್ರತಿರೂಪ ಲೋಕಾರ್ಪಣೆ

• ಉದಯವಾಹಿನಿ, ಹಾಸನ

ಆ. 31, 2025 ಭಾನುವಾರ ಬೆಳಿಗ್ಗೆ 9:30ಕ್ಕೆ ಹಾಸನದ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಸಾಹಿತ್ಯ ಸಾಂಸ್ಕೃತಿಕ ಸಡಗರ ಜರುಗಲಿದೆ. ಕಾರ್ಯಕ್ರಮದಲ್ಲಿ ಧೀಮಂತ ನಾಯಕ ಎಚ್. ಜ್ವಾಲನಯ್ಯ ಅವರ ಸ್ಮರಣಾರ್ಥ ಕೃತಿ ಬಿಡುಗಡೆ, ಕಾವ್ಯಗಾನ, ಕಲಾ ಕುಂಚ, ಭರತನಾಟ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜನೆಯಾಗಿದ್ದು, ಸಾಧಕರಿಗೆ ರಾಜ್ಯಮಟ್ಟದ ಸನ್ಮಾನ ಕಾರ್ಯಕ್ರಮವೂ ನಡೆಯಲಿದೆ. ಇದೇ ಸಂದರ್ಭದಲ್ಲಿ ಸಕಲೇಶಪುರದ ಖ್ಯಾತ ಬರಹಗಾರ ವಿಶ್ವಾಸ್.ಡಿ.ಗೌಡರ ಆರನೇ ಕೃತಿ ಭಾವನೆಗಳ ಪ್ರತಿರೂಪವನ್ನು ಬಿಡುಗಡೆ ಮಾಡಲಾಗುತ್ತದೆ. ಕತ್ತರಿ ಘಟ್ಟ, ಹರಿಸೇವಾ, ನೆನಪುಗಳ ಖಾತೆ, ಬಾಳೊಂದು ಚೈತ್ರಾಮಯ, ಚೈತ್ರದ ಚೈತನ್ಯ, ಚಿಂತನ ಚೈತ್ರ ಕೃತಿಗಳ ಮೂಲಕ ಹೆಸರು ಗಳಿಸಿರುವ ಇವರು, ಪತ್ರಿಕಾ ಅಂಕಣ ಬರಹಗಳ ಮೂಲಕವೂ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅನೇಕ ವಿಮರ್ಶಾ ಕೃತಿಗಳು ಮುದ್ರಣ ಹಂತದಲ್ಲಿವೆ.

> **ಹಾಸನದಲ್ಲಿ ಸಾಹಿತ್ಯ ಸಡಗರ**

ಕಾರ್ಯಕ್ರಮವು ಡಿಆರ್‌ಓ ಬೆಂಗಳೂರು ಸಂಸ್ಥೆಯ ಹಿರಿಯ ವಿಜ್ಞಾನಿ ಶ್ರೀ ಸ್ವಾಮಿ ನಾಯಕ್ ರವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ನಿವೃತ್ತ ಕಾರ್ಯಕ್ರಮ ನಿರ್ವಾಹಕ (ಆಕಾಶವಾಣಿ) ಡಾ. ವಿಜಯ್ ಅಂಗಡಿ ಅವರ ಗೌರವ ಉಪಸ್ಥಿತಿಯಲ್ಲಿ, ಉದಯವರದಿ ಪತ್ರಿಕೆಯ ಸಂಪಾದಕ ಶ್ರೀವೆಂಕಟೇಶ ರವರು ಕವನ ಸಂಕಲನವನ್ನು ಬಿಡುಗಡೆ ಮಾಡುವರು ಎಂದು ಬರಹಗಾರರ ಸಂಘ ಹಾಸನ ಜಿಲ್ಲಾ ಘಟಕದ ಅಧ್ಯಕ್ಷ ಶ್ರೀ ಸುಂದರೇಶ್.ಡಿ. ಉಡುವಾರೆ ತಿಳಿಸಿದ್ದಾರೆ.

# ಬೆಣ್ಣೆಯಲ್ಲಿರುವ ಆರೋಗ್ಯಕರ ಗುಣಗಳು




ಬೆಣ್ಣೆಯಲ್ಲಿರುವ ಕೊಬ್ಬಿನಂಶವಾದ ಕೋಸ್ಟಿಂಗೊಲಿಪಿಡ್ಸ್ ಜಠರಕ್ಕೆ ಬ್ಯಾಕ್ಟೀರಿಯಾ ಸೋಂಕು ತಾಗದಂತೆ ರಕ್ಷಣೆ ಮಾಡುತ್ತದೆ. ದೇಹದಲ್ಲಿ ವಿಟಮಿನ್ ಎ ಕೊರತೆಯಿಂದ ಥೈರಾಯ್ಡ್ ಬರುತ್ತದೆ. ಆದರೆ ಬೆಣ್ಣೆಯಲ್ಲಿ ವಿಟಮಿನ್ ಎ ಅಧಿಕ ಇರುವುದರಿಂದ ಥೈರಾಯ್ಡ್ ಗ್ರಂಥಿ ಸರಿಯಾಗಿ ಕಾರ್ಯನಿರ್ವಹಿಸುವಂತೆ ಮಾಡುತ್ತದೆ.ಬೆಣ್ಣೆಯಲ್ಲಿ ವೂಲ್ಟನ್ ಫ್ಯಾಕ್ಟರ್ ಎಂಬ ಅಂಶವಿದ್ದು ಇದು ಮೂಳೆಗಳ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ತುಪ್ಪ ಹಾಗೂ ಬೆಣ್ಣೆ ಎರಡೂ ಆರೋಗ್ಯಕರವಾದ ಆಹಾರವಾಗಿದ್ದು ಅದರಲ್ಲಿರುವ ಪೋಷಕಾಂಶಗಳು ತುಂಬಾ ಒಂದೇ ರೀತಿ ಇದೆ.

ತುಪ್ಪ ಹಾಗೂ ಬೆಣ್ಣೆ ಅದರದೇ ಆದ ರುಚಿ ಹಾಗೂ ಆರೋಗ್ಯಕರ ಗುಣಗಳನ್ನು ಹೊಂದಿದ್ದು ಅವರ ಆರೋಗ್ಯಕ್ಕೆ ಯಾವುದು ಸರಿ ಅನಿಸುತ್ತದೆಯೋ ಅದನ್ನು ಬಳಸಬಹುದು. ಆದರೆ ಲ್ಯಾಕ್ಟೋಸ್ ಅಸಮತೋಲನ ಇರವವರಿಗೆ ಬೆಣ್ಣೆಗಿಂತ ತುಪ್ಪ ಅತ್ಯುತ್ತಮವಾದ ಆಹಾರವಾಗಿದೆ. ಕೆಲವರಿಗೆ ಬೆಣ್ಣೆ ತಿಂದರೆ ಅಲರ್ಜಿ ಉಂಟಾಗುತ್ತದೆ. ಅದಕ್ಕೆ ಕಾರಣ ಅದರಲ್ಲಿರುವ ಲ್ಯಾಕ್ಟೋಸ್ ಅಂಶ. ಇದರಲ್ಲಿರುವ ಹಾಲಿನ ಪ್ರೊಟೀನ್ ಲ್ಯಾಕ್ಟೋಸ್ ಅಸಮತೋಲನ ಇರುವ ವ್ಯಕ್ತಿಯಲ್ಲಿ ಗುಳ್ಳೆಗಳು, ತುರಿಕೆ, ಅಸ್ತಮಾ ಉಲ್ಬಣವಾಗುವಂತಹ ತೊಂದರೆಗಳು ಕಾಣಿಸಿಕೊಳ್ಳುವುದು. ಆದರೆ ತುಪ್ಪದಲ್ಲಿ ಹಾಲಿನ ಯಾವುದೇ ಪ್ರೊಟೀನ್ ಅಂಶವಿಲ್ಲದಿರುವ ಕಾರಣ ಲ್ಯಾಕ್ಟೋಸ್ ಅಸಮತೋಲನ ಇರುವವರಿಗೆ ತುಪ್ಪ ಒಳ್ಳೆಯದು.

# ವಯಸ್ಸು 51 ಆದ್ರೂ ಯೌವನದಿಂದ ಕೂಡಿರುವ ಮಲೈಕಾ ಅರೋರಾ ಬ್ಯೂಟಿ ಸೀಕ್ರೆಟ್



ಬಾಲಿವುಡ್ ನಟಿ ಮಲೈಕಾ ಪ್ರತಿದಿನ ಕುಡಿಯುವ ಈ ಪಾನೀಯವು ಅವರ ತ್ವಚೆಯನ್ನು ಕೋಮಲವಾಗಿಸುವುದಲ್ಲದೆ, ಅವರ ಸೌಂದರ್ಯವನ್ನು ಇನ್ನಷ್ಟು ಹೆಚ್ಚಿಸುತ್ತದೆ ಎನ್ನುತ್ತಾರೆ. ಬಾಲಿವುಡ್ ನಟಿ ಮಲೈಕಾ ಅರೋರಾ ವಯಸ್ಸು 51 ಆದರೂ ಇನ್ನೂ ಫಿಟ್ ಆಗಿದ್ದಾರೆ. ತಮ್ಮ ಸೌಂದರ್ಯವನ್ನು ಕಾಪಾಡಿಕೊಂಡು ಬಂದಿದ್ದಾರೆ. ಇಂದಿಗೂ ಇತರ ಸಣ್ಣ ವಯಸ್ಸಿನ ನಟಿಯರನ್ನೂ ನಾಚಿಸುವಂತಹ ಸೌಂದರ್ಯವನ್ನು ಹೊಂದಿದ್ದಾರೆ. ತಮ್ಮ ಫಿಟ್ನೆಸ್ ಮತ್ತು ಉತ್ತಮ ಚರ್ಮಕ್ಕೆ ಹೆಸರುವಾಸಿಯಾಗಿರುವ ಇವರ ಚರ್ಮ, ತ್ವಚೆ ಇಷ್ಟೊಂದು ಕೋಮಲವಾಗಿ, ಸುಂದರವಾಗಿರಲು ಕಾರಣವೇನು ಗೊತ್ತಾ?



**ಕರುಳಿನ ಆರೋಗ್ಯ ಕಾಪಾಡುವುದು ಮುಖ್ಯ:** ನಿಮಗೆ ಗೊತ್ತಾ? ನಮ್ಮ ಕರುಳಿನ ಆರೋಗ್ಯ ಚೆನ್ನಾಗಿದ್ದರೆ ಮಾತ್ರ ಚರ್ಮವೂ ಹೊಳೆಯುತ್ತದೆ. ಮೊದಲು ನಮ್ಮ ಗಟ್ ಹೆಲ್ತ್‌ನ್ನು ಕಾಪಾಡಿಕೊಳ್ಳಬೇಕು. ಮಲೈಕಾ ಕೂಡಾ ತಮ್ಮ ತ್ವಚೆ ಸುಂದರವಾಗಿರಬೇಕಾ ಆದರೆ ಕೆಲವೊಂದು ಪಾನೀಯಗಳನ್ನು ಕುಡಿಯುತ್ತಾರಂತೆ. ಉತ್ತಮ ಜೀರ್ಣಕ್ರಿಯೆಗಾಗಿ ಮಲೈಕಾ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಓಂಕಾಳು, ಜೀರಿಗೆ ಮತ್ತು ಸೋಂಪು ಕಾಳಿನ ಪಾನೀಯವನ್ನು ಕುಡಿಯುತ್ತಾರೆ. ಇವುಗಳ ಸಂಯೋಜನೆಯು ಜೀರ್ಣಕ್ರಿಯೆಗೆ ಒಳ್ಳೆಯದು ಮಾತ್ರವಲ್ಲದೆ ತೂಕವನ್ನು ಕಡಿಮೆ ಮಾಡುತ್ತದೆ ಮತ್ತು ಚರ್ಮವನ್ನು ಹೊಳೆಯುವಂತೆ ಮಾಡುತ್ತದೆ .

# ಈ ನಾಲ್ಕು ಬಗೆಯ ಆಹಾರಗಳನ್ನು ಸೇವಿಸಬಾರದು ಎನ್ನುತ್ತಾರೆ ಸದ್ಗುರು

ಸಕ್ಕರೆ ಮತ್ತು ಧಾನ್ಯಗಳಿಂದ ಹಿಡಿದು ಹಾಲಿನವರೆಗೆ ನಾವು ಪ್ರತಿದಿನ ಸೇವಿಸುವ ಅನೇಕ ಸಾಮಾನ್ಯ ಆಹಾರಗಳಿವೆ. ಸಾಂಪ್ರದಾಯಿಕವಾಗಿ ನಾವು ಈ ಆಹಾರಗಳನ್ನು ಆರೋಗ್ಯಕರ ಮತ್ತು ಪೋಷಕಾಂಶಗಳಿಂದ ತುಂಬಿವೆ ಎಂದು ಪರಿಗಣಿಸಿ ಸೇವಿಸುತ್ತಿದ್ದೇವೆ. ಆದರೆ ಸದ್ಗುರುಗಳು ನಾವು ದಿನನಿತ್ಯ ಸೇವಿಸುವ ಆಹಾರಗಳಲ್ಲಿ ಹಲವು ಮಾನವ ದೇಹಕ್ಕೆ ಒಳ್ಳೆಯದಲ್ಲದ ಆಹಾರಗಳಿವೆ. ಅವುಗಳನ್ನು ತಪ್ಪಿಸಬೇಕು ಎಂದು ಹೇಳುತ್ತಾರೆ.

**ಸಕ್ಕರೆ; ಖಾಲಿ ಕ್ಯಾಲೋರಿಗಳು, ಪೌಷ್ಟಿಕಾಂಶವಿಲ್ಲ:** ವಾಣಿಜ್ಯಿಕವಾಗಿ ಲಭ್ಯವಿರುವ ಸಕ್ಕರೆಯನ್ನು ರಾಸಾಯನಿಕವಾಗಿ ಸಂಸ್ಕರಿಸಲಾಗುತ್ತದೆ. ಯುನೈಟೆಡ್ ಸ್ಟೇಟ್ಸ್ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ಪ್ರಕಾರ, ಅಂತಹ ಸಂಸ್ಕರಿಸಿದ ಸಕ್ಕರೆಯು ಖಾಲಿ ಕ್ಯಾಲೋರಿಗಳನ್ನು ಒದಗಿಸುತ್ತದೆ ಏಕೆಂದರೆ ಸಂಸ್ಕರಣಾ ಪ್ರಕ್ರಿಯೆಯು ಬಹುತೇಕ ಎಲ್ಲಾ ಜೀವಸತ್ವಗಳು ಮತ್ತು ಖನಿಜಗಳನ್ನು ತೆಗೆದುಹಾಕುತ್ತದೆ, ಸಕ್ಕರೆಯ ಪೌಷ್ಟಿಕಾಂಶದ ಮೌಲ್ಯವನ್ನು ತೀವ್ರವಾಗಿ ಕಡಿಮೆ ಮಾಡುತ್ತದೆ.




**ಹಾಲು; ಹೆಚ್ಚಿನ ವಯಸ್ಕರಿಂದ ಜೀರ್ಣವಾಗುವುದಿಲ್ಲ:** ಪೋಸ್ಟ್‌ನಲ್ಲಿ ಸದ್ಗುರುಗಳು 3 ವರ್ಷದೊಳಗಿನ ಮಕ್ಕಳಲ್ಲಿ ಮಾತ್ರ ಸಂಪೂರ್ಣವಾಗಿ ಜೀರ್ಣಿಸಿಕೊಳ್ಳಲು ಅಗತ್ಯವಾದ ಕಿಣ್ವಗಳಿವೆ ಎಂದು ಉಲ್ಲೇಖಿಸಿದ್ದಾರೆ. ಜಗತ್ತಿನ ಕೆಲವು ಪ್ರದೇಶಗಳನ್ನು ಹೊರತುಪಡಿಸಿ, ಪ್ರಪಂಚದಾದ್ಯಂತದ ಹೆಚ್ಚಿನ ವಯಸ್ಕರಿಗೆ ಹಾಲು ಜೀರ್ಣವಾಗುವುದಿಲ್ಲ. ಜೀರ್ಣವಾಗದ ಹಾಲು ಲೋಳೆಯನ್ನು ರೂಪಿಸುತ್ತದೆ ಮತ್ತು ಆಲಸ್ಯವನ್ನು ಉಂಟುಮಾಡುತ್ತದೆ. ಹೌದು, ಹಾಲು ಸಾಂಪ್ರದಾಯಿಕವಾಗಿ ಕ್ಯಾಲ್ಸಿಯಂನ ಉತ್ತಮ ಮೂಲವಾಗಿದೆ. ಆದರೆ ಈಗ ಹಾಲಿನ ಹಲವಾರು ಇತರ ಉತ್ತಮ ಮೂಲಗಳೂ ಇವೆ. ಅವುಗಳನ್ನು ಬಳಸಬಹುದು.



**ಟೀ-ಕಾಫಿ; ದೀರ್ಘಾವಧಿಯಲ್ಲಿ ತ್ರಾಣವನ್ನು ನಾಶಪಡಿಸುತ್ತದೆ:** ಚಹಾ ಮತ್ತು ಕಾಫಿ ನರ ಉತ್ತೇಜಕಗಳಾಗಿವೆ ಎಂದು ಅವರು ಹೇಳುತ್ತಾರೆ.



ಇದನ್ನು ಕುಡಿಯೋದ್ರಿಂದ ನರ ಉತ್ತೇಜಕಗಳು ಸ್ವಲ್ಪ ಸಮಯದವರೆಗೆ ಶಕ್ತಿಯ ಅನುಭವವನ್ನು ಉಂಟುಮಾಡುತ್ತವೆ. ನಂತರ ದೇಹದ ಶಕ್ತಿಯ ಮಟ್ಟ, ಕಡಿಮೆಯಾಗುತ್ತವೆ. ನರ ಉತ್ತೇಜಕಗಳನ್ನು ಅತಿಯಾಗಿ ಸೇವಿಸುವುದರಿಂದ ದೀರ್ಘಾವಧಿಯಲ್ಲಿ ತ್ರಾಣ ಕಳೆದುಕೊಳ್ಳುತ್ತವೆ. ಇದರ ಅತಿಯಾದ ಸೇವನೆಯು ದೇಹವು ಶಕ್ತಿಯನ್ನು ಸಂಗ್ರಹಿಸುವ ಸಾಮರ್ಥ್ಯದ ಮೇಲೆ ಪರಿಣಾಮ ಬೀರುತ್ತದೆ.



**ಸಂಸ್ಕರಿಸಿದ ಧಾನ್ಯಗಳು; ಪೋಷಕಾಂಶಗಳು, ಖನಿಜಗಳು ಮತ್ತು ನಾರಿನಿಂದ ಕೂಡಿದೆ:** ಸದ್ಗುರುಗಳು ನೈಸರ್ಗಿಕ ಸ್ಥಿತಿಯಲ್ಲಿರುವ ಧಾನ್ಯವು ರಚನಾತ್ಮಕವಾಗಿ ಮೂರು ಘಟಕಗಳಿಂದ ಕೂಡಿದೆ. ಇದರಲ್ಲಿ ಎಂಡೋಸ್ಪರ್ಮ್, ಸೂಕ್ಷ್ಮಾಣು, ಹೊಟ್ಟು ಸೇರಿವೆ. ಎಂಡೋಸ್ಪರ್ಮ್‌ನ ಪ್ರಾಥಮಿಕ ಅಂಶವೆಂದರೆ ಪಿಷ್ಟ, ಇದು ಮೊಳಕೆಯೊಡೆಯುವ ಬೀಜಕ್ಕೆ ಪ್ರಮುಖ ಶಕ್ತಿ ಪೂರೈಕೆಯಾಗಿ ಕಾರ್ಯನಿರ್ವಹಿಸುತ್ತದೆ. ಆದಾಗ್ಯೂ ಜೀವಸತ್ವಗಳು, ಖನಿಜಗಳು, ನಾರು ಅಥವಾ ಫೈಟೊಕೆಮಿಕಲ್‌ಗಳ ವಿಷಯಕ್ಕೆ ಬಂದಾಗ ಎಂಡೋಸ್ಪರ್ಮ್ ತುಲನಾತ್ಮಕವಾಗಿ ವಿರಳವಾಗಿದೆ. ಇದಕ್ಕೆ ವ್ಯತಿರಿಕ್ತವಾಗಿ ಹೊಟ್ಟು, ಸೂಕ್ಷ್ಮಾಣು, ಬಿ ಜೀವಸತ್ವಗಳು, ಅಮೈನೋ ಆಮ್ಲಗಳು, ಫೈಟೊಕೆಮಿಕಲ್‌ಗಳು ಕ್ಯಾಲ್ಸಿಯಂ, ಮೆಗ್ನೀಸಿಯಮ್, ಪೊಟ್ಯಾಸಿಯಮ್, ಸೋಡಿಯಂ ಮತ್ತು ಕಬ್ಬಿಣದಂತಹ ಖನಿಜಗಳನ್ನು ಒಳಗೊಂಡಂತೆ ಈ ಪೋಷಕಾಂಶಗಳಲ್ಲಿ ಹೆಚ್ಚಿನವುಗಳಿಂದ ಸಮೃದ್ಧವಾಗಿದೆ.

ಅನೇಕ ಬಾರಿ ಧಾನ್ಯಗಳನ್ನು ವಾಣಿಜ್ಯಿಕವಾಗಿ ಮಾರಾಟ ಮಾಡುವ ಮೊದಲು, ಅವುಗಳನ್ನು ಹೆಚ್ಚಾಗಿ ವಿನ್ಯಾಸ ಮತ್ತು ಶೆಲ್ಫ್ ಜೀವಿತಾವಧಿಯನ್ನು ಸುಧಾರಿಸಲು ಸಂಸ್ಕರಿಸಲಾಗುತ್ತದೆ. ಸಂಸ್ಕರಿಸಿದ ಧಾನ್ಯಗಳು ಎಂದು ಕರೆಯಲ್ಪಡುವ ಈ ಧಾನ್ಯಗಳು ಹೊಟ್ಟು ಮತ್ತು ಸೂಕ್ಷ್ಮಾಣುವನ್ನು ಬೇರ್ಪಡಿಸಿ ತಿರಸ್ಕರಿಸುವ ಪ್ರಕ್ರಿಯೆಯ ಮೂಲಕ ಹೋಗುತ್ತವೆ, ಪಿಷ್ಟ ಎಂಡೋಸ್ಪರ್ಮ್ ಅನ್ನು ಮಾತ್ರ ಬಿಡುತ್ತವೆ. ಇದರ ಪರಿಣಾಮವಾಗಿ ಹೆಚ್ಚಿನ ಪೋಷಕಾಂಶಗಳು, ಖನಿಜಗಳು, ಆಹಾರದ ನಾರು ಕಳೆದುಹೋದ ಧಾನ್ಯವಾಗುತ್ತದೆ.



ಚರಂಡಿಗಳಲ್ಲಿ ತ್ಯಾಜ್ಯ ತುಂಬಿಕೊಂಡಿದೆ. ಹಂದಿ, ಬೀದಿನಾಯಿಗಳ ಹಾವಳಿಯೂ ಇದ್ದು, ಮುಖ್ಯ ರಸ್ತೆಯಲ್ಲಿ ಬೀದಿದೀಪ ಇಲ್ಲವಾಗಿದೆ

# ಮನೆಗಳಿಗೆ ಮಳೆ ನೀರು ನುಗ್ಗುವ ಸಮಸ್ಯೆ ಪರಿಹರಿಸಲು ನಿವಾಸಿಗಳ ಮೊರೆ

• **ಉದಯವಾಹಿನಿ ಧಾರವಾಡ**

ನಗರದ 6ನೇ ವಾರ್ಡ್, ಹಳೆಯ ಬಡಾವಣೆಗಳು, ಕಿರಿದಾದ ಓಣಿಗಳಿರುವ ಕಿಕ್ಕಿಂಧೆಯಂಥ ಪ್ರದೇಶವಾಗಿದ್ದರೂ ವಿವಿಧ ಬೀದಿಗಳಲ್ಲಿ ಇಂಟರ್‌ಲಾಕಿಂಗ್ ಸಿಮೆಂಟ್ ಇಟ್ಟಿಗೆಗಳ ಅಳವಡಿಕೆ, ಅಭಿವೃದ್ಧಿಪಡಿಸಿದ ಎಂ.ಆರ್. ನಗರವು ಉದ್ಯಾನದ ಮೂಲಕ ಗಮನ ಸೆಳೆದಿದೆ. ಇಲ್ಲಿ ಹಲವೆಡೆ ಕಾಂಕ್ರೀಟ್ ರಸ್ತೆ ನಿರ್ಮಾಣದೊಂದಿಗೆ

**ಹಲವೆಡೆ ಕಾಂಕ್ರೀಟ್ ರಸ್ತೆ ನಿರ್ಮಾಣ**

ಚುನುಮರಿ ಬಟ್ಟಿ, ಮೇದಾರ ಓಣಿ, ಹೂಗಾರ ಓಣಿ, ಬಾರಾ ಇಮಾಮ್ ಗಲ್ಲಿ, ಮಸ್ತಾನ್ ಪ್ಲಾಟ, ಜಾಮುದ್ದೀನ್ ಕಾಲೋನಿ, ಕಂಠಿ ಓಣಿಯಲ್ಲಿ ಇಂಟರ್ ಲಾಕಿಂಗ್ ಸಿಮೆಂಟ್ ಇಟ್ಟಿಗೆಗಳನ್ನು ಅಳವಡಿಸಲಾಗಿದೆ.

ಎಂ.ಆರ್. ನಗರದ ಉದ್ಯಾನದಲ್ಲಿ ವಿಹಾರ ಪಥ, ವ್ಯಾಯಾಮ ಉಪಕರಣ, ಆಟಿಕೆಗಳು, ವಿದ್ಯುತ್ ದೀಪಗಳನ್ನು ಅಳವಡಿಸಲಾಗಿದೆ. ಭದ್ರತೆಗಾಗಿ ವಿವಿಧೆಡೆ ಸಿಸಿ ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಗೊಲ್ಲರ ಓಣಿಯ ಒಂದನೇ ವೃತ್ತದಲ್ಲಿ ಸ್ವಾಗತ ಕಮಾನು ನಿರ್ಮಾಣ ಸೇರಿದಂತೆ ವಿವಿಧೆಡೆ ಸಿಸಿ ರಸ್ತೆ ಹಾಗೂ ಗಟಾರ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.

ಹಾವೇರಿ ಪೇಟ ಬಡಾವಣೆಯ ಕೆಲವೆಡೆ ಮಣ್ಣಿನ ರಸ್ತೆಗಳಿವೆ. ಮಳೆಯಾದಾಗ ಇವು ಕೆಸರುಮಯವಾಗುತ್ತವೆ. ಕಂಠಿ ಓಣಿಯ ಉರ್ದು ಮಾದರಿ ಶಾಲೆಯ (ನಂಬರ್ 3) ಪಕ್ಕ ಸೇರಿದಂತೆ ಹಲವೆಡೆ ಕಸ ರಾಶಿ ಬಿದ್ದಿದೆ. ಕೆಲವೆಡೆ ಚರಂಡಿಗಳಲ್ಲಿ ತ್ಯಾಜ್ಯ ತುಂಬಿಕೊಂಡಿದೆ. ಹಂದಿ, ಬೀದಿನಾಯಿಗಳ ಹಾವಳಿಯೂ ಇದ್ದು, ದೈವಜ್ಞ ನಗರದ ಮುಖ್ಯ ರಸ್ತೆಯಲ್ಲಿ ಬೀದಿದೀಪ ಇಲ್ಲವಾಗಿದೆ' ಎನ್ನುತ್ತಾರೆ ಇಲ್ಲಿನ ನಿವಾಸಿಗಳು.


ಉದಯವಾಹಿನಿ ಚಿತ್ರ

> ಹಾವೇರಿಪೇಟೆ ಕಂಠಿ ಓಣಿ ನದಾಫ್ ಓಣಿ ಕುರುಬರ ಓಣಿ ಸಾಲೇಕರ್ ಓಣಿ ದ್ಯಾಮವ್ವನ ಗುಡಿ ಆಸುಪಾಸಿನ ಪ್ರದೇಶದಲ್ಲಿ ಮನೆಗಳಿಗೆ ನೀರು ನುಗ್ಗುತ್ತದೆ. ಸಮಸ್ಯೆ ಪರಿಹರಿಸಿಲ್ಲ.
> **-ಸಂಜೀವ ಆರ್.ಭೋಸ್ಲೆ**, ನಿವಾಸಿ ಹಾವೇರಿಪೇಟೆ

> ಮಳೆ ನೀರು ಮನೆಗಳಿಗೆ ನುಗ್ಗುವ ಸಮಸ್ಯೆ ಪರಿಹಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ನೀರು ಪೂರೈಕೆ ಹಾಳಾದ ರಸ್ತೆಗಳ ಅಭಿವೃದ್ಧಿಗೆ ಗಮನಹರಿಸಲಾಗುವುದು
> **-ದಿಲ್‌ಷಾದ್ ಬೇಗಂ ನದಾಫ್** ಸದಸ್ಯೆ ಆರನೇ ವಾರ್ಡ್

**8 ದಿನಕ್ಕೊಮ್ಮೆ ನೀರು ಪೂರೈಕೆ**

ವಾರ್ಡ್‌ನಲ್ಲಿ ಎಂಟು ದಿನಕ್ಕೊಮ್ಮೆ ನೀರು ಪೂರೈಸಲಾಗುತ್ತದೆ. ಹಂಡೆ ಡ್ರಮ್ ತೊಟ್ಟಿಗಳಲ್ಲಿ ಸಂಗ್ರಹಿಸಬೇಕಾದ ಸ್ಥಿತಿ ಇದೆ. ಕೆಲ ಸಲ ಮಣ್ಣು ಮಿಶ್ರಿತ ನೀರು ಬರುತ್ತಿದೆ. ಗಟಾರ ಸಮಸ್ಯೆಯಿಂದ ಸೊಳ್ಳೆ ಕಾಟ ಹೆಚ್ಚಾಗಿದೆ' ಎಂದು ಕಂಠಿ ಓಣಿ ನಿವಾಸಿ ಫಾತಿಮಾ ಗೋಲಂದಾಜ ಹೇಳಿದರು. 24×7 ನೀರು ಪೂರೈಕೆ ಯೋಜನೆ ಪೈಪ್ ಅಳವಡಿಕೆ ಕಾಮಗಾರಿ ನಡೆಯುತ್ತಿದ್ದು ಹಲವೆಡೆ ರಸ್ತೆಯನ್ನೂ ಅಗೆಯಲಾಗಿದೆ. ಇದರಿಂದ ವಾಹನಗಳ ಸಂಚಾರಕ್ಕೆ ಸಮಸ್ಯೆಯಾಗಿದೆ ಎನ್ನುತ್ತಾರೆ ನಿವಾಸಿಗಳು. ಪ್ರಮುಖ ಬಡಾವಣೆಗಳು ಹಾವೇರಿ ಪೇಟ ಓಣಿ ಕಂಠಿ ಓಣಿ ಹೂಗಾರ ಓಣಿ ಇಂಡಿ ಓಣಿ ಬಾರಾಮುಲ್ಲಾ ಓಣಿ ಗೊಲ್ಲರ ಓಣಿ ಕಡ್ಡಿ ಬಡಾವಣೆ ಪೆಂಡಾರ ಓಣಿ ನಿಜಾಮುದ್ದೀನ್ ಕಾಲೋನಿ ಮಸ್ತಾನ ಪ್ಲಾಟ ದೈವಜ್ಞ ನಗರ ಎಂ.ಆರ್. ನಗರದ 7 ರಿಂದ 10 ನೇ ಕ್ರಾಸ್ ಬೇಡಿಕೆಗಳು ಹೂಗಾರ ಓಣಿಯಲ್ಲಿ ಉದ್ಯಾನ ನಿರ್ಮಿಸಬೇಕು ಗೊಲ್ಲರ ಓಣಿಯಲ್ಲಿ ಸಮುದಾಯ ಭವನ ನಿರ್ಮಿಸಬೇಕು ಗೊಲ್ಲರ ಕಾಲೋನಿಯಲ್ಲಿ ಅಂಗನವಾಡಿ ಆರಂಭಿಸಬೇಕು ಸಂಕ್ಷಿಪ್ತ ಪರಿಚಯ ವಾರ್ಡ್ ಸಂಖ್ಯೆ;6 ಸದಸ್ಯೆ, ದಿಲ್‌ಷಾದ್ ಬೇಗಂ ನದಾಫ್ ಜನಸಂಖ್ಯೆ: 13688 ಒಟ್ಟು ಆಸ್ತಿ: 1719 ಅಂಗನವಾಡಿ ಕೇಂದ್ರಗಳು:11 ವಿದ್ಯುತ್ ಕಂಬ;301 ವಿದ್ಯುತ್ ದೀಪ;281 ದೂರವಾಣಿ ಸಂಖ್ಯೆ: 9845710008

## ಲೋಕಾಯುಕ್ತರ ಬಲೆಗೆ ಕೇಸ್ ವರ್ಕರ್

• **ಉದಯವಾಹಿನಿ ಪುತ್ತೂರು**

ಸಾಗುವಳಿ ಚೀಟಿ ಮೂಲಕ ಮಂಜೂರಾದ ಜಾಗ ಮಾರಾಟ ಮಾಡಲು ನಿರಾಕ್ಷೇಪಣಾ ಪತ್ರ ನೀಡಲು ಲಂಚ ಪಡೆದ ಪುತ್ತೂರು ತಹಶೀಲ್ದಾರ್ ಕಚೇರಿಯ ಭೂ ಸುಧಾರಣಾ ಶಾಖೆಯ ಕೇಸ್ ವರ್ಕರ್ ಸುನಿಲ್ ಸಂಜೆ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದು, ಪುತ್ತೂರು ತಹಶೀಲ್ದಾರ್ ವಿರುದ್ಧವೂ ಪ್ರಕರಣ ದಾಖಲಾಗಿದೆ.

ಪುತ್ತೂರಿನ ಮಿನಿವಿಧಾನ ಸೌಧದ ಕಟ್ಟಡದಲ್ಲಿರುವ ಕಚೇರಿಯಲ್ಲಿ ಸುನಿಲ್ ಪುತ್ತೂರು ತಾಲ್ಲೂಕಿನ ನೆಟ್ಟಣಿಗೆ ಮುನ್ನೂರು ಗ್ರಾಮದ ಅಜಿತ್ ಎಂಬುವರಿಂದ 12 ಸಾವಿರ ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಪೊಲೀಸರು ವಶಕ್ಕೆ ಪಡೆದು ತನಿಖೆ ನಡೆಸುತ್ತಿದ್ದಾರೆ. ಈ ನಡುವೆ ಪುತ್ತೂರು ತಹಶೀಲ್ದಾರ್ ತಲೆಮರೆಸಿಕೊಂಡಿದ್ದು, ಪ್ರಕರಣದಲ್ಲಿ ಅವರ ಪಾತ್ರದ ಕುರಿತು ತನಿಖೆ ನಡೆಸಲಾಗುವುದು ಎಂದು ಲೋಕಾಯುಕ್ತ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ದೂರದಾರರ ಚಿಕ್ಕಪ್ಪನಿಗೆ ಪುತ್ತೂರು ತಾಲ್ಲೂಕಿನ ನೆಟ್ಟಣಿಗೆ ಮುಡೂರು ಗ್ರಾಮದಲ್ಲಿ 85 ಸೆಂಟ್ಸ್ ಜಮೀನು ಅಕ್ರಮ ಸಕ್ರಮದಡಿ ಮಂಜೂರಾಗಿತ್ತು. ಅವರು ಅನಾರೋಗ್ಯದ ಕಾರಣ ಪುತ್ತೂರು ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ಮರಣ ಶಾಸನ ಬರೆಸಿ ಕೊಟ್ಟಿದ್ದರು. ಇದರ ಪ್ರಕಾರ ಅವರ ಚಿಕ್ಕಪ್ಪನ ಮರಣ ನಂತರ ಈ ಜಮೀನಿನ ಸಂಪೂರ್ಣ ಹಕ್ಕು ದೂರುದಾರರಿಗೆ ಸೇರಿದೆ.

ಈ ಜಮೀನು ದೂರದಾರರ ಚಿಕ್ಕಪ್ಪನಿಗೆ ಮಂಜೂರಾಗಿ 27 ವರ್ಷ ಆಗಿದ್ದು, ಈ ಜಮೀನನ್ನು ಪರಭಾರೆ ಮಾಡಲು ತಹಶೀಲ್ದಾರರಿಂದ ನಿರಾಕ್ಷೇಪಣಾ ಪತ್ರ ಅವಶ್ಯಕತೆ ಇತ್ತು. ದೂರುದಾರರ ಚಿಕ್ಕಪ್ಪ ಡಿಸೆಂಬರ್‌ನಲ್ಲಿ ಸಾಗುವಳಿ ಚೀಟಿ ಮೂಲಕ ತಹಶೀಲ್ದಾರರಿಂದ ಮಂಜೂರಾದ ಜಾಗ ಮಾರಾಟ ಮಾಡಲು ನಿರಾಕ್ಷೇಪಣಾ ಪತ್ರ ಕೋರಿ ಪುತ್ತೂರು ತಹಶೀಲ್ದಾರ್‌ಗೆ ಅರ್ಜಿ ಸಲ್ಲಿಸಿದ್ದರು.

ದೂರುದಾರರು ನಿರಾಕ್ಷೇಪಣಾ ಪತ್ರದ ಬಗ್ಗೆ ವಿಚಾರಿಸಿದಾಗ, ಸುನಿಲ್ ಅವರು ತಹಶೀಲ್ದಾರ್ ಅವರ ಸಹಿಗೆ ಬಾಕಿ ಇದೆ. ಅದಕ್ಕೆ ಸ್ವಲ್ಪ ಹಣ ಖರ್ಚು ಇರುತ್ತದೆ. ತಹಶೀಲ್ದಾರ್‌ಗೆ 10ಸಾವಿರ ಹಾಗೂ ನನಗೂ ಹಣ ಕೊಡಬೇಕಾಗುತ್ತದೆ ಎಂದು ಹೇಳಿ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಮಂಗಳೂರು ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಸುನಿಲ್ ಮತ್ತು ಪುತ್ತೂರು ತಹಶೀಲ್ದಾರ್ ವಿರುದ್ಧ ಪ್ರಕರಣ ದಾಖಲಾಗಿದೆ.

## ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ

• **ಉದಯವಾಹಿನಿ ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಜಿಲ್ಲೆಯ ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ನಗರದ ವೀರವನಿತೆ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಾಗೂ ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಯಿತು.

ಕ್ರೀಡಾಕೂಟ ಉದ್ಘಾಟಿಸಿದ ಚಿತ್ರದುರ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸುಚೇತಾ ಎಂ ನೆಲವಿಗಿ ಅವರು ಮಾತನಾಡಿ, ಈಗಾಗಲೇ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಯಶಸ್ವಿಯಾಗಿ ನೆರವೇರಿಸಲಾಗಿದ್ದು, ತಾಲ್ಲೂಕು ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದು, ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವಿಜೇತರಾದವರು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿ, ನಂತರ ವಿಭಾಗದ ಮಟ್ಟದ ವಿಜೇತ ಕ್ರೀಡಾಪಟುಗಳು ರಾಜ್ಯಮಟ್ಟದ ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾಗುವರು.

ರಾಜ್ಯಮಟ್ಟದ ದಸರಾ ಕ್ರೀಡಾಕೂಟವು ಸೆಪ್ಟೆಂಬರ್ 22 ರಿಂದ 25 ರವರೆಗೆ ಮೈಸೂರಿನ ಚಾಮುಂಡಿ ವಿಹಾರದ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಖೋಖೋ, ಕಬಡ್ಡಿ ಬ್ಯಾಸ್ಕೆಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್ ಸೇರಿದಂತೆ ವಿವಿಧ ವಿಭಾಗಗಳ ಸ್ಪರ್ಧೆಗಳಲ್ಲಿ ಪುರುಷ ಮತ್ತು ಮಹಿಳಾ ಸ್ಪರ್ಧಿಗಳು ಹುಮ್ಮಸ್ಸಿನಿಂದ ಭಾಗವಹಿಸಿ ಗೆಲುವಿಗಾಗಿ ಸೆಣಸಾಡಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಭಾರತದ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್ ಚಂದ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ವಾಲಿಬಾಲ್ ತರಬೇತುದಾರ ಮಹಮ್ಮದ್ ಮುಹೀಬುಲ್ಲಾ ಅವರು ಪ್ರತಿಜ್ಞಾವಿಧಿ ಬೋಧಿಸಿದರು.




ಉದಯವಾಹಿನಿ ಚಿತ್ರ

> ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ 975 ಪುರುಷರು ಹಾಗೂ 234 ಮಹಿಳಾ ಕ್ರೀಡಾಪಟುಗಳು ಆನ್‌ಲೈನ್ ನೋಂದಣಿ ಮಾಡಿಕೊಂಡಿದ್ದಾರೆ. ಚಳ್ಳಕೆರೆ ತಾಲ್ಲೂಕಿನ 354 ಕ್ರೀಡಾಪುಟಗಳು, ಚಿತ್ರದುರ್ಗ-714, ಹೊಸದುರ್ಗ-470, ಹಿರಿಯೂರು-171, ಹೊಳಲ್ಕೆರೆ-218, ಮೊಳಕಾಲ್ಮುರು-157 ಕ್ರೀಡಾಪಟುಗಳು ನೋಂದಣಿ ಮಾಡಿಕೊಂಡಿದ್ದು, ಇನ್ನೂ ನೋಂದಣಿ ಪ್ರಕ್ರಿಯೆ ನಡೆಯುತ್ತಿದ್ದು, ಸುಮಾರು 2800ಕ್ಕೂ ಹೆಚ್ಚು ಕ್ರೀಡಾಪುಟಗಳು ಭಾಗವಹಿಸುವ ನಿರೀಕ್ಷೆ ಇದೆ **-ಸುಚೇತಾ ಎಂ ನೆಲವಿಗಿ**

## ಮಿನಿ ನ್ಯೂಸ್

### ಚಿನ್ನಾಭರಣ ದೋಚಿದ ಖದೀಮರು

• **ಉದಯವಾಹಿನಿ ಕಲಬುರಗಿ**

ತಾಮ್ರ ಮತ್ತು ಬೆಳ್ಳಿ ಆಭರಣ ತೊಳೆದುಕೊಡುವುದಾಗಿ ಹೇಳಿ ಮಹಿಳೆಯೊಬ್ಬರಿಗೆ ನಂಬಿಸಿ ಅವರ ಬಳಿ ಇದ್ದ 7 ಲಕ್ಷ ರೂ.ಮೌಲ್ಯದ 7 ತೊಲೆ ಚಿನ್ನಾಭರಣ ದೋಚಿಕೊಂಡು ಹೋಗಿರುವ ಘಟನೆ ಸಂಗಮೇಶ್ವರ ಕಾಲೋನಿಯಲ್ಲಿ ನಡೆದಿದೆ. ಬೈಕ್ ಮೇಲೆ ಬಂದ ಇಬ್ಬರು ಅಪರಿಚಿತರು ತಾಮ್ರ, ಬೆಳ್ಳಿ ಆಭರಣ ತೊಳೆದುಕೊಡುವುದಾಗಿ ಹೇಳಿ ಮನೆ ಮುಂದೆ ಬಂದಾಗ ಸುರೇಖಾ ವರದೇಂದ್ರ ಕೊಪ್ಪಳ ಅವರು ಅವರನ್ನು ಮನೆಯೊಳಗೆ ಕರೆದಿದ್ದಾರೆ. ಅಪರಿಚಿತರು ಇವರ ಬಳಿ ಇದ್ದ ಬೆಳ್ಳಿ ಸಾಮಾನನ್ನು ತೊಳೆದು ಕೊಟ್ಟಿದ್ದಾರೆ. ಆ ನಂತರ ಇವರ ಕೈಯಲ್ಲಿದ್ದ ಬಂಗಾರದ ಬಳೆ ಮತ್ತು ಬಿಲವಾರ ನೋಡಿ ಅವುಗಳನ್ನು ಸಹ ತೊಳೆದುಕೊಡುವುದಾಗಿ ಹೇಳಿ ನಂಬಿಸಿ ಅವುಗಳನ್ನು ಡಬ್ಬಿಯಲ್ಲಿ ಹಾಕಿ ಹೀಟ್ ಮಾಡಿ ಇವರ ಗಮನ ಬೇರೆಡೆ ಸೆಳೆದು ಇವರ ಕೈಯಲ್ಲಿ ಖಾಲಿ ಡಬ್ಬಿ ಕೊಟ್ಟು ಅಲ್ಲಿಂದ ಪರಾರಿಯಾಗಿದ್ದಾರೆ. ಈ ಸಂಬಂಧ ಸುರೇಖಾ ಅವರ ಪತಿ ವರದೇಂದ್ರ ಅವರು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

### ಕುವೈತ್‌ನಲ್ಲಿ ಉದ್ಯೋಗ ಕೊಡಿಸುವ ಆಮಿಷ: 55 ಲಕ್ಷ ಮೋಸ

• **ಉದಯವಾಹಿನಿ ಹೊನ್ನಾವರ**

ಕುವೈತ್ ದೇಶದ ರಕ್ಷಣಾ ಮಂತ್ರಾಲಯದಲ್ಲಿ ಉದ್ಯೋಗ ದೊರಕಿಸಿಕೊಡುವ ಆಮಿಷವೊಡ್ಡಿ 33 ಜನರಿಂದ ಒಟ್ಟೂ 55 ಲಕ್ಷ ಪಡೆದು ಉದ್ಯೋಗ ಕೊಡಿಸದೆ ಮೋಸ ಮಾಡಿರುವ ಕುರಿತು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ತಾಲ್ಲೂಕಿನ ಹೆರಂಗಡಿಯ ಜಾಫರ್ ಸಾದಿಕ್ ಹುಸೇನ್ ಮುಕೇಸರ್, ಹೊನ್ನಾವರದ ನೌಶಾದ್ ಸ್ವಾಜಾ ದಾವೂದ್ ಹಾಗೂ ಹೈದ್ರಾಬಾದ್‌ನ ಸುಜಾತಾ ಜುಮ್ಮಿ ಕುಂಟಾ ಆರೋಪಿಗಳು ಘಟನೆಯ ಕುರಿತಂತೆ ಕೇರಳ ರಾಜ್ಯದ ಬಿಜ್ಜು ದಾಮೋದರನ್ ಉದಯಂತಿಲ್ ಇಲ್ಲಿನ ಪೊಲೀಸರಿಗೆ ದೂರು ನೀಡಿದ್ದಾರೆ. 'ಬಿಜ್ಜು ಹಾಗೂ ಆತನ ಸ್ನೇಹಿತ ನೌಶಾದ್ ಅಂಗೀಲತ್ ಅಸ್ಸಿನಾರ್ ಕೆ.ಪಿ ಅವರಿಗೆ ಕುವೈತ್‌ನಲ್ಲಿ ಪರಿಚಯವಾಗಿದ್ದ ಜಾಫರ್, ಕುವೈತ್ ರಕ್ಷಣಾ ಮಂತ್ರಾಲಯದಲ್ಲಿ ಉದ್ಯೋಗ ಕೊಡಿಸುವುದಾಗಿ ಹೇಳಿದ್ದ. ಜಾಫರ್ ಮಾತನ್ನು ನಂಬಿದ ಬಿಜ್ಜು ಹಾಗೂ ನೌಶಾದ್ 33 ಉದ್ಯೋಗಾಕಾಂಕ್ಷಿಗಳಿಂದ ಹಣ ಸಂಗ್ರಹಿಸಿ ಮೂವರು ಆರೋಪಿಗಳ ಬ್ಯಾಂಕ್ ಖಾತೆಗಳಿಗೆ ಒಟ್ಟೂ 55 ಲಕ್ಷ ಹಣ ಜಮೆ ಮಾಡಿದ್ದರು.

## ಅತಿವೃಷ್ಟಿಯಿಂದ ಬೆಳೆ ಹಾನಿಯಾದ ಪ್ರದೇಶಕ್ಕೆ ಶಾಸಕ ಜಾಧವ ಭೇಟಿ

### ಎಕರೆಗೆ 25,000 ರೂ.ಪರಿಹಾರ ನೀಡಲು ಸರ್ಕಾರಕ್ಕೆ ಡಾ.ಅವಿನಾಶ ಜಾಧವ ಒತ್ತಾಯ

• **ಉದಯವಾಹಿನಿ, ಚಿಂಚೋಳಿ**


ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾದ ಪ್ರದೇಶಕ್ಕೆ ಶಾಸಕ ಡಾ.ಅವಿನಾಶ ಜಾಧವ ತಾಲ್ಲೂಕಾ ಮಟ್ಟದ ಅಧಿಕಾರಿಗಳ ತಂಡದೊಂದಿಗೆ ಭೇಟಿನೀಡಿ ಪರಿಶೀಲನೆ ನಡೆಸಿದರು.

ತಾಲ್ಲೂಕಿನ ಕೊಳ್ಳೂರ, ನಾಗಾಯಿದ್ಲಾಯಿ, ತುಮಕುಂಟಾ,ಸಾಲೆಬೀರನಳ್ಳಿ, ಹಸರಗುಂಡಗಿ, ನಾಗರಾಳ ಗ್ರಾಮಗಳಲ್ಲಿ ಅತಿವೃಷ್ಟಿಯಿಂದ ರೈತರ ಬೆಳೆ ನಾಶವಾದ ಪ್ರದೇಶಗಳಿಗೆ ಅಧಿಕಾರಿಗಳ ತಂಡದೊಂದಿಗೆ ಶಾಸಕ ಡಾ.ಅವಿನಾಶ ಜಾಧವ ಭೇಟಿನೀಡಿ ರೈತರಿಗೆ ಧೈರ್ಯ ತುಂಬಿ ಸ್ಥಳದಲ್ಲಿರುವ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಶೀಘ್ರದಲ್ಲೇ ಸರ್ವೇ ನಡೆಸಿ ರೈತರಿಗೆ ಅನುಕೂಲ ಕಲ್ಪಿಸಿಕೊಟ್ಟು ಪರಿಹಾರ ದೊರಕುವಂತೆ ಸಮರ್ಪಕವಾಗಿ ವರದಿ ಸಿದ್ದಪಡಿಸಿ ಸರ್ಕಾರಕ್ಕೆ ರವಾನಿಸಬೇಕು ಎಂದರು.

ತಾಲ್ಲೂಕಿನ ನಾಗರಾಳ ಜಲಾಶಯ ಹಾಗೂ ಸಾಲೆ ಬೀರನಳ್ಳಿಯಲ್ಲಿನ ಸಣ್ಣ ನೀರಾವರಿ ಇಲಾಖೆಯ ಕೆರೆಗೆ ಭೇಟಿನೀಡಿ ವಿಕ್ಷಿಸಿದರು. ಶಾಸಕ ಡಾ.ಅವಿನಾಶ ಜಾಧವ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ತಾಲ್ಲೂಕಿನಲ್ಲಿ ಚಿಂಚೋಳಿ-ಕಾಳಗಿ ಸೇರಿದಂತೆ 14000 ಹೇಕ್ಟರ್ ದಷ್ಟು ರೈತರು ಬೆಳೆದ ಬೆಳೆ ನಷ್ಟವಾಗಿದೆ,ತೋಟಗಾರಿಕೆಯಲ್ಲಿ 3.28ಹೇಕ್ಟರ್ ದಷ್ಟು ಬೆಳೆಹಾನಿಯಾಗಿದೆ,ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಂಥಹ ಅತಿವೃಷ್ಟಿಯಿಂದ ಬೆಳೆಹಾನಿ ಆಗಿದಾಗ 875ಕೋಟಿ ರೂ.ಬಿಡುಗಡೆ ಮಾಡಿ ರೈತರಿಗೆ ಪರಿಹಾರ ನೀಡಿದ್ದೇವೆ.

ಅದರಂತೆ ಈಗಿನ ಕಾಂಗ್ರೆಸ್ ಸರ್ಕಾರವು ಕೂಡ ಅತಿವೃಷ್ಟಿಯಿಂದ ರೈತರು ಬೆಳೆದ ತಾಲ್ಲೂಕಿನಲ್ಲಿ ಶೇಕಡಾ 90 ಪ್ರತಿಶತಃ ದಷ್ಟು ಬೆಳೆ ಹಾನಿಯಾಗಿದ್ದು ಕಾಂಗ್ರೆಸ್ ಸರ್ಕಾರ ಶೀಘ್ರದಲ್ಲೇ ಎಕರೆಗೆ 25000 ರೂ.ಬೆಳೆ ಪರಿಹಾರ ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದರು.

ಈಗಾಗಲೇ ತಾಲ್ಲೂಕಿನಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಯಿಂದ 50ಮನೆಗಳು ಕುಸಿದಿವೆ ಅದರಲ್ಲಿ 25 ಮನೆಗಳಿಗೆ ಪರಿಹಾರ ನೀಡಲಾಗಿದೆ, 15ಮನೆಗಳ ಪಟ್ಟಿ ಸಹಾಯಕ ಆಯುಕ್ತರ ಹತ್ತಿರ ರವಾನಿಸಲಾಗಿದೆ, 10ಮನೆಗಳು ಪರಿಶೀಲನೆ ನಡೆಸಲಾಗುತ್ತಿದೆ ಶೀಘ್ರದಲ್ಲೇ ಸರ್ಕಾರದಿಂದ ಪರಿಹಾರ ದೊರಕಲಿದೆ,ಎಲ್ಲಾ ರೈತರು ಬೆಳೆವಿಮೆ ಮಾಡಿಸಬೇಕು,ಎಲ್ಲಾ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಪಿಡಿಓಗಳು ತಾಲ್ಲೂಕಿನಲ್ಲಿ ಇರಬೇಕು ಜನರ ಸಮಸ್ಯೆಗಳು ಪರಿಹರಿಸಬೇಕು ಎಂದರು.


ಉದಯವಾಹಿನಿ ಚಿತ್ರ

> ತಾಲ್ಲೂಕಾ ಮಟ್ಟದ ಅಧಿಕಾರಿಗಳಿಂದ ಬೆಳೆಹಾನಿ,ರಸ್ತೆ ಹಾನಿ,ಕೆರೆಗಳ ಅಭಿವೃದ್ಧಿ ಸೇರಿದಂತೆ ತಾಲ್ಲೂಕಿನ ಸಮಗ್ರ ವರದಿ ಸಿದ್ದಪಡಿಸದ ನಂತರ ಎಲ್ಲಾ ವರದಿ ತೆಗೆದುಕೊಂಡು ಮುಖ್ಯಮಂತ್ರಿಗಳಿಗೆ ಹಾಗೂ ಉಸ್ತುವಾರಿ ಸಚಿವರಿಗೆ ಭೇಟಿಯಾಗಿ ಪರಿಹಾರ ನೀಡುವಂತೆ ಒತ್ತಾಯಿಸುತ್ತೇನೆ
> **-ಡಾ.ಅವಿನಾಶ ಜಾಧವ,** ಶಾಸಕ

## ಪದವೀಧರರು ಉನ್ನತ ಶಿಕ್ಷಣದತ್ತ ಒಲವು ತೋರಿಸಲಿ: ಎಸ್ಪಿ ಲಕ್ಷ್ಣ ನಿಂಬರಗಿ ಅಭಿಮತ

• **ಉದಯವಾಹಿನಿ ಬಸವನಬಾಗೇವಾಡಿ**

ಪದವಿ ಮುಗಿದ ನಂತರ ಯಾವುದೋ ಉದ್ಯೋಗದ ಕಡೆ ವಾಲದೇ ಉನ್ನತ ಶಿಕ್ಷಣದತ್ತ ಒಲವು ತೋರಿಸಿರಿ ಎಂದು ಜಿಲ್ಲಾ ವರಿಷ್ಠಾಧಿಕಾರಿ ಲಕ್ಷಣ.ಬ. ನಿಂಬರಗಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪಟ್ಟಣದ ಬಿ.ಎಲ್.ಡಿ.ಇ ಸಂಸ್ಥೆ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ 2025-26ನೇ ಶೈಕ್ಷಣಿಕ ವರ್ಷದ ಸಾಂಸ್ಕೃತಿಕ ಚಟುಚಟಿಕೆಗಳ ಉದ್ಘಾಟನೆ ಹಾಗೂ ಬಿಎ ಮತ್ತು ಬಿಕಾಂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪದವಿ ತರಗತಿ ಬಿಟ್ಟು ಕೋಚಿಂಗ್‌ಗೆ ದುಂಬಾಲು ಬೀಳದೇ ರಜಾ ದಿನಗಳಲ್ಲಿ ಕೋಚಿಂಗ್ ಪಡೆದುಕೊಳ್ಳುವುದು ಸೂಕ್ತ.

ಸಮಾಜದಲ್ಲಿ ಗುಣಮಟ್ಟದ ಪದವೀಧರರ ಅವಶ್ಯಕತೆ ಬಹಳಷ್ಟಿದೆ. ಪದವಿ ಮುಗಿಸಿದ ನಂತೆ ಒಂದು ಉದ್ಯೋಗತ್ತ ಮುಖ ಮಾಡದೇ ನಾಲ್ಕು ಜನರಿಗೆ ಸಹಾಯ ಮಾಡುವವರು ನೀವಾಗಬೇಕು. ಕಷ್ಟಪಟ್ಟು ಅಧ್ಯಯನ ಮಾಡಿ ಶಾರ್ಟಕಟ್ ದತ್ತ ಹೋಗಬೇಡಿ. ಓದು ನಿರಂತರವಾಗಿರಲಿ. ಪದವಿಗೆ ಸೀಮಿತಗೊಳಿಸಬೇಡಿ. ಗ್ರಾಮೀಣ ಭಾಗದವರು ಎಂಬ ಕೀಳರಿಮೆ ಬೇಡ. ಗ್ರಾಮೀಣ ಭಾಗವೇ ನಿಜವಾದ ಜೀವನ ಪಾಠ ಕಲಿಸುವುದು. ಸಮಾಜಮುಖಿ ಸಮಸ್ಯೆ ಕಂಡವರು ಗ್ರಾಮೀಣಗರೇ.

ನಾನು ಕೂಡ ಸರ್ಕಾರಿ ಶಾಲೆಯಲ್ಲಿ ಕಲಿತು ಐಪಿಎಸ್ ಪಾಸಾಗಿರುವೆ. ಸಾಮಾಜಿಕ ಜಾಲತಾಣ ಓದಿಗೆ ಪೂರಕವಾಗಿ ಬಳಕೆಯಾಗಲಿ. ಸೈಬರ್ ವಂಚನೆ ಕುರಿತಾಗಿ ಪಾಲಕರಲ್ಲಿ ತಿಳುವಳಿಕೆ ನೀಡಿ. ವಾಹನ ನಿಯಮಾವಳಿಗಳನ್ನು ಪಾಲಿಸಿರಿ. ತಂದೆ ತಾಯಿಯಂದರಿಗೆ ಉತ್ತಮ ವಿದ್ಯಾರ್ಥಿಗಳು ನೀವಾಗಿರಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜಾನಪದ ಸಾಹಿತಿ ಬಸವರಾಜ ಹಾರಿವಾಳ ಹಂತಿ ಪದಗಳನ್ನು ಹಾಡುವುದರ ಮೂಲಕ ರಂಜಿಸಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎ.ವ್ಹಿ ಸೂರ್ಯವಂಶಿ ಮಾತನಾಡಿ, ಸಂಸ್ಥೆಯ ಹಳೆಯ ವಿದ್ಯಾರ್ಥಿಗಳ ಸಹಕಾರ ಮಹಾವಿದ್ಯಾಲಯಕ್ಕೆ ಬಹಳಷ್ಟಿದೆ ಎಂದು ಸ್ಮರಿಸಿಕೊಂಡರು.ನೂರಕ್ಕೆ ನೂರು ಅಂಕ ಪಡೆಯುವವರು ನೀವಾಗಬೇಕು ಎಂದರು. ಹಳೆಯ ವಿದ್ಯಾರ್ಥಿ ವಿನೂತ ಕಲ್ಲೂರ ದೇಸಾಯಿ ಮಾತನಾಡಿ, ಸಂಸ್ಥೆಯು ಜಿಲ್ಲೆಯಲ್ಲಿ ಶೈಕ್ಷಣಿಕ ಕ್ರಾಂತಿಯನ್ನೇ ಮಾಡುತ್ತಿದೆ. ಗುರುಗಳ ಬಗ್ಗೆ ಪೂಜ್ಯನೀಯ ಭಾವನೆ ಇರಲಿ ಎಂದರು.

ಡಿವಾಯ್.ಎಸ್ಪಿ ಬಲ್ಲಪ್ಪ ನಂದಗಾವಿ, ಹಳೆಯ ವಿದ್ಯಾರ್ಥಿಗಳ ಸಂಘದ ಗೌರವಾಧ್ಯಕ್ಷ ಪ್ರಶಾಂತ ಮುಂಜಾನೆ, ಡಾ. ಬಸವರಾಜ ಸಾಲವಾಡಗಿ, ಛತ್ರಸಿಂಗ ಧಡೇಕರ, ವಿದ್ಯಾರ್ಥಿಗಳ ಪ್ರತಿನಿಧಿ ಸಂಗೀತಾ ಜುಗತಿ, ಶಿಫಾಸಾಧಿಕಾ ಜಹಾಗೀರದಾರ ಹಾಜರಿದ್ದರು. ಪ್ರೋ ಮಂಜುನಾಥ ಯಾದವ ನಿರೂಪಿಸಿದರು.ಶಿವಮೂರ್ತಿ ಚಿಕ್ಕನರ್ತಿ ವಂದಿಸಿದರು.


ಉದಯವಾಹಿನಿ ಚಿತ್ರ

> ಡಿಗ್ರಿ ಬಿಟ್ಟು ಕೋಚಿಂಗ್ ಬೇಡ. ಫ್ರೀ ಟೈಮಲ್ಲಿ ಕೋಚಿಂಗ್ ಪಡೆದುಕೊಳ್ಳಿ. ವ್ಯಕ್ತಿತ್ವ ವಿಕಸನ ಪದವಿ ಹಂತದಲ್ಲೇ ಸಿಗಲು ಸಾಧ್ಯ. ಜೀವನ ಪಾಠವನ್ನು ನಗರ ಪ್ರದೇಶ ಕಲಿಸಲ್ಲ. **-ಲಕ್ಷಣ ಬ.ನಿಂಬರಗಿ,** ಎಸ್ಪಿ

## ಬಸವ ಸಂಸ್ಕೃತಿ ಅಭಿಯಾನ ಯಶಸ್ಸಿಗೆ ಅಕ್ಕ ಗಂಗಾಂಬಿಕಾ ಪಾಟೀಲ ಕರೆ

• **ಉದಯವಾಹಿನಿ,ಚಿಂಚೋಳಿ**

ಬೀದರ ನಗರದಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ಹಾಗೂ ಬಸವ ಸಂಸ್ಕೃತಿ ಅಭಿಯಾನ ಸಮಿತಿ ಸೆ.3ರಂದು ಹಮ್ಮಿಕೊಂಡ ಬೃಹತ್ ಬಸವ ಸಂಸ್ಕೃತಿ ಅಭಿಯಾನ ಯಶಸ್ಸಿಗೆ ಬಸವ ಸೇವಾ ಪ್ರತಿಷ್ಠಾನದ ಅಕ್ಕ ಗಂಗಾಂಬಿಕಾ ಪಾಟೀಲ ಕರೆ ನೀಡಿದರು.

ತಾಲ್ಲೂಕಿನ ಚಿಮ್ಮನಚೋಡ ಗ್ರಾಮದಲ್ಲಿ ಬಸವ ಪರುಷ ಕಟ್ಟೆ ಸಮಿತಿ ಶ್ರಾವಣ ಮಾಸದ ಪ್ರಯುಕ್ತ ಹಮ್ಮಿಕೊಂಡ ಶರಣ ಚಿಂತನ ಉಪನ್ಯಾಸ ಮಾಲಿಕೆಯ ಸಮಾರೋಪ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು,ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕರೆಂದು ಕರ್ನಾಟಕ ಸರ್ಕಾರ ಘೋಷಿಸಿ 1 ವರ್ಷವಾಗಿದ್ದು, ನಾಡಿನ ನೂರಾರು ಮಠಾಧೀಶರ ನೇತೃತ್ವದಲ್ಲಿ ನಡೆಯುವ ಅಭಿಯಾನದಲ್ಲಿ ಲಿಂಗ,ರುದ್ರಾಕ್ಷಿ,ವಿಭೂತಿ ಹಾಗೂ ಶರಣರ ವೇಷಧಾರಿಗಳ ಮೆರವಣಿಗೆ ವೈಭವದಿಂದ ಜರುಗಲಿದೆ ಎಂದರು. ಬಸವಣ್ಣನವರು ರಾಜಕೀಯ,ಸಾಮಾಜಿಕ,ಧಾರ್ಮಿಕ,ಆರ್ಥಿಕ, ನೈತಿಕ ಮತ್ತು ಸಾಂಸ್ಕೃತಿಕ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಪರಿವರ್ತನೆ ತಂದು ಜಿಡ್ಡುಗಟ್ಟಿದ ಸಮಾಜದಲ್ಲಿ ನವ ಚೈತನ್ಯ ಮೂಡಿಸಿದ್ದಾರೆ ಎಂದರು. ಬಸವಣ್ಣನವರ ಆಶಯದಂತೆ ಸಮ ಸಮಾಜ ನಿರ್ಮಾಣ ಮತ್ತು ಬಸವಣ್ಣನವರ ತತ್ವಾದರ್ಶಗಳ ಕುರಿತು ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಕಾರಣ ಬಸವ ಭಕ್ತರು,ಚಿಂತಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ನಿವೃತ್ತ ಸರ್ಜನ್ ಡಾ.ಸಿ.ಎಸ್ ರಗಟೆ ಮಾತನಾಡಿ ಚಿಮ್ಮನಚೋಡ ಗ್ರಾಮದ ಮಧ್ಯ ಭಾಗದಲ್ಲಿ ಕಾರಣಿಕ ಕಟ್ಟೆಯಿತ್ತು ಇದನ್ನು ಪರುಷ ಕಟ್ಟೆಯಾಗಿ ಅಭಿವೃದ್ಧಿ ಪಡಿಸಿ ಬಸವಣ್ಣನವರ ಪುತ್ಥಳಿ ಪ್ರತಿಷ್ಠಾಪಿಸಿ ಪ್ರತಿನಿತ್ಯ ಪೂಜೆ ಪ್ರಾರ್ಥನೆ ನಡೆಸುತ್ತ ವಚನ ಪಠಣದೊಂದಿಗೆ ಬಸವ ಸಂಸ್ಕೃತಿ ಎತ್ತಿ ಹಿಡಿಯುವ ಕೆಲಸ ನಡೆಯುತ್ತಿದೆ ಎಂದರು.

ಸಾಹಿತಿ ಗವಿಸಿದ್ದಪ್ಪ ಪಾಟೀಲ,ಸಂಗೀತ ಪ್ರ್ಯಾಧ್ಯಾಪಕ ಮಹೇಶ ಬಡಿಗೇರ್,ಎಕೆಆರ್ ದೇವಿ ಪಿಯು ಕಾಲೇಜಿನ ಪ್ರಾಂಶುಪಾಲ ವಿದ್ಯಾಸಾಗರ ದೇಶಮುಖ,ಪತ್ರಕರ್ತ ಜಗನ್ನಾಥ ಶೇರಿಕಾರ,ಶರಣ ಜೀವಿ ಜಗದೀಶ ಮರಪಳ್ಳಿ,ಚಂದ್ರಯ್ಯಸ್ವಾಮಿ,ಉದಯಕುಮಾರ ಪಾಟೀಲ,ಉದ್ಯಮಿ ಲಿಂಗಾರತಿ ನಾವದಗೇರ್,ಮಂಜುನಾಥ ದುಬಲಗುಂಡಿ ಇದ್ದರು.


ಉದಯವಾಹಿನಿ ಚಿತ್ರ

> ಚಿಮ್ಮನಚೋಡ ಗ್ರಾಮದ ಮಧ್ಯ ಭಾಗದಲ್ಲಿ ಕಾರಣಿಕ ಕಟ್ಟೆಯಿತ್ತು ಇದನ್ನು ಪರುಷ ಕಟ್ಟೆಯಾಗಿ ಅಭಿವೃದ್ಧಿ ಪಡಿಸಿ ಬಸವಣ್ಣನವರ ಪುತ್ಥಳಿ ಪ್ರತಿಷ್ಠಾಪಿಸಿ ಪ್ರತಿನಿತ್ಯ ಪೂಜೆ ಪ್ರಾರ್ಥನೆ ನಡೆಸುತ್ತ ವಚನ ಪಠಣದೊಂದಿಗೆ ಬಸವ ಸಂಸ್ಕೃತಿ ಎತ್ತಿ ಹಿಡಿಯುವ ಕೆಲಸ ನಡೆಯುತ್ತಿದೆ **-ಡಾ.ಸಿ.ಎಸ್ ರಗಟೆ,** ನಿವೃತ್ತ ಸರ್ಜನ್

## ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ

• **ಉದಯವಾಹಿನಿ ಕೊಪ್ಪಳ**

ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯದ ಜನರಿಗೆ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಆಗ್ರಹಿಸಿ ರಾಜ್ಯ ಚೆನ್ನದಾಸರ ಕ್ಷೇಮಾಭಿವೃದ್ಧಿ ಸಂಘದ ಮುಖಂಡರು ನಗರದಲ್ಲಿ ಪ್ರತಿಭಟನೆ ನಡೆಸಿದರು. 'ನಮಗೆ ಒಳಮೀಸಲಾತಿ ನೀಡಬೇಕು ಎಂದು ಮೂರು ದಶಕಗಳಿಂದ ನಿರಂತರ ಹೋರಾಟ ಮಾಡುತ್ತಿದ್ದರೂ ಸರ್ಕಾರ ನಮ್ಮ ಬೇಡಿಕೆ ಸಂಪೂರ್ಣವಾಗಿ ಈಡೇರಿಸಿಲ್ಲ. ರಾಜ್ಯ ಸರ್ಕಾರ ಬಲಾಢ್ಯ ಸಮುದಾಯಗಳ ಜೊತೆ ಸೇರಿ ಶೇ. 1ರಷ್ಟು ಒಳಮೀಸಲಾತಿ ನೀಡಿ ಆದೇಶ ಹೊರಡಿಸಿದೆ. ನಮಗೆ ಬೇರೆ ಯಾರ ಪಾಲೂ ಬೇಡ. ನಮ್ಮ ಹಕ್ಕು ನಮಗೆ ಕೊಡಿ' ಎಂದು ಹೋರಾಟ ನಿರತರು ಆಗ್ರಹಿಸಿದರು.

ಸಾಕಷ್ಟು ವರ್ಷಗಳಿಂದ ಗುಡಿಸಲುಗಳಲ್ಲಿ ವಾಸ ಮಾಡುತ್ತಿದ್ದೇವೆ. ಶಿಕ್ಷಣದಿಂದ ವಂಚಿತರಾಗಿದ್ದೇವೆ. ಸರಿಯಾಗಿ ಸೂರು ಕೂಡ ಇಲ್ಲದೆ ಇನ್ನೊಬ್ಬರ ಜಾಗದಲ್ಲಿ ಟೆಂಟ್ ಹಾಕಿಕೊಂಡು ಆತಂಕದಿಂದಲೇ ಬದುಕು ಕಳೆಯುತ್ತಿದ್ದೇವೆ. ಕಾನೂನಿನ ಚೌಕಟ್ಟಿನಲ್ಲಿ ಮರುಪರಿಶೀಲಿಸಿ ಸರ್ವರಿಗೂ ಸಮಬಾಳು, ಸಮಪಾಲು ಎನ್ನುವ ತತ್ವದಡಿ ಶೇ. 1ರಷ್ಟು ಒಳಮೀಸಲಾತಿ ಜಾರಿಗೆ ಮಾಡಬೇಕು' ಎಂದು ಒತ್ತಾಯಿಸಿದರು.

ಜನಪ್ರತಿನಿಧಿಗಳು ಒಳಮೀಸಲಾತಿ ವಿಚಾರದಲ್ಲಿ ಜಾತಿ ರಾಜ ಕಾರಣ ಮಾಡಬಾರದು ಎಂದರು. ಪ್ರತಿಭಟನೆ ವೇಳೆ ಚನ್ನದಾಸರು ವೃತ್ತಿಪರವಾಗಿ ತಾವು ಬಳಕೆ ಮಾಡುವ ವಾದ್ಯಗಳನ್ನು ನುಡಿಸಿದರು.

ಸಂಘಟನೆಯ ರಾಜ್ಯಾಧ್ಯಕ್ಷ ಪರಸಪ್ಪ ಚೆನ್ನದಾಸರ, ರಾಜ್ಯ ಪ್ರಧಾನ ಕಾರ್ಯದರ್ಶಿ ಮಾರೆಪ್ಪ ಚೆನ್ನದಾಸರ, ಜಿಲ್ಲಾ ಅಧ್ಯಕ್ಷ ದುರಗಪ್ಪ ದೊಡ್ಡಮನಿ, ತಾಲ್ಲೂಕು ಘಟಕದ ಅಧ್ಯಕ್ಷ ಹನುಮಂತ ಚನ್ನದಾಸರ ಹಾಗೂ ಅನೇಕ ಪದಾಧಿಕಾರಿಗಳು ಪಾಲ್ಗೊಂಡಿದ್ದರು.



ಉದಯವಾಹಿನಿ ಚಿತ್ರ

## ಮಣ್ಣಿನ ಫಲವತ್ತತೆಗೆ ನ್ಯಾನೊ ಯೂರಿಯಾ ಬಳಸಿ: ಕೃಷಿ ಇಲಾಖೆ ಅಧಿಕಾರಿ

• ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ನ್ಯಾನೋ ಯೂರಿಯಾ ಮತ್ತು ಡಿಎಪಿ ಬಳಕೆಯ ಪ್ರಾತ್ಯಕ್ಷಿಕೆಗೆ ಚಾಲನೆ

• **ಉದಯವಾಹಿನಿ ಕಡೂರು**

ಮಣ್ಣಿನ ಸ್ವತ್ವವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ರೈತರು ಸುಲಭ ಬಳಕೆಗೆ ಯೋಗ್ಯವಾದ ನ್ಯಾನೊ ಯೂರಿಯಾ ಗೊಬ್ಬರ ಬಳಸಿದರೆ ಕೃಷಿಭೂಮಿ ಫಲವತ್ತತೆ ಉಳಿಕೆಗೆ ವರದಾನವಾಗಲಿದೆ ಎಂದು ಜಿಲ್ಲಾ ಕೃಷಿ ಜಂಟಿ ನಿರ್ದೇಶಕಿ ಎಚ್.ಎಲ್.ಸುಜಾತ ತಿಳಿಸಿದರು. ತಾಲ್ಲೂಕಿನ ಸರಸ್ವತಿಪುರ ಗೇಟ್ ಬಳಿಯ ರೈತ ಚಂದ್ರಪ್ಪ ಅವರ ರಾಗಿ ಹೊಲದಲ್ಲಿ ಕೃಷಿ ಇಲಾಖೆಯ ವತಿಯಿಂದ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ನ್ಯಾನೋ ಯೂರಿಯಾ ಮತ್ತು ಡಿಎಪಿ ಬಳಕೆಯ ಪ್ರಾತ್ಯಕ್ಷಿಕೆಗೆ ಚಾಲನೆ ನೀಡಿ ಮಾತನಾಡಿದರು. ಹರಳು ರೂಪದ ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ದ್ರವ ರೂಪದ ನ್ಯಾನೋ ಯೂರಿಯಾ ದ್ರಾವಣ ಮಾರುಕಟ್ಟೆಯಲ್ಲಿ ಲಭ್ಯವಿದೆ. ಯೂರಿಯಾ ಗೊಬ್ಬರಕ್ಕೆ ರೈತರಿಂದ ಬೇಡಿಕೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ದ್ರವ ರೂಪದ ನ್ಯಾನೋ ಯೂರಿಯಾವನ್ನು ಪರಿಚಯಿಸಲಾಗಿದ್ದು ಇದರ ಬಳಕೆ ಮಾಡಿಕೊಳ್ಳಬಹುದಾಗಿದೆ. ಬಯಲುಸೀಮೆಯ ತಾಲ್ಲೂಕಿನ ಭಾಗದಲ್ಲಿ ಬಹುತೇಕ ಜಮೀನುಗಳಲ್ಲಿ ಮಣ್ಣಿನ ಪರೀಕ್ಷೆಯನ್ನು ನಡೆಸಲಾಗಿದ್ದು, ಇದರಲ್ಲಿ ಹಸಿರೆಲೆ ಗೊಬ್ಬರ ಬಳಸದೆ ಇರುವ ಜಮೀನುಗಳು ಸಾಕಷ್ಟು ಕಂಡು ಬಂದಿದೆ.

0.4 ರಷ್ಟು ಕಡಿಮೆ ಇರುವ ಸಾವಯವ ಇಂಗಾಲ ಅಂಶದ ಕೊರತೆ ಕಾಣುತ್ತಿದೆ. ಇದರಿಂದ ವೈಜ್ಞಾನಿಕವಾಗಿ ಬಿತ್ತನೆಗೆ ಯೋಗ್ಯವಲ್ಲದ ಪ್ರದೇಶವೆಂದು ಗುರುತಿಸಲಾಗುತ್ತದೆ.

ಮಣ್ಣಿನ ಸತ್ವವನ್ನು ಹೆಚ್ಚಿಸಿಕೊಳ್ಳಲು 0.5ಕ್ಕೂ ಹೆಚ್ಚು ಸಾಂದ್ರತೆಯ ಮಣ್ಣಿನ ಸತ್ವವನ್ನು ಕಾಪಾಡಿಕೊಂಡಾಗ ಉತ್ತಮವಾದ ಪೈರನ್ನು ಕಾಪಾಡಿಕೊಳ್ಳಬಹುದು ಎಂದರು. ಬಳಿಕ ಡ್ರೋನ್ ಸಹಾಯದಿಂದ ಪ್ರಾಯೋಗಿಕವಾಗಿ ನ್ಯಾನೋ ಯೂರಿಯಾ ದ್ರಾವಣವನ್ನು ಸಿಂಪಡಿಸಲಾಯಿತು. ಇನ್ನೊ ಕಂಪನಿಯ ಸಂಯೋಜಕ ಅತಾವುಲ್ಲಾ ಡ್ರೋನ್ ಸಹಾಯದಿಂದ ನ್ಯಾನೋ ಯೂರಿಯಾ ದ್ರಾವಣ ಬಳಕೆಯ ಕುರಿತು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

**ಮಣ್ಣಿನ ಸತ್ವವನ್ನು ಹೆಚ್ಚಿಸಿ**

ಹಸಿರೆಲೆ ಗೊಬ್ಬರ ಬಳಕೆಯ ಪ್ರಮಾಣ ಕಡಿಮೆಯಾದ ಪರಿಣಾಮ ತಾಲ್ಲೂಕಿನಲ್ಲಿ ಮಣ್ಣಿನಲ್ಲಿ ಶಕ್ತಿ ಕಳೆದುಕೊಂಡಂತಾಗಿದ್ದು, ಇದಕ್ಕೆ ರೈತರು ಆಸ್ಪದ ನೀಡದೆ ಕಾಲಕ್ಕೆ ಅನುಗುಣವಾಗಿ ಮಣ್ಣಿನ ಸತ್ವವನ್ನು ಹೆಚ್ಚಿಸಿಕೊಳ್ಳಲು ಮುಂದಾಗಬೇಕು. ಅಗತ್ಯಕ್ಕೆ ತಕ್ಕಂತೆ ಹಸಿರೆಲೆ ಸಾವಯವ ಗೊಬ್ಬರಗಳ ಬಳಕೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕಿದೆ. ಕೃಷಿ ಇಲಾಖೆ ವತಿಯಿಂದಲೇ ನ್ಯಾನೋ ಯೂರಿಯಾ ಗೊಬ್ಬರ ಬಳಕೆಯ ಬಗ್ಗೆ ತಾಲ್ಲೂಕಿನಾದ್ಯಂತ ಜಾಗೃತಿ ಮೂಡಿಸಲಾಗುತ್ತಿದೆ. ರೈತರು ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು. ಹೋಬಳಿ ಭಾಗಗಳಲ್ಲಿ ಪೂರಕವಾದ ಮಾಹಿತಿಗಳನ್ನು ನೀಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

> ಒಂದು ಎಕರೆಗೆ 500 ಮಿ.ಲೀನಷ್ಟು ನ್ಯಾನೋ ಯೂರಿಯಾ ಅವಶ್ಯಕತೆ ಇದ್ದು, ಡ್ರೋನ್ ಸಹಾಯದಿಂದ ಬಳಕೆ ಮಾಡುವುದಾದರೆ 10 ಲೀ ನೀರಿಗೆ 500 ಎಂ.ಎಲ್.ನ್ಯಾನೋ ಯೂರಿಯಾ ಬಳಸಬಹುದಾಗಿದೆ. ಕ್ಯಾನ್‌ಗಳ ಬ್ಯಾಟರಿ ಅಪರೇಟಿಂಗ್ ವಿಧಾನದಲ್ಲಿ ಬಳಸುವುದಾದರೆ 1 ಲೀ ನೀರಿಗೆ 4 ಎಂ.ಎಲ್. ನ್ಯಾನೋ ಯೂರಿಯಾ ದ್ರಾವಣವನ್ನು ಸಿಂಪಡಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. **-ಅಶೋಕ್ ಎಂ.**
> ತಾಲ್ಲೂಕು ಕೃಷಿ ಸಹಾಯಕ ನಿರ್ದೇಶಕ

**ಫಲವತ್ತತೆ ಉಳಿಕೆಗೆ ವರದಾನ**

## ಮಕ್ಕಳ ಸದೃಢತೆಗೆ ಕ್ರೀಡೆ ಸಹಕಾರಿ

• **ಉದಯವಾಹಿನಿ ತಿಳವಳ್ಳಿ**

ಕ್ರೀಡೆಗಳು ಮಕ್ಕಳಿಗೆ ದೈಹಿಕವಾಗಿ ಮಾನಸಿಕವಾಗಿ ಸದೃಢಗೊಳ್ಳಲು ಸಹಕಾರಿಯಾಗಿವೆ. ಆದ್ದರಿಂದ ಮಕ್ಕಳು ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ಹೊಂದಬೇಕು ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಖಾ ಕುರುಬರ ಹೇಳಿದರು. ಇಲ್ಲಿಯ ಶಾಂತೇಶ್ವರ ಪ್ರೌಢಶಾಲಾ ಆವರಣದಲ್ಲಿ ಆರ್ಯನ್ ಸೆಂಟ್ರಲ್ ಶಾಲೆಯ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ನಡೆದ ಪ್ರೌಢ ಶಾಲೆಗಳ ಕ್ರೀಡಾಕೂಟ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳು ಜೀವನದ ಒಂದು ಪ್ರಮುಖ ಭಾಗವಾಗಿದೆ. ದೇಹದ ರಕ್ತ ಪರಿಚಲನೆಗೆ ಸಹಕಾರಿಯಾಗಿದೆ. ಮೆದುಳಿನ ಬೆಳವಣಿಗೆಯಲ್ಲಿ ಪ್ರಯೋಜನಕಾರಿಯಾಗಿದೆ. ಕ್ರೀಡೆಗಳನ್ನು ವ್ಯಾಯಾಮದ ಅತ್ಯುತ್ತಮ ಸಾಧನವಾಗಿದೆ ಹಾಗೂ ದೇಹವನ್ನು ಶಕ್ತಿಯುತಗೊಳಿಸಲು ಕ್ರೀಡೆ ಸಹಕಾರಿಯಾಗಿದೆ ಎಂದರು.ಆರ್ಯನ್ ಸೆಂಟ್ರಲ್ ಶಾಲೆಯ ಅಧ್ಯಕ್ಷ ಮಹಾಂತೇಶ ಕೋಟಿ ಮಾತನಾಡಿ, ಪ್ರತಿಯೊಂದು ಮಗುವಿನಲ್ಲಿಯೂ ಸುಪ್ತವಾದ ಪ್ರತಿಭೆ ಅಡಗಿರುತ್ತದೆ. ಅದನ್ನು ಹೊರತರುವ ಕೆಲಸವನ್ನು ಶಿಕ್ಷಕರು ಮಾಡಿದರೆ ಸಾಕು ಮಕ್ಕಳು ಭವಿಷ್ಯದಲ್ಲಿ ದೇಶದ ಉತ್ತಮ ಪ್ರಜೆಯಾಗಿ ಹೊರಹೊಮ್ಮುತ್ತಾರೆ ಎಂದರು. ತಾಲ್ಲೂಕು ಶಿಕ್ಷಣ ಸುಧಾರಣ ಸಮಿತಿ ಸದಸ್ಯ ಬಸವರಾಜ ಚೌವಾಣ, ನಮಿತಾ ಕೋಟಿ, ಹನುಮಂತಪ್ಪ ಕಲ್ಲೇರ, ಶಿವಯೋಗಿ.ಎಮ್.ಡಿ, ಸೋಮನಾಥ ಬಾಬರ, ಮಂಜುನಾಥ ಹೆಗಡೆ, ನಿರಂಜನ ಬಿಳಕಿ ಇದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ಹಠಮಾರಿ ವರ್ತನೆ ನಿಮ್ಮ ಹತ್ತಿರದ ಸ್ನೇಹಿತರು ಹಾಗೂ ಮನೆಯಲ್ಲಿರುವವರಿಗೂ ನೋವುಂಟುಮಾಡುತ್ತದೆ. ನಿಮ್ಮ ಪ್ರೇಮಿ ಅಥವಾ ಪ್ರೇಮಿಕ ಇಂದು ತುಂಬಾ ಕೋಪದಲ್ಲಿ ಕಾಣಬಹುದು.

**ವೃಷಭ** ಅನಂತ ಚೈತನ್ಯ , ಉತ್ಸಾಹ ನಿಮ್ಮನ್ನು ಆವರಿಸುತ್ತದೆ. ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ.

**ಮಿಥುನ** ನಿಮ್ಮ ಸಂಗಾತಿ ಎಲ್ಲಾ ಜಗಳಗಳನ್ನು ಮರೆತು ನಿಮ್ಮನ್ನು ಪ್ರೀತಿಯಿಂದ ಆಲಂಗಿಸಲು ಬಂದಾಗ, ಜೀವನ ನಿಜವಾಗಿಯೂ ಅದ್ಭುತವಾಗಿರುತ್ತದೆ. ಒಂಟಿತನವು ನಿಮ್ಮ ಮೇಲೆ ಪ್ರಾಬಲ್ಯ ಸಾಧಿಸಲು ಬಿಡಬೇಡಿ.

**ಕರ್ಕಾಟಕ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಸಿಂಹ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ.

**ಕನ್ಯಾ** ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಸಂಗಾತಿ ಕಾಳಜಿ ತೋರಿಸುತ್ತಾರೆ. ಇದು ಪ್ರೀತಿಯಲ್ಲಿ ನಿಮ್ಮ ಅದೃಷ್ಟದ ದಿನ.

**ತುಲಾ** ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವ ದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ.

**ವೃಶ್ಚಿಕ** ನಿಮ್ಮ ಒರಟು ವರ್ತನೆ ನಿಮ್ಮ ಸ್ನೇಹಿತರಿಗೆ ಸ್ವಲ್ಪ ಸಮಸ್ಯೆ ಉಂಟು ಮಾಡಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು.

**ಧನಸ್ಸು** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ಮಕರ** ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

**ಕುಂಭ** ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಅದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಹೊಂದಿರುವ ಸಾಧ್ಯತೆ ಇದೆ.

**ಮೀನ** ನೀವು ಇತರರ ಜೊತೆ ಚೆನ್ನಾಗಿರಬಹುದಾದಾಗ –ನೀವು ಒಂದು ಸುವಾಸನಾಯುಕ್ತ ಹೂವಿನ ಹಾಗೆ ಇರುತ್ತೀರಿ. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.

### ಮನೆ, ವಾಣಿಜ್ಯ ಮಳಿಗೆಗಳಿಂದ ಸಮರ್ಪಕವಾಗಿ ಕಸ ಸಂಗ್ರಹಿಸಿ, ವಿಲೇವಾರಿ ಮಾಡದಿರುವ ಕುರಿತು ಸಾರ್ವಜನಿಕರಿಂದ ದೂರು

# ಹು-ಧಾ ಸ್ವಚ್ಛತೆಗೆ ಎರಡು ತಿಂಗಳ ಗಡುವು: ಸುಭಾಷ್ ಆಡಿ

• ಉದಯವಾಹಿನಿ ಹುಬ್ಬಳ್ಳಿ

ಎರಡು ತಿಂಗಳಲ್ಲಿ ಹುಬ್ಬಳ್ಳಿ– ಧಾರವಾಡವನ್ನು ಸ್ವಚ್ಛವಾಗಿಸಲು ಕ್ರಮ ಕೈಗೊಳ್ಳಬೇಕು. ಬ್ಲಾಕ್ ಸ್ಪಾಟ್, ಪಾದಚಾರಿ ಮಾರ್ಗ ಒತ್ತುವರಿ ತೆರವು ಮಾಡಬೇಕು ಎಂದು ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ (ಎನ್‌ಜಿಟಿ) ರಾಜ್ಯಮಟ್ಟದ ಸಮಿತಿ ಅಧ್ಯಕ್ಷ ಸುಭಾಷ್ ಆಡಿ ಸೂಚಿಸಿದರು.

ಘನ ತ್ಯಾಜ್ಯ, ಪಾರಂಪರಿಕ, ಪ್ಲಾಸ್ಟಿಕ್, ಕಟ್ಟಡ ಮತ್ತು ವೈದ್ಯಕೀಯ ತ್ಯಾಜ್ಯ ನಿರ್ವಹಣೆ ನಿಯಮಗಳು – 2016 ಮತ್ತು ಕೊಳಚೆ ನೀರು ಸಂಸ್ಕರಣಾ ಘಟಕ ನಿರ್ವಹಣೆ ಕುರಿತು ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಮನೆ, ವಾಣಿಜ್ಯ ಮಳಿಗೆ, ಅಂಗಡಿಗಳಿಂದ ಸಮರ್ಪಕವಾಗಿ ಕಸ ಸಂಗ್ರಹಿಸಿ, ವಿಲೇವಾರಿ ಮಾಡದಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಮಾಧ್ಯಮಗಳಲ್ಲಿ ವರದಿ ಪ್ರಕಟವಾಗುತ್ತಿವೆ. ತ್ಯಾಜ್ಯ ಸಮಸ್ಯೆ ಶಾಶ್ವತ ಪರಿಹಾರಕ್ಕಾಗಿ ಏನು ಕ್ರಮ ಕೈಗೊಳ್ಳಲಾಗಿದೆ' ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಸಾರ್ವಜನಿಕರು ಜನಪ್ರತಿನಿಧಿಗಳು ಅದರಲ್ಲಿ ಒಳಗೊಳ್ಳುವಂತೆ ಮಾಡಬೇಕು. ಸ್ವಚ್ಛತೆ ಬಗ್ಗೆ ಹೆಚ್ಚು ಜಾಗೃತಿ ಮೂಡಿಸಬೇಕು' ಎಂದು ಸೂಚಿಸಿದರು. ಎಲ್ಲಾ ಸರ್ಕಾರಿ, ಖಾಸಗಿ ಶಾಲೆಗಳು ಗ್ರೀನ್ ಕ್ಯಾಂಪಸ್ ಆಗಬೇಕು. ವಾರದಲ್ಲಿ ಒಂದು ದಿನವಾದರೂ ಶಿಕ್ಷಕರು ಮಕ್ಕಳಿಗೆ ಕಸದ ಬಗ್ಗೆ ತಿಳಿವಳಿಕೆ ಮೂಡಿಸಬೇಕು. ಸಸಿ ನೆಟ್ಟು ಬೆಳೆಸಬೇಕು. ಸ್ವಚ್ಛ ಶಾಲೆ ಎಂಬ ಪ್ರಮಾಣಪತ್ರ ನೀಡಬೇಕು' ಎಂದು ಡಿಡಿಪಿಐ ಎಸ್.ಎಸ್.ಕೆಳದಿಮಠ ಅವರಿಗೆ ಸೂಚಿಸಿದರು.

**ಸ್ವಚ್ಛತೆ ಬಗ್ಗೆ ಹೆಚ್ಚು ಜಾಗೃತಿ**

ದೇವಸ್ಥಾನಗಳಲ್ಲಿ ಪ್ಲಾಸ್ಟಿಕ್ ಚೀಲ ಬಳಸಲಾಗುತ್ತಿದೆ. ಈ ಬಗ್ಗೆ ಕಾರ್ಯಾಚರಣೆ ನಡೆಸಬೇಕು. ಹೋಟೆಲ್, ಕಲ್ಯಾಣ ಮಂಟಪಗಳಲ್ಲಿ ಉತ್ಪಾದನೆಯಾಗುವ ಒಣ ಕಸವನ್ನು ಪಾಲಿಕೆಗೆ ನೀಡಬೇಕು. ಹಸಿ ಕಸವನ್ನು ಅವರೇ ನಿರ್ವಹಣೆ ಮಾಡಬೇಕು. ಇಲ್ಲದಿದ್ದರೆ ಅವರಿಗೆ ನೋಟಿಸ್ ನೀಡಬೇಕು' ಎಂದರು.

ವೈದ್ಯಕೀಯ ತ್ಯಾಜ್ಯವನ್ನು ಸರಿಯಾಗಿ ವಿಲೇವಾರಿ ಮಾಡಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಗ್ರಾಮ ಸಭೆ ನಡೆಸಿ, ಮಕ್ಕಳಿಗೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಬೇಕು. ಅತ್ಯುತ್ತಮ ಗ್ರಾಮ ಪಂಚಾಯಿತಿ, ಅತ್ಯುತ್ತಮ ನಗರ ಸಭೆ ಎಂಬ ಬ್ಯಾಂಕಿಂಗ್ ನೀಡಬೇಕು' ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ನಗರದಲ್ಲಿ ಅವಶ್ಯಕತೆ ಇರುವ ಕಡೆ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು. ಅವುಗಳನ್ನು ಸರಿಯಾಗಿ ನಿರ್ವಹಣೆ ಮಾಡಿ ಸ್ವಚ್ಛತೆಗೆ ಆದ್ಯತೆ ನೀಡಬೇಕು.
> –ಸುಭಾಷ್ ಆಡಿ, ಅಧ್ಯಕ್ಷ ಎನ್‌ಜಿಟಿ ರಾಜ್ಯಮಟ್ಟದ ಸಮಿತಿ

ಯಾವುದೇ ಕೊಳಚೆ ನೀರು ಜಲಮೂಲಗಳಿಗೆ ಸೇರದಂತೆ ನೋಡಿಕೊಳ್ಳಬೇಕು. ಗಟ್ಟೂರಿನಲ್ಲಿ 40 ಎಂಎಲ್‌ಡಿ ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ) ನಿರ್ಮಿಸಲಾಗಿದೆ. ಆದರೆ, ಅಷ್ಟು ಪ್ರಮಾಣದಲ್ಲಿ ತ್ಯಾಜ್ಯ ನೀರು ಸಂಸ್ಕರಣೆಯಾಗುತ್ತಿಲ್ಲ. ಧಾರವಾಡದ ಕೆಲಗೇರಿ ಕೆರೆಗೆ ಕಲುಷಿತ ನೀರು ಸೇರದಂತೆ ಕ್ರಮವಹಿಸಬೇಕು' ಎಂದರು. ಬಸ್ ನಿಲ್ದಾಣದ ಸ್ವಚ್ಛತೆ ಕಾಪಾಡಿ, ಬಸ್ ನಿಲ್ದಾಣಗಳಲ್ಲಿ ಕಸ ಎಸೆದವರಿಗೆ ದಂಡ ವಿಧಿಸಬೇಕು.

### ದಂಡ ವಿಧಿಸಿ ಪರವಾನಗಿ ರದ್ದುಪಡಿಸಿ

**ಅಂಗಡಿಗಳಲ್ಲಿ ನಿಷೇಧಿತ ಪ್ಲಾಸ್ಟಿಕ್ ಬಳಕೆ ಮಾಡಿದರೆ ಅವರಿಗೆ ದಂಡ ವಿಧಿಸಿ ವ್ಯಾಪಾರ ಪರವಾನಗಿ ರದ್ದುಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಸುಭಾಷ್ ಆಡಿ ಸೂಚಿಸಿದರು. ಅಂಗಡಿಗಳ ಮುಂದೆ ಕಡ್ಡಾಯವಾಗಿ ಹಸಿ ಕಸ ಮತ್ತು ಒಣ ಕಸ ಸಂಗ್ರಹಣೆಗೆ ಪ್ರತ್ಯೇಕ ಡಬ್ಬಿಗಳನ್ನು ಅಳವಡಿಸಬೇಕು. ಅಂಗಡಿಗಳ ಎದುರಿನ ಕಸ ಸಂಗ್ರಹ ಜವಾಬ್ದಾರಿಯನ್ನು ಅವರಿಗೆ ವಹಿಸಬೇಕು ಎಂದರು. ಪಾಲಿಕೆ ಆಯುಕ್ತ ರುದ್ರೇಶ ಘಾಳಿ ಪ್ರತಿಕ್ರಿಯಿಸಿ 'ಈ ಬಗ್ಗೆ ಮುಂದಿನ ಹತ್ತು ದಿನ ವ್ಯಾಪಕ ಪ್ರಚಾರ ನಡೆಸಿ ಜಾಗೃತಿ ಮೂಡಿಸಲಾಗುವುದು. ನಂತರ ಎರಡು ಬಾರಿ ದಂಡ ವಿಧಿಸಲಾಗುವುದು. ಆ ಬಳಿಕವೂ ನಿಯಮ ಉಲ್ಲಂಘಿಸಿದರೆ ವ್ಯಾಪಾರ ಪರವಾನಗಿ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು' ಎಂದು ತಿಳಿಸಿದರು.**

ಸ್ವಚ್ಛತೆ ಕಾಪಾಡಿದ ಬಸ್ ನಿಲ್ದಾಣಗಳನ್ನು ಗುರುತಿಸಿ, ರ್‍ಯಾಂಕಿಂಗ್ ನೀಡಬೇಕು. ಬಸ್‌ಗಳಲ್ಲಿ ಕಸದ ಡಬ್ಬಿ ಇಡಬೇಕು. ನಿರ್ವಾಹಕರು ಪ್ರಯಾಣಿಕರಿಗೆ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಎನ್‌ಡಬ್ಲ್ಯುಕೆಆರ್‌ಟಿಸಿ ಹುಬ್ಬಳ್ಳಿ ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿ ಎಚ್.ರಾಮನಗೌಡರ ಅವರಿಗೆ ಸೂಚನೆ ನೀಡಿದರು.

ಮಹಾನಗರ ಪಾಲಿಕೆ ಆಯುಕ್ತ ರುದ್ರೇಶ ಘಾಳಿ, ಅವಳಿ ನಗರದಲ್ಲಿ ಮನೆಗಳಿಂದ ಕಸ ಸಂಗ್ರಹಿಸುವ ಕಾರ್ಯದಲ್ಲಿ ಶೇ 99ರಷ್ಟು ಪ್ರಗತಿ ಸಾಧಿಸಲಾಗಿದೆ. 622 ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಲಾಗಿತ್ತು. ಅದರಲ್ಲಿ 395 ತೆರವು ಮಾಡಲಾಗಿದೆ. ಮನೆ ಮನೆಯಿಂದ ಕಸ ಸಂಗ್ರಹಿಸಲು 283 ವಾಹನಗಳಿವೆ ಎಂದರು.

ನೈರುತ್ಯ ರೈಲ್ವೆ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪ್ರೇಮಚಂದ್ರ ಹರಿಜನ್, ರೈಲ್ವೆ ಪ್ರಯಾಣಿಕರ ಹಿತದೃಷ್ಟಿಯಿಂದ ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಮಾಡಲಾಗಿದ್ದು, ಕಸ ಸಂಗ್ರಹಕ್ಕೆ ಡಬ್ಬಿಗಳನ್ನು ಅಳವಡಿಸಲಾಗಿದೆ. ಮಳೆ ನೀರು ಸಂಗ್ರಹ, ಸೌರ ಶಕ್ತಿ ಬಳಕೆಗೆ ಹೆಚ್ಚು ಒತ್ತು ನೀಡಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಜಗದೀಶ ಇದ್ದರು.



ಉದಯವಾಹಿನಿ ಚಿತ್ರ

## ಆಯುಷ್ ಇಲಾಖೆಯ ಸೌಲಭ್ಯಗಳನ್ನು ಪ್ರತಿ ಮನೆಗೆ ತಲುಪಿಸುವ ಸಲುವಾಗಿ ಸರ್ವೇಕ್ಷಣೆ ಅಗತ್ಯವಿದೆ: ಡಾ. ಎಸ್.ನಾಗಸಮುದ್ರ

• ಉದಯವಾಹಿನಿ ಚಿತ್ರದುರ್ಗ

ಆಯುಷ್ ಇಲಾಖೆ ಯೋಗ ತರಬೇತುದಾರರು ಸಾಧ್ಯವಾದಷ್ಟು ಗ್ರಾಮದ ಮನೆಗಳ ಸರ್ವೇಕ್ಷಣೆ ನಡೆಸಿ ಕುಟುಂಬದ ಪ್ರತಿಯೊಬ್ಬರ ಆರೋಗ್ಯ ಸ್ಥಿತಿಯನ್ನು ಅರಿತು ರೋಗಕ್ಕೆ ಅನುಗುಣವಾಗಿ ಯೋಗಾಸನ-ಪ್ರಾಣಾಯಾಮಗಳನ್ನು ಕಲಿಸಿ ಔಷಧ ಮುಕ್ತ ಮತ್ತು ರೋಗ ಮುಕ್ತ ಗ್ರಾಮಗಳನ್ನಾಗಿ ಮಾಡುವ ಜವಾಬ್ದಾರಿ ವಹಿಸಬೇಕಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಚಂದ್ರಕಾಂತ ಎಸ್ ನಾಗಸಮುದ್ರ ತಿಳಿಸಿದ್ದಾರೆ.

ಶುಕ್ರವಾರ ನಗರದ ಜಿಲ್ಲಾ ಆಯುಷ್ ಕಚೇರಿಯಲ್ಲಿ ಯೋಗ ತರಬೇತುದಾರರಿಗಾಗಿ ಏರ್ಪಡಿಸಿದ್ದ ಆರೋಗ್ಯ ಸರ್ವೇಕ್ಷಣೆ ತರಬೇತಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡುತ್ತಾ ದೀರ್ಘಕಾಲದ ಕಾಯಿಲೆಗಳಾದ ಮಧುಮೇಹ, ಸಂಧಿವಾತ ಮತ್ತು ರಕ್ತದೊತ್ತಡ ನಿರ್ವಹಣೆಯಲ್ಲಿ ಆಯುಷ್ ಪದ್ಧತಿಯ ಚಿಕಿತ್ಸೆ ಹಾಗೂ ಯೋಗಸನ ಪ್ರಾಣಾಯಾಮಗಳು ಪರಿಣಾಮಕಾರಿ ಎಂದು ಸಾಬೀತಾಗಿದೆ ಅವುಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸ ಆಯುಷ್ ಇಲಾಖೆಯ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು ಈ ನಿಟ್ಟಿನಲ್ಲಿ ಚಿತ್ರದುರ್ಗ ಕ್ಷೇತ್ರ ವ್ಯಾಪ್ತಿಯಲ್ಲಿ ಉತ್ತಮ ಸೇವೆಯ ಪರಿಣಾಮವಾಗಿ ಚಿತ್ರದುರ್ಗ ತಾಲ್ಲೂಕಿನ ಜೆ ಎನ್ ಕೋಟೆ ಆಯುಷ್ ಆರೋಗ್ಯ ಮಂದಿರವನ್ನು ಸರ್ಕಾರ ಆಯುಷ್ ಗ್ರಾಮವನ್ನಾಗಿ ಘೋಷಿಸಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಹಾಯಕ ಆಯುಷ್ ಆಡಳಿತಾಧಿಕಾರಿ ವಿಶ್ವನಾಥ್ ಹಿರೇಮಠ್ , ಜಿಲ್ಲೆಯ ಎಲ್ಲಾ ಆಯುಷ್ ಆರೋಗ್ಯ ಮಂದಿರಗಳ ಯೋಗ ತರಬೇತುದಾರರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತಿ ಇದ್ದರು.

### ರೋಗಮುಕ್ತ ಗ್ರಾಮಕ್ಕಾಗಿ ಆಯುಷ್ ಗ್ರಾಮ ಯೋಜನೆ




**ಇದೇ ಸಂಧರ್ಭದಲ್ಲಿ ಆರೋಗ್ಯ ಸರ್ವೇಕ್ಷಣಾ ತರಬೇತಿಯನ್ನು ನೀಡಿ ಮಾತನಾಡಿದ ಜಿಲ್ಲಾ ಆಯುಷ್ ಇಲಾಖೆಯ ನೋಡಲ್ ಅಧಿಕಾರಿ ಡಾಕ್ಟರ್ ಶಿವಕುಮಾರ್ ಟಿ ಮಾತನಾಡಿ ಆಯುಷ್ ಗ್ರಾಮ ಎಂಬುದು ಭಾರತ ಸರ್ಕಾರದ ಸಚಿವಾಲಯವಾದ ಆಯುಷ್ ಸಚಿವಾಲಯದ ಒಂದು ಕಾರ್ಯಕ್ರಮವಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಆಯುರ್ವೇದ, ಯೋಗ, ಪ್ರಕೃತಿ ಚಿಕಿತ್ಸೆ, ಯುನಾನಿ, ಸಿದ್ಧ, ಸೋವಾ-ರಿಗ್ಪಾ, ಮತ್ತು ಹೋಮಿಯೋಪತಿ ಮುಂತಾದ ಸಾಂಪ್ರದಾಯಿಕ ಆರೋಗ್ಯ ಪದ್ಧತಿಗಳನ್ನು ಪ್ರೋತ್ಸಾಹಿಸಲು ಮತ್ತು ಉತ್ತೇಜಿಸಲು ಇದನ್ನು ಸ್ಥಾಪಿಸಲಾಗಿದೆ. ಈ ಕಾರ್ಯಕ್ರಮದ ಮುಖ್ಯ ಉದ್ದೇಶವೆಂದರೆ ಗ್ರಾಮೀಣ ಭಾಗದ ಜನರು ಆಯುಷ್-ಆಧಾರಿತ ಜೀವನಶೈಲಿಯನ್ನು ಅಳವಡಿಸಿಕೊಂಡು, ಆರೋಗ್ಯ ರಕ್ಷಣೆಯಲ್ಲಿ ಈ ಸಾಂಪ್ರದಾಯಿಕ ವಿಧಾನಗಳನ್ನು ಬಳಸುವುದಕ್ಕೆ ಒತ್ತು ನೀಡುವುದಕ್ಕಾಗಿ ಮೊದಲು ಜನರ ಆರೋಗ್ಯ ಸ್ಥಿತಿಯನ್ನು ಅರಿತುಕೊಳ್ಳುವುದು ಅವಶ್ಯಕವಾಗಿದೆ ಅದಕ್ಕಾಗಿ ಆಯುಷ್ ಆರೋಗ್ಯ ಮಂದಿರಗಳ ವ್ಯಾಪ್ತಿಯ ಪ್ರತಿಯೊಂದು ಮನೆಗಳನ್ನು ಸರ್ವೇಕ್ಷಣೆ ಮಾಡುವ ಉದ್ದೇಶದಿಂದ ಈ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯಕ್ರಮದ ಉದ್ದೇಶ ತಿಳಿಸಿದರು.**

## ನೀರಿನ ಸಮಸ್ಯೆ ನಿವಾರಣೆಗೆ ಒತ್ತಾಯ

• ಉದಯವಾಹಿನಿ ಸಂಡೂರು

ತಾಲ್ಲೂಕಿನ ಹೊಸದರೋಜಿ ಗ್ರಾಮದಲ್ಲಿ ಕುಡಿಯುವ ನೀರಿನ, ಓಣಿಗಳಲ್ಲಿ ರಸ್ತೆಯ ಮೇಲೆ ಹರಿಯುವ ಚರಂಡಿಯ ನೀರಿನ ಸಮಸ್ಯೆ ನಿವಾರಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ (ಎಚ್. ಶಿವರಾಮೇಗೌಡ ಬಣ) ಮುಖಂಡರು, ಸಾರ್ವಜನರಿಕರು ಪಿಡಿಓ ಬೂದುಗುಂಪೆ ಫಕ್ಕಿರಪ್ಪ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ಗ್ರಾಮ ಘಟಕದ ಅಧ್ಯಕ್ಷ ವಿ.ಪಾಂಡುರಂಗ ಮಾತನಾಡಿ, ಹೊಸದರೋಜಿ ಗ್ರಾಮದ ಕೆಲ ವಾರ್ಡ್‌ಗಳಲ್ಲಿ ಹಲವು ದಿನಗಳಿಂದ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು ಜನರು ನೀರಿಗಾಗಿ ಪರದಾಡುತ್ತಿದ್ದಾರೆ. ನೀರಿನ ಟ್ಯಾಂಕರ್‌ಗಳನ್ನು ಸಕಾಲಕ್ಕೆ ಸ್ವಚ್ಛಗೊಳಿಸಬೇಕು. ಅಧಿಕಾರಿಗಳು ನೀರಿನ ಸಮಸ್ಯೆಯನ್ನು ಶೀಘ್ರವಾಗಿ ನಿವಾರಿಸಬೇಕು. ಗ್ರಾಮದ ಕೆಲ ಓಣಿಗಳಲ್ಲಿ ಚರಂಡಿಯ ನೀರು ಸಾರ್ವಜನಿಕ ಸಂಚಾರದ ರಸ್ತೆಯ ಮೇಲೆ ನೀರು ಹರಿಯುತ್ತಿದ್ದು ಸಂಚಾರಕ್ಕಾಗಿ ಸಮಸ್ಯೆಯಾಗಿದೆ. ನೂತನ ಚರಂಡಿಗಳನ್ನು ನಿರ್ಮಿಸಬೇಕು ಎಂದು ಒತ್ತಾಯಿಸಿದರು.ಮುಖಂಡರಾದ ವಿ.ರಾಮಲಿಂಗ, ಯಂಕಪ್ಪ, ಪಕುರುದ್ದೀನ್‌ಸಾಬ್, ಕುಮಾರ್, ಹಾಜರಿದ್ದರು.


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

**ನಗರದ ಕೋಮ್ಟಿಗಲ್ಲಿ ಗಣೇಶ ಪ್ರತಿಷ್ಠಾಪನೆ ಪ್ರಯುಕ್ತ ಬಡಾವಣೆಯ ಮಹಿಳೆಯರೆಲ್ಲರೂ ವಿಘ್ನೇಶ್ವರನಿಗೆ ಆರುತಿ ಬೆಳಗಿದರು.**

## ಮರಗಳ ರಕ್ಷಣೆಗೆ ಮಹಿಳೆಯರು ಅತ್ಯುತ್ತಮ ಕಾರ್ಯಕ್ರಮ: ಎಮ್ ಸಮೀವುಲ್ಲಾ

• ಉದಯವಾಹಿನಿ ಅರಸೀಕೆರೆ

ಅಮೃತ ಮಿತ್ರ ಕಾರ್ಯಕ್ರಮದ ಅಡಿಯಲ್ಲಿ ಮರಗಳ ರಕ್ಷಣೆಗೆ ಮಹಿಳೆಯರು ಎಂಬ ಕಾರ್ಯಕ್ರಮ ಉತ್ತಮ ಕಾರ್ಯಕ್ರಮ ಆಗಿದ್ದು ಮಹಿಳೆಯರು ತಮ್ಮ ತಮ್ಮ ಕುಟುಂಬಗಳನ್ನು ಹೇಗೆ ಉತ್ತಮ ರೀತಿಯಲ್ಲಿ ಸಾಗಿಸುತ್ತಾರೋ ಅದೇ ರೀತಿ ಮಹಿಳೆಯ ಹೆಸರು ತಾಯಂದಿರು ತಮ್ಮ ಅಕ್ಕತಂಗಿಯರ ಹೆಸರಿನಲ್ಲಿ ಗಿಡಗಳನ್ನು ನೆಟ್ಟು ಉತ್ತಮ ಕಾರ್ಯ ಮಾಡುವುದರಲ್ಲಿ ಯಾವುದೇ ಸಂದೇಹ ಇಲ್ಲ ಇದರಿಂದ ಸರ್ಕಾರ ಚಿಂತನೆ ಮಾಡಿ ಈ ಯೋಜನೆ ಜಾರಿಗೆ ತಂದಿದೆ .

ಮಹಿಳೆಯರು ಈ ರೀತಿ ಗಿಡಗಳನ್ನು ನೆಟ್ಟ ಹಸಿರು ಯುಕ್ತ ನಗರಗಳನ್ನು ನಿರ್ಮಾಣ ಮಾಡಿ ಪರಿಸರ ಕಾಪಾಡುವಲ್ಲಿ ಮಹಿಳೆಯರ ಪಾತ್ರ ಹೆಚ್ಚಾಗಿದೆ ಹೀಗಾಗಿ ಈ ಕಾರ್ಯಕ್ರಮ ಮುಂದಿನ ದಿನಗಳಲ್ಲಿ ಯಶಸ್ವಿಯಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಅರಸೀಕೆರೆ ನಗರಸಭೆಯ ಅಧ್ಯಕ್ಷರಾದ ಎಮ್ ಸಮೀವುಲ್ಲಾ ತಿಳಿಸಿದರು. ಅರಸೀಕೆರೆ ನಗರದ ಜೇನುಕಲ್ ನಗರದ ಬಳಿ ಇರುವ ನಗರ ಸಭೆಯ ನೀರು ಶುದ್ಧೀಕರಣ ಘಟಕದ ಆವರಣದಲ್ಲಿ ಈ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಈಗಾಗಲೇ ಅರಸೀಕೆರೆ ನಗರದಲ್ಲಿ ಎರಡು ಮಹಿಳಾ ಸ್ವಸಹಾಯ ಸಂಘಗಳಿಗೆ ಉದ್ಯಾನವನಗಳ ನಿರ್ವಹಣೆಗಾಗಿ ನಗರಸಭಾ ವತಿಯಿಂದ ಜವಾಬ್ದಾರಿ ನೀಡಿದ್ದು ಈ ಕಾರ್ಯವನ್ನು ಸ್ವಸಾಯ ಸಂಘದ ಮಹಿಳೆಯರು ಯಶಸ್ವಿಯಾಗಿ ಮತ್ತು ಶಿಸ್ತಿನಿಂದ ನಡೆಸುತ್ತಿದ್ದಾರೆ ಮಹಿಳೆಯರಿಗೆ ಯಾವುದೇ ಜವಾಬ್ದಾರಿಗಳನ್ನು ನೀಡಿದಲ್ಲಿ ಉತ್ತಮ ರೀತಿಯಲ್ಲಿ ನಡೆಸಿಕೊಂಡು ಹೋಗುತ್ತಾರೆ ಎನ್ನುವುದಕ್ಕೆ ಈ ಕಾರ್ಯಕ್ರಮ ಉದಾಹರಣೆಯಾಗಿದೆ ಎಂದರು.



ಉದಯವಾಹಿನಿ ಚಿತ್ರ


**ಸ್ವಸಹಾಯ ಸಂಘಗಳಿಗೆ ಉದ್ಯಾನವನಗಳ ನಿರ್ವಹಣೆ**

ನಗರಸಭೆ ಆಯುಕ್ತರಾದ ಕೃಷ್ಣಮೂರ್ತಿ ಉಪಾಧ್ಯಕ್ಷರಾದ ಮನೋಹರ್ ನಗರಸಭೆ ಸದಸ್ಯರುಗಳಾದ ಪ್ರೇಮ. ಅನ್ನಪೂರ್ಣ. ದರ್ಶನ್ . ನಗರ ಸಭೆಯ ಸಮುದಾಯ ಸಂಘಟನಾಧಿಕಾರಿಗಳಾದ ರಾಜಶೇಖರ್ ಉಪಸ್ಥಿತರಿದ್ದರು

## ನಿರ್ವಹಣೆ ಕೊರತೆ ವಿಜಯಪುರದಲ್ಲಿ ರಸ್ತೆಗಳು ಹಾಳು

• ಉದಯವಾಹಿನಿ ವಿಜಯಪುರ

ವಿಜಯಪುರ ನಗರ ಸೇರಿದಂತೆ ವಿಜಯಪುರ, ನಾಗಠಾಣ ಮತ ಕ್ಷೇತ್ರದಲ್ಲಿ ರಸ್ತೆಗಳು ಹದಗೆಟ್ಟು ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿದೆ ಎಂದು ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಆರೋಪಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಒಂದು ವರ್ಷದಲ್ಲಿ ರಸ್ತೆಗಳು ಹಾಳಾಗಿವೆ. ನಿರ್ವಹಣೆ ಕೊರತೆಯಿಂದ ರಸ್ತೆಗಳು ಹದಗೆಟ್ಟಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಗಮನ ಹರಿಸಿಲ್ಲ. ಇದರಿಂದ ಜನರು ತೊಂದರೆ ಎದುರಿಸುತ್ತಿದ್ದಾರೆ ಎಂದರು. ಮಹಾನಗರ ಪಾಲಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದೆ. ಇ-ಸ್ವತ್ತು ದಂಧೆಯನ್ನಾಗಿ ಮಾಡಿಕೊಂಡಿದ್ದಾರೆ ಎಂದು ಆಪಾದಿಸಿದರು. ಹಿಂದೂ ಮಹಿಳೆಯರ ಬಗ್ಗೆ ಅವಮಾನಕರವಾಗಿ ಯಾರೇ ಮಾತನಾಡಿದರೂ ತಪ್ಪು. ಮಹಿಳೆಯರಿಗೆ ವಿಶೇಷ ಸ್ಥಾನಮಾನ ಇದೆ. ನ್ಯಾಯವಾದಿ ಖಾದ್ರಿ, ಮಹಿಳೆಯರ ಬಗ್ಗೆ ಅವಮಾನಕರವಾಗಿ ಮಾತನಾಡಿದ್ದು ತಪ್ಪು. ಇನ್ನು ಮುಂದೆ ಖಾದ್ರಿ ವಕೀಲರು ಜವಾಬ್ದಾರಿಯುತವಾಗಿ ಮಾತನಾಡಬೇಕು ಎಂದು ಸಲಹೆ ನೀಡಿದರು. ಶಾಸಕ ಯತ್ನಾಳ ವಿರುದ್ಧ ರಾಜಕೀಯ ಟೀಕೆ ಮಾಡಬಹುದು. ಅವರ ಕುಟುಂಬದ ಮಹಿಳೆಯರ ಬಗ್ಗೆ ಮಾತನಾಡುವುದು ಯಾರಿಗೂ ಶೋಭೆ ತರುವಂತಹದ್ದಲ್ಲ ಎಂದು ಹೇಳಿದರು. ವಿಜಯಪುರಕ್ಕೆ ಪಿಪಿಪಿ ಮಾದರಿ ವೈದ್ಯಕೀಯ ಕಾಲೇಜ್ ಬೇಡ ಎಂದು ಪ್ರತಿಕ್ರಿಯೆ ನೀಡಿದರು.



## ನಕಲಿ ಅಂಕಪಟ್ಟಿ: ಮೂವರು ಗ್ರಾಮ ಲೆಕ್ಕಿಗರಿಗೆ ಜೈಲು ಶಿಕ್ಷೆ

• ಉದಯವಾಹಿನಿ ಬಾಗಲಕೋಟೆ

ಪಿಯುಸಿ ದ್ವಿತೀಯ ವರ್ಷದ ನಕಲಿ ಅಂಕಪಟ್ಟಿ ಸಲ್ಲಿಸಿ ಗ್ರಾಮ ಲೆಕ್ಕಿಗ ಹುದ್ದೆ ಪಡೆದಿದ್ದ ಮೂವರಿಗೆ ಹಿರಿಯ ಸಿವಿಲ್ ಮತ್ತು ಸಿಜೆಎಂ ನ್ಯಾಯಾಲಯದ ನ್ಯಾಯಾಧೀಶ ಮಹೇಶ ಪಾಟೀಲ ಅವರು ನಾಲ್ಕು ವರ್ಷ ಜೈಲು ಶಿಕ್ಷೆಯ ಜೊತೆಗೆ 25 ಸಾವಿರ ದಂಡ ವಿಧಿಸಿ, ಆದೇಶ ಹೊರಡಿಸಿದ್ದಾರೆ.

2011ರಲ್ಲಿ ಗ್ರಾಮ ಲೆಕ್ಕಿಗರ ಹುದ್ದೆಗೆ ನೇರ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿತ್ತು. ಹುದ್ದೆ ಪಡೆಯಲು ನಕಲಿ ಅಂಕಪಟ್ಟಿ ಸಲ್ಲಿಸಿ, ನವ್ಯಶ್ರೀ ದೇವರಾಜ, ನಟರಾಜ ಮುನಿಯಪ್ಪ ಮತ್ತು ಸುಬ್ರಮಣಿ ಎನ್.ಸಿ ಹುದ್ದೆ ಗಿಟ್ಟಿಸಿಕೊಂಡಿದ್ದರು. ಅವರ ವಿರುದ್ಧ ಬೀಳಗಿ ಮತ್ತು ನವನಗರ ಠಾಣೆಯಲ್ಲಿ ಪ್ರಕರಣಗಳು ದಾಖಲಾಗಿದ್ದವು. ತುಮಕೂರು ಜಿಲ್ಲೆಯ ಡಿ.ಎಂ. ಪಾಳ್ಯದ ನವ್ಯಶ್ರೀ, ಮುಧೋಳ ತಾಲ್ಲೂಕಿನ ಜಿರಗಾಳ, ಚಿಚಖಂಡಿ ಗ್ರಾಮದಲ್ಲಿ, ಚಿಕ್ಕಬಳ್ಳಾಪುರ ಶಾಂತಿನಗರದ ನಟರಾಜ ಜಮಖಂಡಿ ತಾಲ್ಲೂಕಿನ ಹನಗಂಡಿ, ಚಿಕ್ಕಬಳ್ಳಾಪುರ ಜಿಲ್ಲೆಯ ನಲ್ಲೇನಹಳ್ಳಿಯ ಸುಬ್ರಮಣಿ ಜಮಖಂಡಿ ಹಾಗೂ ರಬಕವಿ-ಬನಹಟ್ಟಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ಮಹಾಂತೇಶ ಮಸಳಿ ಸರ್ಕಾರದ ಪರವಾಗಿ ವಾದ ಮಂಡಿಸಿದರು.

## ಮೀನುಗಾರರಿಂದ ಅರ್ಜಿ ಆಹ್ವಾನ

• ಉದಯವಾಹಿನಿ ಬಾಗಲಕೋಟೆ

ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನುಗಾರರಿಗೆ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ50ರಷ್ಟು ಅಥವಾ ಗರಿಷ್ಠ 3 ಲಕ್ಷ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಸೆ.9 ಕೊನೆ ದಿನ. ಮಾಹಿತಿಗೆ ಮೀನುಗಾರಿಕೆ ಉಪನಿರ್ದೇಶಕ (90086 97699), ಮೀನುಗಾರಿಕೆ ಸಹಾಯಕ ನಿರ್ದೇಶಕ, ಬಾದಾಮಿ (80953 03104) ಮತ್ತು ಮೀನುಗಾರಿಕೆ ಸಹಾಯಕ ನಿರ್ದೇಶಕ, ಜಮಖಂಡಿ (98868 20761) ಅವರನ್ನು ಕಚೇರಿ ವೇಳೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಉತ್ತಮ ರಸ್ತೆಗಳ ನಿರ್ಮಾಣದಿಂದ ಸಂಚಾರ ಸುಗಮ: ಶಾಸಕ ಲಕ್ಷ್ಮಣ ಸವದಿ

• ಉದಯವಾಹಿನಿ ಅಥಣಿ

ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ''ಗ್ರಾಮೀಣ ಭಾಗದ ರಸ್ತೆಗಳ ಸುಧಾರಣೆಗೆ ಆದ್ಯತೆ ನೀಡಲಾಗಿದ್ದು. ಉತ್ತಮ ಗುಣಮಟ್ಟದ ರಸ್ತೆಗಳ ನಿರ್ಮಾಣದಿಂದ ಬೆಳೆದ ಬೆಳೆಗಳನ್ನು ಮಾರುಕಟ್ಟೆಗೆ ಸಾಗಿಸಲು ರೈತಾಪಿ ವರ್ಗದವರಿಗೆ. ವಿದ್ಯಾಭ್ಯಾಸಕ್ಕಾಗಿ ಊರಿಂದ ಊರಿಗೆ ಹೋಗುವ ವಿದ್ಯಾರ್ಥಿಗಳಿಗೆ. ವ್ಯಾಪಾರ ವಹಿವಾಟು ನಡೆಸುವ ವ್ಯಾಪಾರಸ್ಥರಿಗೆ ಹಾಗೂ ನಾಗರಿಕರಿಗೆ ತುಂಬಾ ಅನುಕೂಲವಾಗಲಿದೆ. ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು. ಅವರು ತಾಲ್ಲೂಕಿನ ತಂಗಡಿ ಗ್ರಾಮದಿಂದ ಮುರುಗುಂಡಿ ವರೆಗಿನ ಮುಖ್ಯ ರಸ್ತೆ ಹಾಗೂ ಶೇಗುಣಸಿಯಿಂದ ಕುಮಾರ ಗಸ್ತಿ ತೋಟದ ವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಒಟ್ಟು 4 ಕೋಟಿ ರೂಗಳ ವೆಚ್ಚದಲ್ಲಿ ಈ ಎರಡು ರಸ್ತೆಗಳ ಕಾಮಗಾರಿ ಭೂಮಿ ಪೂಜೆ ನೆರವೇರಿಸಲಾಗಿದ್ದು ಇದರಿಂದ ಈ ಭಾಗದ ಗ್ರಾಮಗಳ ಜನರಿಗೆ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ ಎಂದರು. ಇದೇ ಸಂದರ್ಭದಲ್ಲಿ, ಶೇಗುಣಸಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಅಂಗನವಾಡಿ ಕಟ್ಟಡ, ಶಾಲೆಯ ಗ್ರಂಥಾಲಯ ಹಾಗೂ ಗಣಕಯಂತ್ರಗಳ ನೂತನ ಕೊಠಡಿಗಳನ್ನು ಶಾಸಕ ಲಕ್ಷ್ಮಣ ಸವದಿ ಉದ್ಘಾಟಿಸಿದರು. ಪಟ್ಟಣ ಹಾಗೂ ಗ್ರಾಮೀಣ ಭಾಗದ. ಮಕ್ಕಳ ಶಿಕ್ಷಣಕ್ಕೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ನಮ್ಮ ಪ್ರಮುಖ ಜವಾಬ್ದಾರಿಯಾಗಿದೆ. ನೂತನ ಅಂಗನವಾಡಿ ಕಟ್ಟಡ ಮತ್ತು ಶಾಲಾ ಕೊಠಡಿಗಳು ಮಕ್ಕಳಿಗೆ ಉತ್ತಮ ಕಲಿಕಾ ವಾತಾವರಣವನ್ನು ಒದಗಿಸುತ್ತವೆ. ಎಂದ ಅವರು ಅಥಣಿ ಮತಕ್ಷೇತ್ರವು ಶೈಕ್ಷಣಿಕ ಕ್ರಾಂತಿಯತ್ತ ಸಾಗಿದೆ ಶೈಕ್ಷಣಿಕ ಪ್ರಗತಿಗೆ ದೊಡ್ಡ ಕೊಡುಗೆಯಾಗಿದೆ ಎಂದರು.


ಉದಯವಾಹಿನಿ ಚಿತ್ರ

## ನಿಷೇಧಿತ ಜಾಗದಲ್ಲಿ ಪೊಲೀಸ್ ವಾಹನ ನಿಲುಗಡೆ: ಚಾಲಕನಿಗೆ ದಂಡ

• ಉದಯವಾಹಿನಿ ಕೊಪ್ಪ

ಪಟ್ಟಣದ ನಿಷೇಧಿತ ನಿಲುಗಡೆ ಜಾಗದಲ್ಲಿ ವಾಹನ ನಿಲ್ಲಿಸಿದ್ದ ಎನ್.ಆರ್.ಪುರ ಪೊಲೀಸ್ ಕಚೇರಿಗೆ ಸೇರಿದ ವಾಹನಕ್ಕೆ ಇಲ್ಲಿನ ಪೊಲೀಸರು ದಂಡ ವಿಧಿಸಿದ್ದಾರೆ.

ಪಟ್ಟಣದ ಬಸ್ ನಿಲ್ದಾಣದ ಆವರಣದ ಸಮೀಪ ಖಾಸಗಿ ವಾಹನಗಳ ನಿಲುಗಡೆಗೆ ಅವಕಾಶ ಕಲ್ಪಿಸಿ, ಉಳಿದ ವಾಹನ ನಿಷೇಧಿತ ಜಾಗಕ್ಕೆ ಬ್ಯಾರಿಕೇಡ್ ಅಳವಡಿಸಿದ್ದಾರೆ. ಎನ್.ಆರ್.ಪುರ ಸರ್ಕಲ್ ಇನ್‌ಸ್ಪೆಕ್ಟರ್ ಕಚೇರಿ ಜೀಪ್ ಅನ್ನು ಈ ಸ್ಥಳದಲ್ಲಿ ನಿಲ್ಲಿಸಿದ್ದರು. ಕೊಪ್ಪ ಠಾಣೆಯ ಪೊಲೀಸ್ ಸಿಬ್ಬಂದಿ ಮೊದಲು ಜೀಪ್ ಚಕ್ರಕ್ಕೆ ಲಾಕ್ ಅಳವಡಿಸಿದರು. ಬಳಿಕ ಪಿಎಸ್‌ಐ ಬಸವರಾಜ್ ಅವರು ಎನ್.ಆರ್.ಪುರ ಪೊಲೀಸ್ ಜೀಪ್ ಚಾಲಕ ಉಬೆದುಲ್ಲಾ ಅವರಿಗೆ 500 ದಂಡ ವಿಧಿಸಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಒಂದು ವಾರದ ಹಿಂದೆ ಇದೇ ಬಸ್ ನಿಲ್ದಾಣ ಸಮೀಪ ವಾಹನ ನಿಷೇಧಿತ ಸ್ಥಳದಲ್ಲಿ ನಿಲ್ಲಿಸಿದ್ದ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಗೆ ಸೇರಿದ ಜೀಪ್‌ಗೆ ದಂಡ ವಿಧಿಸಲಾಗಿತ್ತು.

### • ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದ ಹಲವು ಗ್ರಾಮಗಳ ರಸ್ತೆ ಸಂಪರ್ಕ ಕಡಿತ

# ಬೆಳೆ ಹಾನಿಯ ಬಗ್ಗೆ ಸಮೀಕ್ಷೆ ನಡೆಸಿ ಪರಿಹಾರ ಒದಗಿಸಿ: ಈಶ್ವರ ಖಂಡ್ರೆ

• ಉದಯವಾಹಿನಿ ಬೀದರ್

ಮೂರ್ನಾಲ್ಕು ದಿನ ಸುರಿದ ಸತತ ಮಳೆಗೆ ಜಿಲ್ಲೆಯಾದ್ಯಂತ ಆಗಿರುವ ಹಾನಿಯ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ನಗರದ ಜಿಲ್ಲಾ ಪಂಚಾಯಿತಿಯಲ್ಲಿ ಶುಕ್ರವಾರ ನಡೆದ ಪರಾಮರ್ಶನ ಸಭೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

'ವಿಪರೀತ ಮಳೆಯಿಂದ ಜಿಲ್ಲೆಯಲ್ಲಿ ಆಗಿರುವ ಬೆಳೆ ಹಾನಿಯ ಬಗ್ಗೆ ಕೂಡಲೇ ಸಮೀಕ್ಷೆ ನಡೆಸಿ, ರೈತರಿಗೆ ಬೆಳೆ ವಿಮೆ ಕಂಪನಿಗಳಿಂದ ಸೂಕ್ತ ಪರಿಹಾರ ದೊರಕಿಸಿಕೊಡಲು ಕ್ರಮ ವಹಿಸಬೇಕು' ಎಂದು ಜಿಲ್ಲಾಡಳಿತ ಮತ್ತು ಕೃಷಿ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ಕಳೆದ 15 ದಿನಗಳ ಹಿಂದೆ ಹಾಗೂ ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದ ಹಲವು ಗ್ರಾಮಗಳ ರಸ್ತೆ ಸಂಪರ್ಕ ಕಡಿತವಾಗಿದೆ. ಪುನರ್ ಸ್ಥಾಪನೆಗೆ ತಕ್ಷಣವೇ ಕ್ರಮ ವಹಿಸಬೇಕು.

ಕಾರ್ಯನಿರ್ವಾಹಕ ಎಂಜಿನಿಯರ್‌ಗಳು ವಾಟ್ಸ್‌ಆ್ಯಪ್‌ನಲ್ಲಿ ಮಾಹಿತಿ ತರಿಸಿಕೊಳ್ಳುವ ಪ್ರವೃತ್ತಿ ಬಿಟ್ಟು, ತಾವೇ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಪರಿಶೀಲಿಸಿ ತುರ್ತು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಮಳೆಯಿಂದ ರಸ್ತೆ ಸಂಪರ್ಕ ಕಡಿತವಾಗಿ ಹಲವು ಗ್ರಾಮಗಳಿಗೆ ಬಸ್ ಸಂಚಾರ ಸ್ಥಗಿತವಾಗಿದೆ. ಔರಾದ್, ಕಮಲನಗರ, ಭಾಲ್ಕಿ ತಾಲ್ಲೂಕುಗಳ ಹೆಚ್ಚಿನ ಗ್ರಾಮಗಳಲ್ಲಿ ಬಸ್ ಸಂಚಾರ ಸ್ಥಗಿತವಾಗಿದೆ. ಕೂಡಲೇ ಮರುಸ್ಥಾಪಿಸಬೇಕು ಎಂದು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

**ಗುಂಡಿ ಮುಚ್ಚಿರಿ:** ಒಂದು ವಾರದಲ್ಲಿ ಬೀಳುವ ಮಳೆ ಒಂದೇ ದಿನದಲ್ಲಿ ಬಿದ್ದಿರುವ ಪರಿಣಾಮವಾಗಿ ಹಲವು ರಸ್ತೆಗಳಲ್ಲಿ ಗುಂಡಿಗಳು ಬಿದ್ದಿವೆ. ದ್ವಿಚಕ್ರ ವಾಹನ ಚಾಲಕರು ಬಿದ್ದು ಗಾಯಗೊಳ್ಳುತ್ತಿದ್ದಾರೆ. ಕೂಡಲೇ ಈ ಎಲ್ಲಾ ಗುಂಡಿಗಳನ್ನು ಸಮರೋಪಾದಿಯಲ್ಲಿ ಮುಚ್ಚಬೇಕು. ಮಳೆಗಾಲ ಮುಗಿದ ತರುವಾಯ ಅಕ್ಟೋಬರ್ ತಿಂಗಳಲ್ಲಿ ಶಾಶ್ವತವಾಗಿ ಈ ರಸ್ತೆಗಳ ದುರಸ್ತಿ ಕಾರ್ಯ ಮಾಡಿಸಬೇಕೆಂದು ಸೂಚಿಸಿದರು.

ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಅಡಿ ಎಷ್ಟು ಹಣ ಲಭ್ಯವಾಗಲಿದೆ ಎಂಬುದನ್ನು ಅಂದಾಜು ಮಾಡಿ, ಮಳೆಯಿಂದ ಆಗಿರುವ ಹಾನಿಗೆ ಸೂಕ್ತ ಪರಿಹಾರ ದೊರಕಿಸಬೇಕು. ತಾತ್ಕಾಲಿಕವಾಗಿ ಕೈಗೊಳ್ಳಬೇಕಾದ ಕ್ರಮಗಳನ್ನು ಯಾವುದೇ ವಿಳಂಬವಿಲ್ಲದೆ ಕೈಗೊಳ್ಳಬೇಕು. ಶಾಶ್ವತ ಕಾಮಗಾರಿ ಕೈಗೊಳ್ಳಲು ಪ್ರಸ್ತಾವ ಸಲ್ಲಿಸಬೇಕೆಂದು ತಿಳಿಸಿದರು.

ನೌಬಾದ್– ಹೈದರಾಬಾದ್ ರಿಂಗ್ ರಸ್ತೆ (ಗಡಿ ವರೆಗೆ) ಕಾಮಗಾರಿಯನ್ನು ಚರಂಡಿಯಿಂದ ಚರಂಡಿಯವರೆಗೆ ಕೈಗೊಳ್ಳಲು ಮತ್ತು ಈ ರಸ್ತೆಯಲ್ಲಿ ಸಾರ್ವಜನಿಕ ಉಪಯೋಗಕ್ಕೆ ಸ್ಥಳ ಬಿಟ್ಟು ಎಷ್ಟು ಕಿ.ಮೀ ರಸ್ತೆ ಅಭಿವೃದ್ಧಿಪಡಿಸಬೇಕಾಗುತ್ತದೆ ಎಂಬುದರ ಸಮೀಕ್ಷೆ ನಡೆಸಿ, ಕೂಡಲೇ ಕಾಮಗಾರಿ ಆರಂಭಿಸಬೇಕು ಎಂದು ಸೂಚಿಸಿದರು.

ಭಾಲ್ಕಿ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಶಾಲೆಗಳೂ ಜಲಾವೃತವಾಗಿವೆ. 2ರಿಂದ3 ಅಡಿ ನೀರು ನಿಂತಿದ್ದು, ಮಕ್ಕಳು ಶಾಲೆಗೆ ಹೋಗಲಾಗದ ಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ನೀರನ್ನು ತೆರವು ಮಾಡಬೇಕು. ಮುಂದಿನ ದಿನಗಳಲ್ಲಿ ಈ ರೀತಿ ಸಮಸ್ಯೆ ಎದುರಾಗದಂತೆ ಸೂಕ್ತ ಕ್ರಮ ವಹಿಸಬೇಕು. ಅಗತ್ಯ ಇರುವ ಕಡೆ ಕಾಳಜಿ ಕೇಂದ್ರ ತೆರೆಯಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

### ಮನೆ ವಸ್ತು ಹಾನಿಯಾದರೆ 7 ಸಾವಿರ ಪರಿಹಾರ

**ಮನೆಯ ವಸ್ತುಗಳು ಹಾನಿಯಾದರೆ 7 ಸಾವಿರ, ಶೇ 50ರಷ್ಟು ವರೆಗೆ ಹಾನಿಯಾದರೆ 30 ಸಾವಿರ, ಪೂರ್ಣ ಪ್ರಮಾಣದಲ್ಲಿ ಹಾನಿಯಾದರೆ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಅಡಿ 1.20 ಲಕ್ಷ ಹಾಗೂ ರಾಜ್ಯ ಸರ್ಕಾರದಿಂದ 1.80 ಲಕ್ಷ ಪರಿಹಾರ ನೀಡಲಾಗುವುದು. ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಬೇಕು' ಎಂದು ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು.**

> ಹವಾಮಾನ ಇಲಾಖೆ ಮೊದಲೇ ತಿಳಿಸಿದ್ದರೆ ರೈತರು ಬೇಗ ರಾಶಿ ಮಾಡಿಕೊಳ್ಳುತ್ತಿದ್ದರು. ಹವಾಮಾನದ ಬಗ್ಗೆ ವ್ಯಾಪಕ ಪ್ರಚಾರ ನೀಡಬೇಕು ಎಂದರು. ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ ಮಾತನಾಡಿ, ವರವಟ್ಟಿ ಸೇತುವೆ ಸಂಪೂರ್ಣ ಹದಗೆಟ್ಟಿದು, ತಕ್ಷಣ ಸರಿಪಡಿಸಬೇಕು –ಸಂಸದ ಸಾಗರ್ ಖಂಡ್ರೆ

## ಪ್ರಧಾನಿ ಮೋದಿ ಜಪಾನ್, ಚೀನಾ ಭೇಟಿಗೆ ಕಾಂಗ್ರೆಸ್ ಟೀಕೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರ ಜಪಾನ್ ಮತ್ತು ಚೀನಾ ಭೇಟಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷ ಅವರನ್ನು ಟೀಕಿಸಿದ್ದು, ಮಣಿಪುರದ ಜನರು ಇನ್ನೂ ಅವರ ಭೇಟಿಗಾಗಿ ಕಾಯುತ್ತಿದ್ದಾರೆ ಆದರೆ ಅವರು ಮಣಿಪುರದಿಂದ ತಮ್ಮ ಕೈಗಳನ್ನು ತೊಳೆದುಕೊಂಡಿದ್ದಾರೆ ಎಂದು ಹೇಳಿದೆ. ಆಗಾಗ್ಗೆ ಹಾರುವ (ಮತ್ತು ಹೆಚ್ಚಾಗಿ ಸುಳ್ಳು ಹೇಳುವ) ಪ್ರಧಾನಿ ಜಪಾನ್ ಮತ್ತು ಚೀನಾಕ್ಕೆ ಹೋಗಿದ್ದಾರೆ ಎಂದು ಕಾಂಗ್ರೆಸ್ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ. ಅವರ ಚೀನಾ ಭೇಟಿಯು ಭಾರತಕ್ಕೆ ಕೆಲವು ಲೆಕ್ಕಾಚಾರದ ಕ್ಷಣವಾಗಿದೆ. ಚೀನಾದೊಂದಿಗಿನ ಸಂಬಂಧಗಳನ್ನು ಸಾಮಾನ್ಯಗೊಳಿಸಲು ನಾವು ಒತ್ತಾಯಿಸಲ್ಪಡುತ್ತಿದ್ದೇವೆ ಹೆಚ್ಚಾಗಿ ಅವರ ನಿಯಮಗಳ ಮೇಲೆ, ಚೀನಾ ಕೂಡ ಭಾರತ-ಯುಎಸ್ ಸಂಬಂಧಗಳಲ್ಲಿನ ಕುಸಿತದ ಲಾಭವನ್ನು ಪಡೆಯಲು ಪ್ರಯತ್ನಿಸುತ್ತಿದೆ ಎಂದು ರಮೇಶ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಆಪರೇಷನ್ ಸಿಂಧೂರ್ ಸಮಯದಲ್ಲಿ ಪಾಕಿಸ್ತಾನದೊಂದಿಗೆ ಚೀನಾದ ಜುಗಲ್ಬಂದಿ ನಮ್ಮದೇ ಆದ ಮಿಲಿಟರಿ ಸ್ಥಾಪನೆಯಿಂದ ಬಹಿರಂಗಪಡಿಸಲ್ಪಟ್ಟಿದೆ ಮರೆತುಹೋಗಿದೆ ಎಂದು ಕಾಂಗ್ರೆಸ್ ನಾಯಕ ಹೇಳಿದರು. ಜೂನ್ 19, 2020 ರಂದು ಪ್ರಧಾನ ಮಂತ್ರಿಯವರು ನಾ ಕೋಯಿ ಹಮಾರಿ ಸೀಮಾ ಮೇ ಘುಸ್ ಆಯಾ ಹೈ, ನ ಹಿ ಕೋಯಿ ಘುಸಾ ಹುವಾ ಹೈಟಿ ಎಂದು ಘೋಷಿಸಿದಾಗ ಅವರ ಅಸಾಧಾರಣ ವಿಲಕ್ಷಣ ಹೇಳಿಕೆಯು ನಮ್ಮ ಮಾತುಕತೆಯ ಶಕ್ತಿಯನ್ನು ಬಹಳವಾಗಿ ನೋಯಿಸಿತು ಎಂದು ರಮೇಶ್ ಹೇಳಿದ್ದಾರೆ.

ಇದು ಭಾರತಕ್ಕೆ ಕುಶಲತೆಗೆ ಕಡಿಮೆ ಅವಕಾಶವನ್ನು ನೀಡಿತು ಮತ್ತು 2020 ರ ಏಪ್ರಿಲ್ ಪೂರ್ವದ ಯಥಾಸ್ಥಿತಿಯನ್ನು ಪುನಃ ಸ್ಥಾಪಿಸಲು ವಿಫಲವಾದರೂ ಈ ಭೇಟಿಯು ಆ ಕುಖ್ಯಾತ ಮತ್ತು ಹೇಡಿತನದ ಕ್ಲೀನ್ ಚಿಟ್‌ನ ಅನಿವಾರ್ಯ ಪರಿಣಾಮವಾಗಿದೆ ಎಂದು ಅವರು ಹೇಳಿದರು. ಪ್ರಧಾನಿ ವಿದೇಶಕ್ಕೆ ಹಾರುತ್ತಿದ್ದರೂ ಸಹ, ಮಣಿಪುರದ ದೀರ್ಘಕಾಲದಿಂದ ಬಳಲುತ್ತಿರುವ ಜನರು ಮೇ 2023 ರ ಗಾಯಗಳನ್ನು ಗುಣಪಡಿಸಲು ಅವರ ಭೇಟಿಗಾಗಿ ಇನ್ನೂ ಕಾಯುತ್ತಿದ್ದಾರೆ ಎಂದು ಅವರು ಹೇಳಿದರು. ಜಪಾನ್ ಮತ್ತು ಚೀನಾ ಪ್ರವಾಸ ಕೈಗೊಂಡಿರುವ ಪ್ರಧಾನಿ ಮೋದಿ, ಈ ಭೇಟಿಯು ರಾಷ್ಟ್ರೀಯ ಹಿತಾಸಕ್ತಿಗಳು ,ಆದ್ಯತೆಗಳನ್ನು ಮತ್ತಷ್ಟು ಹೆಚ್ಚಿಸುತ್ತದೆ ಮತ್ತು ಪ್ರಾದೇಶಿಕ ಮತ್ತು ಜಾಗತಿಕ ಶಾಂತಿಯನ್ನು ಮುನ್ನಡೆಸುವಲ್ಲಿ ಫಲಪ್ರದ ಸಹಕಾರವನ್ನು ನಿರ್ಮಿಸಲು ಕೊಡುಗೆ ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### • ರಷ್ಯಾ ಡ್ರೋನ್ ದಾಳಿಯಲ್ಲಿ ಉಕ್ರೇನ್‌ನ ಅತಿದೊಡ್ಡ ಯುದ್ಧನೌಕೆ ಉಡೀಸ್

# ಎಲ್ಲಿದ್ದಾರೆ ವಾರ್ ನಿಲ್ಲಿಸ್ತೀನಿ ಎಂದಿದ್ದ ಬಾಸ್?

**ಮಾಸ್ಕೋ:** ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸಲು ಇನ್ನೇನಿದ್ದರೂ ಭಗವಂತನೇ ಧರೆಗಿಳಿದು ಬರಬೇಕು. ಸುದೀರ್ಘ ಯುದ್ಧವನ್ನು ನಿಲ್ಲಿಸುವುದಾಗಿ ಜಗತ್ತಿನ ತುಂಬೆಲ್ಲಾ ಡಂಗುರ ಹೊಡೆದು ಬಂದಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ದಿಸೆಯಲ್ಲಿ ಒಂದು ಪೈಸೆಯಷ್ಟೂ ಸಾಧನೆ ಮಾಡಿಲ್ಲ. ರಷ್ಯಾ-ಉಕ್ರೇನ್ ಯುದ್ಧ ಕೊನೆಗೊಳಿಸುವ ಉದ್ದೇಶ ಹೊಂದಿದ್ದ

ಇದಕ್ಕೆ ಪುಷ್ಟಿ ಎಂಬಂತೆ ಉಕ್ರೇನಿಯನ್ ನೌಕಾಪಡೆಯ ಸಿಮ್ಫೆರೊಪೋಲ್ ಎಂಬ ವಿಚಕ್ಷಣ ಹಡಗನ್ನು, ರಷ್ಯಾ ನೌಕಾಪಡೆ ಡ್ರೋನ್ ದಾಳಿ ನಡೆಸುವ ಮೂಲಕ ಹೊಡೆದುರುಳಿಸಿದೆ. ಒಂದು ದಶಕದ ಅವಧಿಯಲ್ಲಿ ಉಕ್ರೇನ್ ತನ್ನ ನೌಕಾ ಭದ್ರತೆಗಾಗಿ ನಿಯೋಜಿಸಿದ್ದ ಅತಿದೊಡ್ಡ ಹಡಗು ಎಂಬ ಖ್ಯಾತಿ ಪಡೆದಿದ್ದ






- ರಷ್ಯಾದ ನೌಕಾ ಡ್ರೋನ್ ದಾಳಿಯಲ್ಲಿ ಉಕ್ರೇನ್‌ನ ಅತಿದೊಡ್ಡ ಹಡಗು ನಾಶ.
- ರಷ್ಯಾದ ನೌಕಾ ಡ್ರೋನ್ ದಾಳಿಗೆ ಬಲಿಯಾದ ಉಕ್ರೇನ್‌ನ ವಿಚಕ್ಷಣಾ ಹಡಗು.
- ಮತ್ತಷ್ಟು ತೀವ್ರಗೊಂಡ ರಷ್ಯಾ-ಉಕ್ರೇನ್ ಯುದ್ಧ, ಕೊನೆಗೊಳಿಸುವವರು ಅಡ್ರೆಸ್ ಇಲ್ಲ.

ಸಿಮ್ಫೆರೊಪೋಲ್, ಕ್ಷಣಾರ್ಧದಲ್ಲಿ ರಷ್ಯನ್ ಡ್ರೋನ್ ದಾಳಿಗೆ ಬಲಿಯಾಗಿದೆ. ಈ ಕುರಿತು ಮಾಹಿತಿ ನೀಡಿರುವ ರಷ್ಯಾದ ರಕ್ಷಣಾ ಸಚಿವಾಲಯ ನೌಕಾ ಡ್ರೋನ್ ದಾಳಿಯಲ್ಲಿ ಉಕ್ರೇನ್‌ನ ಅತಿದೊಡ್ಡ ವಿಚಕ್ಷಣಾ ಹಡಗನ್ನು ಹೊಡೆದುರುಳಿಸಲಾಗಿದೆ. ಇದು ರಷ್ಯನ್ ನೌಕಾಸೇನೆಗೆ ದೊರೆತ ಜಯ ಎಂದು ಸ್ಪಷ್ಟಪಡಿಸಿದೆ.

ರೇಡಿಯೋ, ಎಲೆಕ್ಟ್ರಾನಿಕ್, ರಾಡಾರ್ ಮತ್ತು ಆಪ್ಟಿಕಲ್ ವಿಚಕ್ಷಣಕ್ಕಾಗಿ ವಿನ್ಯಾಸಗೊಳಿಸಲಾದ ಲಗುನಾ-ವರ್ಗದ, ಮಧ್ಯಮ ಗಾತ್ರದ ಈ ಹಡಗು, ಡ್ಯಾನ್ಯೂಬ್ ನದಿಯ ಡೆಲ್ಟಾದಲ್ಲಿ ರಷ್ಯನ್ ಡ್ರೋನ್ ದಾಳಿಗೆ ತುತ್ತಾಗಿದೆ. ದಾಳಿಯ ತೀವ್ರತೆ ಎಷ್ಟಿತ್ತೆಂದರೆ ಹಡಗಿನ ಒಂದು ಭಾಗ ಉಕ್ರೇನ್‌ನ ಒಡೆಸ್ಸಾ ಪ್ರದೇಶದಲ್ಲಿ ದೊರೆತಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯದ ಹೇಳಿಕೆಯನ್ನು ಆಧರಿಸಿ ಮೂಲಗಳು ಖಚಿತಪಡಿಸಿವೆ.

#### ದಾಳಿ ಒಪ್ಪಿಕೊಂಡ ಉಕ್ರೇನ್

ಇನ್ನು ತನ್ನ ಅತಿದೊಡ್ಡ ವಿಚಕ್ಷಣಾ ಹಡಗಿನ ಮೇಲೆ ರಷ್ಯಾದ ಡ್ರೋನ್ ದಾಳಿ ಒಪ್ಪಿಕೊಂಡಿರುವ ಉಕ್ರೇನ್, ಘಟನೆಯಲ್ಲಿ ಓರ್ವ ಸಿಬ್ಬಂದಿ ಸಾವನ್ನಪ್ಪಿರುವುದಾಗಿ ಮಾಹಿತಿ ನೀಡಿದೆ. ಈ ಕುರಿತು ಉಕ್ರೇನ್ ನೌಕಾಪಡೆಯ ವಕ್ತಾರರ ಹೇಳಿಕೆಯನ್ನು ಉಲ್ಲೇಖಿಸಿ ಕೈವ್ ಇಂಡಿಪೆಂಡೆಂಟ್ ವರದಿ ಮಾಡಿದ್ದು, ದಾಳಿಯಲ್ಲಿ ಹಲವು ನೌಕಾ ಸಿಬ್ಬಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಹೇಳಿದೆ.

ಈ ಕುರಿತು ಯುಎವಿ ತಜ್ಞರನ್ನು ಉಲ್ಲೇಖಿಸಿ ರಷ್ಯಾದ ಅಧಿಕೃತ ಸರ್ಕಾರಿ ಮಾಧ್ಯಮ ಸಂಸ್ಥೆ ವರದಿ ಮಾಡಿದ್ದು, ಉಕ್ರೇನಿಯನ್ ನೌಕಾಪಡೆಯ ಹಡಗನ್ನು ಹೊಡೆದುರುಳಿಸಲು, ಸಮುದ್ರ ಡ್ರೋನ್‌ನ ಮೊದಲ ಯಶಸ್ವಿ ಬಳಕೆ ಇದಾಗಿದೆ ಎಂದು ಸ್ಪಷ್ಟಪಡಿಸಿದೆ.

ದಾಳಿಯ ನಂತರದ ಪರಿಣಾಮಗಳನ್ನು ಪರಿಹರಿಸುವ ಪ್ರಯತ್ನಗಳು ನಡೆಯುತ್ತಿವೆ. ಹೆಚ್ಚಿನ ಸಿಬ್ಬಂದಿ ಸುರಕ್ಷಿತರಾಗಿದ್ದಾರೆ ಮತ್ತು ಕಾಣೆಯಾದ ಹಲವಾರು ನಾವಿಕರ ಹುಡುಕಾಟ ಮುಂದುವರೆದಿದೆ ಎಂದು ಉಕ್ರೇನ್ ನೌಕಾಸೇನೆ ವಕ್ತಾರ ಹೇಳಿದ್ದಾರೆ ಎಂದಯ ಕೀ ಎಂದು ಕೈವ್ ಇಂಡಿಪೆಂಡೆಂಟ್ ಉಲ್ಲೇಖಿಸಿದೆ. 2019ರಲ್ಲಿ ನಿರ್ಮಾಣವಾಗಿದ್ದ ಸಿಮ್ಫೆರೊಪೋಲ್ ವಿಚಕ್ಷಣಾ ಹಡಗನ್ನು, ಎರಡು ವರ್ಷಗಳ ಬಳಿಕ ಉಕ್ರೇನ್ ನೌಕಾಸೇನೆಗೆ ಸೇರಿಸಲಾಗಿತ್ತು. ಇದು ಉಕ್ರೇನ್ ನೌಕಾಪಡೆಯ ಅತಿದೊಡ್ಡ ಹಡಗು ಎಂಬ ಖ್ಯಾತಿ ಪಡೆದಿತ್ತು.

ಉಕ್ರೇನ್ ಮೇಲೆ ರಷ್ಯಾದ ಭೀಕರ ಡ್ರೋನ್ ದಾಳಿ ಮುಂದುವರೆದಿದ್ದು, ಪ್ರಮುಖ ನಗರಗಳು, ಹಡಗುಕಟ್ಟೆಗಳು ಮತ್ತು ವಾಯು ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

## ಮಿನಿ ನ್ಯೂಸ್

### ಸೌದಿದಲ್ಲಿ 3 ಮಕ್ಕಳನ್ನು ಕೊಂದು ಆತ್ಮಹತ್ಯೆಗೆ ಯತ್ನಿಸಿದ ಭಾರತ ಮೂಲದ ಮಹಿಳೆ

**ರಿಯಾದ್:** ದೂರದ ಸೌದಿ ಅರೇಬಿಯಾದಲ್ಲಿ ಹೈದರಾಬಾದ್ ಮೂಲದ ಮಹಿಳೆ ತನ್ನ ಮೂರು ಮಕ್ಕಳನ್ನು ಬಾತ್ ಟಬ್‌ನಲ್ಲಿ ಮುಳುಗಿಸಿ ಕೊಂದು ನಂತರ ಆಕೆಯೂ ಆತಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ. ಸೌದಿ ಅರೇಬಿಯಾದ ಅಲ್ ಖೋಬರ್‌ನಲ್ಲಿ ಈ ಕೃತ್ಯ ನಡೆದಿದೆ. ಹೈದರಾಬಾದ್ ಮೂಲದವರಾದ ಸಯ್ಯದಾ ಹುಮೇರಾ ಅಮ್ರೀನ್ ಅವರು ತಮ್ಮ ಅವಳಿ ಮಕ್ಕಳಾದ ಸಾದಿಕ್ ಅಹ್ಮದ್ (7), ಅಡೆಲ್ ಅಹ್ಮದ್ (7) ಮತ್ತು ಯೂಸುಫ್ ಅಹ್ಮದ್ (3) ಎಂಬುವರನ್ನು ಬಾತ್ ಟಬ್‌ನಲ್ಲಿ ಮುಳುಗಿಸಿ ಹತ್ಯೆ ಮಾಡಿದ್ದಾರೆ.

ಈಕೆಯ ಪತಿ ಮೊಹಮ್ಮದ್ ಶಹನವಾಜ್ ಅವರು ಸೌದಿಯಲ್ಲಿ ಉದ್ಯೋಗದಲ್ಲಿದ್ದರು. ಹೀಗಾಗಿ ಅಮ್ರೀನ್ ಅವರು ಪತಿಯನ್ನು ಭೇಟಿಯಾಗಲು ಕೆಲ ದಿನಗಳ ಹಿಂದೆ ಸೌದಿಗೆ ತೆರಳಿದ್ದರು. ಪತಿ ಕೆಲಸಕ್ಕೆ ತೆರಳಿದ್ದ ವೇಳೆ ಮಕ್ಕಳನ್ನು ಕೊಂದು, ತಾನೂ ಆತ್ಮಹತ್ಯೆಗೆ ಮುಂದಾಗಿದ್ದಾರೆ. ಪತಿ ಕೆಲಸದಿಂದ ಹಿಂದಿರುಗಿದಾಗ ಘಟನೆ ಬೆಳಕಿಗೆ ಬಂದಿದೆ. ಪ್ರಾಥಮಿಕ ವರದಿಯ ಪ್ರಕಾರ, ಅಮ್ರೀನ್ ಅವರು ಕೆಲ ಸಮಯದಿಂದ ಮಾನಸಿಕ ಖಿನ್ನತೆ ಒಳಗಾಗಿದ್ದರು. ಅಲ್ಲದೇ ಕೌಟುಂಬಿಕ ಕಲಹದಿಂದ ಬೇಸತ್ತಿದ್ದರು ಎನ್ನಲಾಗಿದೆ. ಘಟನೆಯ ಹಿಂದಿನ ನಿಖರವಾದ ಕಾರಣ ತಿಳಿದುಬಂದಿಲ್ಲ. ಸೌದಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

### ಬಿಜೆಪಿ ಮುಖಂಡನ ಕೊಲೆ

**ಶಿವಗಂಗೈ:** ದುಷ್ಕರ್ಮಿಗಳ ಗುಂಪೊಂದು ತಮಿಳುನಾಡಿನ ಶಿವಗಂಗೈನಲ್ಲಿ ಬಿಜೆಪಿ ಜಿಲ್ಲಾ ವಾಣಿಜ್ಯ ವಿಭಾಗದ ಸದಸ್ಯರನ್ನು ಕೊಲೆ ಮಾಡಿರುವ ಘಟನೆ ನಡೆದಿದೆ. ಸತೀಶ್‌ಕುಮಾರ್ ಕೊಲೆಯಾಗಿರುವ ಬಿಜೆಪಿ ಜಿಲ್ಲಾ ವಾಣಿಜ್ಯ ವಿಭಾಗದ ಸದಸ್ಯರು. ಈ ಘಟನೆ ರಾಜಕೀಯ ಕಾರಣಗಳಿಂದ ಉಂಟಾಗಿಲ್ಲ, ಬದಲಾಗಿ ವೈಯಕ್ತಿಕ ಕಾರಣಗಳಿಂದ ಉಂಟಾಗಿದೆ. ಜಗಳ ನಡೆದ ಸಮಯದಲ್ಲಿ ಕುಮಾರ್ ಮತ್ತು ಆರೋಪಿ ಗುಂಪು ಇಬ್ಬರೂ ಮದ್ಯಪಾನ ಮಾಡಿದ್ದರು ಎನ್ನಲಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಐದಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಆದಾಗ್ಯೂ ಪ್ರಮುಖ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.ತಮಿಳುನಾಡಿನಲ್ಲಿ ಮತ್ತೊಬ್ಬ ಬಿಜೆಪಿ ಕಾರ್ಯಕರ್ತನನ್ನು ಬರ್ಬರವಾಗಿ ಹತ್ಯೆ ಮಾಡಿದ ಎರಡು ತಿಂಗಳ ನಂತರ ಈ ಘಟನೆ ನಡೆದಿದೆ.

ಜುಲೈ 4ರಂದು ದಿಂಡಿಗಲ್ ಜಿಲ್ಲೆಯ ಸನಾರ್ಪಟ್ಟಿ ಬಳಿ ರಾಜಕಪಟ್ಟಿಯ ಬಾಲಕೃಷ್ಣನ್(39) ಅವರನ್ನು ಕಡಿದು ಕೊಲೆ ಮಾಡಲಾಗಿತ್ತು. ಸ್ನೇಹಿತರೊಂದಿಗೆ ಮಾತನಾಡುತ್ತಿದ್ದಾಗ ಮೋಟಾರ್ ಸೈಕಲ್‌ಗಳಲ್ಲಿ ಬಂದ ದುಷ್ಕರ್ಮಿಗಳ ಗುಂಪೊಂದು ಅವರ ಮೇಲೆ ಸಾರ್ವಜನಿಕರ ಮುಂದೆಯೇ ದಾಳಿ ನಡೆಸಿತ್ತು.

## ಐಎಂಎಫ್ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಉರ್ಜಿತ್

**ನವದೆಹಲಿ:** ಅಂತರರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ನಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿ ರಿಸರ್ವ್ ಬ್ಯಾಂಕ್‌ನ ಮಾಜಿ ಗವರ್ನರ್ ಉರ್ಜಿತ್ ಪಟೇಲ್ ಅವರನ್ನು ಮೂರು ವರ್ಷಗಳ ಅವಧಿಗೆ ನೇಮಕ ಮಾಡಲು ಸರ್ಕಾರ ಅನುಮೋದನೆ ನೀಡಿದೆ. ಮೂರು ವರ್ಷಗಳ ಅಧಿಕಾರಾವಧಿಗೆ ಆರು ತಿಂಗಳು ಮುಂಚಿತವಾಗಿ ಸರ್ಕಾರದಿಂದ ಸೇವೆಯಿಂದ ವಜಾಗೊಳಿಸಲ್ಪಟ್ಟ ಕೆ ವಿ ಸುಬ್ರಮಣಿಯನ್ ಅವರ ಸ್ಥಾನವನ್ನು ಅವರು ವಹಿಸಿಕೊಳ್ಳಲಿದ್ದಾರೆ.



ಈ ವಜಾಗೊಳಿಸುವಿಕೆಯು ಏಪ್ರಿಲ್ 30, 2025 ರಂದು ಜಾರಿಗೆ ಬಂದಿತು. ಅರ್ಥಶಾಸ್ತ್ರಜ್ಞ , ಮಾಜಿ ಆರ್‌ಬಿಐ ಗವರ್ನರ್ ಉರ್ಜಿತ್ ಪಟೇಲ್ ಅವರನ್ನು ಐಎಂಎಫ್‌ನಲ್ಲಿ ಕಾರ್ಯನಿರ್ವಾಹಕ ನಿರ್ದೇಶಕ (ಇಡಿ) ಹುದ್ದೆಗೆ ಮೂರು ವರ್ಷಗಳ ಅವಧಿಗೆ ನೇಮಕ ಮಾಡಲು ಸಂಪುಟದ ನೇಮಕಾತಿ ಸಮಿತಿಯು ಅನುಮೋದನೆ ನೀಡಿದೆ, ಈ ಹುದ್ದೆಯ ಜವಾಬ್ದಾರಿಯನ್ನು ವಹಿಸಿಕೊಂಡ ದಿನಾಂಕದಿಂದ ಅಥವಾ ಮುಂದಿನ ಆದೇಶದವರೆಗೆ, ಆಗಸ್ಟ್ 28, 2025 ರ ಸರ್ಕಾರಿ ಆದೇಶದ ಪ್ರಕಾರ.ಐಎಂಎಫ್‌ನ ಕಾರ್ಯನಿರ್ವಾಹಕ ಮಂಡಳಿಯು ಸದಸ್ಯ ರಾಷ್ಟ್ರಗಳು ಅಥವಾ ದೇಶಗಳ ಗುಂಪುಗಳಿಂದ ಆಯ್ಕೆಯಾದ 25 ನಿರ್ದೇಶಕರನ್ನು (ಕಾರ್ಯನಿರ್ವಾಹಕ ನಿರ್ದೇಶಕರು ಅಥವಾ ಇಡಿಗಳು) ಒಳಗೊಂಡಿದೆ. ಭಾರತವು ಬಾಂಗ್ಲಾದೇಶ, ಶ್ರೀಲಂಕಾ ಮತ್ತು ಭೂತಾನ್ ಜೊತೆಗೆ ನಾಲ್ಕು ದೇಶಗಳ ಕ್ಷೇತ್ರದ ಭಾಗವಾಗಿದೆ, ಅದರ ಸದಸ್ಯರಾಗಿದ್ದಾರೆ. ಈ ನೇಮಕಾತಿಗೆ ಮೊದಲು, ಪಟೇಲ್ ಏಷ್ಯನ್ ಇನ್ಫ್ರಾಸ್ಟ್ರಕ್ಚರ್ ಇನ್ವೆಸ್ಟ್‌ಮೆಂಟ್ ಬ್ಯಾಂಕ್‌ನಲ್ಲಿ ಹೂಡಿಕೆ ಕಾರ್ಯಾಚರಣೆಗಳ (ಪ್ರದೇಶ 1) ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದರು.


ಬೀಜಿಂಗ್ ಮೂಲದ ಬಹುಪಕ್ಷೀಯ ಹಣಕಾಸು ಸಂಸ್ಥೆಯ ಪ್ರಕಾರ, ಅವರು ಕುಟುಂಬ ಆರೋಗ್ಯ ವಿಷಯಗಳ ಕಾರಣದಿಂದಾಗಿ ಜನವರಿ 2024 ರಲ್ಲಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ರಘುರಾಮ್ ರಾಜನ್ ಅವರ ನಂತರ ಪಟೇಲ್ 2016 ರಲ್ಲಿ ಆರ್‌ಬಿಐನ 24 ನೇ ಗವರ್ನರ್ ಆಗಿ ಅಧಿಕಾರ ವಹಿಸಿಕೊಂಡರು.

## ಭಾರತ ತೈಲ ಹಣ ವರ್ಗಾವಣೆ ಮಾಡುವ ಸಂಸ್ಥೆಯಾಗಿದೆ: ಪೀಟರ್

**ನ್ಯೂಯಾರ್ಕ್:** ಉಕ್ರೇನ್ ಸಂಘರ್ಷವು ಮೋದಿಯ ಯುದ್ಧ ಎಂದು ಹೇಳಿಕೊಂಡ ಒಂದು ದಿನದ ನಂತರ, ಶ್ವೇತಭವನದ ವ್ಯಾಪಾರ ಸಲಹೆಗಾರ ಪೀಟರ್ ನವರೊ ಭಾರತವನ್ನು ಕ್ರೆಮ್ಲಿನ್‌ಗೆ ತೈಲ ಹಣ ವರ್ಗಾವಣೆ ಮಾಡುವ ಸಂಸ್ಥೆ ಎಂದು ಆರೋಪಿಸಿದ್ದಾರೆ.

ಟ್ರಂಪ್ ಆಡಳಿತದ ವ್ಯಾಪಾರ ಮತ್ತು ಉತ್ಪಾದನೆಯ ಹಿರಿಯ ಸಲಹೆಗಾರ ನವರೊ, ಎಕ್ಸ್‌ನಲ್ಲಿ ಸುದೀರ್ಘವಾದ ಥ್ರೆಡ್‌ನಲ್ಲಿ, ರಷ್ಯಾದಿಂದ ಭಾರತದ ತೈಲ ಖರೀದಿ ಮತ್ತು ನವದೆಹಲಿಯ ಹೆಚ್ಚಿನ ಸುಂಕಗಳ ಬಗ್ಗೆ ವಾಗ್ದಾಳಿ ನಡೆಸಿದರು. ಅನ್ಯಾಯದ ವ್ಯಾಪಾರಕ್ಕಾಗಿ 25 ಪ್ರತಿಶತ ಮತ್ತು ರಾಷ್ಟ್ರೀಯ ಭದ್ರತೆಗಾಗಿ 25 ಪ್ರತಿಶತ ಸುಂಕವು ನೇರ ಪ್ರತಿಕ್ರಿಯೆಯಾಗಿದೆ ಎಂದು ವ್ಯಾಪಾರ ಸಲಹೆಗಾರ ಹೇಳಿದರು. ಭಾರತದ ದೊಡ್ಡ ತೈಲ ಲಾಬಿ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವವನ್ನು ಕ್ರೆಮ್ಲಿನ್‌ಗೆ ಬೃಹತ್ ಸಂಸ್ಕರಣಾ ಕೇಂದ್ರ ಮತ್ತು ತೈಲ ಹಣ ವರ್ಗಾವಣೆ ಕೇಂದ್ರವಾಗಿ ಪರಿವರ್ತಿಸಿದೆ ಎಂದು ನವರೊ ಹೇಳಿಕೊಂಡಿದ್ದಾರೆ.ಭಾರತದ ಸಂಸ್ಕರಣಾಗಾರರು ಅಗ್ಗದ ರಷ್ಯಾದ ತೈಲವನ್ನು ಖರೀದಿಸುತ್ತಾರೆ, ಅದನ್ನು ಸಂಸ್ಕರಿಸುತ್ತಾರೆ ಮತ್ತು ಯುರೋಪ್, ಆಫ್ರಿಕಾ ಮತ್ತು ಏಷ್ಯಾಕ್ಕೆ ಇಂಧನಗಳನ್ನು ರಫ್ತು ಮಾಡುತ್ತಾರೆ ಎಂದು ಅವರು ಹೇಳಿದರು.

> ಭಾರತವು ಹೆಚ್ಚಿನ ಸುಂಕಗಳು ಮತ್ತು ಸುಂಕ ರಹಿತ ಅಡೆತಡೆಗಳ ಮೂಲಕ ಯುಎಸ್ ರಫ್ತುಗಳನ್ನು ದೂರವಿಡುವಾಗ ಅಮೆರಿಕದ ಗ್ರಾಹಕರು ಭಾರತೀಯ ಸರಕುಗಳನ್ನು ಖರೀದಿಸುತ್ತಾರೆ ಎಂದು ವ್ಯಾಪಾರ ಸಲಹೆಗಾರ ಹೇಳಿದರು. ಭಾರತವು ರಿಯಾಯಿತಿ ದರದಲ್ಲಿ ರಷ್ಯಾದ ಕಚ್ಚಾ ತೈಲವನ್ನು ಖರೀದಿಸಲು ನಮ್ಮ ಡಾಲರ್‌ಗಳನ್ನು ಬಳಸುತ್ತದೆ. ಭಾರತೀಯ ಸಂಸ್ಕರಣಾಗಾರರು ತಮ್ಮ ಮೌನ ರಷ್ಯಾದ ಪಾಲುದಾರರೊಂದಿಗೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ದೊಡ್ಡ ಲಾಭಕ್ಕಾಗಿ ಕಪ್ಪು ಮಾರುಕಟ್ಟೆಯ ತೈಲವನ್ನು ಸಂಸ್ಕರಿಸಿ ತಿರುಗಿಸುತ್ತಾರೆ ಆದರೆ ರಷ್ಯಾ ಉಕ್ರೇನ್ ಮೇಲಿನ ಯುದ್ಧಕ್ಕೆ ಹಣಕಾಸು ಒದಗಿಸಲು ಕಠಿಣ ಹಣವನ್ನು ಜೇಬಿಗಿಳಿಸುತ್ತದೆ -ಪೀಟರ್ ನವರೊ



ಭಾರತ ಈಗ ದಿನಕ್ಕೆ 1 ಮಿಲಿಯನ್ ಬ್ಯಾರೆಲ್‌ಗಳಿಗಿಂತ ಹೆಚ್ಚು ಸಂಸ್ಕರಿಸಿದ ಪೆಟ್ರೋಲಿಯಂ ಅನ್ನು ರಫ್ತು ಮಾಡುತ್ತದೆ ಅದು ಆಮದು ಮಾಡಿಕೊಳ್ಳುವ ರಷ್ಯಾದ ಕಚ್ಚಾ ತೈಲದ ಅರ್ಧಕ್ಕಿಂತ ಹೆಚ್ಚು, ಈ ಆದಾಯವು ಭಾರತದ ರಾಜಕೀಯವಾಗಿ ಸಂಪರ್ಕ ಹೊಂದಿದ ಇಂಧನ ದೈತ್ಯರಿಗೆ ಮತ್ತು ನೇರವಾಗಿ ಪುಟಿನ್ ಅವರ ಯುದ್ಧಭೂಮಿಗೆ ಹರಿಯುತ್ತದೆ ಎಂದು ಅವರು ಹೇಳಿದ್ದಾರೆ.

ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತವನ್ನು ಯುಎಸ್‌ನ ಕಾರ್ಯತಂತ್ರದ ಪಾಲುದಾರನಂತೆ ಪರಿಗಣಿಸಲು ಬಯಸಿದರೆ, ಅದು ಒಂದರಂತೆ ವರ್ತಿಸುವ ಅಗತ್ಯವಿದೆ ಎಂದು ಹೇಳಿದರು.

## ನದಿಯಲ್ಲಿ ಈಜಿದ ಚಿರತೆಗಳು

**ಶಿಯೋಪುರ್:** ಚಿರತೆಗಳು ನೀರಿನಿಂದ ದೂರವಿರುತ್ತವೆ ಎಂಬ ಸಾಮಾನ್ಯ ನಂಬಿಕೆ ಇದೆ. ಆದರೆ, ಆಫ್ರಿಕಾದಿಂದ ಭಾರತಕ್ಕೆ ತರಲಾದ ಚಿರತೆಗಳು ಈ ನಂಬಿಕೆಯನ್ನು ತೊಡೆದು ಹಾಕುತ್ತಿವೆ. ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ನದಿಯಲ್ಲಿ ಮರಿಗಳು ಈಜುತ್ತಿರುವುದು ಕಂಡುಬಂದಿದೆ. ಚಿರತೆಗಳ ಈ ನಡವಳಿಕೆಯನ್ನು ನೋಡಿ ತಜ್ಞರು ಆಶ್ಚರ್ಯಚಕಿತರಾಗಿದ್ದಾರೆ. ಚಿರತೆಗಳು ಸಾಮಾನ್ಯವಾಗಿ ನೀರಿನಿಂದ ದೂರವಿರುತ್ತವೆ ಎಂದು ಪ್ರಾಜೆಕ್ಟ್ ಚೀತಾ ತಜ್ಞರು ಮೂರು ವರ್ಷಗಳ ಹಿಂದೆ ಹೇಳಿದ್ದರು ಆದರೆ ಇತ್ತೀಚಿನ ಮಳೆಯ ಸಮಯದಲ್ಲಿ, ಕೆಲವು ಚಿರತೆ ಮರಿಗಳು ಮತ್ತು ಅವುಗಳ ನಮೀಬಿಯಾ ಮೂಲದ ತಾಯಿ ಕುನೋ ನದಿಯನ್ನು ದಾಟಿ ಈಜುತ್ತಿರುವುದು ಕಂಡುಬಂದಿದ್ದು, ಇದು ಬಹುಕಾಲದ ನಂಬಿಕೆಗಳನ್ನು ಮುರಿದಿದೆ. ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ಚಿರತೆಗಳು ಈಜುತ್ತಿರುವ ಘಟನೆ ತಜ್ಞರನ್ನು ಅಚ್ಚರಿಗೊಳಿಸಿದೆ.

ಆಫ್ರಿಕಾದಲ್ಲಿ ಚಿರತೆಗಳು ನೀರಿನಿಂದ ದೂರವಿರುತ್ತವೆ ಎನ್ನಲಾಗಿದೆ ಆದರೆ ಭಾರತದಲ್ಲಿ ಜನಿಸಿದ ಮರಿಗಳು ಈ ಕಲ್ಪನೆಯನ್ನು ತಪ್ಪೆಂದು ಸಾಬೀತುಪಡಿಸಿವೆ. ಅವು ಕುನೋ ಮತ್ತು ಚಂಬಲ್ ನದಿಗಳಲ್ಲಿ ಈಜುವುದನ್ನು ಸಹ ನೋಡಲಾಗಿದೆ. ಕುನೋ ಮತ್ತು ಚಂಬಲ್ ನದಿಗಳನ್ನು ದಾಟುತ್ತಿರುವುದನ್ನು ಕುನೋದಲ್ಲಿನ ಅಧಿಕಾರಿಗಳು ದೃಢಪಡಿಸಿದ್ದಾರೆ. ಕುನೋ ಯೋಜನೆಯ ಕ್ಷೇತ್ರ ನಿರ್ದೇಶಕ ಉತ್ತಮ್ ಶರ್ಮಾ, ಮರಿಗಳು ಸುಲಭವಾಗಿ ಈಜುವುದನ್ನು ನಾವು ನೋಡಿದ್ದೇವೆ. 'ಜ್ವಾಲಾ' ತನ್ನ ಮರಿಗಳೊಂದಿಗೆ ನಡೆಯುವಾಗ ಕುನೋ ನದಿಯನ್ನು ದಾಟಿದೆ ಎಂದು ನಂಬಲಾಗಿದೆ ಎಂದು ಹೇಳಿದ್ದಾರೆ. ಈ ತಿಂಗಳು ರಾಜಸ್ಥಾನದ ರಣಥಂಬೋರ್ ರಾಷ್ಟ್ರೀಯ ಉದ್ಯಾನವನದ ಬಳಿಯಿಂದ ರಕ್ಷಿಸಲ್ಪಟ್ಟ ಜ್ವಾಲಾ, ಕುನೋ ರಾಷ್ಟ್ರೀಯ ಉದ್ಯಾನವನದಿಂದ ದಾರಿ ತಪ್ಪಿ ಚಂಬಲ್ ನದಿಯನ್ನು ಸಹ ಈಜಿದ್ದಳು ಎನ್ನಲಾಗಿದೆ. ಚಿರತೆಗಳನ್ನು ಬಲವಾದ ಈಜುಗಾರರೆಂದು ಪರಿಗಣಿಸಲಾಗುವುದಿಲ್ಲ. ನಡವಳಿಕೆಯಲ್ಲಿನ ಈ ಬದಲಾವಣೆಯು ತಜ್ಞರನ್ನು ರೋಮಾಂಚನಗೊಳಿಸಿದೆ.



## ಪ್ರಧಾನಿ ಮೋದಿ ತಾಯಿಗೆ ನಿಂದನೆ, ಬಿಹಾರ ಉದ್ವಿಗ್ನ: ಶಾ ಖಂಡನೆ

**ಪಾಟ್ನಾ:** ಪ್ರಧಾನಿ ನರೇಂದ್ರಮೋದಿ ಹಾಗೂ ಅವರ ದಿವಂಗತ ತಾಯಿಯ ಬಗ್ಗೆ ಆಕ್ಷೇಪಾರ್ಹ ಪದ ಬಳಸಿದ ಹಿನ್ನಲೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಮಾರಾಮಾರಿ ನಡೆದಿದೆ. ಬಿಹಾರದ ರಾಜಧಾನಿ ಪಾಟ್ನಾದಲ್ಲಿ ರಸ್ತೆ ಮಧ್ಯೆಯೇ ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಪರಸ್ಪರ ದೊಣ್ಣೆಗಳನ್ನಿಡಿದು ಹಲ್ಲೆ ನಡೆಸಿದ್ದಾರೆ. ಅಲ್ಲದೆ ರಸ್ತೆಯ ಅಕ್ಕಪಕ್ಕದ ವಾಹನಗಳಿಗೂ ಹಾನಿಯಾಗಿದೆ.

ಪರಿಸ್ಥಿತಿ ಉದ್ವಿಗ್ನಗೊಂಡಿದ್ದು, ಎರಡು ಕಡೆಯ ಕಾರ್ಯಕರ್ತರನ್ನು ನಿಯಂತ್ರಣ ಮಾಡಲು ಪೊಲೀಸರು ಲಘು ಲಾಠಿ ಪ್ರಹಾರವನ್ನು ನಡೆಸಿದ್ದಾರೆ. ಮೋದಿ ಹಾಗೂ ಅವರ ತಾಯಿ ವಿರುದ್ಧ ಅವಾಚ್ಯ ಶಬ್ದಗಳಲ್ಲಿ ನಿಂದಿಸಿರುವುದನ್ನು ವಿರೋಧಿಸಿ ಬಿಜೆಪಿ ಕಾರ್ಯಕರ್ತರು ದೂರು ನೀಡಲು ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಗೆ ಆಗಮಿಸಿದ್ದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಕೂಡ ಬಿಜೆಪಿ ವಿರುದ್ಧ ಪ್ರತಿಭಟನೆ ನಡೆಸಲು ಮುಂದಾಗಿದ್ದರು. ಈ ವೇಳೆ ಮಾತಿಗೆ ಮಾತು ಬೆಳೆದು ಎರಡು ರಾಷ್ಟ್ರೀಯ ಪಕ್ಷಗಳ ಕಾರ್ಯಕರ್ತರು ಕೈಗೆ



ಸಿಕ್ಕ ವಸ್ತುಗಳಿಂದಲೇ ಬಡಿದಾಡಿಕೊಂಡಿದ್ದಾರೆ.

ಮಾಹಿತಿ ಪ್ರಕಾರ, ಪ್ರಧಾನಿ ಮೋದಿಯವರ ಮೇಲೆ ನಿಂದನೀಯ ಪದಗಳ ಬಳಕೆಯನ್ನು ವಿರೋಧಿಸಿ ಬಿಜೆಪಿ ಪಾಟ್ನಾದ ಬೀದಿಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸುತ್ತಿತ್ತು.ಈ ಮೆರವಣಿಗೆ ಬಿಹಾರ ಕಾಂಗ್ರೆಸ್ ರಾಜ್ಯ ಕಚೇರಿ ಸದಾಕತ್ ಆಶ್ರಮದ ಮೂಲಕ ಹಾದುಹೋದ ಸಂದರ್ಭದಲ್ಲಿ ಬಿಜೆಪಿ-ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರ ನಡುವೆ ಘರ್ಷಣೆ ಉಂಟಾಗಿದೆ.

ಪ್ರಧಾನಿ ಮೋದಿಯವರನ್ನು ನಿಂದಿಸಿರುವುದನ್ನು ಖಂಡಿಸಿ ಬಿಜೆಪಿ ನಾಯಕರು ಕುರ್ಜಿ ಆಸ್ಪತ್ರೆಯಿಂದ ಸದಾಕತ್ ಆಶ್ರಮದವರೆಗೆ ನಡೆಸಿದ ಪ್ರತಿಭಟನಾ ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ನಾಯಕರು ಉಪಸ್ಥಿತರಿದ್ದರು. ಸಚಿವ ನಿತಿನ್ ನವೀನ್ ಮತ್ತು ಶಾಸಕ ಸಂಜೀವ್ ಚೌರಾಸಿಯಾ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು.

> ಪ್ರಧಾನಿ ನರೇಂದ್ರಮೋದಿ ಹಾಗೂ ಅವರ ತಾಯಿಯ ವಿರುದ್ಧ ಅವಹೇಳನಕಾರಿ ಪದ ಬಳಸಿರುವುದನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಖಂಡಿಸಿದ್ದು, ರಾಹುಲ್ ಗಾಂಧಿ ಕ್ಷಮೆ ಕೇಳಬೇಕೆಂದು ಒತ್ತಾಯಿಸಿದ್ದಾರೆ. ಘುಸ್ಪೈಥಿಯಾ ಬಚಾವೋ ಯಾತ್ರೆಯ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರು ಮೋದಿಯವರ ತಾಯಿಯ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿದ್ದಾರಲ್ಲದೆ ಆ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತನೂ ಮೋದಿಯವರ ವಿರುದ್ಧ ಅವಹೇಳನಕಾರಿ ಪದಗಳನ್ನಾಡಿರುವುದು ಖಂಡನೀಯ
> -ಅಮಿತ್ ಶಾ, ಕೇಂದ್ರ ಗೃಹ ಸಚಿವ

## ವರದಕ್ಷಿಣೆಗಾಗಿ ಸೊಸೆಗೆ ಆ್ಯಸಿಡ್ ಕುಡಿಸಿ ಹತ್ಯೆ

**ಲಕ್ನೋ:** ವರದಕ್ಷಿಣೆ ಕಿರುಕುಳ ಎಂಬ ಪೆಡಂಭೂತ ಇನ್ನೂ ಕಾಡುತ್ತಲೆ ಇದೆ. ಇಂತಹ ಕಿರುಕುಳಕ್ಕೆ ಇದುವರೆಗೂ ಸಾವಿರಾರು ಮಹಿಳೆಯರು ಬಲಿಯಾಗಿದ್ದಾರೆ. ಇದೀಗ ಉತ್ತರ ಪ್ರದೇಶದ ಧನ ಪಿಶಾಚಿ ಪತಿ ಹಾಗೂ ಆತನ ಕುಟುಂಬದವರು 23 ವರ್ಷದ ಸೊಸೆಗೆ ವರದಕ್ಷಿಣೆ ಕಾಟ ನೀಡಿ ಆಸಿಡ್ ಕುಡಿಸಿ ಹತ್ಯೆ ಮಾಡಿರುವ ಹೀನಾಯ ಕೃತ್ಯವೆಸಗಿದ್ದಾರೆ.

ನೊಯ್ಡಾದಲ್ಲಿ ಇತ್ತೀಚೆಗೆ ವರದಕ್ಷಿಣೆ ಕಿರುಕುಳ ನೀಡಿ ಬೆಂಕಿ ಹಚ್ಚಿ ಮಹಿಳೆಯೊಬ್ಬಳನ್ನು ಹತ್ಯೆ ಮಾಡಿದ್ದ ಘಟನೆ ಮಾಸುವ ಮುನ್ನವೇ ಉತ್ತರ ಪ್ರದೇಶದಲ್ಲಿ ಇಂತಹದೊಂದು ಭಯಾನಕ ವರದಕ್ಷಿಣೆ ಕ್ರೌರ್ಯ ವರದಿಯಾಗಿದೆ. ಅಮ್ರೋಹಾ ಜಿಲ್ಲೆಯ ಕಲಖೇಡ ಎಂಬಲ್ಲಿ ಅತ್ತೆ ಹಾಗೂ ಮಾವ ಸೇರಿ 23 ವರ್ಷದ ಸೊಸೆಗೆ ವರದಕ್ಷಿಣೆ ಕಿರುಕುಳ ನೀಡಿ ಆಸಿಡ್ ಕುಡಿಸಿ ಹತ್ಯೆ ಮಾಡಿದ್ದಾರೆ.ಗುಲ್ಫಿಜಾ ಹತ್ಯೆಯಾದ ಮಹಿಳೆಯಾಗಿದ್ದಾಳೆ. ಆಕೆ ಒಂದು ವರ್ಷದ ಹಿಂದೆ ದಿದೌಲಿ ಪೊಲೀಸ್ ಠಾಣೆ ವ್ಯಾಪ್ತಿಯ ಕಲಖೇಡ ಗ್ರಾಮದ ಪರ್ವೇಜ್ ಎಂಬವನನ್ನು ಮದುವೆ ಆಗಿದ್ದಳು. ಆಕೆಯ ಅತ್ತೆ-ಮಾವ 10 ಲಕ್ಷ ರೂ. ನಗದು ಮತ್ತು ಕಾರನ್ನು ನೀಡುವಂತೆ ಒತ್ತಾಯಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆ.11 ರಂದು ಗಲ್ಫಿಜಾಗೆ ಬಲವಂತವಾಗಿ ಆಸಿಡ್ ಕುಡಿಸಿದ್ದಾರೆ. ಆಕೆಯನ್ನು ಬಳಿಕ ಆಸ್ಪತ್ರೆಗೆ ದಾಖಲಿಸಲಾಗಿತ್ತು. 17 ದಿನಗಳ ಕಾಲ ಜೀವನ್ಮರಣ ಹೋರಾಟದ ನಂತರ ಆಕೆ ಸಾವನ್ನಪ್ಪಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಮಹಿಳೆಯ ತಂದೆ ಫರ್ಕಾನ್ ನೀಡಿದ ದೂರಿನ ಮೇರೆಗೆ, ಪರ್ವೇಜ್, ಅಸಿಮ್, ಗುಲಿಸ್ತಾ, ಮೋನಿಶ್, ಸೈಫ್, ಡಾ. ಭೂರಾ ಮತ್ತು ಬಬ್ಬು ಎಂಬ ಏಳು ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರ, ಎಲ್ಲಾ ಆರೋಪಿಗಳನ್ನು ಬಂಧಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



10 ಲಕ್ಷ ರೂ. ನಗದು ಮತ್ತು ಕಾರನ್ನು ನೀಡುವಂತೆ ಒತ್ತಾಯ

## ಮೇಘ ಸ್ಫೋಟ: ಹಲವರು ನಾಪತ್ತೆ, ಪರಿಹಾರ ಕಾರ್ಯ ಚುರುಕು

**ಡೆಹ್ರಾಡೂನ್:** ಉತ್ತರಾಖಂಡದ ಚಮೋಲಿ ಮತ್ತು ರುದ್ರಪ್ರಯಾಗ ಜಿಲ್ಲೆಗಳಲ್ಲಿ ಮೇಘಸ್ಫೋಟದಿಂದ ಹಲವು ಕುಟುಂಬಗಳು ಅವಶೇಷಗಳಡಿ ಸಿಲುಕಿದ್ದು ಅವರ ರಕ್ಷಣಾ ಕಾರ್ಯ ಭರದಿಂದ ಸಾಗಿದೆ. ಜೊತೆಗೆ ಕಾಣೆಯಾದವರ ಪತ್ತೆ ಕಾರ್ಯ ನಡೆದಿದೆ. ಚಮೋಲಿ ಮತ್ತು ರುದ್ರಪ್ರಯಾಗ ಜಿಲ್ಲೆಗಳಲ್ಲಿ ಮೇಘಸ್ಫೋಟ ವರದಿಯಾಗಿದೆ. ಅವಶೇಷಗಳಡಿ ಸಿಲುಕಿರುವ ಮಂದಿಯ ರಕ್ಷಣಾ ಕಾರ್ಯ ನಡೆದಿದೆ ಎಂದು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ತಿಳಿಸಿದ್ದಾರೆ. ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಚುರುಕುಗೊಳಿಸಲಾಗಿದ್ದು ಸಪ್ರತಿಯೊಬ್ಬರ ರಕ್ಷಣೆ ಸರ್ಕಾರದ ಜವಾಬ್ದಾರಿ



ಈ ಹಿನ್ನೆಲೆಯಲ್ಲಿ ಮೇಘಸ್ಫೋಟದಿಂದ ಸಮಸ್ಯೆಗೆ ಸಿಲುಕಿದ ಎಲ್ಲರನ್ನು ರಕ್ಷಿಸುವಂತೆ ಸೂಚಿಸಲಾಗಿದೆ ಎಂದಿದ್ದಾರೆ. ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ರಕ್ಷಣಾ ಕಾರ್ಯಾಚರಣೆಗಳ ಪರಿಣಾಮಕಾರಿ ಪರಿಹಾರ ಕಾರ್ಯ ಖಚಿತಪಡಿಸಿಕೊಳ್ಳಲು ವಿಪತ್ತು ಕಾರ್ಯದರ್ಶಿ , ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳಿಗೆ ಅಗತ್ಯ ಸೂಚನೆಗಳನ್ನು ಸೂಚನೆ ನೀಡಲಾಗಿದೆ ಎಂದರು. ರುದ್ರಪ್ರಯಾಗ ಜಿಲ್ಲೆಯ ಬುಸ್ಕೆದಾರ್ ತಹಶೀಲ್ ಅಡಿಯಲ್ಲಿ ಬರುವ ಬರೇತ್ ಡುಂಗರ್ ಟೋಕ್ ಪ್ರದೇಶದಲ್ಲಿ ಮತ್ತು ಚಮೋಲಿ ಜಿಲ್ಲೆಯ ದೇವಲ್ ಪ್ರದೇಶದಲ್ಲಿ ಮೇಘಸ್ಫೋಟದಿಂದಾಗಿ, ಕೆಲವು ಕುಟುಂಬಗಳು ಅವಶೇಷಗಳ ಹರಿವಿನಲ್ಲಿ ಸಿಲುಕಿಕೊಂಡಿವೆ ಎಂದು ಹೇಳಿದ್ದಾರೆ.

ರುದ್ರಪ್ರಯಾಗ ಜಿಲ್ಲೆಯ ಬುಸ್ಕೆದಾರ್ ತಹಶೀಲ್ ಅಡಿಯಲ್ಲಿ ಬರುವ ಬರೇತ್ ಡುಂಗರ್ ಟೋಕ್ ಪ್ರದೇಶದಲ್ಲಿ ಮತ್ತು ಚಮೋಲಿ ಜಿಲ್ಲೆಯ ದೇವಲ್ ಪ್ರದೇಶದಲ್ಲಿ ಮೇಘಸ್ಫೋಟದಿಂದಾಗಿ, ಕೆಲವು ಕುಟುಂಬಗಳು ಅವಶೇಷಗಳ ಹರಿವಿನಲ್ಲಿ ಸಿಲುಕಿಕೊಂಡಿವೆ ಎಂದು ಹೇಳಿದ್ದಾರೆ.

# ಚೀನಾ ಮಿಲಿಟರಿ ಪರೇಡ್ ಆಹ್ವಾನ ಸ್ವೀಕರಿಸಿದ ಪುಟಿನ್ ಮತ್ತು ಕಿಮ್ ಜಾಂಗ್

### • ಎರಡನೇ ವಿಶ್ವ ಯುದ್ಧದಲ್ಲಿ ಜಪಾನ್ ಶರಣಾಗತಿಯನ್ನು ಸ್ಮರಿಸುವ ವಿಜಯ ದಿನ ಮೆರವಣಿಗೆ

**ಬೀಜಿಂಗ್:** ಒಬ್ಬರು ಚೀನಾ ಅಧ್ಯಕ್ಷರು ಹೆಸರು ಕ್ಸಿ ಜಿನ್‌ಪಿಂಗ್, ಮತ್ತೊಬ್ಬರು ರಷ್ಯಾ ಅಧ್ಯಕ್ಷರು ಹೆಸರು ವ್ಲಾಡಿಮಿರ್ ಪುಟಿನ್, ಇನ್ನೊಬ್ಬರು ಉತ್ತರ ಕೊರಿಯಾ ಸರ್ವಾಧಿಕಾರಿ ಹೆಸರು ಕಿಮ್ ಜಾಂಗ್ ಉನ್, ಈ ಮೂವರೂ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡರೆ ಇಡೀ ಜಗತ್ತು ಕಣ್ಣರಳಿಸಿ ನೋಡುತ್ತೆ. ಜಗತ್ತಿನ ಕಣ್ಣರಳಿಸಲೆಂದೇ ಈ ಮೂವರೂ ಅತ್ಯಂತ ಪರಬಲ ನಾಯಕರು ಶೀಘ್ರದಲ್ಲೇ ಒಂದೇ ವೇದಿಕೆಯಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಹೌದು, ಎರಡನೇ ಮಹಾಯುದ್ಧದ ಸಮಯದಲ್ಲಿ ಜಪಾನ್‌ನ ಔಪಚಾರಿಕ ಶರಣಾಗತಿಯನ್ನು ಗುರುತಿಸಲು, ಚೀನಾದ ರಾಜಧಾನಿ ಬೀಜಿಂಗ್‌ನಲ್ಲಿ ನಡೆಯಲಿರುವ ಬೃಹತ್ ಮಿಲಿಟರಿ ಮೆರವಣಿಗೆಯಲ್ಲಿ, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಉತ್ತರ ಕೊರಿಯಾದ ನಾಯಕ ಕಿಮ್ ಜಾಂಗ್ ಉನ್ ಭಾಗವಹಿಸಲಿದ್ದಾರೆ. ಜಗತ್ತಿಗೆ ಚೀನಾದ ಅಗತ್ಯತೆಯನ್ನು ಒತ್ತಿ ಹೇಳಲು, ಕ್ಸಿ ಜಿನ್‌ಪಿಂಗ್ ಸಿದ್ಧರಾಗಿದ್ದಾರೆ.

ಜಗತ್ತಿಗೆ ಚೀನಾ ಅಗತ್ಯ

ಈ ಕುರಿತು ಮಾಹಿತಿ ನೀಡಿರುವ ಚೀನಾದ ವಿದೇಶಾಂಗ ಸಚಿವಾಲಯ, ಬೀಜಿಂಗ್‌ನಲ್ಲಿ ನಡೆಯಲಿರುವ ಬೃಹತ್ ಮಿಲಿಟರಿ ಪರೇಡ್‌ಗೆ ವ್ಲಾಡಿಮಿರ್ ಪುಟಿನ್, ಕಿಮ್ ಜಾಂಗ್ ಉನ್ ಸೇರಿದಂತೆ ಹಲವು ವಿದೇಶಿ ನಾಯಕರನ್ನು ಆಹ್ವಾನಿಸಲಾಗಿದೆ ಎಂದು ಸ್ಪಷ್ಟಪಡಿಸಿದೆ.

- ಸೆ. 3ರಂದು ಚೀನಾದಲ್ಲಿ ಬೃಹತ್ ಮಿಲಿಟರಿ ಮೆರವಣಿಗೆ ಆಯೋಜನೆ.
- ಚೀನಾ ಮಿಲಿಟರಿ ಪರೇಡ್‌ನಲ್ಲಿ ಭಾಗವಹಿಸಲಿರುವ ವ್ಲಾಡಿಮಿರ್ ಪುಟಿನ್ ಮತ್ತು ಕಿಮ್ ಜಾಂಗ್ ಉನ್.
- ಎರಡನೇ ವಿಶ್ವ ಯುದ್ಧದಲ್ಲಿ ಜಪಾನ್ ಶರಣಾಗತಿಯನ್ನು ಸ್ಮರಿಸುವ ವಿಜಯ ದಿನ ಮೆರವಣಿಗೆ.

ಚೀನಾದ ಬೃಹತ್ ಮಿಲಿಟರಿ ಪರೇಡ್ ಆಯೋಜನೆ ಬಗ್ಗೆ ಮಾತನಾಡಿದ ಚೀನಾದ ಪರೇಡ್‌ನಲ್ಲಿ 26 ವಿದೇಶಿ ರಾಷ್ಟ್ರಗಳು ಮತ್ತು ಸರ್ಕಾರದ ಮುಖ್ಯಸ್ಥರು ಭಾಗವಹಿಸಲಿದ್ದಾರೆ ಎಂದು ಸಹಾಯಕ ವಿದೇಶಾಂಗ ಸಚಿವ ಹಾಂಗ್ ಲೀ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.



ವಿಜಯ ದಿನ ಮೆರಣಿಗೆಯಂದು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು, ಟಿಯಾನನ್ಮೆನ್ ಚೌಕದಲ್ಲಿ ವಿದೇಶಿ ಗಣ್ಯರು ಮತ್ತು ಹಿರಿಯ ಚೀನಾದ ನಾಯಕರೊಂದಿಗೆ ಹತ್ತಾರು ಸಾವಿರ ಸೈನಿಕರ ಸಮೀಕ್ಷೆ ನಡೆಸಲಿದ್ದಾರೆ.

ಚೀನಾದ ಅತಿದೊಡ್ಡ ಮಿಲಿಟರಿ ಪರೇಡ್‌ನಲ್ಲಿ, ಯುದ್ಧ ವಿಮಾನಗಳು, ಕ್ಷಿಪಣಿ ರಕ್ಷಣಾ ವ್ಯವಸ್ಥೆಗಳು ಮತ್ತು ಹೈಪರ್ ಸಾನಿಕ್ ಶಸ್ತ್ರಾಸ್ತ್ರಗಳಂತಹ ಅತ್ಯಾಧುನಿಕ ಉಪಕರಣಗಳನ್ನು ಪ್ರದರ್ಶಿಸಲಾಗುವುದು ಎಂದು ಮೂಲಗಳು ಖಚಿತಪಡಿಸಿವೆ.

ಆ. 31ರಂದು ಆರಂಭವಾಗಲಿರುವ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಒ)ದ ಶೃಂಗಸಭೆಯಲ್ಲಿ, ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಕೂಡ ಭಾಗವಹಿಸಲಿದ್ದಾರೆ. ಟಿಯಾಂಜಿನ್ ನಗರದಲ್ಲಿ ನಡೆಯುವ ಎಸ್‌ಸಿಒ ಸಭೆಯಲ್ಲಿ ಭಾಗವಹಿಸುವ ಪ್ರಧಾನಿ ಮೋದಿ, ಸೆ.1ರಂದು ಮರಳಿ ಭಾರತಕ್ಕೆ ಬರಲಿದ್ದಾರೆ. ಆದರೆ ಪುಟಿನ್ ಮಾತ್ರ, ಚೀನಾದಲ್ಲೇ ತಂಗಲಿದ್ದು, ಮಿಲಿಟರಿ ಪರೇಡ್ ವೀಕ್ಷಣೆ ಮಾಡಲಿದ್ದಾರೆ.

#### ಸಮಾರಂಭದಲ್ಲಿ ಭಾಗವಹಿಸುವ ಇತರ ಗಣ್ಯರು

ಬೆಲಾರಸ್ ಅಧ್ಯಕ್ಷ ಅಲೆಕ್ಸಾಂಡರ್ ಲುಕಾಶೆಂಕೊ, ಇರಾನ್ ಅಧ್ಯಕ್ಷ ಮಸೌದ್ ಪೆಜಾಶ್ಕಿಯಾನ್, ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಮತ್ತು ದಕ್ಷಿಣ ಕೊರಿಯಾದ ರಾಷ್ಟ್ರೀಯ ಅಸೆಂಬ್ಲಿ ಸ್ಪೀಕರ್ ವೂ ವಾನ್-ಶಿಕ್ ಕೂಡ ಭಾಗವಹಿಸಲಿದ್ದಾರೆ. ಸೆಪ್ಟೆಂಬರ್ 3ರಂದು ಚೀನಾದ ವಿಜಯ ದಿನ ಮೆರವಣಿಗೆಯು, ಚೀನಾದ ಬೆಳೆಯುತ್ತಿರುವ ಮಿಲಿಟರಿ ಶಕ್ತಿ ಮತ್ತು ಚೀನಾ, ರಷ್ಯಾ ಮತ್ತು ಜಾಗತಿಕ ದಕ್ಷಿಣದ ನಡುವಿನ ರಾಜತಾಂತ್ರಿಕ ಒಗ್ಗಟ್ಟಿನ ಪ್ರದರ್ಶನದ ಪ್ರಮುಖ ಕಾರ್ಯಕ್ರಮವಾಗಲಿದೆ. ಇದರಲ್ಲಿ ಉತ್ತರ ಕೊರಿಯಾ ಸರ್ವಾಧಿಕಾಖಇ ಕಿಮ್ ಜಾಂಗ್ ಉನ್ ಕೂಡ ಭಾಗವಹಿಸುತ್ತಿರುವುದು ಇದೀಗ ಜಾಗತಿಕವಾಗಿ ಗಮನ ಸೆಳೆದಿದೆ.

ಅರಣ್ಯಾಧಿಕಾರಿಯೊಬ್ಬರು ಅಭಿಮಾನ ಸ್ಟುಡಿಯೋದಲ್ಲಿ ನಿಯಮ ಉಲ್ಲಂಘನೆಯಾಗಿದೆ ಎಂದು ಡಿಸಿಗೆ ಪತ್ರ ಬರೆದಿದ್ದಾರೆ. ವಿಷ್ಣುವರ್ಧನ್ ಅವರ ಸಮಾಧಿಯನ್ನು ಕೆಡವಿದ ಬಳಿಕ ಉಂಟಾಗಿರುವ ವಿವಾದದ ಹಿನ್ನೆಲೆಯಲ್ಲಿ ಈ ಪತ್ರ ಬರೆದಿದ್ದಾರೆ. ಭೂಮಿ ಲೀಸ್ ನಿಯಮ ಉಲ್ಲಂಘನೆ ಹಾಗೂ ಸ್ಟುಡಿಯೋ ಅಭಿವೃದ್ಧಿಗೆ ಬಳಸುವುದಾಗಿ ಹೇಳಿದ ಹಣದ ಬಳಕೆ ಕುರಿತು ಪ್ರಶ್ನೆ ಎದ್ದಿದೆ. ಅಭಿಮಾನ್ ಸ್ಟುಡಿಯೋದಲ್ಲಿರುವ ವಿಷ್ಣುವರ್ಧನ್ ಸಮಾಧಿಯನ್ನು ಕೆಡವಿದ ಬಳಿಕ ವಿವಾದ ಭುಗಿಲೆದ್ದಿದೆ. ಈ ಜಾಗದಲ್ಲಿ ಸ್ಮಾರಕ ನಿರ್ಮಾಣ ಆಗಬೇಕು ಎಂದು ವಿಷ್ಣುವರ್ಧನ್ ಅಭಿಮಾನಿಗಳು ಆಗ್ರಹಿಸುತ್ತಿದ್ದಾರೆ. ಹೀಗಿರುವಾಗಲೇ ಅಭಿಮಾನ್ ಸ್ಟುಡಿಯೋ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಡಿಸಿಗೆ ಅರಣ್ಯ

# ಅಭಿಮಾನ್ ಸ್ಟುಡಿಯೋ ಮುಟ್ಟುಗೋಲು ಹಾಕಿಕೊಳ್ಳಿ



ಡಿಸಿಗೆ ಅರಣ್ಯ ಅಧಿಕಾರಿ ಪತ್ರ

ಅಧಿಕಾರಿ ಪತ್ರ ಬರೆದಿದ್ದಾರೆ. ಈ ಪತ್ರ ವೈರಲ್ ಆಗಿದೆ. ಈ ಪತ್ರದಲ್ಲಿ ನಿಯಮ ಉಲ್ಲಂಘನೆ ಬಗ್ಗೆ ಬರೆಯಲಾಗಿದೆ.

ಆಗಸ್ಟ್ 22ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ರವೀಂದ್ರ ಕುಮಾರ್ ಅವರು ಈ ಬಗ್ಗೆ ಬೆಂಗಳೂರು ನಗರ ಜಿಲ್ಲಾಧಿಕಾರಿಯಾದ ಜಗದೀಶ್‌ಗೆ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ ಅವರು ನಿಯಮ ಉಲ್ಲಂಘನೆ ಬಗ್ಗೆ ಉಲ್ಲೇಖಿಸಿದ್ದಾರೆ. ಈ ವಿಚಾರದಲ್ಲಿ ಜಿಲ್ಲಾಧಿಕಾರಿ ಯಾವ ರೀತಿಯಲ್ಲಿ ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

ಬಾಲಕೃಷ್ಣ ಅವರಿಗೆ 1970ರಲ್ಲಿ ಸ್ಟುಡಿಯೋ ನಿರ್ಮಾಣದ ಉದ್ದೇಶಕ್ಕೆ 20 ಎಕರೆ ಭೂಮಿಯನ್ನು 20 ವರ್ಷ ಲೀಸ್‌ಗೆ ನೀಡಾಗಿತ್ತು. ನಂತರ ಲೀಸ್ ಅವಧಿ ವಿಸ್ತರಣೆ ಮಾಡಿಕೊಳ್ಳಲಾಯಿತು. 2004ರಲ್ಲಿ ಆರ್ಥಿಕ ಸಂಕಷ್ಟದ ನೆಪ ಹೇಳಿ ಬಾಲಕೃಷ್ಣ ಮಕ್ಕಳಾದ ಶ್ರೀನಿವಾಸ್ ಹಾಗೂ ಗಣೇಶ್ ಜಿಲ್ಲಾಧಿಕಾರಿಗಳ ಬಳಿ 10 ಎಕರೆ ಮಾರಲು ಒಪ್ಪಿಗೆ ಕೇಳಿದ್ದರು ಎನ್ನಲಾಗಿದೆ. ಜಿಲ್ಲಾಧಿಕಾರಿಗಳ ವಿಶೇಷ ಅಧಿಕಾರ ಬಳಸಿ ಇದ್ದನ್ನು ಮಾರಲಾಯಿತು ಎನ್ನಲಾಗಿದೆ. ಮಾರಾಟದಿಂದ ಬಂದ ಹಣವನ್ನು ಸ್ಟುಡಿಯೋ ಅಭಿವೃದ್ಧಿಗೆ ಮಾತ್ರ ಬಳಕೆ ಮಾಡಿಕೊಳ್ಳೋದಾಗಿ ಅವರು ಸರ್ಕಾರಕ್ಕೆ ಹೇಳಿದ್ದರು.

ಆದರೆ, ಈವರೆಗೆ ಸ್ಟುಡಿಯೋ ಯಥಾ ಸ್ಥಿತಿಯಲ್ಲೇ ಇದೆ. ಈವರೆಗೆ ಇದರ ಅಭಿವೃದ್ಧಿ ಆಗಿಲ್ಲ. ಈಗ ಬಾಲಕೃಷ್ಣ ಮೊಮ್ಮಗ ಕಾರ್ತಿಕ್ ಅವರು ಈ ಜಮೀನನ್ನು ಮಾರಲು ಪ್ಲ್ಯಾನ್ ಮಾಡಿದ್ದರು. 1 ಎಕರೆಗೆ 14 ಕೋಟಿ ರೂಪಾಯಿಯಂತೆ ಮಾರಲು ಪ್ಲ್ಯಾನ್ ನಡೆದಿತ್ತು. ಈ ವಿಚಾರ ಅರಣ್ಯಾಧಿಕಾರಿಗೆ ಗೊತ್ತಾಗಿದೆ. ಹೀಗಾಗಿ, ಇದನ್ನು ವಶಕ್ಕೆ ಪಡೆಯುವಂತೆ ಅವರು ಜಿಲ್ಲಾಧಿಕಾರಿಗಳಿಗೆ ಕೋರಿದ್ದಾರೆ. ಸದ್ಯ ವಿಷ್ಣುವರ್ಧನ್ ಅಭಿಮಾನಿಗಳು ಸ್ಟುಡಿಯೋದ 10 ಗುಂಟೆ ಜಾಗವನ್ನು ತಮಗೆ ನೀಡುವಂತೆ ಕೋರುತ್ತಿದ್ದಾರೆ. ವಿಷ್ಣುವರ್ಧನ್ ಸಮಾಧಿ ಜಾಗದಲ್ಲಿ ಸ್ಮಾರಕ ನಿರ್ಮಾಣ ಮಾಡುವ ಪ್ಲ್ಯಾನ್‌ನಲ್ಲಿ ಅಭಿಮಾನಿಗಳಿದ್ದಾರೆ.

# ಪರಮ್ ಸುಂದರಿ
## ಪ್ರೀಮಿಯರ್‌ನಲ್ಲಿ ಮಿಂಚಿದ ಜಾನ್ವಿ



ಜಾನ್ವಿ ಕಪೂರ್ ನಾಯಕಿ

ಬಾಲಿವುಡ್ ಫ್ಯಾಶನ್ ದಿವಾ ಜಾನ್ವಿ ಕಪೂರ್ ತಮ್ಮ ಉಡುಗೆ ವಿನ್ಯಾಸದಿಂದಲೇ ಹೆಚ್ಚು ಗಮನ ಸೆಳೆಯುತ್ತಾರೆ. ಇದೀಗ ಮುಂಬೈನಲ್ಲಿ ನಡೆದ ಪರಮ್ ಸುಂದರಿ ಚಿತ್ರದ ಪ್ರೀಮಿಯರ್‌ಗೆ ವಿಭಿನ್ನ ಸ್ಟೈಲ್‌ನ ಉಡುಗೆ ಧರಿಸಿ ಬಂದಿದ್ದಕ್ಕೆ ಮಿಶ್ರ ಪ್ರತಿಕ್ರಿಯೆ ಪಡೆದುಕೊಳ್ತಿದ್ದಾರೆ ಈ ನಟಿ.

ಯಾಕಂದ್ರೆ ಮಿರ ಮಿರ ಮಿಂಚುವ ಕೇಸರಿ ಬಣ್ಣದ ಮಿನಿ ಸ್ಕರ್ಟ್ ಧರಿಸಿದ್ದ ಜಾನ್ವಿ ಇಂಡೋ ವೆಸ್ಟರ್ನ್ ಸ್ಟೈಲ್‌ನಲ್ಲಿ ವಿಭಿನ್ನ ರೀತಿ ಕಂಡುಬಂದ್ರು. ಮಿನಿ ಸ್ಕರ್ಟ್ ಧರಿಸಿ ಸೊಂಟಕ್ಕೆ ಚಿನ್ನದ ಡಾಬು ಕಟ್ಟಿಕೊಂಡಿದ್ರು , ಕೈಯಲ್ಲಿ ಬಳೆಗಳನ್ನ ಧರಿಸಿ ಪೋಸ್ ಕೊಟ್ರು. ನಟಿಯ ವಿಚಿತ್ರ ಫ್ಯಾಶನ್ ಸ್ಟೈಲ್‌ಗೆ ನೆಟ್ಟಿಗರ ಟೀಕೆ ಟಿಪ್ಪಣಿ ಜೋರಾಗಿದೆ.

ಜಾನ್ವಿ ಅವರೇ ಹೇಳಿಕೊಂಡಂತೆ ಕೆಲವು ಬಾರಿ ಸೆಲ್ಫ್ ಡಿಸೈನ್ ಮಾಡಿಕೊಳ್ತಾರೆ. ಇಂಡೋ ವೆಸ್ಟರ್ನ್ ಸ್ಟೈಲ್ ಅಂತೂ ಹಲವು ಚಾಲ್ತಿಯಲ್ಲಿರೋದೇ ಆದರೆ ಈ ರೀತಿ ವಿಚಿತ್ರ ಉಡುಗೆಯಲ್ಲಿ ಜಾನ್ವಿ ಕಂಡುಬರ್ತಾರೆ ಎಂದು ಯಾರೂ ಊಹಿಸಿರಲಿಲ್ಲ. ಇದುವರೆಗೆ ಚಿತ್ರದ ಪ್ರಚಾರದಲ್ಲಿ ಸರಳವಾಗೇ ಕಂಡುಬಂದಿದ್ದ ನಟಿ ಇದೀಗ ಗಣೇಶ ಹಬ್ಬದ ದಿನ ನಡೆದ ಪ್ರೀಮಿಯರ್ ಶೋ ವೇಳೆ ವಿಚಿತ್ರ ಉಡುಗೆಯಿಂದ ಕಾಣಿಸ್ಕೊಂಡು ಸೆಂಟರ್ ಆಫ್ ಆಟ್ರ್ಯಾಕ್ಷನ್ ಆದ್ರು.

# ನಟಿ ಸಾಯಿ ಧನ್ಸಿಕಾ ಜೊತೆಗೆ ತಮಿಳು ನಟ ವಿಶಾಲ್ ನಿಶ್ಚಿತಾರ್ಥ



ವಿಶಾಲ್ ನಟಿ ಸಾಯಿ ಧನಿಶ್ಕಾ ಜೊತೆಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಮೇ ತಿಂಗಳಲ್ಲಿ ಈ ಬಗ್ಗೆ ವಿಶಾಲ್ ಅವರು ಬಹಿರಂಗ ಘೋಷಣೆ ಮಾಡಿದ್ದರು. ಸಾಯಿ ಧನಿಷ್ಕ ಸಹ ತಮಿಳು ಚಿತ್ರರಂಗದ ನಟಿ. ಈ ಹಿಂದೆ 'ಕಬಾಲಿ' ಸೇರಿದಂತೆ ಕೆಲವು ತಮಿಳು ಸಿನಿಮಾಗಳಲ್ಲಿ ನಟಿಸಿದ್ದಾರೆ. ವಿಶಾಲ್ ಹಾಗೂ ಸಾಯಿ ಧನಿಷ್ಕಾ ಅವರ ನಿಶ್ಚಿತಾರ್ಥವು ವಿಶಾಲ್ ನಿವಾಸದಲ್ಲಿಯೇ ಕುಟುಂಬಸ್ಥರ ಸಮ್ಮುಖದಲ್ಲಿ ಸರಳವಾಗಿ ನೆರವೇರಿದೆ. ತಮಿಳಿನ ಸ್ಟಾರ್ ನಟ ಮತ್ತು ನಿರ್ಮಾಪಕ ವಿಶಾಲ್ ಮದುವೆ ಸುದ್ದಿಗಳು ಈ ಹಿಂದೆ ಹಲವಾರು ಬಾರಿ ಹರಿದಾಡಿದ್ದವು.

ಕೆಲ ತಿಂಗಳ ಹಿಂದೆ ವಿಶಾಲ್ ಅವರು ತಾವು ನಟಿ ಸಾಯಿ ಧನಿಷ್ಕಾ ಜೊತೆ ಪ್ರೀತಿಯಲ್ಲಿದ್ದು ಶೀಘ್ರವೇ ನಿಶ್ಚಿತಾರ್ಥ ಮಾಡಿಕೊಳ್ಳುವುದಾಗಿ ಹೇಳಿದ್ದರು.

ಸಾಯಿ ಧನಿಷ್ಕ ಸಹ ತಮಿಳು ಚಿತ್ರರಂಗದ ನಟಿ. ಈ ಹಿಂದೆ 'ಕಬಾಲಿ' ಸೇರಿದಂತೆ ಕೆಲವು ತಮಿಳು ಸಿನಿಮಾಗಳಲ್ಲಿ ನಟಿಸಿದ್ದಾರೆ. ಇದೀಗ ವಿಶಾಲ್ ನಟಿ ಸಾಯಿ ಧನಿಶ್ಕಾ ಜೊತೆಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಮೇ ತಿಂಗಳಲ್ಲಿ ಈ ಬಗ್ಗೆ ವಿಶಾಲ್ ಅವರು ಬಹಿರಂಗ ಘೋಷಣೆ ಮಾಡಿದ್ದರು. ವಿಶಾಲ್ ಹಾಗೂ ಸಾಯಿ ಧನಿಷ್ಕಾ ಅವರ ನಿಶ್ಚಿತಾರ್ಥವು ವಿಶಾಲ್ ನಿವಾಸದಲ್ಲಿಯೇ ಕುಟುಂಬಸ್ಥರ ಸಮ್ಮುಖದಲ್ಲಿ ಸರಳವಾಗಿ ನೆರವೇರಿದೆ.

# ನೀವು ನನ್ನಿಂದ ಅದನ್ನು ನಿರೀಕ್ಷಿಸಬೇಡಿ



ರಾಜ್ ಬಿ ಶೆಟ್ಟಿ ಅವರ 'ಸು ಫ್ರಮ್ ಸೋ' ಸಿನಿಮಾ ದೊಡ್ಡ ಯಶಸ್ಸು ಕಂಡಿದೆ. ಆದರೆ, ಈ ಯಶಸ್ಸನ್ನು ಅನುಕರಿಸಿ ಅದೇ ಮಾದರಿಯ ಚಿತ್ರಗಳನ್ನು ಮಾಡುವುದನ್ನು ಅವರು ವಿರೋಧಿಸುತ್ತಾರೆ. ಅವರ ಪ್ರಕಾರ, ಯಶಸ್ಸಿನ ಹಿಂದೆ ಓಡುವುದಕ್ಕಿಂತ ಹೊಸತನವನ್ನು ಪ್ರಯತ್ನಿಸುವುದು ಮುಖ್ಯ.

'ಸು ಫ್ರಮ್ ಸೋ' ಸಿನಿಮಾ ಮೂಲಕ ರಾಜ್ ಬಿ ಶೆಟ್ಟಿ ಎಲ್ಲಾ ಕಡೆಗಳಲ್ಲೂ ಫೇಮಸ್ ಆಗಿದ್ದಾರೆ. ಈ ಮೊದಲು ಅವರು ಮಾಡುತ್ತಿದ್ದ ಚಿತ್ರಗಳು ಕನ್ನಡದಲ್ಲಿ ಮಾತ್ರ ಗಮನ ಸೆಳೆಯುತ್ತಿದ್ದವು. ಈಗ ಪರಭಾಷೆಯಲ್ಲೂ ಅವರ ಸಿನಿಮಾ ಸದ್ದು ಮಾಡಿದೆ. 'ಸು ಫ್ರಮ್ ಸೋ' ಯಶಸ್ಸಿನ ಬಳಿಕ ಅನೇಕರು ಅದನ್ನೇ ಕಾಪಿ ಮಾಡುವ ಸಾಧ್ಯತೆ ಇರುತ್ತದೆ. ಅಂದರೆ ಈ ರೀತಿಯ ಸಿನಿಮಾಗಳು ಜನರಿಗೆ ಹೆಚ್ಚು ಇಷ್ಟ ಆಗುತ್ತವೆ ಎಂದು ಭಾವಿಸಿ ಇದೇ ಮಾದರಿಯ ಚಿತ್ರಗಳನ್ನು ಮಾಡಲು ಹೋಗುವ ಸಾಧ್ಯತೆ ಇದೆ. ಈ ವಿಚಾರಕ್ಕೆ ಸಂಬಂಧಿಸಿ ರಾಜ್ ಅವರು ಕಿವಿ ಮಾತು ಹೇಳಿದ್ದಾರೆ.

'ಕೆಜಿಎಫ್' ಕನ್ನಡ ಚಿತ್ರರಂಗದ ಪಾಲಿಗೆ ಅತಿ ದೊಡ್ಡ ಹಿಟ್ ಆಗಿದೆ. ಈ ರೀತಿಯ ಚಿತ್ರಗಳನ್ನು ಜನರು ನೋಡುತ್ತಾರೆ ಎಂದು ಭಾವಿಸಿ ಅನೇಕರು ಇದೇ ಮಾದರಿಯ ಸಿನಿಮಾಗಳನ್ನು ಮಾಡಲು ಹೋಗಿ ಕೈ ಸುಟ್ಟುಕೊಂಡ ಉದಾಹರಣೆ ಇದೆ. ಇನ್ನೂ ಕೆಲವೊಮ್ಮೆ ಸಕ್ಸಸ್ ಫಾರ್ಮುಲಾದಿಂದ ಹೊಸದೇನು ಬರೋದಿಲ್ಲ. ಆ ರೀತಿ ಆಗಬಾರದು ಎಂಬುದು ರಾಜ್ ಅವರ ಕಾಳಜಿ. ಹೀಗಾಗಿ, ಅವರು ಈ ಬಗ್ಗೆ ಮಾತನಾಡಿದ್ದಾರೆ. ಕನ್ನಡ ಪಿಚ್ಚರ್ ಯೂಟ್ಯೂಬ್ ಚಾನೆಲ್ ಕ್ಲಿಪ್‌ನ 'ಸಿನಿ ಚಿಂತಕ' ಎಂಬ ಟ್ವಿಟರ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದೆ. 'ಇನ್ನುಮುಂದೆ ಒಳ್ಳೆಯ ಸಿನಿಮಾಗಳನ್ನು ಮಾಡುವ ಕೆಲಸ ಜಾರಿಯಲ್ಲಿ ಇರಲಿದೆ. ಇದೇ ರೀತಿಯ ಸಿನಿಮಾ ಕಡೋಬೇಕು ಎಂಬುದನ್ನು ನೀವು ನನ್ನಿಂದ ನಿರೀಕ್ಷಿಸಬಾರದು' ಎಂದು ಷರತ್ತೊಂದನ್ನು ಹಾಕಿದ್ದಾರೆ.

'ಇದೇ ತರಹದ ಸಿನಿಮಾ ಎಂಬುದು ಬಂದಾಗ ನಾವು ಯಶಸ್ಸಿನ ಹಾದಿಯನ್ನು ಮಾತ್ರ ಹಿಡಿಯಲು ಸಾಧ್ಯ.

# ಚಿತ್ರರಂಗವನ್ನೇ ತೊರೆದ ಸ್ಟಾರ್ ನಟಿ



ಸ್ಟಾರ್ ನಟನ ಸಿನಿಮಾದಿಂದ ಬೇಸರ

ಸಿನಿಮಾಗಳಲ್ಲಿ ಪಾತ್ರಗಳು ಕೆಲವೊಮ್ಮೆ ಅಂದುಕೊಂಡಂತೆ ಮೂಡಿ ಬರುತ್ತವೆ ಕೆಲವೊಮ್ಮೆ ನಿರಾಸೆ ಮೂಡಿಸುತ್ತವೆ. ಸಣ್ಣ ಪಾತ್ರಗಳು ಸಹ ಭಾರಿ ದೊಡ್ಡ ಹಿಟ್ ಆದ ಉದಾಹರಣೆ ಸಾಕಷ್ಟಿದೆ. ಸ್ಟಾರ್ ನಟಿಯೊಬ್ಬರು, ಸಿನಿಮಾನಲ್ಲಿ ತಮ್ಮ ಪಾತ್ರ ಸರಿಯಾಗಿ ಮೂಡಿಬರಲಿಲ್ಲವೆಂಬ ಕಾರಣಕ್ಕೆ ಚಿತ್ರರಂಗವನ್ನೇ ತೊರೆದಿದ್ದಾರೆ.

ಎಲ್ಲಾ ಸಿನಿಮಾಗಳಲ್ಲಿಯೂ ಎಲ್ಲಾ ನಟರ ಪಾತ್ರಗಳು ಚೆನ್ನಾಗಿಯೇ ಮೂಡಿಬರಬೇಕೆಂದೇನೂ ಇಲ್ಲ. ಸಿನಿಮಾ ಎಂದಮೇಲೆ ಒಳ್ಳೆಯ ಪಾತ್ರಗಳು ವಿಲನ್ ಗುಣಗಳುಳ್ಳ ಪಾತ್ರಗಳು ಎಲ್ಲವೂ ಇರುತ್ತವೆ. ಆದರೆ ಸ್ಟಾರ್ ನಟಿಯೊಬ್ಬರು, ಸಿನಿಮಾ ಒಂದರಲ್ಲಿ ತಮ್ಮ ಪಾತ್ರ ಸರಿಯಾಗಿ ಮೂಡಿಬರಲಿಲ್ಲವೆಂಬ ಕಾರಣಕ್ಕೆ ಬೇಸರ ಮಾಡಿಕೊಂಡು ಚಿತ್ರರಂಗವನ್ನೇ ತೊರೆದು ಬಿಟ್ಟಿದ್ದಾರೆ. ಹೀಗೆ ಚಿತ್ರರಂಗವನ್ನು ತೊರೆದ ನಟಿ ಸಾಮಾನ್ಯ ನಟಿಯಲ್ಲ, ತಮ್ಮ ಅತ್ಯುತ್ತಮ ನಟನೆ ಮತ್ತು ಸೌಂದರ್ಯದಿಂದ ಪ್ರೇಕ್ಷಕರನ್ನು ಸೂಜಿಗಲ್ಲಿನಿಂದ ಸೆಳೆದಿದ್ದ ನಟಿ ಕಮಲಿನಿ. 'ಗೋಧಾವರಿ', 'ಆನಂದ್', 'ಪಯಣಂ', 'ಸ್ಟೈಲ್', 'ಹ್ಯಾಪಿ ಡೇಸ್', ತಮಿಳಿನ 'ವೇಟ್ಟೆಯಾಡು ವಿಲೆಯಾಡು' ಕನ್ನಡದ 'ಸವಾರಿ' ಇನ್ನೂ ಹಲವು ಅತ್ಯುತ್ತಮ ಸಿನಿಮಾಗಳಲ್ಲಿ ನಟಿಸಿರುವ ಕಮಿಲಿನಿ ಮುಖರ್ಜಿ ಕಳೆದ ಒಂಬತ್ತು ವರ್ಷಗಳಿಂದಲೂ ಯಾವುದೇ ಸಿನಿಮಾನಲ್ಲಿ ನಟಿಸಿಲ್ಲ. ಅದರಲ್ಲೂ ತೆಲುಗಿನ ಸ್ಟಾರ್ ನಟರೊಬ್ಬರ ಸಿನಿಮಾನಲ್ಲಿ ನಟಿಸಿದ ಬಳಿಕ ಬೇಸರ ಮಾಡಿಕೊಂಡು ಆ ಚಿತ್ರರಂಗವನ್ನೇ ತ್ಯಜಿಸಿ ಬಿಟ್ಟರಂತೆ. ಈ ಬಗ್ಗೆ ಸ್ವತಃ ಅವರೇ ಸಂದರ್ಶನದಲ್ಲಿ ಹೇಳಿಕೊಂಡಿದ್ದಾರೆ.

ಕಮಿಲಿನಿ ಮುಖರ್ಜಿ ಇತ್ತೀಚೆಗೆ ಪಾಡ್ ಕಾಸ್ಟ್ ಒಂದರಲ್ಲಿ ಮಾತನಾಡಿದ್ದು, ತಮಗೆ ರಾಮ್ ಚರಣ್ ನಟನೆಯ 'ಗೋವಿಂದುಡು ಅಂದರಿವಾಡೇಲೆ' ಸಿನಿಮಾನಲ್ಲಿ ನಟಿಸಿದ್ದು ಸ್ವಲ್ಪವೂ ಇಷ್ಟವಾಗಲಿಲ್ಲ ಎಂದಿದ್ದಾರೆ. ಸಿನಿಮಾದಲ್ಲಿ ಕೆಲಸ ಮಾಡಿದ ಎಲ್ಲರೂ ನನ್ನೊಟ್ಟಿಗೆ ಚೆನ್ನಾಗಿದ್ದರು, ಚೆನ್ನಾಗಿ ನೋಡಿಕೊಂಡರು. ಆದರೆ ಸಿನಿಮಾದ ಪಾತ್ರ ಬದಲಾದ ರೀತಿ ನನಗೆ ತುಸುವೂ ಇಷ್ಟವಾಗಲಿಲ್ಲ. ಅದೇ ಕಾರಣಕ್ಕೆ ಆ ಸಿನಿಮಾದ ಬಳಿಕ ನಾನು ತೆಲುಗು ಸಿನಿಮಾಗಳಲ್ಲಿ ನಟಿಸುವುದನ್ನೇ ಬಿಟ್ಟುಬಿಟ್ಟೆ' ಎಂದಿದ್ದಾರೆ.

# ಐಪಿಎಲ್ ನಿವೃತ್ತಿಯ ಬಗ್ಗೆ ಕೊನೆಗೂ ಮೌನ ಮುರಿದ ಅಶ್ವಿನ್



ಭಾರತದ ಮಾಜಿ ಕ್ರಿಕೆಟಿಗ ಆರ್. ಅಶ್ವಿನ್ ಅವರು ಆರೋಗ್ಯ ಸಮಸ್ಯೆಗಳಿಂದಾಗಿ ಐಪಿಎಲ್ ನಿಂದ ನಿವೃತ್ತಿ ಹೊಂದಿದ್ದಾರೆ ಎಂದು ಘೋಷಿಸಿದ್ದಾರೆ. ಮೂರು ತಿಂಗಳ ಕಾಲ ನಡೆಯುವ ಐಪಿಎಲ್‌ನಲ್ಲಿ ಇನ್ನು ಮುಂದೆ ಆಡಲು ಸಾಧ್ಯವಾಗುವುದಿಲ್ಲ. ನನ್ನ ದೇಹವು ನನಗೆ ಬೆಂಬಲಿಸುತ್ತಿಲ್ಲ ಎಂದಿದ್ದಾರೆ. ಆದಾಗ್ಯೂ, ಅವರು ಇತರ ಟಿ20 ಲೀಗ್ ಗಳಲ್ಲಿ ಆಡುವುದಾಗಿ ಮತ್ತು ಭವಿಷ್ಯದಲ್ಲಿ ಕೋಚಿಂಗ್ ಮಾಡುವ ಬಗ್ಗೆ ಆಸಕ್ತಿ ವ್ಯಕ್ತಪಡಿಸಿದ್ದಾರೆ.

ಭಾರತದ ಮಾಜಿ ಕ್ರಿಕೆಟಿಗ ಆರ್. ಅಶ್ವಿನ್ ಇದೇ ಅಗಸ್ಟ್ 26 ರಂದು ತಮ್ಮ ಐಪಿಎಲ್ ವೃತ್ತಿಜೀವನಕ್ಕೆ ಅಂತ್ಯ ಹಾಡಿದ್ದರು. ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಇದ್ದಕ್ಕಿದ್ದಂತೆ ನಿವೃತ್ತಿ ಘೋಷಿಸುವ ಮೂಲಕ ಅಶ್ವಿನ್ ಅಭಿಮಾನಿಗಳಿಗೆ ಶಾಕ್ ನೀಡಿದ್ದರು. ಅಶ್ವಿನ್ ನಿವೃತ್ತಿಯ ಬಳಿಕ ಸಾಕಷ್ಟು ಊಹಾಪೋಹಗಳು ಹುಟ್ಟಿಕೊಂಡಿದ್ದವು. ಸಿಎಸ್‌ಕೆ ಫ್ರಾಂಚೈಸಿ ಹಾಗೂ ಅಶ್ವಿನ್ ನಡುವೆ ಬಿರುಕು ಮೂಡಿದೆ. ಇದೇ ಕಾರಣ ಅಶ್ವಿನ್ ನಿವೃತ್ತಿಯ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಹೇಳಲಾಗುತ್ತಿತ್ತು. ಆದರೀಗ ತಮ್ಮ ನಿರ್ಧಾರದ ಬಗ್ಗೆ ಮೌನ ಮುರಿದಿರುವ ಅಶ್ವಿನ್ ಎಲ್ಲಾ ವದಂತಿಗಳಿಗೆ ತೆರೆ ಎಳೆದಿದ್ದಾರೆ.

**ಪ್ರದರ್ಶನ ವಿಶೇಷವಾಗಿರಲಿಲ್ಲ:** ವಾಸ್ತವವಾಗಿ ಕಳೆದ ಐಪಿಎಲ್‌ನಲ್ಲಿ ಅಶ್ವಿನ್ ಅವರ ಪ್ರದರ್ಶನ ವಿಶೇಷವಾಗಿರಲಿಲ್ಲ. ಚೆನ್ನೈ ಸೂಪರ್ ಕಿಂಗ್ಸ್ ಪರ ಆಡಿದ 9 ಪಂದ್ಯಗಳಲ್ಲಿ ಅವರು ಕೇವಲ 7 ವಿಕೆಟ್‌ಗಳನ್ನು ಕಬಳಿಸಿದ್ದರು. ಬ್ಯಾಟ್‌ನಿಂದ ವಿಶೇಷವಾದದ್ದನ್ನು ಮಾಡಲು ಅವರಿಗೆ ಸಾಧ್ಯವಾಗಲಿಲ್ಲ. ಹೀಗಾಗಿ ಐಪಿಎಲ್ ಮುಗಿದ ಬಳಿಕ ಅಶ್ವಿನ್‌ಗೆ ಇದು ಕೊನೆಯ ಸೀಸನ್ ಎಂಬ ಚರ್ಚೆ ಶುರುವಾಗಿತ್ತು. ಅದಾದ ಬಳಿಕ ಸ್ವತಃ ಅಶ್ವಿನ್ ಅವರೇ ತನ್ನನ್ನು ತಂಡದಿಂದ ಬಿಡುಗಡೆ ಮಾಡುವಂತೆ ಸಿಎಸ್‌ಕೆ ಬಳಿ ಕೇಳಿದ್ದಾರೆ ಎಂದು ವರದಿಯಾಗಿತ್ತು. ಅದೆಲ್ಲದರ ನಡುವೆ ಅಶ್ವಿನ್ ಇದ್ದಕ್ಕಿದ್ದಂತೆ ನಿವೃತ್ತಿ ಘೋಷಿಸಿದ್ದರು.

**ನನ್ನ ದೇಹವು ನನಗೆ ಬೆಂಬಲಿಸುತ್ತಿಲ್ಲ;** 'ಮೂರು ತಿಂಗಳ ಕಾಲ ನಡೆಯುವ ಐಪಿಎಲ್‌ನಲ್ಲಿ ಇನ್ನು ಮುಂದೆ ಆಡಲು ಸಾಧ್ಯವಾಗುವುದಿಲ್ಲ. ನನ್ನ ದೇಹವು ನನಗೆ ಬೆಂಬಲಿಸುತ್ತಿಲ್ಲ. ಐಪಿಎಲ್‌ನಲ್ಲಿ ಆಡಲು ನೀವು ಸಂಪೂರ್ಣವಾಗಿ ಫಿಟ್ ಆಗಿರಬೇಕು. ಆದರೆ ನನಗೆ ಅಷ್ಟು ಕಷ್ಟಪಟ್ಟು ಕೆಲಸ ಮಾಡಲು ಸಾಧ್ಯವಾಗುವುದಿಲ್ಲ' ಎಂದಿದ್ದಾರೆ.

# ಧೋನಿ ನಾಯಕತ್ವದ ಬಗ್ಗೆ ದಿಗ್ಗಜರ ಬಿಗ್‌ಬಾಂಬ್

ಸದ್ಯ ಮಾಜಿ ಕ್ರಿಕೆಟಿಗ ಮನೋಜ್ ತಿವಾರಿ ಕೂಡ ತಮ್ಮ ಕರಿಯರ್ ಅಂತ್ಯವಾಗೋದಕ್ಕೆ ಧೋನಿ ಕಾರಣ ಎಂದು ಬ್ಲೇಮ್ ಮಾಡಿದ್ದಾರೆ. ಧೋನಿಗೆ ನನ್ನನ್ನ ಕಂಡ್ರೆ ಆಗ್ತಿರಲಿಲ್ಲ. ನನಗೆ ಬೆಂಬಲವನ್ನೂ ನೀಡಲಿಲ್ಲ, ಅವಕಾಶವನ್ನೂ ನೀಡಲಿಲ್ಲ. ನನ್ನ ಕರಿಯರ್ ಬೇಗ ಅಂತ್ಯವಾಗೋದಕ್ಕೆ ಧೋನಿಯೇ ಕಾರಣ ಎಂದು ಹೊಸ ಬಾಂಬ್ ಸಿಡಿಸಿದ್ದಾರೆ. ಧೋನಿ ನನ್ನ ಕರಿಯರ್ ಮುಗಿಸಿದ್ರು, ಎಂದ ಪಠಾಣ್ ಯೆಸ್.. ತುಂಬಾ ಹಿಂದಲ್ಲ.. 4-5 ದಿನಗಳ ಹಿಂದೆ ಧೋನಿ ವಿಚಾರದಲ್ಲಿ ಮಾಜಿ ಆಲ್‌ರೌಂಡರ್ ಇರ್ಫಾನ್ ಪಠಾಣ್ ಬಾಂಬ್ ಸಿಡಿಸಿದ್ರು. ಒನ್ ಅಫ್ ದ ಬೆಸ್ಟ್ ಅಲ್‌ರೌಂಡರ್ ಎನಿಸಿಕೊಂಡಿದ್ದ ಇರ್ಫಾನ್, ಇದಕ್ಕಿದ್ದಂತೆ ಟೀಮ್ ಇಂಡಿಯಾದಿಂದ ದೂರವಾಗಿದ್ದು ನಿಮಗೆ ಗೊತ್ತಿರಬಹುದು. ಇದಕ್ಕೆ ಕಾರಣ ಧೋನಿ ಎಂದು ಇರ್ಫಾನ್‌ಪಠಾಣ್ ಹೇಳಿದ್ರು. ನನ್ನನ್ನ ಡ್ರಾಪ್ ಮಾಡಿದ್ಯಾಕೆ ಎಂದು ಕೋಚ್ ಗ್ಯಾರಿ ಕರ್ಸ್ಟನ್ ಬಳಿ ಕೇಳಿದ್ದೆ. ಅದಕ್ಕೆ ಗ್ಯಾರಿ ನನ್ನ ಕೈಯಲ್ಲಿ ಏನೂ ಇಲ್ಲ ಎಂದಿದ್ರು. ಆ ಬಳಿಕ ಗೊತ್ತಾಗಿದ್ದು, ಇದ್ರ ಹಿಂದಿರೋದು ಧೋನಿ ಅಂತಾ ಎಂದಿದ್ರು.





ಪಠಾಣ್ ಮಾತ್ರವಲ್ಲ, ಒಂದು ವಾರದ ಮುನ್ನ ಟೀಮ್ ಇಂಡಿಯಾ ಮಾಜಿ ಕ್ರಿಕೆಟಿಗ, ಸ್ಫೋಟಕ ಬ್ಯಾಟ್ಸ್‌ಮನ್ ವೀರೇಂದ್ರ ಸೆಹ್ವಾಗ್ ಕೂಡ ಧೋನಿ ಮೇಲೆ ಇಂತದ್ದೇ ಆರೋಪ ಮಾಡಿದ್ರು. 2007-08ರ ಆಸ್ಟ್ರೇಲಿಯಾ ಸರಣಿಯಲ್ಲಿ ಮೊದಲ 3 ಪಂದ್ಯ ಆಡಿದ ಬಳಿಕ ನನ್ನನ್ನ ಡ್ರಾಪ್ ಮಾಡಿದ್ರು. ನಂತರ ಕೆಲ ಕಾಲ ನನ್ನನ್ನ ತಂಡಕ್ಕೂ ಆಯ್ಕೆ ಮಾಡಲಿಲ್ಲ. ಹೀಗಾಗಿ ಒನ್ ಡೇ ಫಾರ್ಮೆಟ್‌ಗೆ ನಿವೃತ್ತಿ ಹೇಳೋಕೆ ಮುಂದಾಗಿದ್ದೆ. ಸಚಿನ್ ನನ್ನನ್ನ ತಡೆದಿದ್ರು ಎಂದು ಸೆಹ್ವಾಗ್ ಹೇಳಿಕೆ ನೀಡಿದ್ರು. ಇದು ನಿಮಗೆ ಗೊತ್ತಿರೋ ಕಥೆಯೇ.. ಧೋನಿ ನಾಯಕತ್ವವನ್ನ ಸದಾ ಗಂಭೀರ್ ಟೀಕಿಸ್ತಾರೆ. ಧೋನಿಯಿಂದ ಮಾತ್ರವಲ್ಲ.. ಭಾರತ ವಿಶ್ವಕಪ್ ಗೆದ್ದಿದ್ದು ಎಲ್ಲರಿಂದ ಅಂತಾ ಪದೇ ಪದೇ ಹೇಳ್ತಾರೆ.



ಸಿಡಿದೆದ್ದ ಮಾಜಿ ಟೀಮ್ ಮೇಟ್ಸ್..!

# ರೋಜರ್ ಬಿನ್ನಿ ಶೀಘ್ರದಲ್ಲೇ ರಾಜೀನಾಮೆ



ಬಿಸಿಸಿಐ ಅಧ್ಯಕ್ಷ ರೋಜರ್ ಬಿನ್ನಿ ಅವರು ಶೀಘ್ರದಲ್ಲೇ ತಮ್ಮ ಹುದ್ದೆಗೆ ರಾಜೀನಾಮೆ ನೀಡುವ ಸಾಧ್ಯತೆಯಿದೆ. ರಾಜೀವ್ ಶುಕ್ಲಾ ಅವರು ಹಂಗಾಮಿ ಅಧ್ಯಕ್ಷರಾಗುವ ಸಾಧ್ಯತೆಯಿದೆ. ಬಿಸಿಸಿಐನ ವಾರ್ಷಿಕ ಸಾಮಾನ್ಯ ಸಭೆ ಮತ್ತು ಚುನಾವಣೆಗಳು ಮುಂದಿನ ತಿಂಗಳು ನಡೆಯಲಿವೆ.

ಡ್ರೀಮ್ 11 ಪ್ರಾಯೋಜಕತ್ವ ಹಿಂದಕ್ಕೆ ತೆಗೆದುಕೊಂಡಿರುವುದರಿಂದ ಹೊಸ ಪ್ರಾಯೋಜಕರ ಆಯ್ಕೆಯೂ ಚರ್ಚೆಯಲ್ಲಿದೆ. ವಿಶ್ವಕ್ರಿಕೆಟ್‌ನ ಅತ್ಯಂತ ಶ್ರೀಮಂತ ಕ್ರಿಕೆಟ್ ಮಂಡಳಿ ಬಿಸಿಸಿಐನ ಆಡಳಿತ ವಿಭಾಗದಲ್ಲಿ ಶೀಘ್ರದಲ್ಲೇ ದೊಡ್ಡ ಬದಲಾವಣೆಯಾಗಲಿದೆ ಎಂದು ವರದಿಯಾಗಿದೆ. ವರದಿಗಳ ಪ್ರಕಾರ, ಬಿಸಿಸಿಐನ ಹಾಲಿ ಅಧ್ಯಕ್ಷ ರೋಜರ್ ಬಿನ್ನಿ ಅವರು ಇಷ್ಟರಲ್ಲೇ ತಮ್ಮ ಹುದ್ದೆಗೆ ರಾಜೀನಾಮೆ ನೀಡಲಿದ್ದು, ಅವರ ಬದಲಿಗೆ ಪ್ರಸ್ತುತ ಮಂಡಳಿಯ ಉಪಾಧ್ಯಕ್ಷರಾಗಿರುವ ರಾಜೀವ್ ಶುಕ್ಲಾ ಅವರನ್ನು ಹಂಗಾಮಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗುತ್ತದೆ ಎನ್ನಲಾಗುತ್ತಿದೆ. ವಾಸ್ತವವಾಗಿ ರೋಜರ್ ಬಿನ್ನಿ ಅವರು 2022 ರಲ್ಲಿ ಸೌರಭ್ ಗಂಗೂಲಿ ಅವರ ಬದಲಿಗೆ ಅಧ್ಯಕ್ಷ ಹುದ್ದೆಗೇರಿದ್ದರು.

ಆದರೀಗ ಅವರಿಗೆ 70 ವರ್ಷ ವಯಸ್ಸಾಗಿದೆ. ಹೀಗಾಗಿ ಅವರು ಶೀಘ್ರದಲ್ಲೇ ಅಧ್ಯಕ್ಷ ಹುದ್ದೆಗೆ ರಾಜೀನಾಮೆ ನೀಡಬಹುದು ಎಂದು ವರದಿಯಾಗಿದೆ. ವರದಿಗಳ ಪ್ರಕಾರ, ಆಗಸ್ಟ್ 27 ರಂದು ರಾಜೀವ್ ಶುಕ್ಲಾ ಅವರ ಅಧ್ಯಕ್ಷತೆಯಲ್ಲಿ ಬಿಸಿಸಿಐ ಅಧಿಕಾರಿಗಳ ಸಭೆ ನಡೆಯಿತು. ಈ ಸಭೆಯಲ್ಲಿ ಟೀಂ ಇಂಡಿಯಾದ ಜೆರ್ಸಿ ಪ್ರಾಯೋಜಕತ್ವವನ್ನು ಡ್ರೀಮ್ 11 ಹಿಂತೆಗೆದುಕೊಂಡಿರುವುದರಿಂದ ಹೊಸ ಪ್ರಾಯೋಜಕತ್ವದ ಬಗ್ಗೆಯೂ ಚರ್ಚಿಸಲಾಗಿದೆ ಎಂದು ವರದಿಯಾಗಿದೆ.

**ನಿಯಮಗಳೇನು?**

ಬಿಸಿಸಿಐ ಸಂವಿಧಾನದ ಪ್ರಕಾರ, ಯಾವುದೇ ಅಧಿಕಾರಿ 70 ವರ್ಷ ವಯಸ್ಸಿನ ನಂತರ ತಮ್ಮ ಹುದ್ದೆಯಲ್ಲಿ ಮುಂದುವರೆಯುವಂತಿಲ್ಲ. ಹೀಗಾಗಿ 70 ವರ್ಷದ ರೋಜರ್ ಬಿನ್ನಿ ಅಧ್ಯಕ್ಷ ಹುದ್ದೆಯಲ್ಲಿ ಉಳಿಯಲು ಅನರ್ಹರಾಗುತ್ತಾರೆ.

## ಸತತ 4 ಎಸೆತಗಳಲ್ಲಿ 4 ವಿಕೆಟ್
# ಇತಿಹಾಸ ಸೃಷ್ಟಿಸಿದ ಜಮ್ಮು ಕಾಶ್ಮೀರ ವೇಗಿ

ದುಲೀಪ್ ಟ್ರೋಫಿಯ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಜಮ್ಮು ಮತ್ತು ಕಾಶ್ಮೀರದ ಆಕಿಬ್ ನಬಿ ಅವರು ಅದ್ಭುತ ಬೌಲಿಂಗ್ ಪ್ರದರ್ಶನ ನೀಡಿದ್ದಾರೆ. ಅವರು ಸತತ ನಾಲ್ಕು ಎಸೆತಗಳಲ್ಲಿ ನಾಲ್ಕು ವಿಕೆಟ್‌ಗಳನ್ನು ಪಡೆದು ಡಬಲ್ ಹ್ಯಾಟ್ರಿಕ್ ಸಾಧಿಸಿದ್ದಾರೆ. ಇದು ದುಲೀಪ್ ಟ್ರೋಫಿ ಇತಿಹಾಸದಲ್ಲಿ ಮೊದಲ ಬಾರಿ. ಪೂರ್ವ ವಲಯ ತಂಡವನ್ನು ಕೇವಲ 230 ರನ್‌ಗಳಿಗೆ ಆಲೌಟ್ ಮಾಡುವಲ್ಲಿ ನಬಿ ಪ್ರಮುಖ ಪಾತ್ರ ವಹಿಸಿದ್ದಾರೆ.

ದುಲೀಪ್ ಟ್ರೋಫಿಯಲ್ಲಿ ನಡೆಯುತ್ತಿರುವ ಕ್ವಾರ್ಟರ್ ಫೈನಲ್ ಸುತ್ತಿನಲ್ಲಿ 4 ತಂಡಗಳು ಮುಖಾಮುಖಿಯಾಗಿವೆ. ಇದರಲ್ಲಿ ಪೂರ್ವ ವಲಯ ಹಾಗೂ ಉತ್ತರ ವಲಯ ತಂಡಗಳ ನಡುವೆ ಪಂದ್ಯ ನಡೆಯುತ್ತಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಉತ್ತರ ವಲಯ ತಂಡ 405 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿದೆ. ಆ ಬಳಿಕ ಬ್ಯಾಟಿಂಗ್ ಆರಂಭಿಸಿದ ಪೂರ್ವ ವಲಯ ತಂಡ ಕೇವಲ 230 ರನ್‌ಗಳಿಗೆ ಆಲೌಟ್ ಆಗುವ ಮೂಲಕ 175 ರನ್‌ಗಳ ಹಿನ್ನಡೆ ಅನುಭವಿಸಿದೆ. ಪೂರ್ವ ವಲಯ ತಂಡವನ್ನು ಇಷ್ಟು ಕಡಿಮೆ ಮೊತ್ತಕ್ಕೆ ಕಟ್ಟಿಹಾಕುವಲ್ಲಿ ಜಮ್ಮು ಮತ್ತು ಕಾಶ್ಮೀರದ ವೇಗದ ಬೌಲರ್ ಆಕಿಬ್ ನಬಿ ಅವರ ಪಾತ್ರ ಪ್ರಮುಖವಾಗಿತ್ತು. ಮೊದಲ ಇನ್ನಿಂಗ್ಸ್‌ನಲ್ಲಿ ಆಕಿಬ್ ಕೇವಲ 28 ರನ್ ನೀಡಿ 5 ವಿಕೆಟ್ ಕಬಳಿಸಿದರು. ಇದರಲ್ಲಿ ಅವರು ಸತತ 4 ಎಸೆತಗಳಲ್ಲಿ 4 ವಿಕೆಟ್ ಉರುಳಿಸಿ ಇತಿಹಾಸ ನಿರ್ಮಿಸಿದರು. ಈ ಮೂಲಕ ದುಲೀಪ್ ಟ್ರೋಫಿ ಇತಿಹಾಸದಲ್ಲಿ ಈ ಸಾಧನೆ ಮಾಡಿದ ಮೊದಲ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

**ಹ್ಯಾಟ್ರಿಕ್ ವಿಕೆಟ್;** 53 ನೇ ಓವರ್ ಬೌಲಿಂಗ್ ಮಾಡಲು ಬಂದ ಆಕಿಬ್ ನಬಿ, ಈ ಓವರ್‌ನ ನಾಲ್ಕನೇ ಎಸೆತದಲ್ಲಿ ವಿರಾಟ್ ಸಿಂಗ್‌ಗೆ ಪೆವಿಲಿಯನ್ ದಾರಿ ತೋರಿಸಿದರು. ನಂತರ ಬಂದ ಮನಿಷಿ ಅವರನ್ನು ಸಹ ಮೊದಲ ಎಸೆತದಲ್ಲೇ ಔಟ್ ಮಾಡಿದರು. ಕೊನೆಯ ಎಸೆತದಲ್ಲಿ ಮುಖ್ತಾರ್ ಹುಸೇನ್ ಅವರನ್ನು ಔಟ್ ಮಾಡಿ ತಮ್ಮ ಮೊದಲ ಹ್ಯಾಟ್ರಿಕ್ ಪೂರ್ಣಗೊಳಿಸಿದರು. ಮತ್ತೆ 55 ನೇ ಓವರ್ ಬೌಲಿಂಗ್ ಮಾಡಲು ಬಂದ ಆಕಿಬ್ ಮೊದಲ ಎಸೆತದಲ್ಲೇ ಸೂರಜ್ ಸಿಂಧು ಜೈಸ್ವಾಲ್ ಅವರ ವಿಕೆಟ್ ಪಡೆದರು.

**ಸತತ 4 ಎಸೆತಗಳಲ್ಲಿ 4 ವಿಕೆಟ್:** ಇದು ಅವರ ಸತತ ನಾಲ್ಕು ಎಸೆತಗಳಲ್ಲಿ ನಾಲ್ಕನೇ ವಿಕೆಟ್ ಆಗಿತ್ತು. ಈ ಮೂಲಕ ಅವರು ಡಬಲ್ ಹ್ಯಾಟ್ರಿಕ್ ಪಡೆದ ಸಾಧನೆ ಮಾಡಿದರು. ವಾಸ್ತವವಾಗಿ ಕ್ರಿಕೆಟ್‌ನಲ್ಲಿ, ಸತತ ಮೂರು ವಿಕೆಟ್ ಪಡೆದರೆ ಹ್ಯಾಟ್ರಿಕ್ ಮತ್ತು ಸತತ ನಾಲ್ಕು ವಿಕೆಟ್ ಪಡೆದರೆ ಡಬಲ್ ಹ್ಯಾಟ್ರಿಕ್ ಎನ್ನಲಾಗುತ್ತದೆ.



# ಇತಿಹಾಸ ಸೃಷ್ಟಿಸಿದ ಡ್ಯಾನಿಶ್ ಮಾಲೆವಾರ್

ದುಲೀಪ್ ಟ್ರೋಫಿಯ ಕ್ವಾರ್ಟರ್ ಫೈನಲ್‌ನಲ್ಲಿ ಕೇಂದ್ರ ವಲಯದ ಡ್ಯಾನಿಶ್ ಮಾಲೆವಾರ್ ಅದ್ಭುತವಾದ ದ್ವಿಶತಕ (203 ರನ್) ಸಿಡಿಸಿ ವಿದರ್ಭ ಕ್ರಿಕೆಟ್ ಪರ ಹೊಸ ಅಧ್ಯಾಯ ಬರೆದಿದ್ದಾರೆ. ಇದು ದುಲೀಪ್ ಟ್ರೋಫಿಯಲ್ಲಿ ವಿದರ್ಭದ ಆಟಗಾರನಿಂದ ದಾಖಲಿಸಲ್ಪಟ್ಟ ಮೊದಲ ದ್ವಿಶತಕವಾಗಿದೆ. ರಣಜಿ ಟ್ರೋಫಿಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ್ದ ಡ್ಯಾನಿಶ್, ತಮ್ಮ ಚೊಚ್ಚಲ ದುಲೀಪ್ ಟ್ರೋಫಿ ಪಂದ್ಯದಲ್ಲೇ ಈ ಸಾಧನೆ ಮಾಡಿದ್ದಾರೆ. ಅವರ ಅದ್ಭುತ ಬ್ಯಾಟಿಂಗ್‌ನಿಂದ ಕೇಂದ್ರ ವಲಯವು 532 ರನ್ ಗಳಿಸಿ ಮೊದಲ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿತು. ದುಲೀಪ್ ಟ್ರೋಫಿಯಲ್ಲಿ ಪ್ರಸ್ತುತ ಕ್ವಾರ್ಟರ್ ಫೈನಲ್ ಸುತ್ತು ನಡೆಯುತ್ತಿದೆ. ಈ ಸುತ್ತಿನಲ್ಲಿ ಕೇಂದ್ರ ವಲಯ ಹಾಗೂ ಈಶಾನ್ಯ ವಲಯ ತಂಡಗಳು ಮುಖಾಮುಖಿಯಾಗಿವೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಕೇಂದ್ರ ವಲಯ ತಂಡ 532 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿದೆ. ತಂಡದ ಪರ ದ್ವಿಶತಕದ ಇನ್ನಿಂಗ್ಸ್ ಆಡಿದ ಡ್ಯಾನಿಶ್ ಮಾಲೆವಾರ್ , 203 ರನ್ ಬಾರಿಸಿದರು. ಡ್ಯಾನಿಶ್ ಅವರ ಇನ್ನಿಂಗ್ಸ್‌ನಲ್ಲಿ 36 ಬೌಂಡರಿ ಮತ್ತು ಒಂದು ಸಿಕ್ಸರ್ ಸೇರಿತ್ತು. ಡ್ಯಾನಿಶ್ ಮಾತ್ರವಲ್ಲದೆ ನಾಯಕ ರಜತ್ ಪಟಿದಾರ್ ಕೂಡ ಶತಕ ಬಾರಿಸಿದರು.

ಚೊಚ್ಚಲ ಪಂದ್ಯದಲ್ಲೇ ದ್ವಿಶತಕ



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966